ಸಂಪುಟ: 05 ಸಂಚಿಕೆ: 50 ಪುಟಗಳು: 08 ಭಾನುವಾರ 04 ಮೇ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಜೀವನವು ಒಂದು ಕಠಿಣ ಆಟ. ವ್ಯಕ್ತಿಯಾಗುವ ನಿಮ್ಮ ಜನ್ಮಸಿದ್ಧ ಹಕ್ಕನ್ನು ಉಳಿಸಿಕೊಳ್ಳುವ ಮೂಲಕ ಮಾತ್ರ ನೀವು ಅದನ್ನು ಗೆಲ್ಲಬಹುದು.

## ಈ ಪರಮೇಶ್ವರ, ಮುಂದೆ ಆಗುವರು ರಾಜ್ಯದ ಪರಮೇಶ್ವರ

• ಉದಯವಾಹಿನಿ, ತುಮಕೂರು

ಕೆಲವು ದಿನಗಳ ಹಿಂದೆ ನಗರದಲ್ಲಿರುವ ಗೃಹ ಸಚಿವ ಡಾ.ಪರಮೇಶ್ವರ ಅವರ ಕಚೇರಿಗೆ ಆಗಮಿಸಿದ್ದ ಗೊರವಯ್ಯ, ಗೃಹ ಸಚಿವರು ಮುಂದೆ ಮುಖ್ಯಮಂತ್ರಿಗಳಾಗುತ್ತಾರೆ ಎನ್ನುವ ಭವಿಷ್ಯವನ್ನು ನುಡಿದಿದ್ದರು. ಆ ವೇಳೆ, ಕಚೇರಿಯಲ್ಲಿ ಪರಮೇಶ್ವರ ಅವರು ಇರಲಿಲ್ಲ. ಖಾಸಗಿ ಕಾರ್ಯಕ್ರಮಕ್ಕೆಂದು ಆಗಮಿಸಿದ್ದ ಡಾ.ಪರಮೇಶ್ವರ ಅವರಿಗೆ ಮತ್ತೊಮ್ಮೆ ಗೊರವಯ್ಯಗಳ ತಂಡದಿಂದ ಶುಭ ಸೂಚನೆ ಸಿಕ್ಕಿದೆ. ಸಾಂಪ್ರದಾಯಿಕ ತಮ್ಮ ಶೈಲಿಯಲ್ಲಿ ಗೊರವಯ್ಯ ತಂಡ ಈ ಭವಿಷ್ಯ ನುಡಿದಾಗ, ಪರಮೇಶ್ವರ ಅವರ ಹಸನ್ಮುಖದಿಂದ ಕೈಮುಗಿದಿದ್ದಾರೆ. ತುಮಕೂರಿನ ಪರಮೇಶ್ವರನು, ಮುಂದೊಂದು ದಿನ ಈ ರಾಜ್ಯದ ಪರಮೇಶ್ವರನಾಗುವನು ಎನ್ನುವ ಭವಿಷ್ಯ ಗೊರವಯ್ಯಗಳ ತಂಡದಿಂದ ಬಂದಿದೆ. ಆ ವೇಳೆ ಅಲ್ಲೇ ಇದ್ದ, ಕೆಪಿಸಿಸಿ ವಕ್ತಾರ ನಿತೀಶ್ ರಾಜ್ ಮೌರ್ಯ ಅವರೇ, ಗೊರವಯ್ಯ ತಂಡಗಳ ಜೊತೆ ಸೇರಿ ಈ ನುಡಿಯನ್ನು ಆಡಿದ್ದಾರೆ. ಗೊರವಯ್ಯಗಳ ತಂಡ ತಮ್ಮ ಸಾಂಪ್ರದಾಯಿಕ ನೃತ್ಯ ಮತ್ತು ಹಾಡಿನ ಮೂಲಕ ನೆರೆದಿದ್ದವರ ಗಮನವನ್ನು ಸೆಳೆದರು. ಡಾ.ಪರಮೇಶ್ವರ ಅವರಿಗೆ ಶಿವನ ಪದಗಳನ್ನು ಆಡುವ ಮೂಲಕ, ಶುಭ ಹಾರೈಸಿದರು. ಜೊತೆಗೆ, ಶಿವ ಮತ್ತು ಪರಮೇಶ್ವರರಿಗೆ ಹೋಲಿಕೆ ಮಾಡಿದರು. ಆ ವೇಳೆ, ಮೇಲಿನಂತೆ ಹಾರೈಸುತ್ತಾ ಮುಂದೊಂದು ದಿನ ರಾಜ್ಯದ ಹಾಲೀ ಗೃಹ ಮಂತ್ರಿಗಳು ಮುಂದೊಂದು ದಿನ ರಾಜ್ಯದ ಮುಖ್ಯಮಂತ್ರಿ ಆಗಲಿದ್ದಾರೆ ಎನ್ನುವ ಮಾತನ್ನು ತಮ್ಮ ಗೊರವಯ್ಯ ಶೈಲಿಯಲ್ಲಿ ತಂಡವು ನುಡಿಯಿತು. ಆಗ, ಅಲ್ಲಿದ್ದ ಎಲ್ಲರೂ ಸಂತೋಷ ಪಟ್ಟರು.

## ಜಮೀರ್ ಮಿಲಿಟರಿಯನ್ನು ನಂಬಿ ಸುಮ್ಮನಿದ್ದರೆ ಸಾಕು

• ಉದಯವಾಹಿನಿ, ವಿಜಯಪುರ

ಪಹಲ್ಗಾಮ್ ನಲ್ಲಿ ಉಗ್ರರ ಕೃತ್ಯ ವಿಚಾರವಾಗಿ, ಬಾಂಬ್ ಕಟ್ಟಿಕೊಂಡು ಪಾಕ್ ಗಡಿಗೆ ಹೋಗುತ್ತೇನೆ ಎಂದ ಸಚಿವ ಜಮೀರ್ ಅಹ್ಮದ್ ಹೇಳಿಕೆಗೆ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಟಾಂಗ್ ನೀಡಿದ್ದಾರೆ. ಜಮೀರ್ ಶಾಂತವಾಗಿದ್ದರೆ ಸಾಕು. ನೀವೇನೂ ಮಾಡೋದು ಬೇಡ, ಸುಮ್ಮನಿದ್ದರೆ ಸಾಕು. ಮಿಲಿಟರಿಯನ್ನ ನಂಬಿ ಸುಮ್ಮನಿರಿ ಸಾಕು. ನಿಮ್ಮ ಭಾಷಣ ಬೇಡ, ನೀವು ಹೋಗೋದು ಬೇಡ. ಸೈನ್ಯದ ಶಕ್ತಿ, ಸೈನಿಕರು, ಇಂಟಲಿಜೆನ್ಸ್ ಬಗ್ಗೆ ವಿಶ್ವಾಸವಿಡಿ ಹೇಳಿಕೆಗಳನ್ನ ಕೊಡದೆ ಬಾಯಿ ಮುಚ್ಚಿಕೊಂಡಿದ್ದರೆ ಸಾಕು. ಜಮೀರ್ ಶಾಂತವಾಗಿರೋದೆ ದೇಶಕ್ಕೆ ಮಾಡೋ ದೊಡ್ಡ ಸೇವೆ ಎಂದ ಪ್ರಲ್ಹಾದ್ ಜೋಶಿ ಹೇಳಿದರು. ಸೈನ್ಯದ, ಸೈನಿಕರ ಆತ್ಮಸ್ಥೈರ್ಯ ಕುಗ್ಗಿಸದೆ ಸುಮ್ಮನಿದ್ದರೆ ಸಾಕು. ಇಲ್ಲಸಲ್ಲದ ಹೇಳಿಕೆ ಕೊಡುವುದಕ್ಕೆ ಬಿಟ್ಟರೆ ಸಾಕು.

ನನಗೆ ಬಾಂಬ್ ಕಟ್ಟಿ ಪಾಕಿಸ್ತಾನಕ್ಕೆ ಹೋಗಿ ಹೋರಾಡ್ತೀನಿ ಎಂದಿದ್ದ ಸಚಿವ ಜಮೀರ್ ಅಹ್ಮದ್‌ಗೆ ಮಾತಲ್ಲೆ ಪ್ರಲ್ಹಾದ್ ಜೋಶಿ ಟಾಂಗ್ ಕೊಟ್ಟಿದ್ದಾರೆ. ಈಗಿನ ಕರ್ನಾಟಕದಲ್ಲಿ ನಡೆಯುತ್ತಿರುವ ಪ್ರಕ್ಷುಬ್ಧ ವಾತಾವರಣ ಒಂದು ರೀತಿ ಓಟ್ ಬ್ಯಾಂಕ್ ಪಾಲಿಟಿಕ್ಸ್ ನಡೆಯುತ್ತಿದೆ. ಹೇಳಿಕೆಗಳು, ಹಲ್ಲೆಗಳು ಬಹಳ ಮನಸ್ಸಿಗೆ ನೋವುಂಟು ಮಾಡಿದೆ. ಯಾವ ಮಟ್ಟಕ್ಕೆ ರಾಜಕಾರಣಕ್ಕಾಗಿ ಕೆಲ ರಾಜ್ಯ, ರಾಜಕಾರಣಿಗಳು ಹೋಗುತ್ತಿದ್ದಾರೆ. ಒಬ್ಬರು ಹೇಳುತ್ತಾರೆ ಮುಸಲ್ಮಾನರಿಗೆ ತೊಂದರೆ ಆಗಿದ್ದಕ್ಕೆ ಪಾಕಿಸ್ತಾನ ಜಿಂದಾಬಾದ್ ಅಂತಾ ಕೂಗುತ್ತಾರೆ. ಅವರು ಹಾಗೆ ಕೂಗಲು ನೂರಾ ಎಂಟು ಕಾರಣಗಳಿವೆ ಅಂತಾ ಹೇಳಿದ್ದಾರೆ.


## ದಾಳಿಯ ಬಳಿಕ ಫಸ್ಟ್ ಟೈಂ ಮೋದಿ ಭೇಟಿಯಾದ ಫಾರುಕ್

• ಉದಯವಾಹಿನಿ, ಬೆಂಗಳೂರು

ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿ ಬಳಿಕ ಜಮ್ಮು ಮತ್ತು ಕಾಶ್ಮೀರದ ಸಿಎಂ ಒಮರ್ ಅಬ್ದುಲ್ಲಾ ಮೊದಲ ಬಾರಿಗೆ ಪ್ರಧಾನಿ ಮೋದಿ ಅವರನ್ನ ಭೇಟಿಯಾಗಿದ್ದಾರೆ. ದೆಹಲಿಯ ಪ್ರಧಾನಿ ನಿವಾಸದಲ್ಲಿಂದು ಮೋದಿ ಭೇಟಿಯಾದ ಒಮರ್ ಅಬ್ದುಲ್ಲಾ ಅವರು ಉಗ್ರರ ದಾಳಿ ಹಾಗೂ ಕಾಶ್ಮೀರದಲ್ಲಿ ಭದ್ರತಾ ಪರಿಸ್ಥಿತಿಯ ಕುರಿತು ಚರ್ಚಿಸಿದ್ದಾರೆ. ಅಲ್ಲದೇ ಉಗ್ರರನ್ನು ಸದೆಬಡಿಯುವ ನಿಟ್ಟಿನಲ್ಲಿ ಹಾಗೂ ದೇಶದ ಭದ್ರತೆಗೆ ಸಂಬಂಧಿಸಿದ ವಿಷಯಗಳ ಕುರಿತು ಕೇಂದ್ರ ಸರ್ಕಾರ ಯಾವುದೇ ನಿರ್ಧಾರ ತೆಗೆದುಕೊಂಡರೂ ನಮ್ಮ ಸಂಪೂರ್ಣ ಬೆಂಬಲ ಇದೆ ಎಂದು ಹೇಳಿರುವುದಾಗಿ ಮೂಲಗಳು ತಿಳಿಸಿವೆ. ಇನ್ನೂ ದಾಳಿಯ ಬಳಿಕ ಜಮ್ಮು ಮತ್ತು ಕಾಶ್ಮೀರದಲ್ಲಿ ಭದ್ರತಾ ಸವಾಲುಗಳು ಹೆಚ್ಚಾಗುತ್ತಿದ್ದು, ಕೇಂದ್ರವು ಪಾಕಿಸ್ತಾನದ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ. ಇದಕ್ಕೂ ಮುನ್ನ ಜೆಕೆ ಮಾಜಿ ಮುಖ್ಯಮಂತ್ರಿ ಫಾರೂಕ್ ಅಬ್ದುಲ್ಲಾ ದಾಳಿಯನ್ನು ಖಂಡಿಸಿದರು. ಭಯೋತ್ಪಾದನೆಯ ವಿರುದ್ಧ ದೇಶದ ಜನ ಒಗ್ಗಟ್ಟಿನಿಂದ ನಿಲ್ಲುವಂತೆ ಮನವಿ ಮಾಡಿದರು. ದಾಳಿಯಲ್ಲಿ ಭಾಗಿಯಾಗಿರುವವರು ಮಾನವೀಯತೆಯ ಶತ್ರುಗಳು, ಅವರು ನರಕದಲ್ಲಿ ಕೊಳೆಯುತ್ತಾರೆ. ಪಾಕ್ ವಿರುದ್ಧ ಕ್ರಮ ಕೈಗೊಳ್ಳಲು ಕೇಂದ್ರ ಸರ್ಕಾರ ಸಿಂಧೂ ನದಿ ನೀರು ಒಪ್ಪಂದವನ್ನು ಪುನರುಚ್ಚರಿಸಬೇಕು ಎಂದು ಒತ್ತಾಯಿಸಿದರು. ಜಮ್ಮು-ಕಾಶ್ಮೀರದ ಅನಂತ್‌ನಾಗ್ ಜಿಲ್ಲೆಯ ಜನಪ್ರಿಯ ಪ್ರವಾಸಿತಾಣ ಪಹಲ್ಗಾಮ್‌ನಲ್ಲಿ ಕಳೆದ ಏ.22ರಂದು ಉಗ್ರರು ನಡೆಸಿದ ಗುಂಡಿನ ದಾಳಿಗೆ ಇಬ್ಬರು ಕನ್ನಡಿಗರು ಸೇರಿ 26 ಮಂದಿ ಬಲಿಯಾಗಿದ್ದಾರೆ. 2019ರಲ್ಲಿ 40 ಯೋಧರನ್ನು ಬಲಿ ಪಡೆದ ಪುಲ್ವಾಮಾ ದಾಳಿಯ ಬಳಿಕ ಉಗ್ರರು ಕಣಿವೆಯಲ್ಲಿ ನಡೆಸಿದ ಭೀಕರ ದಾಳಿ ಇದಾಗಿದೆ.

● ಸುಹಾಸ್ ಶೆಟ್ಟಿ ಕೊಲೆ 8 ಆರೋಪಿಗಳ ಬಂಧನ ● ಕೋಮು ಸಂಘರ್ಷ ಹತ್ತಿಕ್ಕಲು ಟಾಸ್ಕ್ ಫೋರ್ಸ್ ಸ್ಥಾಪನೆ: ಗೃಹ ಸಚಿವ ಪರಮೇಶ್ವರ್ ಹೇಳಿಕೆ ● ಪೊಲೀಸರಿಂದ ಕ್ಷಿಪ್ರ ಕಾರ್ಯಾಚರಣೆ

# ಸಂಘರ್ಷ ತಡೆ ಬರಲಿದೆ ಕಾರ್ಯಪಡೆ




### ಪೊಲೀಸ್ ಇಲಾಖೆ ಕಣ್ಣಿಡಬೇಕಾಗಿದೆ

ಸಮಾಜದಲ್ಲಿ ದೃಷ್ಕೃತಗಳಿಗೆ ಇಂಬು ಕೊಡುವಂತಹ ಸಂದೇಶಗಳನ್ನು ಹರಿಯಬಿಡುವವರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳಬೇಕಾಗಿದೆ. ಸುಹಾಸ್ ಪ್ರಕರಣದಲ್ಲೂ ಸಾಮಾಜಿಕ ಜಾಲತಾಣಗಳಲ್ಲಿ ಸಾಕಷ್ಟು ಸುಳ್ಳು ಸುದ್ದಿಗಳನ್ನು ಹರಿಯಬಿಡಲಾಗುತ್ತಿದೆ. ಈ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕಾಗಿದೆ. ಸದ್ಯ ದಕ್ಷಿಣ ಕನ್ನಡ ಜಿಲ್ಲೆಯ ವಾತಾವರಣ ಆತಂಕಕ್ಕೆ ಎಡೆಮಾಡಿಕೊಟ್ಟಿದೆ. ಅಶ್ರಫ್, ಸುಹಾಸ್ ಹತ್ಯೆಯ ಬೆನ್ನಲ್ಲೇ ಐದು ಕಡೆಗಳಲ್ಲಿ ಚಾಕು ಇರಿತ, ತಲವಾರು ದಾಳಿ ನಡೆದಿದೆ. ಬಸ್‌ಗಳಿಗೆ ಕಲ್ಲು ತೂರಾಟ ಮಾಡಲಾಗಿದೆ. ಇದು ಮತ್ತಷ್ಟು ಮುಂದುವರಿಯುವ ಆತಂಕವೂ ಇದೆ. ಈ ನಿಟ್ಟಿನಲ್ಲಿ ಸದ್ಯ ಜಿಲ್ಲೆಯಲ್ಲಿ ಶಾಂತಿ ಕಾಪಾಡುವ ಕೆಲಸ ಆಗಬೇಕಾಗಿದೆ. ರಾಜಕಾರಣಿಗಳು, ಸಂಘಟನೆಗಳ ಪಾತ್ರ ಇದರಲ್ಲಿ ದೊಡ್ಡ ಮಟ್ಟದಲ್ಲಿದೆ. ಹೀಗಾಗಿ ಪೊಲೀಸರು ಸಮಾಜದಲ್ಲಿ ಶಾಂತಿ ಕದಡುವ ಶಕ್ತಿಗಳ ವಿರುದ್ಧ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕಾದ ಅಗತ್ಯವಿದೆ.

**1** ಕರಾವಳಿ ಭಾಗದಲ್ಲಿ ಕೋಮು ಸಂಘರ್ಷದ ವಾತಾವರಣ ನೆಲೆ ಮಾಡಿದೆ

**2** ಅಶ್ರಫ್ ಹಾಗೂ ಸುಹಾಸ್ ಹತ್ಯೆ ಹಾಗೂ ಅದರ ಬೆನ್ನಲ್ಲೇ ನಡೆದ ದಾಳಿಗಳು ಆತಂಕ ಮೂಡಿಸಿವೆ

**3** ಈ ನಡುವೆ ಸಾಮಾಜಿಕ ಜಾಲತಾಣಗಳಲ್ಲೂ ಶಾಂತಿ ಕದಡುವ ಸಂದೇಶಗಳನ್ನು ಹರಿಯಬಿಡುತ್ತಿದ್ದಾರೆ

• ಉದಯವಾಹಿನಿ, ಮಂಗಳೂರು

ಕರಾವಳಿಯ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕೋಮು ಹಿಂಸಾಚಾರ ನಿಯಂತ್ರಿಸಲು 'ಕೋಮು ಹಿಂಸೆ ನಿಗ್ರಹ ಕಾರ್ಯಪಡೆಯನ್ನು ರಚಿಸಲಿದ್ದೇವೆ' ಎಂದು ಗೃಹಸಚಿವ ಜಿ.ಪರಮೇಶ್ವರ ತಿಳಿಸಿದರು. ಕೋಮುಸೂಕ್ಷ್ಮ ಪರಿಸ್ಥಿತಿಯ ಕುರಿತು ಅವಲೋಕಿಸಲು ಹಿರಿಯ ಪೊಲೀಸ್ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಯವರ ಜೊತೆ ಶನಿವಾರ ವಿಶೇಷ ಸಭೆ ನಡೆಸಿದ ಬಳಿಕ ಅವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಕೋಮು ಹಿಂಸೆ ನಿಗ್ರಹ ಕಾರ್ಯಪಡೆ ನಕ್ಸಲ್ ನಿಗ್ರಹ ಪಡೆ ಮಾದರಿಯಲ್ಲಿ ಪ್ರತ್ಯೇಕವಾಗಿ ರಚಿಸುತ್ತೇವೆ. ಇದು ಪೊಲೀಸರ ಸಹಯೋಗದಲ್ಲಿ ಕೆಲಸ ಮಾಡಲಿದೆ. ಯಾರು ಕೋಮು ಚಟುವಟಿಕೆಗಳನ್ನು ನಡೆಸುತ್ತಾರೆ. ಯಾರು ಅದನ್ನು ಬೆಂಬಲಿಸುತ್ತಾರೆ. ಅಂತಹವರ ಮೇಲೆ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳುವ ಅಧಿಕಾರವನ್ನು ಈ ಕಾರ್ಯಪಡೆಗೆ ಒದಗಿಸುತ್ತೇವೆ' ಎಂದರು. 'ದ.ಕ ಮತ್ತು ಉಡುಪಿ ಜಿಲ್ಲೆಗಳಲ್ಲಿ ಸುಮಾರು ವರ್ಷಗಳಿಂದ ಕೋಮು ಹಿಂಸಾಚಾರ ಮರುಕಳಿಸುತ್ತಿದೆ. ಎರಡು ಜಿಲ್ಲೆಗಳು ರಾಜ್ಯದ ಮತ್ತು ರಾಷ್ಟ್ರದ ಗಮನ ಸೆಳೆದಿವೆ. ಈ ಎರಡು ಜಿಲ್ಲೆಗಳಲ್ಲಿ ಶಾಂತಿ ಸ್ಥಾಪಿಸುವುದೇ ಈ ಕಾರ್ಯಪಡೆ ರಚನೆಯ ಉದ್ದೇಶ' ಎಂದು ತಿಳಿಸಿದರು.

ರೌಡಿ ಶೀಟರ್ ಸುಹಾಸ್ ಶೆಟ್ಟಿ ಹತ್ಯೆ ನಡೆದ ಬಳಿಕ ಈ ಜಿಲ್ಲೆಗಳಲ್ಲಿ ಕೋಮು ಹಿಂಸೆ ಮತ್ತೆ ಮರುಕಳಿಸಿದೆ ಎಂಬ ಭಾವನೆ ಜನರಲ್ಲಿ ಬಂದಿರಬಹುದು. ಜನ ಸಮುದಾಯ ಇದನ್ನು ಇಷ್ಟಪಡುವುದಿಲ್ಲ. ಈ ಜಿಲ್ಲೆಗಳು ಶಾಂತಿಯಿಂದ ಇರಬೇಕು. ಜನ ಶಾಂತಿಯಿಂದ ಬದುಕಬೇಕು. ಇಲ್ಲಿ ಬಂಡವಾಳ ಹೂಡಿಕೆ ಆಗಬೇಕು. ಜನರಿಗೆ ಉದ್ಯೋಗ ಸಿಗಬೇಕು ಎಂದು ಪೊಲೀಸ್ ಇಲಾಖೆ ಮತ್ತು ಸರ್ಕಾರ ಬಯಸುತ್ತದೆ. ಇದನ್ನು ಗಮನದಲ್ಲಿಟ್ಟುಕೊಂಡು ಎರಡು ವರ್ಷಗಳಿಂದ ಎಲ್ಲಾ ರೀತಿಯ ಕ್ರಮ ತೆಗದುಕೊಂಡಿದ್ದೆವು.

### ಐವರು ವಶಕ್ಕೆ...

ಸುಹಾಸ್ ಶೆಟ್ಟಿ ಕೊಲೆ ಪ್ರಕರಣದಲ್ಲಿ 5 ಮಂದಿ ಆರೋಪಿಗಳನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ ಎಂದು ಹೇಳಲಾಗುತ್ತಿದೆ. ಬಜಪೆಯಲ್ಲಿ ಗುರುವಾರ ರಾತ್ರಿ ಈ ಹತ್ಯೆ ನಡೆದಿತ್ತು. ಬಂಧಿತರ ವಿವರಗಳು ಇನ್ನೂ ಅಧಿಕೃತವಾಗಿ ಲಭ್ಯವಾಗಿಲ್ಲ. ಈ ವಿಭಾಗವು ಕಮ್ಯುನಲ್ ಶಕ್ತಿಗಳ ವಿರುದ್ಧ ನಿರ್ದಯ ಕ್ರಮಗಳನ್ನು ಕೈಗೊಂಡು ಶಾಂತಿಯನ್ನು ಕಾಪಾಡಲು ನಿರ್ದಿಷ್ಟವಾದ ಕಾರ್ಯಚಟುವಟಿಕೆಗಳನ್ನು ನಡೆಸಲಿದೆ. ಕಾನೂನು ಪ್ರಕಾರ ಎಲ್ಲಾ ಕ್ರಮಗಳನ್ನು ಈ ವಿಭಾಗ ಕೈಗೊಳ್ಳಲಿದೆ. ಪ್ರಚೋದನಕಾರಿ ಭಾಷಣ ಮಾಡಿದವರ ವಿರುದ್ಧ ಕೂಡಾ ನಿರ್ದಯ ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವರು ಹೇಳಿದ್ದಾರೆ.

### ಇಂತಹ ಘಟನೆಗಳು ಮರುಕಳಿಸಬಾರದು

ಹಿಂದೆ ದಕ್ಷಿಣ ಕನ್ನಡ ಜಿಲ್ಲೆಗೆ ಎಲ್ಲಾ ಜನರು ಬರುವುದನ್ನು ಇಷ್ಟ ಪಡುತ್ತಿದ್ದರು. ಆದರೆ ಈಗ ಪರಿಸ್ಥಿತಿ ಬದಲಾಗಿದೆ. ಹಿಂದೆ ಶಾಂತಿ ಮತ್ತು ಸೌಹಾರ್ದತೆಯನ್ನು ಕಾಪಾಡಲು ಪಾದಯಾತ್ರೆಯನ್ನು ನಡೆಸಿದೆವು. ಇದೀಗ ಮತ್ತೆ ಈ ಘಟನೆಗಳು ಮರುಕಳಿಸುತ್ತಿವೆ. ಇದರ ಹಿಂದೆ ಅನೇಕ ಶಕ್ತಿಗಳು ಕಾರ್ಯನಿರ್ವಹಿಸುತ್ತಿವೆ. ಇಂಥ ಶಕ್ತಿಗಳನ್ನು ಹುಟ್ಟುಹಾಕಲು ಬಿಡುವುದಿಲ್ಲ. ಇನ್ನು ಮುಂದೆ ಇಂತಹ ಘಟನೆಗಳು ಮರುಕಳಿಸಬಾರದು ಎಂಬ ಗುರಿಯೊಂದಿಗೆ 'ಆ್ಯಂಟಿ ಕಮ್ಯುನಲ್ ಟಾಸ್ಕ್ ಫೋರ್ಸ್' ಅನ್ನು ಸ್ಥಾಪಿಸಲಾಗುವುದು.


ಗುಂಪು ಹಲ್ಲೆ ನಡೆಸಿ ಕೇರಳದ ವಯನಾಡಿನ ಅಶ್ರಫ್ ಎಂಬವನನ್ನು ಕೊಲೆ ಮಾಡಿದ್ದು ಹಾಗೂ ಸುಹಾಸ್ ಶೆಟ್ಟಿ ಹತ್ಯೆ ಕೋಮು ಸೌಹಾರ್ದಕ್ಕೆ ಸವಾಲು ಆಗಿವೆ' ಎಂದರು. 'ಸುಹಾಸ್ ಶೆಟ್ಟಿ ಕೊಲೆ ಪ್ರಕರಣದಲ್ಲಿ ಒಟ್ಟು 8 ಆರೋಪಿಗಳನ್ನು ಹಾಗೂ ಅಶ್ರಫ್ ಹತ್ಯೆ ಪ್ರಕರಣದಲ್ಲಿ 21 ಆರೋಗಳನ್ನು ಬಂಧಿಸಲಾಗಿದೆ' ಎಂದರು. 'ದುಷ್ಟ ಶಕ್ತಿಗಳು ಜಿಲ್ಲೆಯ ಶಾಂತಿ ಹಾಳು ಮಾಡಲು ಬಿಡುವುದಿಲ್ಲ. ಕೋಮು ಹಿಂಸಾಚಾರದಲ್ಲಿ ತೊಡಗುವವರು ಯಾವುದೇ ಸಮುದಾಯದವರಾಗಲೀ, ಅವರು ಕಾನೂನು ಉಲ್ಲಂಘನೆ ಮಾಡಲು ಬಿಡುವುದಿಲ್ಲ. ಅವರನ್ನು ಹತ್ತಿಕ್ಕುತ್ತೇವೆ. ಅವರ ಮೇಲೆ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳುತ್ತೇವೆ. ಕೋಮುಗಲಭೆಗಳ ಹಿಂದೆ ಅಡಗಿರುವ ಶಕ್ತಿಗಳ ಹುಟ್ಟಡಗಿಸುವುದಕ್ಕೆ ಸರ್ಕಾರ ತೀರ್ಮಾನ ಕೈಗೊಂಡಿದೆ. ರಾಜ್ಯ ಮತ್ತು ರಾಷ್ಟ್ರದ ಹಿತ ದೃಷ್ಟಿಯಿಂದ ಇನ್ನೆಂದೂ ಇಂತಹ ಘಟನೆ ಮರುಕಳಿಸಬಾರದು. ಕಾನೂನು ಚೌಕಟ್ಟಿನಲ್ಲಿ ಏನೆಲ್ಲ ಸಾಧ್ಯವೋ ಎಲ್ಲಾ ಕ್ರಮ ತೆಗೆದುಕೊಳ್ಳುತ್ತೇವೆ. ಈ ಪ್ರದೇಶ ಶಾಂತಿಯಿಂದ ಇರಬೇಕು ಎಂಬುದೇ ನಮ್ಮ ಉದ್ದೇಶ ಎಂದರು. ಪ್ರಚೋದನಾಕಾರಿ ಹೇಳಿಕೆ ಕೊಡುವವರ ಮೇಲೆ ಹೇಳಿಕೆ ಕೊಡುವವರ ಮೇಲೆ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಕೈಗೊಳ್ಳಲು ನಾನು ಮತ್ತು ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಸೂಚನೆ ನೀಡಿದ್ದೇವೆ. ಈ ವಿಚಾರದಲ್ಲಿ ಕಠಿಣ ನಿರ್ಧಾರ ಕೈಗೊಳ್ಳುವಂತೆ ಸೂಚಿಸಿದ್ದೇವೆ ಎಂದರು. ಒಂದು ಕಾಲದಲ್ಲಿ ಈ ಜಿಲ್ಲೆಗೆ ಜನ ಸಂತೋಷದಿಂದ ಬರುತ್ತಿದ್ದರು. ಈ ಜಿಲ್ಲೆಯನ್ನು ಜನ ಮತ್ತೆ ಖುಷಿಯಿಂದ ಹುಡುಕಿಕೊಂಡು ಬರುವ ರೀತಿ ಮಾಡುತ್ತೇವೆ ಎಂದರು.

### ಎರಡು ತಿಂಗಳ ಒಳಗೆ ಕಾರ್ಯರೂಪಕ್ಕೆ ಬರಲಿದೆ

ನಮ್ಮ ಪಕ್ಷ ಇಲ್ಲಿನ ಶಾಂತಿ ಮತ್ತು ಸೌಹಾರ್ದಕ್ಕಾಗಿ ಪಾದಯಾತ್ರೆ ಮಾಡಿತ್ತು. ಜನರಿಗೂ ಸೌಹಾರ್ದ ಮಹತ್ವ ಅರ್ಥ ಆಗಿತ್ತು. ಸುಮಾರು ವರ್ಷ ಯಾವುದೇ ಕೋಮುಹಿಂಸೆ ಘಟನೆಗಳು ಇಲ್ಲಿ ನಡೆದಿರಲಿಲ್ಲ' ಎಂದರು. ಸದ್ಯಕ್ಕೆ ರಾಜ್ಯದಲ್ಲಿ ನಕ್ಸಲ್ ಚಟುವಟಿಕೆ ಇಲ್ಲ. ಎಎನ್‌ಎಫ್ ಅನ್ನು ಬರ್ಖಾಸ್ತು ಗೊಳಿಸುತ್ತೇವೆ. ಅದರಲ್ಲಿರುವ ಸಿಬ್ಬಂದಿಯನ್ನು ಕೋಮು ಹಿಂಸೆ ನಿಗ್ರಹ ಕಾರ್ಯಪಡೆಗೆ ಬಳಸಿಕೊಳ್ಳುತ್ತೇವೆ. ಕೆಲ ಸಿಬ್ಬಂದಿಯನ್ನು ಬೇರೆ ಕಡೆಯಿಂದ ನೇಮಿಸುತ್ತೇವೆ. ಐಜಿಪಿ ದರ್ಜೆಯ ಅಧಿಕಾರಿ ಇದರ ನೇತೃತ್ವವಹಿಸಲಿದ್ದಾರೆ. ಎರಡು ತಿಂಗಳ ಒಳಗೆ ಕಾರ್ಯರೂಪಕ್ಕೆ ಬರಲಿದೆ ಎಂದರು.



## ಕರ್ನಾಟಕಕ್ಕೆ ವಾಪಾಸ್ ಬರುವುದು ಕೇವಲ 60 ಸಾವಿರ ಕೋಟಿ ಮಾತ್ರ



• ಉದಯವಾಹಿನಿ, ಬೆಂಗಳೂರು


ಆರ್ಥಿಕ ಇಲಾಖೆಗೆ ವಾಹನ, ಸಿಬ್ಬಂದಿ ಅಗತ್ಯವಿದ್ದರೆ ಕೊಡ್ತೇವೆ. ಆದರೆ ತೆರಿಗೆ ಸಂಗ್ರಹದ ಗುರಿ ಮುಟ್ಟಲೇಬೇಕು. ಇದರಲ್ಲಿ ರಾಜಿ ಆಗಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು. ಬ್ಯಾಂಕ್ವೆಂಟ್ ಹಾಲ್ ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಆರ್ಥಿಕ ಇಲಾಖೆ ವತಿಯಿಂದ ಹೊಸ ವಾಹನಗಳಿಗೆ ಚಾಲನೆ ನೀಡಿ, ಅನುಕಂಪ ಆಧಾರಿತ ನೇಮಕಾತಿ ಆದೇಶ ವಿತರಿಸಿ ಮಾತನಾಡಿದರು. ತೆರಿಗೆ ವಂಚಿಸುವವರನ್ನು ಪತ್ತೆ ಹಚ್ಚಲು, ತೆರಿಗೆ ಸೋರಿಕೆ ತಡೆಯಲು ಅಗತ್ಯವಾದ ಎಲ್ಲಾ ಅನುಕೂಲಗಳನ್ನು ಒದಗಿಸಿಕೊಡಲು ಸರ್ಕಾರ ಸಿದ್ದವಿದೆ. ಆದರೆ, ತೆರಿಗೆ ಸಂಗ್ರಹದ ಗುರಿ ಮುಟ್ಟಲೇಬೇಕು. ಇದರಲ್ಲಿ ರಾಜಿ ಆಗುವ ಪ್ರಶ್ನೆಯೇ ಇಲ್ಲ ಎಂದರು.

**ಹದಿನೈದನೇ ಹಣಕಾಸು ಆಯೋಗದಿಂದ ರಾಜ್ಯಕ್ಕೆ ಅನ್ಯಾಯ:** ವೇತನ ಆಯೋಗ ಶಿಫಾರಸ್ಸು ಮಾಡಿದ ವೇತನದಲ್ಲಿ ನಯಾಪೈಸೆ ಚೌಕಾಸಿ ಮಾಡದೆ ಅಷ್ಟೂ ವೇತನ ನೀಡಿದ್ದೇವೆ. ಸರ್ಕಾರಿ ನೌಕರರಿಂದಲೂ ಇಷ್ಟೇ ಪ್ರಮಾಣದಲ್ಲಿ ಕರ್ತವ್ಯ ನಿರೀಕ್ಷಿಸುತ್ತೇನೆ. ತೆರಿಗೆ ಸಂಗ್ರಹದಲ್ಲಿ ಗುರಿ ತಲುಪಲೇಬೇಕು ಎಂದರು. ನಮಗೆ 11,495 ಕೋಟಿ ರೂಪಾಯಿ ಹದಿನೈದನೇ ಹಣಕಾಸು ಆಯೋಗದಿಂದ ರಾಜ್ಯಕ್ಕೆ ಅನ್ಯಾಯವಾಗಿದೆ. ಹಣಕಾಸು ಸಚಿವೆ ಘೋಷಣೆ ಮಾಡಿದ್ದ ಹಣದಲ್ಲಿ ನಯಾ ಪೈಸೆಯನ್ನೂ ರಾಜ್ಯಕ್ಕೆ ಕೊಡಲಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

**ಕೇಂದ್ರಕ್ಕೆ 4.5 ಲಕ್ಷ ಕೋಟಿ ತೆರಿಗೆ ಕಟ್ಟುತ್ತೇವೆ**

**ಗ್ಯಾರಂಟಿ ಯೋಜನೆಗೆ ಹಣವಿದೆ:** ನಾವು ಗ್ಯಾರಂಟಿಗಳಿಗೆ ಹಣ ತೆಗೆದಿಟ್ಟಿದ್ದೀವಿ. ಜೊತೆಗೆ 83 ಸಾವಿರ ಕೋಟಿಯನ್ನು ಬಂಡವಾಳ ವೆಚ್ಚಕ್ಕೆ ತೆಗೆದಿರಿಸಿದ್ದೀವಿ. ಕಳೆದ ವರ್ಷ ನಾವು 52 ಸಾವಿರ ಕೋಟಿ ಬಂಡವಾಳ ವೆಚ್ಚ ಮಾಡಿದ್ದೆವು. ಈ ವರ್ಷ 31 ಸಾವಿರ ಕೋಟಿ ಹೆಚ್ಚಿನ ಬಂಡವಾಳ ವೆಚ್ಚ ಕೊಟ್ಟಿದ್ದೀವಿ. ಆದರೂ, ಸರ್ಕಾರದ ಬೊಕ್ಕಸದಲ್ಲಿ ಹಣ ಇಲ್ಲ ಎಂದು ಬಿಜೆಪಿ ಆರೋಪಿಸುತ್ತಿದೆ ಎಂದು ಟೀಕಿಸಿದರು.

## ನವವೃಂದಾವನ ವಿವಾದಕ್ಕೆ ಮಹತ್ವದ ತಿರುವು



• ಉದಯವಾಹಿನಿ, ಬೆಂಗಳೂರು

ದಶಕಗಳಿಂದ ನೆನೆಗುದಿಗೆ ಬಿದ್ದಿದ್ದ ನವವೃಂದಾವನದ ಆರಾಧನಾ ವಿವಾದಕ್ಕೆ ಅಚ್ಚರಿಯ ತಿರುವು ಸಿಕ್ಕಿದೆ! ಶ್ರೀಉತ್ತರಾದಿ ಮಠವು ದಿಟ್ಟ ಹೆಜ್ಜೆಯನ್ನಿಟ್ಟು, ಶ್ರೀ ಶ್ರೀಪಾದರಾಜಮಠ, ಶ್ರೀವ್ಯಾಸರಾಜಮಠ ಹಾಗೂ ಶ್ರೀರಾಯರ ಮಠಗಳಿಗೂ ಪರ್ಯಾಯ ಆರಾಧನೆಗೆ ಅವಕಾಶದ ಬಗ್ಗೆ ಮಹತ್ವದ ಪ್ರಸ್ತಾಪವನ್ನು ಮುಂದಿಟ್ಟಿದೆ. ಈ ಬೆಳವಣಿಗೆ ಮಾಧ್ವ ಸಮಾಜದಲ್ಲಿ ಸಂಚಲನ ಮೂಡಿಸಲಿದೆ. ಜಗತ್ತಿನ ದೇಶದ ಎಲ್ಲಾ ಕಡೆ ಅಶಾಂತಿ ವಿವಾದಗಳು ಭುಗಿಲೆದ್ದ ಸಂದರ್ಭದಲ್ಲಿ ಶ್ರೀ ಉತ್ತರಾದಿಮಠದ ಈ ಪ್ರವೃತ್ತಿಯು ಮಾಧ್ವ ಸಮಾಜದಲ್ಲಿ ಹೊಸ ಚೈತನ್ಯವನ್ನು ಮೂಡಿಸಲಿದೆ. ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಮಾನ್ಯ ಸಂಜಯ್ ಕಿಶನ್ ಕೌಲ್ ಅವರ ಮಧ್ಯಸ್ಥಿಕೆಯಲ್ಲಿ ನಡೆದ ಮಾತುಕತೆಗಳ ಸಂದರ್ಭದಲ್ಲಿ ಶ್ರೀ ಉತ್ತರಾದಿಮಠವು ಈ ಮಹತ್ವದ ಪ್ರಸ್ತಾಪವನ್ನು ಇಟ್ಟಿದೆ. ಶ್ರೀ ಕವೀಂದ್ರತೀರ್ಥರ ಹಾಗೂ ಶ್ರೀವಾಗೀಶತೀರ್ಥರ ಆರಾಧನೆಗೆ ಶ್ರೀ ಉತ್ತರಾದಿಮಠ ಮತ್ತು ಶ್ರೀ ರಾಯರ ಮಠಕ್ಕೆ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಸಮ್ಮತಿಸಿದೆ. ಕಳೆದ ನಾಲ್ಕು ದಶಕಗಳಿಂದ ನವವೃಂದಾವನ ಗಡ್ಡೆಯ ಒಡೆತನ ಮತ್ತು ಪೂಜಾ ವಿಧಿಗಳ ಕುರಿತು ಶ್ರೀಉತ್ತರಾದಿ ಮಠ ಮತ್ತು ಶ್ರೀ ರಾಘವೇಂದ್ರಸ್ವಾಮಿಗಳ ಮಠದ ನಡುವೆ ತೀವ್ರವಾದ ಕಾನೂನು ಹೋರಾಟ ನಡೆಯುತ್ತಿರುವುದು ಜಗಜ್ಜಾಹೀರಾದ ವಿಷಯ. ಸರ್ವೋಚ್ಚ ನ್ಯಾಯಾಲಯವು ಈ ವಿವಾದವನ್ನು ಮಾತುಕತೆಯ ಮೂಲಕ ಬಗೆಹರಿಸಿಕೊಳ್ಳಲು ಸೂಚಿಸಿದ ನಂತರ ಎರಡು ಸುತ್ತಿನ ಮಾತುಕತೆಗಳು ಆಗಿವೆ. ಆದರೆ, ಈ ಪರ್ಯಾಯ ವ್ಯವಸ್ಥೆಗೆ ಶ್ರೀಉತ್ತರಾದಿಮಠವು ಕೆಲವು ಸ್ಪಷ್ಟ ನಿಲುವುಗಳನ್ನು ತಿಳಿಸಿದೆ.

# 2 ವರ್ಷ ಪೂರ್ಣ: ಸಚಿವಾಕಾಂಕ್ಷಿಗಳಿಗೆ ಸಿಗುತ್ತಾ ಸಿಹಿ ಸುದ್ದಿ

■ ಸರ್ಕಾರಕ್ಕೆ ಎರಡು ವರ್ಷ ಆಗ್ತಿದ್ದಂತೆ ಸಚಿವ ಸಂಪುಟ ಪುನಾರಚನೆ ಚರ್ಚೆಗಳು ಶುರು ■ ಹೈಕಮಾಂಡ್ ಮಟ್ಟದಲ್ಲೂ ಲಾಬಿ

• ಉದಯವಾಹಿನಿ, ಬೆಂಗಳೂರು

ಮೇ 20 ಕ್ಕೆ ರಾಜ್ಯ ಕಾಂಗ್ರೆಸ್ ಸರ್ಕಾರ ಎರಡು ವರ್ಷ ಪೂರೈಸುತ್ತಿದೆ. ಸರ್ಕಾರಕ್ಕೆ ಎರಡು ವರ್ಷ ಆಗ್ತಿದ್ದಂತೆ ಸಚಿವ ಸಂಪುಟ ಪುನಾರಚನೆ ಚರ್ಚೆಗಳು ಶುರುವಾಗುತ್ತಿದೆ. ಸಂಪುಟಕ್ಕೆ ಸೇರ್ಪಡೆ ಆಗಲು ಸಾಕಷ್ಟು ಆಕಾಂಕ್ಷಿಗಳು ಸರದಿಯ ಸಾಲಿನಲ್ಲಿ ನಿಂತಿದ್ದು, ಸಿಎಂ ಸಿದ್ದರಾಮಯ್ಯ ಅವರು ಏನು ಕ್ರಮ ಕೈಗೊಳ್ಳುತ್ತಾರೆ ಎಂಬುವುದು ಕುತೂಹಲಕ್ಕೆ ಕಾರಣವಾಗಿದೆ.

ಸಚಿವ ಸಂಪುಟ ಪುನಾರಚನೆ ಆಗಬೇಕು ಎಂಬ ಕೂಗು ಹಲವು ತಿಂಗಳುಗಳಿಂದ ಇದೆ. ಸರ್ಕಾರಕ್ಕೆ ಒಂದು ವರ್ಷ ಆಗ್ತಿದ್ದಂತೆ ಸಂಪುಟ ಪುನಾರಚನೆ ಕೂಗು ಕೇಳಿಬಂದಿತ್ತು. ಆದರೆ ಇದಕ್ಕೆ ಸಿಎಂ ಸಿದ್ದರಾಮಯ್ಯ ಒಪ್ಪಿಗೆ ನೀಡಿರಲಿಲ್ಲ. ಆದರೆ ಇದೀಗ ಮತ್ತೊಮ್ಮೆ ಈ ಕೂಗು ಜೋರಾಗಿ ಕೇಳಿಬರುತ್ತಿದೆ.

ಮೇ 20 ರ ಬಳಿಕ ಸಚಿವ ಸಂಪುಟ ಪುನಾರಚನೆ ಆಗಲಿ ಎಂದು ಹಲವು ಆಕಾಂಕ್ಷಿಗಳು ಬೇಡಿಕೆ ಇಡುತ್ತಿದ್ದಾರೆ. ರಾಜ್ಯ ಮಟ್ಟದಲ್ಲಿ ಅಲ್ಲದೆ ಹೈಕಮಾಂಡ್ ಮಟ್ಟದಲ್ಲೂ ಲಾಬಿ ನಡೆಸುತ್ತಿದ್ದಾರೆ. ಆದರೆ ಸಿಎಂ ಸಿದ್ದರಾಮಯ್ಯ ಹಾಗೂ ಹೈಕಮಾಂಡ್ ನಾಯಕರು ಅಂತಿಮ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ.

**ಭಿನ್ನ ನಿಲುವು:** ಸಂಪುಟ ಪುನಾರಚನೆ ಕುರಿತಾಗಿ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರು ಭಿನ್ನ ನಿಲುವನ್ನು ಹೊಂದಿದ್ದಾರೆ ಎನ್ನಲಾಗಿದೆ. ಸದ್ಯಕ್ಕೆ ಸಂಪುಟ ಪುನಾರಚನೆ ಬೇಡ ಎಂಬ ಅಭಿಪ್ರಾಯವನ್ನು ಸಿದ್ದರಾಮಯ್ಯ ಹೊಂದಿದ್ದಾರೆ. ಸರ್ಕಾರ ಎರಡುವರೆ ವರ್ಷ ಪೂರ್ಣಗೊಳಿಸಲಿ, ಬಳಿಕ ಸಂಪುಟ ಪುನಾರಚನೆ ಮಾಡೋಣ ಎಂಬ ಅಭಿಪ್ರಾಯವನ್ನು ಸಿದ್ದರಾಮಯ್ಯ ಹೊಂದಿದ್ದಾರೆ. ಆದರೆ ಈಗಲೇ ಸಂಪುಟ ಪುನಾರಚನೆ ಆದರೆ ಉತ್ತಮ ಎಂಬ ಅಭಿಪ್ರಾಯವನ್ನು ಡಿಕೆ ಶಿವಕುಮಾರ್ ಹೊಂದಿದ್ದಾರೆ ಎನ್ನಲಾಗಿದೆ.



### ಯಾರೆಲ್ಲಾ ಆಕಾಂಕ್ಷಿಗಳು

- ಬಿ ಕೆ ಹರಿಪ್ರಸಾದ್
- ಬಸವರಾಜ ರಾಯರೆಡ್ಡಿ
- ನರೇಂದ್ರ ಸ್ವಾಮಿ
- ಆಸೀಫ್ ಸೇಠ್
- ವಿಜಯಾನಂದ ಕಾಶಪ್ಪನವರ್
- ಟಿ ರಘುಮೂರ್ತಿ
- ಬಿ ಆರ್ ಪಾಟೀಲ್
- ಬಿ ಕೆ ಸಂಗಮೇಶ್
- ಅಜಯ್ ಸಿಂಗ್
- ತನ್ವೀರ್ ಸೇಠ್

### ಯಾರಿಗೆಲ್ಲಾ ಕೊಕ್

ಸಂಪುಟ ಪುನಾರಚನೆ ಆದಲ್ಲಿ ಕೆಲವು ಸಚಿವರಿಗೆ ಕೊಕ್ ನೀಡಬೇಕಾಗುತ್ತದೆ. ಈಗಾಗಲೇ ಕಾಂಗ್ರೆಸ್ ಹೈಕಮಾಂಡ್ ಎಲ್ಲಾ ಸಚಿವರ ವರದಿಯನ್ನು ತರಿಸಿಕೊಂಡು ಮೌಲ್ಯ ಮಾಪನ ಮಾಡುತ್ತಿದೆ. ಇದರ ಆಧಾರದಲ್ಲಿ ಕೆಲವು ಸಚಿವರನ್ನು ಸಂಪುಟದಿಂದ ಕೈಬಿಡುವ ಸಾಧ್ಯತೆ ಇದೆ. ಪ್ರಭಾವಿ ಸಚಿವರನ್ನು ಹೊರತಾಗಿ ಇತರ ಸಚಿವರಿಗೆ ಸಂಪುಟದಲ್ಲಿ ಕೊಕ್ ಸಿಗುವ ಸಾಧ್ಯತೆ ಹೆಚ್ಚಾಗಿದೆ. ಆದರೆ ಅಂತಿಮವಾಗಿ ಹೈಕಮಾಂಡ್ ಈಗಲೇ ಈ ನಿರ್ಧಾರ ಕೈಗೊಳ್ಳುತ್ತಾ ಎಂಬುವುದನ್ನು ಕಾದುನೋಡಬೇಕಾಗಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,551/Gram24ct ₹8,755/Gram22ct ಬೆಳ್ಳಿ: ₹98.00/Gram

## ಸುಹಾಸ್ ಶೆಟ್ಟಿ ಕೊಲೆ ಪ್ರಕರಣದಲ್ಲಿ 8 ಮಂದಿ ಆರೋಪಿಗಳು ವಶಕ್ಕೆ

• ಉದಯವಾಹಿನಿ, ಬೆಂಗಳೂರು

ಮಂಗಳೂರಿನಲ್ಲಿ ಹಿಂದೂ ಸಂಘಟನೆ ಕಾರ್ಯಕರ್ತ ಸುಹಾಸ್ ಶೆಟ್ಟಿ ಕೊಲೆ ಪ್ರಕರಣದ ತನಿಖೆ ಚುರುಕುಗೊಳಿಸಿರುವ ಬಜಪೆ ಠಾಣೆ ಪೊಲೀಸರು ಘಟನೆ ನಡೆದ 24 ಗಂಟೆಯೊಳಗೆ 8 ಮಂದಿಯನ್ನು ವಶಕ್ಕೆ ಪಡೆದಿದ್ದಾರೆ. ಆರೋಪಿಗಳ ಪತ್ತೆಗಾಗಿ ಮಂಗಳೂರು ಪೊಲೀಸ್ ಆಯುಕ್ತರಾದ ಅನುಪಮ್ ಅಗರವಾಲ್ ರವರು ಐದು ತಂಡಗಳನ್ನು ರಚಿಸಿದ್ದರು. ಈ ತಂಡಗಳು ಘಟನೆ ನಡೆದ ದಿನದಿಂದ ಇದುವರೆಗೂ ಹಲವು ಮಾಹಿತಿಗಳನ್ನು ಕಲೆಹಾಕಿ ಮಂಗಳೂರಿನಲ್ಲೇ ಅವಿತು ಕುಳಿತಿದ್ದ ಎಂಟು ಮಂದಿ ಶಂಕಿತರನ್ನು ವಶಕ್ಕೆ ಪಡೆದು ಹೆಚ್ಚಿನ ವಿಚಾರಣೆ ನಡೆಸುತ್ತಿವೆ. ಸುಹಾಸ್ ಶೆಟ್ಟಿಯನ್ನು ಏತಕ್ಕಾಗಿ ಕೊಲೆ ಮಾಡಿದ್ದಾರೆ, ಈ ಘಟನೆ ಹಿಂದೆ ಯಾರಿದ್ದಾರೆ, ಎಂಬಿತ್ಯಾದಿ ಮಾಹಿತಿಗಳನ್ನು ಆರೋಪಿಗಳಿಂದ ಬಾಯ್ಬಿಡಿಸುತ್ತಿದ್ದಾರೆ.

2022 ರಲ್ಲಿ ನಡೆದಿದ್ದ ಫಾಜಿಲ್ ಕೊಲೆ ಪ್ರಕರಣದ ಪ್ರತೀಕಾರವಾಗಿ ಸುಹಾಸ್ ಕೊಲೆ ನಡೆಯಿತೇ ಅಥವಾ ಬೇರೆ ಏನಾದರೂ ಕಾರಣ ಇದೆಯೇ ಎಂಬ ಬಗ್ಗೆಯೂ ಪೊಲೀಸರು ಮಾಹಿತಿಗಳನ್ನು ಕಲೆಹಾಕುತ್ತಿದ್ದು, ತನಿಖೆ ನಂತರವಷ್ಟೇ ಈತನ ಕೊಲೆಗೆ ನಿಖರ ಕಾರಣ ಬಯಲಾಗಬೇಕಿದೆ.

ಇದಲ್ಲದೇ ಸುಹಾಸ್ ಹತ್ಯೆ ನಡೆದ ಕೆಲವೇ ನಿಮಿಷಗಳಲ್ಲಿ ಫಿನಿಶ್ ಎಂಬ ಪೋಸ್ಟನ್ನು ಸಾಮಾಜಿಕ ಜಾಲತಾಣದಲ್ಲಿ ಏಕೆ ಹಾಕಲಾಗಿತ್ತು, ಈ ಪೋಸ್ಟ್ ಹಿಂದೆ ಯಾರ ಕೈವಾಡ ಇದೆ ಎಂಬ ಬಗ್ಗೆಯೂ ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ಕೈಗೊಂಡಿದ್ದಾರೆ. ಸುಹಾಸ್ ಶೆಟ್ಟಿ ಪ್ರಯಾಣಿಸುತ್ತಿದ್ದ ಕಾರಿಗೆ ಹಿಂದಿನಿಂದ ಮೀನಿನ ಗೂಡ್ಸ್ ವಾಹನದಿಂದ ಗುದ್ದಿಸಿ ನಂತರ ನಡು ರಸ್ತೆಯಲ್ಲೇ ಹಂತಕರ ಗುಂಪು ತಲ್ವಾರ್‌ಗಳಿಂದ ಮನಬಂದಂತೆ ಹಲ್ಲೆ ನಡೆಸಿ ಭೀಕರವಾಗಿ ಕೊಲೆ ಮಾಡಿ ಪರಾರಿಯಾಗಿರುವ ದೃಶ್ಯ ಸಿಸಿ ಟಿವಿಯಲ್ಲಿ ಸೆರೆಯಾಗಿದೆ. ಆ ಸಿಸಿ ಟಿವಿ ಫುಟೇಜ್‌ಗಳನ್ನು ಪೊಲೀಸರು ಪರಿಶೀಲಿಸಿದ್ದಾರೆ. ಸುಹಾಸ್ ಬರ್ಬರ ಹತ್ಯೆ ನಡೆಸಿದ್ದ ಪ್ರಮುಖ ಆರೋಪಿಯ ಬಗ್ಗೆ ಪೊಲೀಸರು ಮಾಹಿತಿ ಕಲೆಹಾಕಿದ್ದಾರೆ.

**ಹಲವು ಠಾಣೆಗಳಲ್ಲಿ ಪ್ರಕರಣಗಳು ದಾಖಲು:** ಬಜ್ಪೆ ಪೊಲೀಸ್ ಠಾಣಾ ವ್ಯಾಪ್ತಿಯ ಕಿನ್ನಿಪದವು ಬಳಿ ನಡೆದ ಸುಹಾಸ್ ಶೆಟ್ಟಿ ಹತ್ಯೆ ಸಂಬಂಧವಾಗಿ ಕೆಲವು ಸಾಮಾಜಿಕ ಜಾಲತಾಣಗಳಲ್ಲಿ ಶಾಂತಿ ಮತ್ತು ಸೌಹಾರ್ದತೆಗೆ ಧಕ್ಕೆ ಉಂಟುಮಾಡುವ ಉದ್ದೇಶದಿಂದ ಕೆಲವು ವ್ಯಕ್ತಿಗಳು, ಗ್ರೂಪ್‌ಗಳು ಸಾಮಾಜಿಕ ಮಾಧ್ಯಮದ ಮೂಲಕ ದ್ವೇಷ ಭಾವನೆ ಹುಟ್ಟುವಂತೆ ಪೋಸ್ಟ್ ಮಾಡುತ್ತಿರುವ ಹಿನ್ನೆಲೆಯಲ್ಲಿ ಮಂಗಳೂರು ನಗರ ವಿವಿಧ ಪೊಲೀಸ್ ಠಾಣೆಗಳಲ್ಲಿ ಹಲವು ಪ್ರಕರಣಗಳು ದಾಖಲಾಗಿವೆ.


## ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಉದ್ಯಮಿ ಕಿರಣ್ ಜೈನ್ ಬಂಧನ

• ಉದಯವಾಹಿನಿ, ಬೆಂಗಳೂರು

ಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ್ದ ಆರೋಪದ ಅಡಿ ಉದ್ಯಮಿಯನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ. ಬಳ್ಳಾರಿಯ ಕಿರಣ್ ಜೈನ್ ಬಂಧಿತ ಆರೋಪಿ. ನಗರದ ವಿವಿಧೆಡೆ ವೇಶ್ಯಾವಾಟಿಕೆ ನಡೆಯುತ್ತಿದ್ದ ಸ್ಥಳಗಳ ಮೇಲೆ ಸಿಸಿಬಿ ಪೊಲೀಸರು ಇತ್ತೀಚೆಗೆ ದಾಳಿ ನಡೆಸಿದ್ದರು. ದಾಳಿ ವೇಳೆ ಎಂಟು ಯುವತಿಯರನ್ನು ಪೊಲೀಸರು ರಕ್ಷಿಸಿದ್ದಾರೆ. ಅಲ್ಲೇ ಎಂಟು ಮಧ್ಯವರ್ತಿಗಳನ್ನು ಬಂಧಿಸಿದ್ದರು. ರಕ್ಷಣೆಯಾದ ಯುವತಿಯರ ಪೈಕಿ ಒಬ್ಬ ಬಾಲಕಿಯಿದ್ದಳು. ಈ ಸಂಬಂಧ ಹೆಚ್ಚಿನ ತನಿಖೆ ಕೈಗೊಂಡಾಗ ಆರೋಪಿ ಕಿರಣ್ ಜೈನ್ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವುದು ಗೊತ್ತಾಗಿತ್ತು. ಆರೋಪಿ ವಿರುದ್ಧ ಪೋಕ್ಸೊ ಕಾಯ್ದೆಯಡಿ ಪ್ರಕರಣ ದಾಖಲಿಸಿ ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸಿನಿಮಾ, ಧಾರಾವಾಹಿ, ಪಬ್, ರೆಸ್ಟೋರೆಂಟ್‌ಗಳಲ್ಲಿ ಕೆಲಸ ಕೊಡಿಸುವುದಾಗಿ ನಂಬಿಸಿ ಹೆಣ್ಣು ಮಕ್ಕಳನ್ನು ನಗರಕ್ಕೆ ಕರೆತಂದು ವೇಶ್ಯಾವಾಟಿಕೆ ದೂಡಲಾಗುತ್ತಿತ್ತು ಎಂದು ಸಿಸಿಬಿ ಮೂಲಗಳು ತಿಳಿಸಿವೆ.

## ಬಿಬಿಎಂಪಿ ಮುಖ್ಯ ಆಯುಕ್ತರಾಗಿ ಮಹೇಶ್ವರ್ ರಾವ್

• ಉದಯವಾಹಿನಿ, ಬೆಂಗಳೂರು



ಬಿಎಂಆರ್‌ಸಿಎಲ್‌ನ ವ್ಯವಸ್ಥಾಪಕ ನಿರ್ದೇಶಕ ಎಂ. ಮಹೇಶ್ವರ ರಾವ್ ಅವರನ್ನು ಬಿಬಿಎಂಪಿ ಮುಖ್ಯ ಆಯುಕ್ತರ ಹುದ್ದೆಗೆ ವರ್ಗಾಯಿಸಿ ಆದೇಶ ಹೊರಡಿಸಲಾಗಿದೆ. ಮಹೇಶ್ವರ ರಾವ್ ಅವರಿಗೆ ಬಿಬಿಎಂಪಿಯ ಮುಖ್ಯ ಆಯುಕ್ತರ ಹುದ್ದೆಯನ್ನು ಏಪ್ರಿಲ್ 28ರಂದು ಹೆಚ್ಚುವರಿಯಾಗಿ ವಹಿಸಲಾಗಿತ್ತು. ಅದರಂತೆ, ತುಷಾರ್ ಗಿರಿನಾಥ್ ಅವರಿಂದ ಏಪ್ರಿಲ್ 30ರಂದು ಅಧಿಕಾರ ಸ್ವೀಕರಿಸಿದ್ದರು. ಮಹೇಶ್ವರ ರಾವ್ ಅವರನ್ನು ಬಿಬಿಎಂಪಿ ಮುಖ್ಯ ಆಯುಕ್ತರ ಹುದ್ದೆಗೆ ವರ್ಗಾಯಿಸಿ, ಬಿಎಂಆರ್‌ಸಿಎಲ್‌ನ ವ್ಯವಸ್ಥಾಪಕ ನಿರ್ದೇಶಕ ಹುದ್ದೆಯನ್ನು ಹೆಚ್ಚುವರಿಯಾಗಿ ವಹಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಶುಕ್ರವಾರ ಆದೇಶ ಹೊರಡಿಸಿದೆ.

## ಡ್ರಗ್ಸ್ ಮಾರಟ ಮೂವರ ಬಂಧನ

• ಉದಯವಾಹಿನಿ, ಬೆಂಗಳೂರು

ಕಾರಿನಲ್ಲಿ ಡ್ರಗ್ಸ್ ಇಟ್ಟುಕೊಂಡು ಮಾರಾಟ ಮಾಡುತ್ತಿದ್ದ ಮೂವರು ಆರೋಪಿಗಳನ್ನು ಕುಮಾರಸ್ವಾಮಿ ಲೇಔಟ್ ಠಾಣೆ ಪೊಲೀಸರು ಬಂಧಿಸಿದ್ದಾರೆ. ಮೂವರು ಬಂಧಿತರಿಂದ 7.25 ಲಕ್ಷ ಮೌಲ್ಯದ ಗಾಂಜಾ, ಕಾರು ಮತ್ತು ಎರಡು ಮೊಬೈಲ್ ಫೋನ್ ಜಪ್ತಿ ಮಾಡಲಾಗಿದೆ ಎಂದು ಪೊಲೀಸರು ಹೇಳಿದರು. ಕನಕನಗರದ ಐದನೇ ಮುಖ್ಯ ರಸ್ತೆಯಲ್ಲಿ ಕಾರು ನಿಲ್ಲಿಸಿಕೊಂಡು ಮೂವರು ಆರೋಪಿಗಳು ಡ್ರಗ್ಸ್ ಮಾರಾಟ ಮಾಡುತ್ತಿದ್ದರು. ಖಚಿತ ಮಾಹಿತಿ ಆಧರಿಸಿ ದಾಳಿ ನಡೆಸಿ ಆರೋಪಿಗಳನ್ನು ಬಂಧಿಸಲಾಯಿತು ಎಂದು ಪೊಲೀಸರು ಹೇಳಿದರು. ಮೈಸೂರಿನಿಂದ ಕಡಿಮೆ ಬೆಲೆಗೆ ಡ್ರಗ್ಸ್ ಅನ್ನು ತಂದು ನಗರದಲ್ಲಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದರು ಎಂದು ಪೊಲೀಸರು ಹೇಳಿದರು.

## ಕರ್ತವ್ಯ ಲೋಪ ಆರೋಗ್ಯಾಧಿಕಾರಿಗೆ ನೋಟಿಸ್

• ಉದಯವಾಹಿನಿ, ಬೆಂಗಳೂರು

ರಾಜರಾಜೇಶ್ವರಿ ನಗರ ವಲಯದಲ್ಲಿ ಆರೋಗ್ಯಾಧಿಕಾರಿಯಾಗಿದ್ದಾಗ ತಮ್ಮ ಮಗನ ಒಡೆತನದ ನಕಲಿ ಸಂಸ್ಥೆಗೆ ಸಾಮಗ್ರಿ ವಿತರಣೆ ಹಾಗೂ ವೈದ್ಯರನ್ನು ಒದಗಿಸಲು ಕಾರ್ಯಾದೇಶ ನೀಡಿ ಕರ್ತವ್ಯಲೋಪ ಎಸಗಿರುವ ಡಾ. ಎಸ್.ಕೆ. ಸವಿತಾ ಅವರಿಗೆ ನಗರಾಭಿವೃದ್ಧಿ ಇಲಾಖೆ ನೋಟಿಸ್ ಜಾರಿ ಮಾಡಿದೆ. 2022ರ ಜನವರಿ 5ರಿಂದ ಮೇ 23ರವರೆಗೆ ರಾಜರಾಜೇಶ್ವರಿ ನಗರ ವಲಯದಲ್ಲಿ ಆರೋಗ್ಯಾಧಿಕಾರಿಯಾಗಿದ್ದಾಗ ಸವಿತಾ ಅವರು ತಮ್ಮ ಮಗನಾದ ಸಿ. ಸಿದ್ದರಾಜು ಚಿರಾಗ್ ಒಡೆತನದ ಎವಿಎಸ್ ಎಂಟರ್‌ಪ್ರೈಸಸ್ ಎಂಬ ನಕಲಿ ಸಂಸ್ಥೆಗೆ ಕಾನೂನುಬಾಹಿರವಾಗಿ ಕಾರ್ಯಾದೇಶ ನೀಡಿ ಅಕ್ರಮ ಎಸಗಿದ್ದಾರೆ. ಅಲ್ಲದೆ, ಸಿಬ್ಬಂದಿಗೆ ವೇತನ ಪಾವತಿಸದೆ ಲೋಪ ಎಸಗಿದ್ದಾರೆ. ಕಾರ್ಯಾದೇಶ ನೀಡಿರುವ ಸಂಸ್ಥೆಯ ಮಾಲೀಕರು ತಮ್ಮ ಮಗನಾಗಿರುವ ಬಗ್ಗೆ ಲಿಖಿತ ಹೇಳಿಕೆ ನೀಡಲು ರಾಜರಾಜೇಶ್ವರಿ ನಗರ ವಲಯದ ಜಂಟಿ ಆಯುಕ್ತರು 2023ರಂದು ಪತ್ರ ನೀಡಿದ್ದರೂ ವಿವರಣೆ ಸಲ್ಲಿಸಿಲ್ಲ' ಎಂದು ನೋಟಿಸ್‌ನಲ್ಲಿ ಉಲ್ಲೇಖಿಸಲಾಗಿದೆ. 'ನಾಗರಿಕ ಸೇವಾ ನಡತೆ ನಿಯಮಗಳ ಉಲ್ಲಂಘನೆ ಮಾಡಿದ್ದು, ಗಂಭೀರ ಕರ್ತವ್ಯ ಲೋಪ ಎಸಗಿರುವ ನಿಮ್ಮ ವಿರುದ್ಧ ಇಲಾಖೆ ವಿಚಾರಣೆ ನಡೆಸಲು ನಿರ್ಧರಿಸಲಾಗಿದೆ ಎಂದು ತಿಳಿಸಲಾಗಿದೆ. ಡಾ. ಎಸ್.ಕೆ. ಸವಿತಾ ಅವರಿಗೆ ಕಾರಣ ಕೇಳುವ ನೋಟಿಸ್ ಅನ್ನು ನೀಡಿ, ಅವರಿಂದ ದಿನಾಂಕ ಸಹಿತ ಸಹಿ ಪಡೆದು ಕಳುಹಿಸಿಕೊಡಬೇಕು ಎಂದು ಬಿಬಿಎಂಪಿ ಮುಖ್ಯ ಆಯುಕ್ತರಿಗೆ ನಗರಾಭಿವೃದ್ಧಿ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯವರು ಸೂಚಿಸಿದ್ದಾರೆ.

### ಗೋಡೌನ್‌ನಲ್ಲಿ ಬೆಂಕಿ ನಂದಿಸಲು ಹೋದ ಇಬ್ಬರ ಸಾವು, ಹತ್ತಕ್ಕೂ ಹೆಚ್ಚು ಮಂದಿಗೆ ಗಾಯ

# ಬೊಮ್ಮನಹಳ್ಳಿ ಠಾಣಾ ವ್ಯಾಪ್ತಿಯ ಹಾಸಿಗೆ ತಯಾರಿಕೆ ಗೋಡೌನ್‌ನಲ್ಲಿ ಬೆಂಕಿ

• ಉದಯವಾಹಿನಿ, ಬೆಂಗಳೂರು

ಹಾಸಿಗೆ ತಯಾರಿಕೆ ಗೋಡೌನ್‌ನಲ್ಲಿ ಹೊತ್ತಿ ಉರಿಯುತ್ತಿದ್ದ ಬೆಂಕಿ ನಂದಿಸಲು ತೆರಳಿದ್ದ ಇಬ್ಬರು ಮೃತಪಟ್ಟು, ಹತ್ತಕ್ಕೂ ಅಧಿಕ ಮಂದಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿರುವ ದಾರುಣ ಘಟನೆ ಬೊಮ್ಮನಹಳ್ಳಿ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಏ.27 ರಂದು ಮಧ್ಯಾಹ್ನ ಈ ದುರಂತ ಸಂಭವಿಸಿದೆ. ಗಂಭೀರ ಸುಟ್ಟಗಾಯಗಳಿಂದ ಬಳಲುತ್ತಿದ್ದ ಖಾಸಗಿ ಬ್ಯಾಂಕ್ ಮ್ಯಾನೇಜರ್ ಗುರುಪ್ರಸಾದ್ (34), ಕೂಲಿ ಕಾರ್ಮಿಕ ಶರಣಬಸಪ್ಪ (30) ಚಿಕಿತ್ಸೆ ಫಲಿಸದೆ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ. ಹತ್ತು ಮಂದಿಗೆ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರಿದಿದೆ. ಈ ಪೈಕಿ ಮೂವರ ಸ್ಥಿತಿ ಗಂಭೀರವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಬೊಮ್ಮನಹಳ್ಳಿ ಭಾನು ನರ್ಸಿಂಗ್ ಹೋಮ್ ರಸ್ತೆಯಲ್ಲಿ ಅಫ್ರೋಜ್ ಎಂಬಾತ ಹತ್ತಿ ಹಾಸಿಗೆ ತಯಾರಿಸುವ ಗೋಡೌನ್ ಹೊಂದಿದ್ದಾರೆ. ಏ.27ರಂದು ಮಧ್ಯಾಹ್ನ 2.30ರ ಸುಮಾರಿಗೆ ಗೋಡೌನ್‌ನಲ್ಲಿ ಏಕಾಏಕಿ ಬೆಂಕಿ ಹೊತ್ತಿಕೊಂಡು ಬೆಂಕಿ ಧಗಧಗಿಸಿದೆ. ಬೆಂಕಿ ಗಮನಿಸಿದ ಮಾಲೀಕ ಅಫ್ರೋಜ್, ಸ್ಥಳೀಯರಾದ ಗುರುಪ್ರಸಾದ್, ಶರಣ ಬಸಪ್ಪ, ವಿಜಯ್‌ಕುಮಾರ್, ತೌಸೀಫ್ ಎಂಬುವವರು ಸ್ಥಳಕ್ಕೆ ತೆರಳಿದ್ದಾರೆ. ಸಮೀಪದ ಮನೆಗಳಲ್ಲಿನ



ಉದಯವಾಹಿನಿ ಚಿತ್ರ

ಬಿಂದಿಗೆಗಳಲ್ಲಿ ನೀರು ತಂದು ಎರಚಿದ್ದಾರೆ. ಜತೆಗೆ, ಕೆಲವರು ಮನೆಗಳಲ್ಲಿನ ಸಂಪರ್ಕದ ಪೈಪ್‌ನಿಂದಲೂ ನೀರು ಎರಚಿ ಬೆಂಕಿ ನಂದಿಸಲು ಯತ್ನಿಸಿದ್ದಾರೆ. ಆದರೆ, ತಹಬದಿಗೆ ಬರದ ಬೆಂಕಿಯ ಜ್ವಾಲೆ ಮತ್ತಷ್ಟು ಪ್ರಜ್ವಲಿಸಿದೆ. ಜತೆಗೆ, ಗೋಡೌನ್‌ನಲ್ಲಿದ್ದ ಸಿಲಿಂಡರ್ ಸ್ಫೋಟಿಸಿದ್ದು ಸ್ಥಳದಲ್ಲಿದ್ದ ಅಷ್ಟೂ ಮಂದಿ ಗಾಯಗೊಂಡಿದ್ದಾರೆ.

ಗಾಯಗೊಂಡವರನ್ನು ಸ್ಥಳೀಯರು ತಕ್ಷಣ ಆಸ್ಪತ್ರೆಗೆ ದಾಖಲಿಸಿದ್ದರು. ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಮೂರು ದಿನಗಳ ಕಾಲ ಜೀವನ್ಮರಣ ಹೋರಾಟ ನಡೆಸಿದ ಗುರುಪ್ರಸಾದ್ ಹಾಗೂ ಶರಣಬಸಪ್ಪ ಅಸುನೀಗಿದ್ದಾರೆ. ಉಳಿದವರಿಗೆ ಚಿಕಿತ್ಸೆ ಮುಂದುವರಿದಿದೆ

**ಸಹಾಯಕ್ಕೆ ಹೋಗಿ ಆಸ್ಪತ್ರೆ ಸೇರಿದರು**

**ಅವಘಡದ ಕುರಿತು ಗಾಯಾಳು ವಿಜಯ್‌ಕುಮಾರ್ ಅವರಿಂದ ಹೇಳಿಕೆ ಪಡೆದು ಗೋಡೌನ್ ಮಾಲೀಕ ಅಫ್ರೋಜ್ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಎನ್‌ಜಿಆರ್ ಲೇಔಟ್ ನಿವಾಸಿ ವಿಜಯ್‌ಕುಮಾರ್ ಪ್ಲಂಬಿಂಗ್ ಕೆಲಸಗಾರರಾಗಿದ್ದಾರೆ. ಬೊಮ್ಮನಹಳ್ಳಿಯ ಸ್ನೇಹಿತ ತೌಸೀಫ್, ತನ್ನ ಮನೆಯ ನೀರಿನ ಸಂಪರ್ಕದ ಟ್ಯಾಪ್ ಸರಿಪಡಿಸಲು ಕರೆದಿದ್ದರಿಂದ ಏ.27ರಂದು ಅಲ್ಲಿಗೆ ತೆರಳಿದ್ದರು. ಕೆಲಸ ಮುಗಿದ ಬಳಿಕ ತೌಸೀಫ್, ಹತ್ತಿರದ ಸಲೂನ್‌ನಲ್ಲಿ ಶೇವಿಂಗ್ ಮಾಡಿಸಿಕೊಳ್ಳೋಣ ಎಂದಿದ್ದಾರೆ. ಹೀಗಾಗಿ, ಇಬ್ಬರೂ ಸಲೂನ್‌ಗೆ ತೆರಳಿದ್ದರು.**

**ಈ ವೇಳೆಯೇ ಹತ್ತಿರದ ಹಾಸಿಗೆ ತಯಾರಿಕಾ ಗೋಡೌನ್‌ನಲ್ಲಿ ಬೆಂಕಿ ಅವಘಡ ಕಂಡು ಸಹಾಯಕ್ಕೆ ಧಾವಿಸಲು ಅಲ್ಲಿಗೆ ತೆರಳಿದ್ದರು. ಇದೇ ಸಂದರ್ಭದಲ್ಲಿ ಸಿಲಿಂಡರ್ ಸ್ಫೋಟಿಸಿ ವಿಜಯ್ ಕುಮಾರ್, ತೌಸೀಫ್ ಕೂಡ ಗಾಯಗೊಂಡಿದ್ದಾರೆ**

**-ಹಿರಿಯ ಪೊಲೀಸ್ ಅಧಿಕಾರಿ**

ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದರು.

**ಕಾರಣ ಏನು?:** ಗೋಡೌನ್‌ನಲ್ಲಿ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಆಗಿದ್ದರಿಂದ ಬೆಂಕಿ ಹೊತ್ತಿಕೊಂಡಿರುವ ಶಂಕೆಯಿದೆ. ಇಡೀ ಗೋಡೌನ್‌ನಲ್ಲಿ ಹತ್ತಿ ಇದ್ದುದರಿಂದ ಬೆಂಕಿಯ ಜ್ವಾಲೆ ಎಲ್ಲೆಡೆ ವ್ಯಾಪಿಸಿದೆ. ಸ್ಥಳಕ್ಕೆ ಅಗ್ನಿಶಾಮಕ ದಳದ ಸಿಬ್ಬಂದಿ ತೆರಳಿ ಬೆಂಕಿ ನಂದಿಸಲು ಪ್ರಯತ್ನಿಸಿದರು. ಅಷ್ಟರಲ್ಲಾಗಲೇ ಸುಮಾರು 10 ಮಂದಿ ಗಾಯಗೊಂಡಿದ್ದರು ಎಂದು ಅಧಿಕಾರಿ ಹೇಳಿದರು.

## ಕಾಂಗ್ರೆಸ್ ಸರ್ಕಾರದ ದುರಾಡಳಿತದಲ್ಲಿ ಯಾರಿಗೂ ನೆಮ್ಮದಿಯಿಲ್ಲ : ಬಿ.ವೈ.ವಿಜಯೇಂದ್ರ

• ಉದಯವಾಹಿನಿ, ಬೆಂಗಳೂರು



ಕಾಂಗ್ರೆಸ್ ಸರ್ಕಾರದ ದುರಾಡಳಿತದಲ್ಲಿ ಯಾರಿಗೂ ನೆಮ್ಮದಿಯಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜ ಯೇಂದ್ರ ಟೀಕಿಸಿದ್ದಾರೆ. ಈ ಸಂಬಂಧ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು ಕೆಎಎಸ್ ಪರೀಕ್ಷೆಗೆ ಸಂಬಂಧಿಸಿದಂತೆ ನೊಂದವರ ದನಿಯಾಗಿ ರಾಜ್ಯ ಬಿಜೆಪಿ ನಿಲ್ಲಲಿದೆ ಎಂದಿ ದ್ದಾರೆ. ಕರ್ನಾಟಕ ಲೋಕಸೇವಾ ಆಯೋಗವು ನಡೆಸಿದ ಕೆಎಎಸ್ ಪೂರ್ವಭಾವಿ ಪರೀಕ್ಷೆಯಲ್ಲಿನ ಭಾಷಾಂತರ ಎಡವಟ್ಟಿನಿಂದ ಅನ್ಯಾಯಕ್ಕೊಳಗಾಗಿದ್ದ ಅಭ್ಯರ್ಥಿಗಳು ಹೈಕೋರ್ಟ್ ಮೆಟ್ಟಿಲೇರಿ ಇಂದಿನಿಂದ ಆರಂಭವಾಗಿರುವ ಮುಖ್ಯ ಪರೀಕ್ಷೆ ಬರೆಯಲು ಅವಕಾಶ ಪಡೆದಿದ್ದರು.

ಆದರೆ, ಮಧ್ಯರಾತ್ರಿ ಅರ್ಜಿ ತುಂಬಿ ಪ್ರವೇಶ ಪತ್ರ ಪಡೆಯುವಂತೆ ಗೊಂದಲ ಸೃಷ್ಟಿಸಿರುವ ಕೆಪಿಎಸ್‌ಸಿ ಕಾರ್ಯವೈಖರಿ ಪರೀಕ್ಷಾರ್ಥಿಗಳಿಗೆ ಅನಗತ್ಯ ಕಿರುಕುಳ ನೀಡುವ ದುರುದ್ದೇಶವನ್ನು ಪ್ರತಿಬಿಂಬಿಸಿದೆ.

ಉದ್ಯೋಗಾ ಕಾಂಕ್ಷಿ ಅಭ್ಯರ್ಥಿಗಳ ಭವಿಷ್ಯದ ಜೊತೆ ಕೆಪಿಎಸ್‌ಸಿ ಚೆಲ್ಲಾಟವಾಡುತ್ತಿದ್ದರೆ ರಾಜ್ಯ ಸರ್ಕಾರ ಕಣ್ಣು ಮುಚ್ಚಿ ಕೊಂಡು ನೋಡುತ್ತಿದೆ ಎಂದು ಟೀಕಿಸಿದ್ದಾರೆ.

ಮೇ 2ರ ಮಧ್ಯರಾತ್ರಿ 12 ಗಂಟೆ ಯವರೆಗೆ ಕೆಪಿಎಸ್‌ಸಿ ಕಚೇರಿಯಲ್ಲಿ ಅರ್ಜಿ ಸಲ್ಲಿಸಿ ಮಧ್ಯರಾತ್ರಿ ಹಾಲ್ ಟಿಕೆಟ್ ಪಡೆದು, ಮರುದಿನ ಬೆಳಗ್ಗೆಯೇ ಪರೀಕ್ಷಾ ಕೇಂದ್ರಕ್ಕೆ ಹೋಗಿ ಪರೀಕ್ಷೆ ಬರೆಯುವಂತೆ ಮಾಡಿರುವ ಗೊಂದಲದ ವ್ಯವಸ್ಥೆಯಿಂದ ಹಿಂಸೆ ಅನುಭವಿಸುತ್ತಿರುವ ಪರೀಕ್ಷಾರ್ಥಿಗಳು, ಅವರ ಕುಟುಂಬದವರ ಶಾಪ ರಾಜ್ಯ ಸರ್ಕಾರಕ್ಕೆ ತಟ್ಟದೇ ಬಿಡದು ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ವಿಧಾನಸಭಾ ಅಧಿವೇಶನ ದಲ್ಲಿ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಹಿತಾಸಕ್ತಿ ಕಾಪಾಡುವುದಾಗಿ ಸ್ವತಃ ಮುಖ್ಯಮಂತ್ರಿಗಳೇ ಮಾತು ಕೊಟ್ಟು, ಪರೀಕ್ಷಾರ್ಥಿಗಳಿಗೆ ನ್ಯಾಯ ಒದಗಿಸುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ ಎಂದು ಆರೋಪಿಸಿದ್ದಾರೆ.

## ಮೌಲ್ಯಮಾಪಕರಿಗೆ ಸಂಭಾವನೆ ವರ್ಗಾವಣೆ

• ಉದಯವಾಹಿನಿ, ಬೆಂಗಳೂರು

ಪರೀಕ್ಷೆ ಕಾರ್ಯಗಳು, ಮೌಲ್ಯಮಾಪನ ಪ್ರಕ್ರಿಯೆಯಲ್ಲಿ ಸುಧಾರಣೆಗಳನ್ನು ತರುತ್ತಿರುವ ಬೆಂಗಳೂರು ವಿಶ್ವವಿದ್ಯಾಲಯ, ಮೌಲ್ಯಮಾಪನದ ಸಂಭಾವನೆಯನ್ನು ನೇರವಾಗಿ ಮೌಲ್ಯಮಾಪಕರ ಬ್ಯಾಂಕ್ ಖಾತೆಗೆ ವರ್ಗಾಯಿಸುವಂತಹ ಡಿಜಿಟಲ್ ವ್ಯವಸ್ಥೆಯೊಂದನ್ನು ಇತ್ತೀಚೆಗೆ ಅನುಷ್ಠಾನಗೊಳಿಸಿದೆ. ಈ ಡಿಜಿಟಲ್ ವ್ಯವಸ್ಥೆಯು ಗಣಕೀಕೃತ ಮೌಲ್ಯಮಾಪನ ಹಾಗೂ ಹಣಕಾಸು ವ್ಯವಸ್ಥೆ ಎರಡರ ಸಂಯೋಜನೆಯಾಗಿದೆ. ಈ ವ್ಯವಸ್ಥೆಯೊಂದಿಗೆ ಆನ್‌ಲೈನ್ ಬ್ಯಾಂಕಿಂಗ್ ಮುಖಾಂತರ ಆಯಾ ಮೌಲ್ಯಮಾಪಕರ ಖಾತೆಗೆ, ಸಂಭಾವನೆಯನ್ನು ತಲುಪಿಸಲಾಗುತ್ತಿದೆ. ಮೌಲ್ಯಮಾಪನದಲ್ಲಿ ತೊಡಗಿಸಿಕೊಂಡಿದ್ದ ಎರಡು ಸಾವಿರಕ್ಕೂ ಹೆಚ್ಚು ಅಧ್ಯಾಪಕರ ಬ್ಯಾಂಕ್ ಖಾತೆಗೆ 3.37 ಕೋಟಿ ವರ್ಗಾವಣೆ ಮಾಡಲಾಗಿದೆ. ಒಂದು ವರ್ಷದಿಂದ ಡಿಜಿಟಲ್ ಪಾವತಿ ಮೂಲಕ ಅಧ್ಯಾಪಕರಿಗೆ ಪರೀಕ್ಷೆಯ ಸಂಭಾವನೆಯನ್ನು ಪಾವತಿ ಮಾಡಲಾಗುತ್ತಿದೆ' ಎಂದು ಬೆಂಗಳೂರು ವಿಶ್ವವಿದ್ಯಾಲಯದ ಮೌಲ್ಯಮಾಪನ ವಿಭಾಗದ ಕುಲಸಚಿವ ಪ್ರೊ.ಸಿ. ಶ್ರೀನಿವಾಸ್ ತಿಳಿಸಿದ್ದಾರೆ. ಸ್ಥಳೀಯವಾಗಿ ರೂಪಿಸಿರುವ ತಂತ್ರಜ್ಞಾನವನ್ನು ಈ ಡಿಜಿಟಲೀಕರಣಕ್ಕೆ ಅಳವಡಿಸಿಕೊಳ್ಳಲಾಗಿದೆ. ಈ ನೂತನ ವ್ಯವಸ್ಥೆಯಿಂದಾಗಿ ಹಣಕಾಸಿನ ನಿರ್ವಹಣಾ ವೆಚ್ಚವೂ ಕಡಿಮೆಯಾಗಿದೆ. ಅಧ್ಯಾಪಕರಿಗೆ ಸರಿಯಾದ ಸಮಯದಲ್ಲಿ ಸಂಭಾವನೆಯೂ ತಲುಪುತ್ತಿದೆ' ಎಂದು ಅವರು ವಿವರಿಸಿದ್ದಾರೆ.

## ಕೃಷ್ಣಾ ಜಲವಿವಾದ ಕುರಿತು ಶೀಘ್ರದಲ್ಲೇ ಸರ್ವ ಪಕ್ಷ ಸಭೆ

### ರಾಜ್ಯದ ರೈತರ ಹಿತಾಸಕ್ತಿ ಕಾಪಾಡಲು ಸರ್ಕಾರ ಬದ್ಧ

• ಉದಯವಾಹಿನಿ, ಬೆಂಗಳೂರು

ಕೃಷ್ಣಾ ಜಲವಿವಾದ ನ್ಯಾಯಮಂಡಳಿಯ ಅಂತಿಮ ತೀರ್ಪಿನ ಅನುಷ್ಠಾನ ಕುರಿತು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚಿಸಲು ಸದ್ಯದಲ್ಲಿಯೇ ಸರ್ವ ಪಕ್ಷ ಸಭೆ ಕರೆಯಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

ಕೃಷ್ಣಾ ನ್ಯಾಯಾಧಿಕರಣ-2 ಗೆಜೆಟ್ ಅಧಿಸೂಚನೆ ಕುರಿತು ಚರ್ಚಿಸಲು ಕೇಂದ್ರ ಜಲಶಕ್ತಿ ಸಚಿವರು ಕರೆದಿರುವ ಕಣಿವೆ ರಾಜ್ಯಗಳ ಜಲ ಸಂಪನ್ಮೂಲ ಸಚಿವರ ಸಭೆಯ ಹಿನ್ನೆಲೆಯಲ್ಲಿ ಸಿಎಂ ಅಧ್ಯಕ್ಷತೆಯಲ್ಲಿಂದು ಸಚಿವರು, ಹಿರಿಯ ಅಧಿಕಾರಿಗಳ ಸಭೆ ನಡೆಯಿತು. ರಾಜ್ಯದ ರೈತರ ಹಿತಾಸಕ್ತಿ ಕಾಪಾಡಲು ಸರ್ಕಾರ ಬದ್ಧವಾಗಿದ್ದು, ರಾಜ್ಯದ ಪಾಲಿನ ನೀರನ್ನು ಪಡೆದುಕೊಳ್ಳಲು ಕಾನೂನು ಕ್ರಮಗಳು ಸೇರಿದಂತೆ ಎಲ್ಲಾ ಪ್ರಯತ್ನ ನಡೆಸುವಂತೆ ಮುಖ್ಯಮಂತ್ರಿ ಇದೇ ವೇಳೆ ಸೂಚನೆ ನೀಡಿದರು. ಕೃಷ್ಣಾ ಜಲವಿವಾದ ನ್ಯಾಯ ಮಂಡಳಿಯ ಅಂತಿಮ ತೀರ್ಪಿನ ಗೆಜೆಟ್ ಅಧಿಸೂಚನೆ ಪ್ರಕ ಟಿಸಲು, ಈ ಕುರಿತಾಗಿ 2021 ಸೆಪ್ಟೆಂಬರ್ 16ರ ಸುಪ್ರೀಂಕೋರ್ಟ್ ಆದೇಶವನ್ನು ಮಾರ್ಪಡಿಸಲು ಕೋರಿ ನ್ಯಾಯಾಲಯದಲ್ಲಿ ಅರ್ಜಿ ದಾಖಲಿ ಸಲು ಕೇಂದ್ರ ಸರ್ಕಾರಕ್ಕೆ ಒತ್ತಡ ಹೇರಲು ನಿರ್ಧರಿಸಲಾಯಿತು.

ಕೃಷ್ಣಾ ಜಲ ವಿವಾದ ನ್ಯಾಯಮಂಡಳಿ-2 ದಿನಾಂಕ 30-12-2010ರಂದು ಕೃಷ್ಣಾ ನ್ಯಾಯಾಧಿಕರಣ-2 ರ ತೀರ್ಪು ನೀಡಿದ್ದು, ದಿನಾಂಕ 29-11-2013ರಂದು ಉಳಿದ ವರದಿ ನೀಡಿದೆ. ನ್ಯಾಯಾಧಿಕರಣದ ಅಂತಿಮ ತೀರ್ಪಿನಡಿ ಕರ್ನಾಟಕ ರಾಜ್ಯಕ್ಕೆ 173 ಟಿಎಂಸಿ ನೀರನ್ನು ಹಂಚಿಕೆ ಮಾಡಲಾಗಿರುತ್ತದೆ.

ಈ ಪೈಕಿ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರ ಯೋಜನೆಗೆ 130 ಟಿಎಂಸಿ ಹಂಚಿಕೆ ನಿಗದಿಪಡಿಸಿರುತ್ತದೆ. ಆದರೆ ನ್ಯಾಯಮಂಡಳಿಯ ವರದಿ ಮತ್ತು ನ್ಯಾಯಾಧಿಕರಣದ ಅಂತಿಮ ಆದೇಶ ಪ್ರಶ್ನಿಸಿ ಆಂಧ್ರಪ್ರದೇಶ ಸುಪ್ರೀಂಕೋರ್ಟ್ ನಲ್ಲಿ ಎಸ್‌ಎಲ್‌ಪಿ ದಾಖಲಿಸಿದೆ. ಈ ಕುರಿತು ಸುಪ್ರೀಂ ಕೋರ್ಟ್ ತನ್ನ 2021ರ ಸೆಪ್ಟೆಂಬರ್ 16ರ ಆದೇಶ ದಲ್ಲಿ ತನ್ನ ಮುಂದಿನ ಆದೇಶದವರೆಗೆ ನ್ಯಾಯಾಧಿಕರಣ ತೆಗೆದುಕೊಳ್ಳಬಹುದಾದ ಯಾವುದೇ ನಿರ್ಧಾರಗಳ ಅಧಿಸೂಚನೆ ಪ್ರಕಟಿಸದಂತೆ ಆದೇಶ ನೀಡಿದೆ ಎಂದು ತಿಳಿಸಿದ್ದಾರೆ.

ಡಿಸಿಎಂ ಡಿ.ಕೆ.ಶಿವ ಕುಮಾರ್, ಸಚಿವರಾದ ಎಚ್.ಕೆ.ಪಾಟೀಲ್, ಎಂ.ಬಿ. ಪಾಟೀಲ್, ಆರ್.ಬಿ. ತಿಮ್ಮಾಪುರ್, ಶರಣಬಸಪ್ಪ ಗೌಡ ದರ್ಶನಾಪುರ, ಡಾ.ಹೆಚ್.ಸಿ.ಮಹಾದೇವಪ್ಪ, ಶಿವಾನಂದ ಪಾಟೀಲ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ನ್ಯಾಯವಾದಿ ಮೋಹನ್ ಕಾತರ್ಕಿ ಮತ್ತಿತರರು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

**ಒತ್ತಾಯಿಸಲು ನಿರ್ಧಾರ**

**ಕಾವೇರಿ ಜಲವಿವಾದ ನ್ಯಾಯಮಂಡಳಿ ತೀರ್ಪಿಗೆ ಸಂಬಂಧಿಸಿದಂತೆ ಸಿವಿಲ್ ಮೇಲ್ಮನವಿಗಳು ಬಾಕಿ ಇರುವಾಗಲೂ ಕಾವೇರಿ ನ್ಯಾಯಾಧಿಕರಣದ ತೀರ್ಪು ಪ್ರಕಟಿಸಲು ಸುಪ್ರೀಂಕೋರ್ಟ್ ನಿರ್ದೇಶಿಸಿರುತ್ತದೆ. ಇದೇ ರೀತಿ ಮಹದಾಯಿ ಜಲವಿವಾದ ನ್ಯಾಯ ಮಂಡಳಿಯ ಅಂತಿಮ ತೀರ್ಪಿನ ಪ್ರಕಟಣೆಗೆ ಸುಪ್ರೀಂಕೋರ್ಟ್ 2020ರ ಫೆ. 20ರಂದು ತನ್ನ ಆದೇಶದಲ್ಲಿ ನಿರ್ದೇಶಿಸಿದೆ. ಅದರಂತೆ ಈ ಎರಡೂ ನ್ಯಾಯಾಧಿಕರಣಗಳ ತೀರ್ಪನ್ನು ಕೇಂದ್ರ ಸರ್ಕಾರ ಗೆಜೆಟ್ ಅಧಿಸೂಚನೆ ಹೊರಡಿಸಿರುತ್ತದೆ. ಇದೇ ರೀತಿಯಲ್ಲಿ ಕೃಷ್ಣಾ ನ್ಯಾಯಾಧಿಕರಣದ ತೀರ್ಪಿನ ಗೆಜೆಟ್ ಅಧಿಸೂಚನೆ ಹೊರಡಿ ಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಲು ನಿರ್ಧರಿಸಲಾಯಿತು.**

**ನ್ಯಾಯಾಧಿಕರಣದ ಅಂತಿಮ ತೀರ್ಪು ಕೇಂದ್ರ ಸರ್ಕಾರದ ಗೆಜೆಟ್ ಅಧಿಸೂಚನೆಗೆ ಒಳಪಟ್ಟಿದ್ದು, ಈ ಕುರಿತಾಗಿ ಹಲವು ಬಾರಿ ಮನವಿ ಸಲ್ಲಿಸಿದ್ದರೂ, ಇನ್ನೂ ಅಧಿಸೂಚನೆ ಆಗಿಲ್ಲ. ಯಾಧಿಕರಣದ ಅಂತಿಮ ತೀರ್ಪು ನೀಡಿದ ದಿನಾಂಕದಿಂದ ಇದುವರೆಗೂ 15 ವರ್ಷಗಳೇ ಕಳೆದಿವೆ. ಉತ್ತರ ಕರ್ನಾಟಕದ ಯುಕೆಪಿ-3 ಯೋಜನೆಯ ಪ್ರದೇಶದಲ್ಲಿನ ರೈತರು ತಮ್ಮ ಹಕ್ಕಿನ ಪಾಲನ್ನು ಬಳಸಲು ಬಹಳ ವರ್ಷಗಳಿಂದ ಕಾಯುತ್ತಿದ್ದಾರೆ**

**-ಸಿದ್ದರಾಮಯ್ಯ, ಸಿಎಂ**

## ಭೂಕಬಳಿಕೆದಾರರಿಂದ ಶೀಬಿ ಅರಣ್ಯ ಭೂಮಿ ರಕ್ಷಣೆಗೆ ಈಶ್ವರ ಖಂಡ್ರೆ ಸೂಚನೆ

• ಉದಯವಾಹಿನಿ, ಬೆಂಗಳೂರು



ಶೀಬಿ ಅರಣ್ಯ ಪ್ರದೇಶದಲ್ಲಿ ಆಗಿರುವ ಅಕ್ರಮ ಮಂಜೂರಾತಿ ರದ್ದುಪಡಿಸಲು ಮತ್ತು ನಕಲಿ ದಾಖಲೆ ಸೃಷ್ಟಿಸಿ ಅರಣ್ಯ ಭೂಮಿ ಕಬಳಿಸಲು ಪ್ರಯತ್ನಿಸುತ್ತಿರುವವರ ವಿರುದ್ಧ ಕಾನೂನು ರೀತ್ಯಾ ಕಠಿಣ ಕ್ರಮ ಕೈಗೊಂಡು, ಅಮೂಲ್ಯವಾದ ಅರಣ್ಯ ಭೂಮಿಯನ್ನು ಸಂರಕ್ಷಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟ ಸೂಚನೆ ನೀಡಿದ್ದಾರೆ. ತುಮಕೂರು ಜಿಲ್ಲೆ ಕಳ್ಳಂಬೆಳ್ಳ ಹೋಬಳಿ ಅರಣ್ಯ ಪ್ರದೇಶಕ್ಕೆ ಭೇಟಿ ನೀಡಿ ಖುದ್ದು ಪರಿಶೀಲನೆ ನಡೆಸಿದ ಸಚಿವರು, ಬೆಂಗಳೂರು-ಪುಣೆ ಹೆದ್ದಾರಿಯ ಪಕ್ಕದಲ್ಲೇ ಇರುವ ಈ ಅರಣ್ಯ ಭೂಮಿಗೆ ಭಾರೀ ಮೌಲ್ಯವಿದ್ದು, ಕೆಲವರು ಇದನ್ನು ಕಬಳಿಸಲು ಮತ್ತು ಒತ್ತುವರಿ ಮಾಡಲು ಯತ್ನಿಸುತ್ತಿದ್ದಾರೆ. ಹೀಗಾಗಿ ಅರಣ್ಯ ಸಿಬ್ಬಂದಿ ಕಟ್ಟೆಚ್ಚರದಿಂದ ಇರಬೇಕು ಎಂದರು. ಕೆಲವರು ನ್ಯಾಯಾಲಯದಲ್ಲಿ ಭೂಮಿಯ ಮಾಲೀಕತ್ವದ ಹೋರಾಟ ನಡೆಸುತ್ತಿದ್ದಾರೆ.ಸುಪ್ರೀಂಕೋರ್ಟ್ ಡಿನೋಟಿಫಿಕೇಷನ್ ಆಗದ ಹೊರತು, ಅರಣ್ಯ ಭೂಮಿ ಅರಣ್ಯವಾಗಿಯೇ ಉಳಿಯುತ್ತದೆ ಎಂದು ಹೇಳಿದ್ದು, ಡಿನೋಟಿಫಿಕೇ ಷನ್ ಆಗದ ಈ ಅರಣ್ಯದಲ್ಲಿನ ಅಕ್ರಮ ಮಂಜೂ ರಾತಿ ರದ್ದುಪಡಿಸುವಂತೆ ಎ.ಸಿ. ನ್ಯಾಯಾಲಯದಲ್ಲಿ ದಾವೆ ಹೂಡುವಂತೆ ನಿರ್ದೇಶಿಸಿದರು.

ಭೂಮಾಫಿಯಾದವರು ಬಡವರನ್ನು ಮುಂದಿಟ್ಟುಕೊಂಡು ಬೆಲೆಬಾಳುವ ಭೂಮಿ ಕಬಳಿಸಲು ಯತ್ನಿಸುತ್ತಾರೆ. ಅರಣ್ಯ ಭೂಮಿಯನ್ನು ಕಬಳಿಸಲು ಯತ್ನಿಸುವವರ ವಿರುದ್ಧ, ಅದಕ್ಕೆ ಸಹಕಾರ ನೀಡುವ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಿ ಎಂದು ಸೂಚಿಸಿದರು.

ಪ್ರಕೃತಿ, ಪರಿಸರ, ಅರಣ್ಯ ಸಂರಕ್ಷಣೆ ನಮೆಲ್ಲರ ಹೊಣೆ ಎಂದು ನಮ್ಮ ಸಂವಿಧಾನ ಸಾರುತ್ತದೆ, ಸರ್ವೋನ್ನತ ನ್ಯಾಯಾಲಯ ಕೂಡ ಹಲವು ಪ್ರಕರಣಗಳಲ್ಲಿ ಇದನ್ನೇ ಪುನರುಚ್ಚರಿಸಿದೆ. ಹೀಗಾಗಿ ಅರಣ್ಯ ಸಂರಕ್ಷಣೆಯ ಹೊಣೆ ಹೊತ್ತು ಅಧಿಕಾರಿಗಳು ಅರಣ್ಯ ಉಳಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಅವರು ತಿಳಿಸಿದರು. ಟಿ.ಬಿ. ಜಯಚಂದ್ರ ಅವರು ಕೂಡ ಈ ಅರಣ್ಯ ಸಂರಕ್ಷಿಸಲು ಬೇಲಿ ಹಾಕುವ ಪ್ರಸ್ತಾವನೆ ನೀಡಿದ್ದು, ಅರಣ್ಯ ಸಚಿವರಾಗಿ ಈ ಅರಣ್ಯವು ಭೂ ಮಾಫಿಯಾ ಪಾಲಾಗದಂತೆ ಉಳಿಸಲು ಪ್ರಾಮಾಣಿಕ ಪ್ರಯತ್ನ ಮಾಡುವ ಭರವಸೆಯನ್ನು ಅರಣ್ಯ ಸಚಿವರು ನೀಡಿದರು. ಅನುಪಮಾ, ಸೂರ್ಯ ಮುಕುಂದರಾಜ್ ಇದ್ದರು.

## ರಾಗಿ ಖರೀದಿ ಪ್ರಮಾಣ ಗರಿಷ್ಠ 30 ಕ್ವಿಂಟಾಲ್‌ಗೆ ಹೆಚ್ಚಳ

• ಉದಯವಾಹಿನಿ, ಬೆಂಗಳೂರು

2024-25ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ನೋಂದಾಯಿತ ರೈತರಿಂದ ರಾಗಿ ಖರೀದಿಸುವ ಪ್ರಮಾಣವನ್ನು ಹೆಚ್ಚಿಸಲಾಗಿದ್ದು, ಖರೀದಿ ಕೇಂದ್ರಗಳಿಗೆ ಇನ್ನೂ ನೀಡದ ರೈತರಿಂದ ಮಾತ್ರ ಪ್ರತಿ ಎಕರೆಗೆ 10 ಕ್ವಿಂಟಾಲ್ ನಂತೆ ಗರಿಷ್ಠ 30 ಕ್ವಿಂಟಾಲ್ ರಾಗಿಯನ್ನು ಖರೀದಿ ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಎ.ಬಿ ಬಸವರಾಜು ಅವರು ತಿಳಿಸಿದ್ದಾರೆ. ರಾಗಿ ಖರೀದಿ ಪ್ರಕ್ರಿಯೆಗೆ ಮಾ.1 ರಿಂದ ವಿದ್ಯುಕ್ತವಾಗಿ ಚಾಲನೆ ನೀಡಲಾಗಿದ್ದು, ಮಾ.3 ರಿಂದ ಜೂನ್ 30 ರವರೆಗೆ ರಾಗಿ ಖರೀದಿಯ ಅವಧಿಯನ್ನು ವಿಸ್ತರಣೆ ಮಾಡಲಾಗಿದೆ. ಜಿಲ್ಲೆಯ ಎಲ್ಲಾ ತಾಲ್ಲೂಕು ಖರೀದಿ ಕೇಂದ್ರಗಳಲ್ಲಿ ರಾಗಿ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದ್ದು, ನೋಂದಾಯಿತ ರೈತರು ಸಂಬಂಧಪಟ್ಟ ತಾಲ್ಲೂಕುಗಳ ಖರೀದಿ ಕೇಂದ್ರಗಳಿಗೆ ರಾಗಿಯನ್ನು ನಿಯಮಾನುಸಾರ ನೀಡಬಹುದಾಗಿರುತ್ತದೆ.

2024-25 ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಗಿ ಖರೀದಿ ಮಾಡಲು ಬೆಂಗಳೂರು ಗ್ರಾಮಾಂತರ ಜಿಲ್ಲೆಯ 4 ತಾಲ್ಲೂಕುಗಳಲ್ಲಿ ರಾಗಿ ಖರೀದಿ ಕೇಂದ್ರಗಳನ್ನು ತೆರೆದು, ರಾಗಿ ಬೆಳೆದಿರುವ ರೈತರಿಂದ ನಿಯಮಾನುಸಾರ ಅಗತ್ಯ ದಾಖಲೆಗಳನ್ನು ಪಡೆದು ನೋಂದಾಯಿಸಿಕೊಳ್ಳಲಾಗಿದೆ. ರಾಗಿ ಖರೀದಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗಾಗಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ತಾಲ್ಲೂಕು ಖರೀದಿ ಅಧಿಕಾರಿಗಳು ದೇವನಹಳ್ಳಿ ತಾಲ್ಲೂಕಿನ ಎ.ಅಚ್ಯುತ (9900136687), ದೊಡ್ಡಬಳ್ಳಾಪುರ ತಾಲ್ಲೂಕಿನ ಎಚ್.ಎನ್. ನಾರಾಯಣ (9886141435), ನೆಲಮಂಗಲ ತಾಲ್ಲೂಕಿನ ವೈ.ಎಸ್.ನಾರಾಯಣ (9482991630), ಹೊಸಕೋಟೆ ತಾಲ್ಲೂಕಿನ ಶಿವಕುಮಾರ್ (9880361514) ಸಂಪರ್ಕಿಸಬಹುದಾಗಿದೆ.


## ಲೈಂಗಿಕ ಕಿರುಕುಳದ ವಿಡಿಯೋ ಹಂಚಿಕೊಂಡಿದ್ದ ವ್ಯಕ್ತಿಯ ವಿರುದ್ಧ ಎಫ್‌ಐಆರ್

• ಉದಯವಾಹಿನಿ, ಬೆಂಗಳೂರು

ಭಾರತಿ ಲೇಔಟ್‌ನ ಒಂದನೇ ಅಡ್ಡ ರಸ್ತೆಯಲ್ಲಿ ಏಪ್ರಿಲ್ 3ರಂದು ಯುವತಿಯ ಮೇಲೆ ನಡೆದಿದ್ದ ಲೈಂಗಿಕ ಕಿರುಕುಳದ ವಿಡಿಯೊವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದ ವ್ಯಕ್ತಿಯ ವಿರುದ್ಧ ಸುದ್ದಗುಂಟೆಪಾಳ್ಯ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಭಾರತಿ ಲೇಔಟ್‌ನ ಒಂದನೇ ಅಡ್ಡ ರಸ್ತೆಯ ನಿವಾಸಿ ಲೋಕೇಶ್ ಗೌಡ (55) ಅವರ ವಿರುದ್ಧ ಮಾಹಿತಿ ತಂತ್ರಜ್ಞಾನ ಕಾಯ್ದೆಯ ಸೆಕ್ಷನ್ 66-'ಇ' ಅಡಿಯಲ್ಲಿ ಪ್ರಕರಣ ದಾಖಲಿಸಿ ಕೊಂಡು ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ಹೇಳಿದರು. ಪೇಯಿಂಗ್ ಗೆಸ್ಟ್ ಒಂದರಲ್ಲಿ ನೆಲಸಿದ್ದ ಯುವತಿ ನೀಡಿದ ದೂರು ಆಧರಿಸಿ ಲೋಕೇಶ್ ಅವರ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ಲೋಕೇಶ್ ಅವರನ್ನು ಇನ್ನೂ ಬಂಧಿಸಿಲ್ಲ. ವಿಚಾರಣೆಗೆ ಬರುವಂತೆ ಸೂಚಿಸಿ ನೋಟಿಸ್ ಜಾರಿ ಮಾಡಲಾಗುವುದು ಎಂದು ಪೊಲೀಸರು ಹೇಳಿದರು. ಆ ದೃಶ್ಯವುಳ್ಳ ವಿಡಿಯೊ ತುಣುಕನ್ನು ಲೋಕೇಶ್ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದರು ಎಂಬ ಆರೋಪವಿದೆ. ಲೈಂಗಿಕ ದೌರ್ಜನ್ಯ ಎಸಗಿದ್ದ ಆರೋಪಿ ಸಂತೋಷ್ ಡೇನಿಯಲ್ ಎಂಬಾತನನ್ನು ಕೇರಳದಲ್ಲಿ ಬಂಧಿಸಲಾಗಿತ್ತು.

## ಕೆಎಎಸ್ ಅಭ್ಯರ್ಥಿಗಳ ಮೇಲೆ ಸರ್ಕಾರದ ಸೇಡು ತೀರಿಸಿಕೊಳ್ಳುತ್ತಿದೆ : ಅಶೋಕ

• ಉದಯವಾಹಿನಿ, ಬೆಂಗಳೂರು



ಕೆಪಿಎಸ್‌ಸಿ ಪೂರ್ವಭಾವಿ ಪರೀಕ್ಷೆಯಲ್ಲಿನ ಭಾಷಾಂತರ ಎಡವಟ್ಟಿನಿಂದ ಅನ್ಯಾಯಕ್ಕೊಳಗಾಗಿದ್ದ ಅಭ್ಯರ್ಥಿಗಳು ಹೈಕೋರ್ಟ್ ಮೊರೆ ಹೋಗಿ, ಇಂದಿನಿಂದ ಆರಂಭವಾಗಿರುವ ಮುಖ್ಯ ಪರೀಕ್ಷೆಯನ್ನು ತೆಗೆದುಕೊಳ್ಳುವ ಅನುಮತಿ ಪಡೆದಿದ್ದರೆ, ಅವರಿಗೆ ಹಾಲ್ ಟಿಕೆಟ್ ಕೊಡಲು ಸತಾಯಿಸಿ ಸೇಡು ತೀರಿಸಿಕೊಳ್ಳುತ್ತಿದೆ ಈ ಪಾಪಿ ಕಾಂಗ್ರೆಸ್ ಸರ್ಕಾರ ಎಂದು ವಿಧಾನ ಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಈ ಸಂಬಂಧ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಒಂದು ಕಡೆ ಧೋ ಎಂದು ಸುರಿಯುತ್ತಿರುವ ಮಳೆ, ಮತ್ತೊಂದು ಕಡೆ ಅರ್ಜಿ ತುಂಬಲು ಯಾವ ದಾಖಲಾತಿಗಳು ಬೇಕೆನ್ನುವ ಗೊಂದಲ, ಹತ್ತಿರದಲ್ಲಿ ಒಂದು ಜೆರಾಕ್ಸ್ ಅಂಗಡಿ ಇಲ್ಲ. ಕುಡಿಯೋಕೆ ನೀರಿಲ್ಲ, ಕಾಫಿ ತಿಂಡಿಗೆ ಒಂದು ಹೋಟೆಲ್ ಇಲ್ಲ, ಹೆಣ್ಣುಮಕ್ಕಳಿಗೆ ಶೌಚಾಲಯವಿಲ್ಲ, ಹಸುಗೂಸುಗಳಿಗೆ ಹಾಲುಣಿಸೋಕೆ ಜಾಗ ಇಲ್ಲ, ಮಧ್ಯರಾತ್ರಿ ಆದರೂ ಹಾಲ್ ಟಿಕೆಟ್ ಕೈಗೆ ಸಿಕ್ಕಿಲ್ಲ. ಬೆಳಗಾದರೆ ಪರೀಕ್ಷೆ. ಇಂತಹ ಅವಾಂತರದ ನಡುವೆ ಪಾಪ ಅಭ್ಯರ್ಥಿಗಳು ಪರೀಕ್ಷೆ ಬರೆಯುವುದಾದರೂ ಹೇಗೆ? ಎಂದು ಅವರು ತರಾಟೆಗೆ ತೆಗೆದುಕೊಂಡಿದ್ದಾರೆ. ಸಿಎಂ ಸಿದ್ದರಾಮಯ್ಯ ನವರೇ, ಗ್ರಾಮೀಣ ಭಾಗದ ಕನ್ನಡ ಮಾಧ್ಯಮ ಅಭ್ಯರ್ಥಿಗಳು ಅಂದರೆ ತಮಗೆ ಯಾಕಿಷ್ಟು ದ್ವೇಷ? ಯಾಕಿಷ್ಟು ಅಸಡ್ಡೆ? ಬಡವರ ಮಕ್ಕಳು ಮುಂದೆ ಬರಬಾರದೇ? ಎಂದು ಅವರು ಪ್ರಶ್ನಿಸಿದ್ದಾರೆ. ವಿಧಾನಸಭೆ ಅಧಿವೇಶನದಲ್ಲಿ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಹಿತಾಸಕ್ತಿ ಕಾಪಡುವುದಾಗಿ ತಾವು ಕೊಟ್ಟ ಮಾತಿನಂತೆ ನಡೆದುಕೊಳ್ಳಲಿಲ್ಲ. ಬೇರೆ ದಾರಿ ಇಲ್ಲದೆ ಅಭ್ಯರ್ಥಿಗಳು ಕೋರ್ಟ್ ಮೊರೆ ಹೋಗಿ ಆದೇಶ ತಂದರೆ ಹಾಲ್ ಟಿಕೆಟ್ ಕೊಡಲು ಸತಾಯಿಸಿ ನೆಮ್ಮದಿಯಾಗಿ ಪರೀಕ್ಷೆ ಬರೆಯಲೂ ತೊಂದರೆ ಮಾಡಿದ್ದೀರಿ ಎಂದು ಅವರು ಆರೋಪಿಸಿದ್ದಾರೆ. ನೂರಾರು ಕನಸುಗಳನ್ನು ಇಟ್ಟುಕೊಂಡು ಹಗಲು ರಾತ್ರಿ ಎನ್ನದೆ ವರ್ಷಗಟ್ಟಲೆ ತಯಾರಿ ನಡೆಸಿದ ಅಭ್ಯರ್ಥಿಗಳ ಶಾಪ ನಿಮ್ಮ ಸರ್ಕಾರಕ್ಕೆ ತಟ್ಟದೇ ಇರದು ಎಂದು ಅವರು ಕಿಡಿ ಕಾರಿದ್ದಾರೆ.

### ಎಫ್‌ಐಆರ್ ದಾಖಲಾದ ಮೇಲೆ 'ಕನ್ನಡಿಗರು ಒಳ್ಳೆಯವರು' ಎಂದ ಸೋನು ನಿಗಮ್! ವಿವಾದದ ಬಗ್ಗೆ ಸ್ಪಷ್ಟನೆ

# ಯಾರನ್ನೂ ನೋಯಿಸುವ ಉದ್ದೇಶದಿಂದ ಆ ಮಾತು ಹೇಳಿದ್ದಲ್ಲ

• ಉದಯವಾಹಿನಿ, ಬೆಂಗಳೂರು

ಕನ್ನಡ ಕನ್ನಡ ಇಂಥ ಮನಸ್ಥಿತಿಯಿಂದಲೇ ಪಹಲ್ಗಾಮ್‌ನಲ್ಲಿ ದಾಳಿಯಾಗಿದ್ದು ಎಂದು ಬೆಂಗಳೂರಿನ ಸಂಗೀತ ಸಂಜೆಯೊಂದರಲ್ಲಿ ಬಹಿರಂಗವಾಗಿ ಹೇಳುವ ಮೂಲಕ ವಿವಾದಕ್ಕೆ ಕಾರಣವಾಗಿದ್ದಾರೆ ಕನ್ನಡಿಗರು ಅಪ್ಪಿಕೊಂಡು ಮುದ್ದಾಡಿದ ಹಿಂದಿಯ ಗಾಯಕ ಸೋನು ನಿಗಮ್. ಅವರ ವಿರುದ್ಧ ಬೆಂಗಳೂರಿನ ಠಾಣೆಯೊಂದರಲ್ಲಿ ದೂರು ದಾಖಲಾಗಿದ್ದು, ಅದರ ಅನ್ವಯ ಎಫ್‌ಐಆರ್ ಕೂಡ ದಾಖಲಾಗಿದೆ.

ಇದೆಲ್ಲಾ ಆದ ಮೇಲೆ ಸೋನು ನಿಗಮ್ ಬಾಯಿ ಬಿಟ್ಟಿದ್ದಾರೆ. ಕನ್ನಡಿಗರು ಒಳ್ಳೆಯವರು ಎಂದು ಹೇಳಿದ್ದಾರೆ. ಅಷ್ಟೇ ಅಲ್ಲ, ತಮ್ಮ ವಿವಾದಾತ್ಮಕ ಹೇಳಿಕೆಯ ಬಗ್ಗೆ ಒಂದು ಸ್ಪಷ್ಟನೆಯನ್ನೂ ಕೊಟ್ಟು, ತಮ್ಮ ಹೇಳಿಕೆಯ ಹಿಂದಿನ ಕಾರಣವೇನು ಎಂಬುದನ್ನೂ ವಿವರಿಸಿದ್ದಾರೆ. ಅವರು ಹೇಳಿದ್ದೇನು, ಅಸಲಿಗೆ ಈ ವಿವಾದ ಎಲ್ಲಿಂದ ಶುರುವಾಗಿತ್ತು ಎಂಬುದರ ಬಗ್ಗೆ ಇಲ್ಲಿದೆ ನೋಡಿ. ಇತ್ತೀಚೆಗೆ, ಬೆಂಗಳೂರಿನಲ್ಲಿ ನಡೆದ ಸಂಗೀತ ಕಾರ್ಯಕ್ರಮವೊಂದರಲ್ಲಿ ಸೋನು ನಿಗಮ್ ಅವರು ಹಾಡುಗಳನ್ನು ಹಾಡುತ್ತಿದ್ದರು. ಆಗ ವೇದಿಕೆಯ ಮುಂದೆ ನಿಂತಿದ್ದ ಅಭಿಮಾನಿಯೊಬ್ಬ ಸೋನು ಅವರಿಗೆ ಕನ್ನಡ ಹಾಡುಗಳನ್ನು ಹಾಡುವಂತೆ ಒತ್ತಾಯಿಸಿದ್ದಾನೆ. ಅದಕ್ಕೆ ತಕ್ಷಣಕ್ಕೆ ಸೋನು ಅವರು ಸ್ಪಂದಿಸಿಲ್ಲ. ಕೂಡಲೇ ಸಿಟ್ಟಿಗೆದ್ದ ಆತ, ಕನ್ನಡ ಹಾಡುಗಳನ್ನು ಹಾಡಬೇಕು ಎಂದು ಕೊಂಚ ಒರಟಾಗಿ ಹೇಳಿದ್ದಾನೆ.

ಆತನ ವರ್ತನೆಯು ಸೋನು ಅವರಿಗೆ ಬೇಸರ ತರಿಸಿದ್ದು, ಕೂಡಲೇ ಅವರು ಕನ್ನಡ.. ಕನ್ನಡ ?. ಇಂಥ ಹಠದ ಮನಸ್ಥಿತಿಗಳಿಂದಲೇ ಪೆಹಲ್ಗಾಮ್‌ನಲ್ಲಿ ದಾಳಿಯಾಗಿರುವುದು ಎಂದು ಹೇಳಿದ್ದಾರೆ. ಅದು ವಿವಾದಕ್ಕೆ ಕಾರಣವಾಗಿತ್ತು.



**ಕರ್ನಾಟಕ ರಕ್ಷಣಾ ವೇದಿಕೆಯಿಂದ ದೂರು:** ಅತ್ತ, ಸೋನು ನಿಗಮ್ ಆ ಹೇಳಿಕೆ ವಿವಾದವಾಗುತ್ತಲೇ ಬೆಂಗಳೂರಿನ ಅವಲಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಕರ್ನಾಟಕ ರಕ್ಷಣಾ ವೇದಿಕೆಯಿಂದ ಈ ದೂರು ದಾಖಲಾಗಿತ್ತಲ್ಲದೆ, ಕನ್ನಡದಲ್ಲಿ ಹಾಡು ಎಂದವರನ್ನು ಪಹಲ್ಗಾಮ್ ಉಗ್ರರಿಗೆ ಹೋಲಿಸುವ ಮೂಲಕ ಕನ್ನಡಿಗರ ಭಾವನೆಗಳಿಗೆ ಧಕ್ಕೆ ತಂದಿದ್ದಾರೆಂದು ಆರೋಪಿಸಲಾಗಿತ್ತು. ದೂರಿನ ಹಿನ್ನೆಲೆಯಲ್ಲಿ ತನಿಖೆ ನಡೆಸಿದ ಪೊಲೀಸರು, ಸೋನು ನಿಗಮ್ ವಿರುದ್ಧ ಎಫ್‌ಐಆರ್ ಸಹ ದಾಖಲಿಸಿದ್ದಾರೆ. ಕರವೇಯ ಬೆಂಗಳೂರು ಜಿಲ್ಲಾಧ್ಯಕ್ಷರಾದ ಧರಮ್ ರಾಜ್ ಗೌಡ ಮಾತನಾಡಿ, ಸೋನು ನಿಗಮ್ ಅವರ ಹೇಳಿಕೆಯು ಕನ್ನಡಿಗರನ್ನು ನೋಯಿಸಿದೆ. ಭಾಷೆಯ ಆಧಾರದಲ್ಲಿ ಇದೊಂದು ಶಾಂತಿ ಕದಡುವಂಥ ನಡೆ. ಸೋನು ನಿಗಮ್ ಹಾಗೆ ಹೇಳಿರುವ ವಿಡಿಯೋ ತುಣುಕು ವೈರಲ್ ಆಗಿದೆ. ಕನ್ನಡಿಗರು ಅದರಿಂದ ಗರಂ ಆಗಿದ್ದಾರೆ ಎಂದು ಹೇಳಿದ್ದರು.

**ಸೋನು ನಿಗಮ್ ಸ್ಪಷ್ಟನೆ**

**ಈ ಎಲ್ಲಾ ಬೆಳವಣಿಗೆಗಳ ನಂತರ ಸೋನು ನಿಗಮ್ ಅವರು ಸ್ಪಷ್ಟನೆಯೊಂದನ್ನು ನೀಡಿದ್ದಾರೆ. ನಾನು ಯಾರನ್ನೂ ನೋಯಿಸುವ ಉದ್ದೇಶದಿಂದ ಆ ಮಾತು ಹೇಳಿದ್ದಲ್ಲ. ಅದು ಸಾಂದರ್ಭಿಕವಾಗಿ ಬಂದಂಥ ಮಾತು. ನಾನು ಕರ್ನಾಟಕದಲ್ಲಿ ಎಲ್ಲೇ ಗಾಯನ ಸಮಾರಂಭಗಳಲ್ಲಿ ಭಾಗವಹಿಸಲು ಕನ್ನಡಿಗರು ಕನ್ನಡ.. ಕನ್ನಡ.. ಎಂದು ಚೀರಾಡುತ್ತಾರೆ. ಕನ್ನಡದಲ್ಲೊಂದು ಹಾಡು ಹಾಡಿ ಅಂತ ಆ ಮೂಲಕ ಮನವಿ ಮಾಡುತ್ತಾರೆ. ಅಂಥ ಮನವಿಗಳಲ್ಲಿ ವಿನಮ್ರತೆ ಇರುತ್ತೆ. ಆದರೆ, ಮೊನ್ನೆ ನಡೆದ ಸಂಗೀತ ಸಂಜೆಯಲ್ಲಿ ಕಂಡುಬಂದಿದ್ದು ವಿನಮ್ರತೆಯಲ್ಲ. ಅದೊಂದು ರೀತಿ ರೌಡಿಸಂ ಇತ್ತು. ವೇದಿಕೆಯ ಮುಂದೆ ನಿಂತಿದ್ದ ಆತ.. ಕನ್ನಡ,,, ಕನ್ನಡ.,,, ಅಂತಲೇ ಗಡುಸಾಗಿ ಹೇಳುತ್ತಿದ್ದ. ವಿನಮ್ರತೆಯಿಂದ ಕೇಳುವುದಕ್ಕೂ, ದೌರ್ಜನ್ಯದ ರೀತಿಯಲ್ಲ ಕೇಳುವುದಕ್ಕೂ ವ್ಯತ್ಯಾಸವಿರುತ್ತದೆ. ಅಂಥ ಮನಸ್ಥಿತಿಯ ವಿರುದ್ಧ ನಾನು ಮಾತನಾಡಿದ್ದು. ಇಂಥ ದೌರ್ಜನ್ಯದ ಮನಸ್ಥಿತಿಗಳಿಂದಲೇ ಪಹಲ್ಗಾಮ್ ನಲ್ಲಿ ಉಗ್ರರ ದಾಳಿಯಾಗಿದೆ ಎಂದು ಹೇಳಿದ್ದೆ. ಅದು ವಿವಾದಕ್ಕೆ ಕಾರಣವಾಯಿತು ಎಂದು ಹೇಳಿದ್ದಾರೆ.**

# ಕುಡಿತ ತಗ್ಗಿಸಲು ಮದ್ಯದ ದರ ಹೆಚ್ಚಳ: ಸಿದ್ದರಾಮಯ್ಯ

• **ಉದಯವಾಹಿನಿ, ಮಂಡ್ಯ**

ಕುಡಿಯುವುದನ್ನು ಕಡಿಮೆ ಮಾಡಲೆಂದು ಮದ್ಯದ ದರವನ್ನು ಜಾಸ್ತಿ ಮಾಡುತ್ತಿದ್ದೇವೆ ಎಂದು ಸಿಎಂ ಸಿದ್ದರಾಮಯ್ಯ ಸಮರ್ಥಿಸಿಕೊಂಡರು. ತೂಬಿನಕೆರೆ ಹೆಲಿಪ್ಯಾಡ್‌ನಲ್ಲಿ ಪತ್ರಕರ್ತರು ಕೇಳಿದ ಪ್ರಶ್ನೆಗೆ ಮದ್ಯಪಾನ ಸಂಯಮ ಮಂಡಳಿ ಇದೆ ಗೊತ್ತಾ? ಕುಡಿಯುವುದನ್ನು ಪೂರ್ಣ ನಿಲ್ಲಿಸಲಾಗುವುದಿಲ್ಲ, ಕಡಿಮೆ ಮಾಡಿಸಬಹುದು. ಅದಕ್ಕಾಗಿ ಸ್ವಲ್ಪ ಬೆಲೆ ಜಾಸ್ತಿ ಇರಲಿ ಬಿಡಿ ಎಂದು ನಗುತ್ತಾ ಉತ್ತರಿಸಿದರು. ಬೆಲೆ ಹೆಚ್ಚಳದ ಮೂಲಕ ಕುಡಿತದ ಪ್ರಮಾಣ ಕಡಿಮೆ ಮಾಡುವುದೇ ನಮ್ಮ ಉದ್ದೇಶ ಎಂದರು.

**ಖಾಸಗಿ ಕ್ಷೇತ್ರದಲ್ಲೂ ಮೀಸಲಾತಿ ತರಲಿ:** ಮೀಸಲಾತಿಯಲ್ಲಿ ಶೇ 50ರಷ್ಟು ಗರಿಷ್ಠ ಮಿತಿ ತೆಗೆಯಬೇಕು. ಖಾಸಗಿ ಕ್ಷೇತ್ರದಲ್ಲೂ


ಉದಯವಾಹಿನಿ ಚಿತ್ರ

ಮೀಸಲಾತಿ ತರಬೇಕು ಎಂದು ಪ್ರಧಾನಿಯನ್ನು ಒತ್ತಾಯಿಸುತ್ತೇನೆ ಎಂದು ಹೇಳಿದರು. ನ್ಯಾಯಮೂರ್ತಿ ರೋಹಿಣಿ ಸಮಿತಿಯ ಶಿಫಾರಸುಗಳ ಜಾರಿ ಜೊತೆಗೆ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆಯನ್ನೂ ಕೈಗೊಳ್ಳಬೇಕು’ ಎಂದು ಒತ್ತಾಯಿಸಿದರು.

# ಪೊಲೀಸ್ ಇಲಾಖೆಯ ಬೇಸಿಗೆ ಶಿಬಿರಕ್ಕೆ ತೆರೆ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ನಗರದ ಪೊಲೀಸ್ ಸಮುದಾಯ ಭವನದಲ್ಲಿ ಕಳೆದ 15 ದಿನಗಳಿಂದ ನಡೆದ ಬೇಸಿಗೆ ಶಿಬಿರಕ್ಕೆ ತೆರೆ ಬಿದ್ದಿತು. 120ಕ್ಕೂ ಹೆಚ್ಚು ಮಕ್ಕಳು ಶಿಬಿರದಲ್ಲಿ ಪಾಲ್ಗೊಂಡಿದ್ದರು. ಪೊಲೀಸ್ ಕುಟುಂಬದ ಮಕ್ಕಳ ಜೊತೆಗೆ ನಾಗರಿಕರ ಮಕ್ಕಳೂ ಸಹ ಶಿಬಿರದಲ್ಲಿ ಪಾಲ್ಗೊಂಡಿದ್ದರು. ನೃತ್ಯ, ಸಂಗೀತ, ಸಮರ ಕಲೆಗಳು, ಅಬಕಾಸ್, ರಸಪ್ರಶ್ನೆ ಸ್ಪರ್ಧೆ, ನೆನಪಿನ ಶಕ್ತಿಗೆ ಸಂಬಂಧಿಸಿದ ಸ್ಪರ್ಧೆಗಳು, ಯೋಗ, ಪಥಸಂಚಲನ ಹೀಗೆ ವಿವಿಧ ವಿಚಾರಗಳ ಬಗ್ಗೆ ಪೊಲೀಸರು ಶಿಬಿರಾರ್ಥಿಗಳಿಗೆ ಮಾಹಿತಿ ನೀಡಿದರು. ಡಿಎಆರ್ ಪೊಲೀಸರು ವಿವಿಧ ವಿಚಾರಗಳು ಕುರಿತು ಮಕ್ಕಳಿಗೆ ಅಣಕು ಪ್ರದರ್ಶನಗಳ ಮೂಲಕ ವಿಚಾರಗಳ ಬಗ್ಗೆ ಅರಿವು ಮೂಡಿಸಿದರು. ಸಮಾರೋಪದಲ್ಲಿ ಪಾಲ್ಗೊಂಡಿದ್ದ ಜಿಲ್ಲಾ ಪೊಲೀಸ್


ಉದಯವಾಹಿನಿ ಚಿತ್ರ

ವರಿಷ್ಠಾಧಿಕಾರಿ ಕುಶಾಲ್ ಚೌಕ್ಸೆ, ಮಕ್ಕಳ ಜೊತೆ ಬೆರೆತು ನಲಿದರು.

ಸಮಾರೋಪ ಕಾರ್ಯಕ್ರಮದಲ್ಲಿ ಶಿಬಿರದಲ್ಲಿ ಪಾಲ್ಗೊಂಡಿದ್ದ ಮಕ್ಕಳು ನಡೆಸಿಕೊಟ್ಟ ನೃತ್ಯಗಳು ಗಮನ ಸೆಳೆದವು. ಕುಶಾಲ್ ಚೌಕ್ಸೆ ಮಾತನಾಡಿ, ಬೇಸಿಗೆ ಶಿಬಿರವು ಮಕ್ಕಳ ಮನೋವಿಕಾಸಕ್ಕೆ ಕಾರಣವಾಗಿದೆ. ಇಂತಹ ಶಿಬಿರಗಳಿಂದ ಮಕ್ಕಳ ವ್ಯಕ್ತಿತ್ವ ಬೆಳೆಯುತ್ತದೆ. ಮಹಿಳಾ ಠಾಣೆ, ಸಿಇಎನ್ ಠಾಣೆ, ನಗರ ಠಾಣೆ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಶಿಬಿರಕ್ಕೆ ಶ್ರಮಿಸಿದ್ದಾರೆ ಎಂದು ಹೇಳಿದರು.

# ಮಕ್ಕಿ ಶಾಸ್ತಾವು ಉತ್ಸವ ಆರಂಭ

• **ಉದಯವಾಹಿನಿ, ನಾಪೋಕ್ಲು**

ಬೇತು ಗ್ರಾಮದ ಮಕ್ಕಿ ಶಾಸ್ತಾವು ದೇವರ ವಾರ್ಷಿಕ ಉತ್ಸವದ ಅಂಗವಾಗಿ ಶನಿವಾರ ಎತ್ತೇರಾಟ ನಡೆಯಿತು. ಭಕ್ತರು ಅಧಿಕ ಸಂಖ್ಯೆಯ ಉತ್ಸವದಲ್ಲಿ ಪಾಲ್ಗೊಂಡು ಸಂಭ್ರಮಿಸಿದರು. ಶನಿವಾರ ದೇವಸ್ಥಾನ ಪ್ರಾಂಗಣದಲ್ಲಿ ಎರಡು ಸುತ್ತಿನ ಎತ್ತೇರಾಟ ನಡೆಯಿತು. ಎತ್ತುಗಳ ಮೇಲೆ ಅಕ್ಕಿಯ ಚೀಲಗಳನ್ನಿರಿಸಿ ಭಕ್ತರು ಹರಕೆ ಸಲ್ಲಿಸುವುದು ಪದ್ಧತಿ. ಹನ್ನೆರಡು ಎತ್ತುಗಳ ಸಹಿತ ಭಕ್ತರು ದೇವಾಲಯದ ಸುತ್ತ ದುಡಿಕೊಟ್ಸ್ ಪಾಟ್ಟನೊಂದಿಗೆ (ದುಡಿ ವಾದ್ಯದೊಂದಿಗೆ ಹಾಡು) ಸಾಗಿದರು. ಈ ಅಪೂರ್ವ ಕ್ಷಣಗಳನ್ನು ವೀಕ್ಷಿಸಲು ವಿವಿಧ ಗ್ರಾಮಗಳ ಭಕ್ತರು ನೆರೆದಿದ್ದರು. ಬಳಿಕ ಪೂಜೆ ಸಲ್ಲಿಸಲಾಯಿತು. ಭಕ್ತರಿಗೆ ಪ್ರಸಾದ ವಿತರಿಸಲಾಯಿತು. ಮೇ ತಿಂಗಳ 3 ಮತ್ತು 4 ರಂದು ವಿಜೃಂಭಣೆಯಿಂದ ನಡೆಯುವ ಮಕ್ಕಿ ಶಾಸ್ತಾವು ದೇವರ ವಾರ್ಷಿಕ ಉತ್ಸವವನ್ನು ವಿಜೃಂಭಣೆಯಿಂದ ನಡೆಸಲಾಗುತ್ತದೆ. ಶುಕ್ರವಾರ ರಾತ್ರಿ ವಿವಿಧ ಸಾಂಪ್ರದಾಯಿಕ ಆಚರಣೆಗಳೊಂದಿಗೆ ಉತ್ಸವಕ್ಕೆ ಚಾಲನೆ ನೀಡಲಾಯಿತು.

ಶನಿವಾರ ರಾತ್ರಿ ದೀಪಾರಾಧನೆ-ಅಂದಿಬೊಳಕ್ ನಡೆಯಿತು. ಕರಿಬಾಳೆ, ಕುಟ್ಟಿಚಾತ, ನುಚ್ಚುಟ್ಟೆ ಕೋಲಗಳು ಜರುಗಿದವು. ಪಟ್ಟಣ, ಸುತ್ತಲಿನ ಗ್ರಾಮಗಳ ಭಕ್ತರು ಪಾಲ್ಗೊಂಡಿದ್ದರು. ಅರ್ಚಕ ಮಕ್ಕಿ ದಿವಾಕರ ಪೂಜಾ ವಿಧಿಗಳನ್ನು ನೆರವೇರಿಸಿದರು.

**ಇಂದು ವಿಶೇಷ:** ಭಾನುವಾರ ಅಜ್ಜಪ್ಪ ಕೋಲ ಹಾಗೂ ಮಧ್ಯಾಹ್ನ ವಿಷ್ಣುಮೂರ್ತಿ ಕೋಲ ಜರುಗಲಿದೆ. ಸಹಸ್ರಾರು ಭಕ್ತರು ಉತ್ಸವದಲ್ಲಿ ಪಾಲ್ಗೊಳ್ಳುವ ನಿರೀಕ್ಷೆ ಇದೆ. ಮಧ್ಯಾಹ್ನ ಅನ್ನ ಸಂತರ್ಪಣೆ ಏರ್ಪಡಿಸಲಾಗಿದೆ ಎಂದು ದೇವಾಲಯದ ಆಡಳಿತ ಮಂಡಳಿ ಅಧ್ಯಕ್ಷ ಕುಟ್ಟಂಜೆಟೀರ ಶ್ಯಾಮ್ ಬೋಪಣ್ಣ ಹೇಳಿದರು.


ಉದಯವಾಹಿನಿ ಚಿತ್ರ

# ಭಾರತದಲ್ಲಿ ಹೆಂಡತಿ, ಪಾಕ್‌ನಲ್ಲಿ ಗಂಡ

## 3 ಮಕ್ಕಳೊಂದಿಗೆ ಪಾಕ್ ಗಡಿಯಲ್ಲಿ ಕಾದಿದ್ದ ಹೆಂಡತಿ ಕರೆದೊಯ್ಯಲು ಬಾರದ ಪತಿ

• **ಉದಯವಾಹಿನಿ, ಮೈಸೂರು**

ಭಾರತ ಮತ್ತು ಪಾಕಿಸ್ತಾನ ನಡುವಿನ ಯುದ್ಧದ ಸನ್ನಿವೇಶವು ಮೈಸೂರಿನ ಮುಸ್ಲಿಂ ಮಹಿಳೆಯೊಬ್ಬರು ಕಣ್ಣೀರು ಹಾಕುವಂತೆ ಮಾಡಿದೆ. ವೀಸಾ ಸಮಸ್ಯೆಯಿಂದ ಪಾಕಿಸ್ತಾನಕ್ಕೆ ಮಹಿಳೆ, ಮಕ್ಕಳು ತಲುಪದ ಪ್ರಕರಣದಲ್ಲಿ ಮೈಸೂರಿನ ರಂಷಾ ಎಂಬ ಮಹಿಳೆ ಹಾಗೂ ಮೂರು ಮಕ್ಕಳಿಗೆ ವೀಸಾ ತೊಂದರೆ ಆಗಿದೆ. 8 ವರ್ಷಗಳ ಹಿಂದೆ ಪಾಕಿಸ್ತಾನದ ಮೊಹಮ್ಮದ್ ಫಾರುಕ್ ಎಂಬವವರನ್ನ ಮದುವೆಯಾಗಿದ್ದ ರಂಷಾಗೆ 2, 4, 7 ವರ್ಷದ

**ಯುದ್ಧ ಸನ್ನಿವೇಶ ತಂದ ಕಣ್ಣೀರು**

ಮೂರು ಮಕ್ಕಳಿವೆ. ರಂಷಾಗೆ ಪಾಕಿಸ್ತಾನ ವೀಸಾ ತೊಂದರೆಯಾದ ಹಿನ್ನೆಲೆ ಪಾಕಿಸ್ತಾನಕ್ಕೆ ತೆರಳಲು ಸಾಧ್ಯವಾಗಿರಲಿಲ್ಲ. ಇತ್ತ ಮೂರು ಮಕ್ಕಳ ವೀಸಾ ಜುಲೈವರೆಗೆ ಇದ್ದರೂ ಕೇಂದ್ರ ಸರ್ಕಾರದ ಆದೇಶ ಹಿನ್ನೆಲೆ ವಾಪಸ್ ಕಳುಹಿಸಲಾಗುತ್ತಿತ್ತು. ಆದರೆ ಮಕ್ಕಳ ಜೊತೆ ತಾಯಿಯೂ ಪಾಕಿಸ್ತಾನಕ್ಕೆ ಬರುವುದಾದರೆ ಸೇರಿಸಿಕೊಳ್ಳುವುದಾಗಿ ಗಂಡ ಷರತ್ತು ಹಾಕಿದ್ದಾನೆ. ಗಂಡನ ಒಪ್ಪಿಗೆಗಾಗಿ ಮೂರು ದಿನ ರಂಷಾ ಮತ್ತು ಮಕ್ಕಳು ಗಡಿಯಲ್ಲೇ ಕಾದು ಕುಳಿತಿದ್ದಾರೆ. ರಂಷಾ ಪತಿ ಪಾಕಿಸ್ತಾನ ವಿಧಾನಸಭೆಯಲ್ಲಿ ನಿರ್ದೇಶಕನಾಗಿದ್ದಾನೆ. ಸದ್ಯ ವೀಸಾ ಸಮಸ್ಯೆ ಬಗೆಹರಿಸಿಕೊಳ್ಳಲು ಹೈಕೋರ್ಟ್‌ಗೆ ರಂಷಾ ಕುಟುಂಬ ಅರ್ಜಿ ಸಲ್ಲಿಸಿದೆ.

ವೀಸಾ ಸಮಸ್ಯೆಯಿಂದ ಮೈಸೂರಿಗೆ ವಾಪಸ್ ಆದ ಮುಸ್ಲಿಂ ಮಹಿಳೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಅವರ ಸಂಬಂಧಿ ರಿಜ್ವಾನ್ ಬಿಚ್ಚಿಟ್ಟಿದ್ದಾರೆ. ರಂಷಾ 8 ವರ್ಷಗಳ ಹಿಂದೆ ಪಾಕಿಸ್ತಾನಕ್ಕೆ ಹೋಗಿ ಮದುವೆಯಾಗಿದ್ರು. ರಂಷಾ ನನ್ನ ಭಾವಿ ಪತ್ನಿಯ ಅಕ್ಕ. ನನ್ನ ಮದುವೆಗಾಗಿ ಅವರು ಭಾರತಕ್ಕೆ ಬಂದಿದ್ರು. ಕಾಶ್ಮೀರ ಗಲಾಟೆಯಾದ ಹಿನ್ನೆಲೆ ತಕ್ಷಣವೇ ವಾಪಸ್ ಪಾಕಿಸ್ತಾನಕ್ಕೆ ಹೋಗಬೇಕೆಂದು ಪೊಲೀಸರು ತಿಳಿಸಿದ್ರು. ಹೀಗಾಗಿ ರಂಷಾ ಹಾಗೂ ಮಕ್ಕಳನ್ನ ಪಾಕಿಸ್ತಾನಕ್ಕೆ ಕಳುಹಿಸಲು


ಉದಯವಾಹಿನಿ ಚಿತ್ರ

ಭಾರತ-ಪಾಕ್ ಅಟ್ಟಾರಿಯ ಗಡಿಗೆ ನಾನು ಸಹ ಹೋಗಿದ್ದೆ. ವೀಸಾ ಎಲ್ಲವನ್ನೂ ಚೆಕ್ ಮಾಡಿ ಪಾಕಿಸ್ತಾನಕ್ಕೆ ಕಳುಹಿಸಲು ಅಧಿಕಾರಿಗಳು ರೆಡಿ ಇದ್ರು. ಆದರೆ ಅವರ ಗಂಡ ಪಾಕಿಸ್ತಾನದಿಂದ ಅವರನ್ನ ಕರೆದುಕೊಂಡು ಹೋಗಲು ಬರಲಿಲ್ಲ. ರಾಯಭಾರಿಯ ಅಧಿಕಾರಿಗಳು ಕಾಲ್ ಮಾಡಿದ್ರು. ರಂಷಾ ಪತಿ ಫಾರುಕ್ ಯಾವುದೇ ಪ್ರತಿಕ್ರಿಯೆ ಕೊಡಲಿಲ್ಲ. ಗಡಿಯಲ್ಲಿ ಮಕ್ಕಳ ಸಂಬಂಧಿಕರು ಯಾರೂ ಬಾರದ ಕಾರಣ ಅವರನ್ನ ಒಳಗೆ ಕರೆದುಕೊಳ್ಳಲಿಲ್ಲ. ಮಕ್ಕಳು ನಿಮ್ಮ ಬಳಿಯೇ ಇರಲಿ ಎಂದು ಹೇಳಿದ್ದಾರೆ. ಅದಕ್ಕಾಗಿ ವೀಸಾ ವಿಸ್ತರಣೆಗಾಗಿ ಹೈಕೋರ್ಟ್ ಮೆಟ್ಟಿಲೇರಿದ್ದೇವೆ ಎಂದು ತಿಳಿಸಿದ್ದಾರೆ. ರಂಷಾ ಅವರು ನನ್ನ ಮದುವೆಗಾಗಿ ಬಂದಿದ್ರು. ಎಲ್ಲರೂ ಬಂದ್ರೆ ಬನ್ನಿ ಬರಿ ಮಕ್ಕಳನ್ನ ಮಾತ್ರ ನಾನು ಕರೆದುಕೊಳ್ಳಲ್ಲ ಎಂದು ರಂಷಾ ಪತಿ ಹೇಳಿದ್ದಾರೆ. ಆದರೆ ರಂಷಾ ಅವರ ಬಳಿ ಭಾರತದ ಪಾಸ್‌ಪೋರ್ಟ್ ಇದೆ. ಮಕ್ಕಳು ಪಾಕಿಸ್ತಾನದ ಪ್ರಜೆಗಳಾಗಿದ್ದಾರೆ ಇದರಿಂದ ತೊಂದರೆಯಾಗುತ್ತಿದೆ. ರಂಷಾಗೆ ಪಾಕಿಸ್ತಾನದ ಪೌರತ್ವ ಸಿಕ್ಕಿಲ್ಲ. ಭಾರತದ ಪಾಸ್‌ಪೋರ್ಟ್ ಅವಧಿ ಮುಕ್ತಾಯವಾಗಿದೆ. ಈಗಾಗಿ ರಿನಿವಲ್‌ಗಾಗಿ ರಂಷಾ ತತ್ಕಾಲ್‌ನಲ್ಲಿ ಅಪ್ಲೈ ಮಾಡಿದ್ದಾರೆ. ಇಂದು ಪಾಸ್‌ಪೋರ್ಟ್ ಸಿಗುವ ವಿಶ್ವಾಸ ಇದೆ. ಅಧಿಕಾರಿಗಳು ಸಹ ನಮಗೆ ಸಹಕಾರ ಕೊಡುತ್ತಿದ್ದಾರೆ. ಒಂದೂವರೆ ವರ್ಷದ ಹಿಂದೆಯೇ ರಂಷಾ ತಂಗಿಯ ಜೊತೆ ನನಗೆ ನಿಶ್ಚಿತಾರ್ಥ ಆಗಿತ್ತು. ರಂಷಾ ಅವರು ಪಾಕಿಸ್ತಾನದಿಂದ ಬರುವಿಕೆಗಾಗಿ ನಾವು ಒಂದೂವರೆ ವರ್ಷ ಕಾದಿದ್ದೇವೆ. ಈಗ ಅವರು ಮತ್ತು ಮಕ್ಕಳು ಬಂದಿದ್ದಾರೆ. ಇದೇ ತಿಂಗಳ 11ರಂದು ನನ್ನ ಮದುವೆ ಇದೆ. ಆದರೆ ಅವರಿಗೆ ನನ್ನ ಮದುವೆಗೆ ಇರಲು ಆಗುತ್ತಿಲ್ಲ. ಇದು ಬೇಸರದ ಸಂಗತಿ. ನಾಲ್ಕು ದಿನದಿಂದ ಅಮೃತಸರ, ಪಂಜಾಬ್, ದೆಹಲಿ ಎಲ್ಲಾ ಕಡೆ ಸುತ್ತಾಡುತ್ತಿದ್ದೇನೆ. ಆದರೆ, ಸಮಸ್ಯೆ ಮಾತ್ರ ಬಗೆಹರಿದಿಲ್ಲ. ಮದುವೆ ಲಗ್ನ ಪತ್ರಿಕೆ ಕೊಡಲು ಸಾಧ್ಯವಾಗುತ್ತಿಲ್ಲ ಎಂದಿದ್ದಾರೆ.

**ನನ್ನ ಪತಿ ಕಾಲ್ ರಿಸೀವ್ ಮಾಡ್ತಿಲ್ಲ**

**ರಂಷಾ ಅವರ ತಂದೆ ಮೂಲ ಪಾಕಿಸ್ತಾನದವರು. ಇಂಡಿಯಾ ಪಾಕಿಸ್ತಾನ ಬೇರೆಯಾದಾಗ ಸ್ವಲ್ಪ ಜನ ಪಾಕಿಸ್ತಾನದಲ್ಲಿ, ಸ್ವಲ್ಪ ಜನ ಭಾರತದಲ್ಲಿ ಉಳಿದುಕೊಂಡರು. ಅಂದಿನಿಂದಲೂ ಕೂಡ ಇಬ್ಬರ ನಡುವೆ ಸಂಬಂಧ ಹಾಗೇ ಇದೆ. ಆ ಪ್ರೀತಿಯಿಂದಲೇ ಅವರಿಬ್ಬರಿಗೂ ಮದುವೆ ಗೊತ್ತುಮಾಡಿ ಅರೇಂಜ್ ಮ್ಯಾರೇಜ್ ಮಾಡಲಾಗಿತ್ತು. ಸದ್ಯದ ಪರಿಸ್ಥಿತಿಯಲ್ಲಿ ನನ್ನ ಮದುವೆಗಿಂತ ಮಕ್ಕಳ ಭವಿಷ್ಯ ಬಹಳ ಮುಖ್ಯ. ಕೇಂದ್ರ ಸರ್ಕಾರ ಈ ಸಮಸ್ಯೆಯನ್ನ ಕೂಡಲೇ ಬಗೆಹರಿಸಬೇಕು. ಗಡಿಯಲ್ಲಿ ಪಾಕಿಸ್ತಾನದಿಂದ ಬಂದವರನ್ನ ಭಾರತದವರು ಸಮಯಕ್ಕೆ ಸರಿಯಾಗಿ ಬಂದು ಕರೆದುಕೊಳ್ಳುತ್ತಿದ್ದಾರೆ. ಆದರೆ ಭಾರತದಿಂದ ಪಾಕಿಸ್ತಾನಕ್ಕೆ ಹೋಗುವವರನ್ನ ಕರೆದುಕೊಳ್ಳಲು ಯಾರು ಸಹ ಸಮಯಕ್ಕೆ ಸರಿಯಾಗಿ ಬರುತ್ತಿಲ್ಲ ಎಂದು ಹೇಳಿದ್ದಾರೆ.**



## ಮಾರಕಾಸ್ತ್ರಗಳಿಂದ ಹೊಡೆದು ರೌಡಿ ಶೀಟರ್ ಸಂತೋಷ್ ಕೊಲೆ

• **ಉದಯವಾಹಿನಿ, ಹಾರೋಹಳ್ಳಿ**

ಹಳೆ ದ್ವೇಷದ ಹಿನ್ನೆಲೆಯಲ್ಲಿ ಶನಿವಾರ ಬೆಳಿಗ್ಗೆ ಮೂರ್ನಾಲ್ಕು ಮಂದಿಯ ಗುಂಪೊಂದು ರೌಡಿ ಶೀಟರ್ ಸಂತೋಷ್ ಅಲಿಯಾಸ್ ಸಂತು ಕರಡಿ (31) ಎಂಬಾತನನ್ನು ಪಟ್ಟಣದ ಕೆ.ಎಸ್.ಆರ್.ಟಿ.ಸಿ ಬಸ್ ಡಿಪೊ ಬಳಿ ಮಾರಕಾಸ್ತ್ರಗಳಿಂದ ಹೊಡೆದು ಕೊಲೆ ಮಾಡಿ ಪರಾರಿಯಾಗಿದೆ. ಕೊಲೆಯಾಗಿರುವ ಸಂತು ತಾಲ್ಲೂಕಿನ ಸಿದ್ದಾಪುರ ಗ್ರಾಮದವರು. ಹಲವು ವರ್ಷಗಳಿಂದ ಬೆಂಗಳೂರಿನ ಕೋಣನಕುಂಟೆ ಕ್ರಾಸ್ ನಲ್ಲಿ ವಾಸವಾಗಿದ್ದ ಆತ ರೌಡಿ ಶೀಟರ್ ಆಗಿದ್ದ. ಇತ್ತೀಚೆಗೆ ಗ್ರಾಮಕ್ಕೆ ಬಂದು ನೆಲೆಸಿದ್ದ. ಬೆಳಿಗ್ಗೆ 11ಗಂಟೆ ಸುಮಾರಿಗೆ ಸಂತು ಬೈಕ್ ನಲ್ಲಿ ಪಟ್ಟಣಕ್ಕೆ ಬಂದಿದ್ದ. ಡಿಪೊ ಬಳಿ ಹೋಗುತ್ತಿದ್ದ ಆತನನ್ನು ಕಾರಿನಲ್ಲಿ ಹಿಂಬಾಲಿಸಿಕೊಂಡು ಬಂದ ನಾಲ್ಕೈದು ಮಂದಿಯ ಗುಂಪು, ಬೈಕ್‌ಗೆ ಕಾರಿನಿಂದ ಡಿಕ್ಕಿ ಹೊಡೆದಿದೆ. ಕೆಳಕ್ಕೆ ಬಿದ್ದ ಆತನ ಮೇಲೆ ಲಾಂಗ್ ಮತ್ತು ಮಚ್ಚುಗಳಿಂದ ಹೊಡೆದು ಪರಾರಿಯಾಗಿದೆ ಎಂದು ಹಾರೋಹಳ್ಳಿ ಪೊಲೀಸರು ತಿಳಿಸಿದರು. ತಲೆ ಸೇರಿದಂತೆ ದೇಹದ ವಿವಿಧ ಭಾಗಗಳಿಗೆ ತೀವ್ರವಾದ ಪೆಟ್ಟುಗಳು ಬಿದ್ದಿದ್ದರಿಂದ ಸಂತು, ಸ್ಥಳದಲ್ಲೇ ಮೃತಪಟ್ಟಿದ್ದಾನೆ. ವಿಷಯ ತಿಳಿದು ಸ್ಥಳಕ್ಕೆ ತೆರಳಿ ಶವವನ್ನು ಆಸ್ಪತ್ರೆಗೆ ಸಾಗಿಸಲಾಯಿತು. ಬೆಂಗಳೂರಿನಲ್ಲಿದ್ದ ಸಂತು ವಿವಿಧ ಅಪರಾಧ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದ. ಹಾಗಾಗಿ, ಹಳೆ ದ್ವೇಷದ ಹಿನ್ನೆಲೆಯಲ್ಲಿ ಎದುರಾಳಿಗಳ ಗುಂಪು ಕೃತ್ಯ ಎಸಗಿರುವ ಅನುಮಾನವಿದೆ. ಘಟನೆ ಕುರಿತು ಪ್ರಕರಣ ದಾಖಲಿಸಿಕೊಂಡು ಆರೋಪಿಗಳ ಪತ್ತೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸರು ಹೇಳಿದರು.

## ಬಾಲಕಿಗೆ ಲೈಂಗಿಕ ದೌರ್ಜನ್ಯ ಅಪರಾಧಿಗೆ 8 ವರ್ಷ ಜೈಲು

• **ಉದಯವಾಹಿನಿ, ಮಂಡ್ಯ**

ಆರು ವರ್ಷದ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ್ದ ಅಪರಾಧಿಗೆ, ಮಂಡ್ಯದ ಎಫ್‌ಟಿಎಸ್‌ಸಿ-1 (ಪೋಕ್ಸೊ ವಿಶೇಷ) ನ್ಯಾಯಾಲಯದ ವಿಶೇಷ ನ್ಯಾಯಾಧೀಶೆ ಮಂಜುಳಾ ಇಟ್ಟಿ ಅವರು 8 ವರ್ಷ ಜೈಲು ಶಿಕ್ಷೆ, 6 ಸಾವಿರ ದಂಡ ವಿಧಿಸಿದ್ದಾರೆ. ಕೆ.ಆರ್.ಪೇಟೆ ತಾಲ್ಲೂಕು ಶ್ರವಣಹಳ್ಳಿ ಗ್ರಾಮದ ರಾಮಕೃಷ್ಣ (34) ಶಿಕ್ಷೆಗೊಳಗಾದ ವ್ಯಕ್ತಿ.

ಈತ 2023ರಲ್ಲಿ ಬಾಲಕಿಯನ್ನು ಪುಸಲಾಯಿಸಿ ನಿರ್ಜನ ಪ್ರದೇಶಕ್ಕೆ ಕರೆದೊಯ್ದು ಲೈಂಗಿಕ ದೌರ್ಜನ್ಯವೆಸಗಿದ್ದ. ಈ ಸಂಬಂಧ ಕಿಕ್ಕೇರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಸಬ್‌ಇನ್‌ಸ್ಪೆಕ್ಟರ್ ಸಿದ್ದಲಿಂಗ ಬಾನಸಿ ತನಿಖೆ ನಡೆಸಿದ್ದು, ಆರೋಪಿ ವಿರುದ್ಧ ಇನ್‌ಸ್ಪೆಕ್ಟರ್ ರೇವತಿ ಅವರು ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ನೊಂದ ಬಾಲಕಿಗೆ ಆರೋಪಿಯು 50 ಸಾವಿರ ಪರಿಹಾರ ನೀಡಬೇಕು ಎಂದು ನ್ಯಾಯಾಲಯ ಆದೇಶಿಸಿದೆ. ಅಭಿಯೋಜನೆಯ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕಿ ಎಂ.ಜೆ. ಪೂರ್ಣಿಮಾ ವಕಾಲತ್ತು ವಹಿಸಿದ್ದರು.

## ವೀರಶೈವ ಸಮಾಜದ ವತಿಯಿಂದ ಬಸವ ಜಯಂತಿ, ವಚನಗಾಯನ

• **ಉದಯವಾಹಿನಿ, ಸೋಮವಾರಪೇಟೆ**

ಇಲ್ಲಿನ ವೀರಶೈವ ಸಮಾಜದಿಂದ ಬಸವ ಜಯಂತಿ ಪ್ರಯುಕ್ತ ವಿರಕ್ತ ಮಠದ ಆವರಣದಲ್ಲಿ ಈಚೆಗೆ ಬಸವಜಯಂತಿ ಆಚರಣೆ ಹಾಗೂ ವಚನಗಾಯನ ನಡೆಯಿತು. ವಿರಕ್ತ ಮಠದ ಆವರಣದಿಂದ ಪ್ರಭಾತ ಭೇರಿ ಹೊರಟು ಕಕ್ಕೆಹೊಳೆ ಬಳಿ ಇರುವ ಬಸವೇಶ್ವರ ಪ್ರತಿಮೆಗೆ ಹಾರ ಹಾಕಿ, ಪೂಜೆ ಮಾಡಲಾಯಿತು. ಬಸವೇಶ್ವರ ದೇವಾಲಯದಲ್ಲಿ ಪೂಜೆ, ಮಹಾಮಂಗಳಾರತಿ ನಡೆಯಿತು. ಬಸವೇಶ್ವರ ಯುವಕ ಸಂಘದಿಂದ ಸಂಜೆ ಸಮಾಜದವರಿಗೆ ವಚನ ಗಾಯನ ನಡೆಯಿತು.

ವಿರಕ್ತ ಮಠದ ನಿಶ್ಚಲ ದೇಶಿಕೇಂದ್ರ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಸಭೆಯ ಬಸವೇಶ್ವರ ಯುವಕ ಸಂಘದ ಅಧ್ಯಕ್ಷ ಕೆ.ಜೆ. ಗಿರೀಶ್ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ವೀರಶೈವ ಸಮಾಜದ ಪ್ರಮುಖರಾದ ಬಿ.ಪಿ. ಶಿವಕುಮಾರ್, ಬಿ.ಆರ್. ಮೃತ್ಯುಂಜಯ, ಅಕ್ಕನ ಬಳಗದ ಉಪಾಧ್ಯಕ್ಷೆ ಸರಿತಾ ಭಾಗವಹಿಸಿದ್ದರು.

## ಶಾರ್ಟ್ ಸರ್ಕ್ಯೂಟ್‌ನಿಂದ ಹೊತ್ತಿ ಉರಿದ ಮನೆ ವಸ್ತುಗಳು ಭಸ್ಮ

• **ಉದಯವಾಹಿನಿ, ರಾಮನಗರ**

ಶಾರ್ಟ್ ಸರ್ಕ್ಯೂಟ್‌ನಿಂದಾಗಿ ಮನೆ ಹೊತ್ತಿ ಉರಿದಿರುವ ಘಟನೆ ರಾಮನಗರ ತಾಲ್ಲೂಕಿನ ವಡೇರಹಳ್ಳಿ ಗ್ರಾಮದಲ್ಲಿ ಶನಿವಾರ ಬೆಳಗ್ಗೆ ನಡೆದಿದೆ. ವಡೇರಹಳ್ಳಿ ಗ್ರಾಮದ ಗುರು ಎಂಬವರಿಗೆ ಸೇರಿದ ಮನೆಯಲ್ಲಿ ಎಸಿಯಿಂದ ಶಾರ್ಟ್ ಸರ್ಕ್ಯೂಟ್ ಆಗಿ ಬೆಂಕಿ ಕಾಣಿಸಿಕೊಂಡಿದೆ. ನೋಡನೋಡುತ್ತಿದ್ದಂತೆ ಇಡೀ ಮನೆಗೆ ಬೆಂಕಿ ಆವರಿಸಿ ಗೃಹೋಪಯೋಗಿ ವಸ್ತುಗಳು ಸಂಪೂರ್ಣ ಸುಟ್ಟುಕರಕಲಾಗಿವೆ. ಮನೆಯಲ್ಲಿ ಎಲ್ಲರೂ ಮಲಗಿದ್ದ ವೇಳೆ ಘಟನೆ ನಡೆದಿದ್ದು, ಬೆಂಕಿ ಶಾಖ ತಟ್ಟುತ್ತಿದ್ದಂತೆಯೇ ಮನೆ ಮಂದಿ ಹೊರಗೆ ಓಡಿಬಂದು ಪ್ರಾಣ ಉಳಿಸಿಕೊಂಡಿದ್ದಾರೆ. ಕೂಡಲೇ ಸ್ಥಳೀಯರು ಅಗ್ನಿಶಾಮಕ ದಳಕ್ಕೆ ಮಾಹಿತಿ ನೀಡಿದ್ದು, ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ.

## ಎರಡು ದಿನಗಳ ಕಾಲ ಮಳೆ ಮುನ್ಸೂಚನೆ ಯೆಲ್ಲೋ ಅಲರ್ಟ್ ಘೋಷಣೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ತುಮಕೂರು**

ಜಿಲ್ಲೆಯಾದ್ಯಂತ ಎರಡು ದಿನಗಳ ಕಾಲ ಭಾರೀ ಮಳೆಯಾಗುವ ಸಾಧ್ಯತೆಯಿದ್ದು, ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಎರಡು ದಿನಗಳ ಕಾಲ ಮಳೆಯಾಗುವ ಮುನ್ಸೂಚನೆ ಇದ್ದು, ಜನತೆ ಎಚ್ಚರಿಕೆಯಿಂದ ಇರುವಂತೆ ತುಮಕೂರು ಡಿಸಿ ಶುಭಕಲ್ಯಾಣ್ ಎಚ್ಚರಿಕೆ ನೀಡಿದ್ದಾರೆ. ಮಳೆ ಹಾನಿಯಾದರೇ ತ್ವರಿತವಾಗಿ ಸ್ಪಂದಿಸಲು ಕಂದಾಯ ಅಧಿಕಾರಿಗಳು ಸಜ್ಜಾಗಿದ್ದು, ಜಿಲ್ಲೆಯಾದ್ಯಂತ ಮಳೆ ಹಾನಿಯಾದರೆ 24 ಗಂಟೆಯಲ್ಲಿ ಪರಿಶೀಲನೆ ಮಾಡಿ ಪರಿಹಾರ ಕೊಡುವಂತೆ ಸೂಚಿಸಲಾಗಿದೆ. ಈಗಾಗಲೇ ಜಿಲ್ಲೆಯಲ್ಲಿ ಮಳೆಯಿಂದ ನಾಲ್ವರು ವ್ಯಕ್ತಿಗಳು ಹಾಗೂ ಎರಡು ಹಸುಗಳು ಕೊನೆಯುಸಿರೆಳೆದಿವೆ. ಮಳೆ ಸಮಯದಲ್ಲಿ ಮನೆಯಿಂದ ಹೊರಗೆ ಬರದಂತೆ ಜಿಲ್ಲೆಯ ಜನತೆಗೆ ಡಿಸಿ ಶುಭ ಕಲ್ಯಾಣ್ ಮನವಿ ಮಾಡಿದ್ದಾರೆ. ಮಳೆಯಿಂದ ಈಗಾಗಲೇ ಸಾಕಷ್ಟು ಪ್ರಮಾಣದ ಹಾನಿಯಾಗಿದೆ. 500ಕ್ಕೂ ಹೆಚ್ಚು ವಿದ್ಯುತ್ ಕಂಬಗಳು, ತೋಟಗಾರಿಕೆ ಮತ್ತು ವಿವಿಧ ಬೆಳೆಗಳಿಂದ 6 ಹೆಕ್ಟೇರ್ ಮಳೆಗೆ ನಾಶವಾಗಿದೆ ಎಂದು ಡಿಸಿ ಶುಭಕಲ್ಯಾಣ್ ಮಾಹಿತಿ ನೀಡಿದ್ದಾರೆ.

# ಸೆಸ್ಕ್ ಕಚೇರಿ ಮುಂಭಾಗ ಪ್ರಜಾಸೌಧ ನಿರ್ಮಾಣ

• **ಉದಯವಾಹಿನಿ, ಮಳವಳ್ಳಿ**

ಪಟ್ಟಣದ ಸೆಸ್ಕ್ ಕಚೇರಿ ಮುಂಭಾಗದ ಹಳೆಯ ಸರ್ಕಾರಿ ಶಾಲೆ, ಪ್ರಥಮ ದರ್ಜೆ ಕಾಲೇಜಿನ ಕಟ್ಟಡವನ್ನು ತೆರವು ಮಾಡಿ ಪ್ರಜಾಸೌಧ ನಿರ್ಮಿಸಲಾಗುವುದು ಎಂದು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ, ಶಾಸಕ ಪಿ.ಎಂ.ನರೇಂದ್ರಸ್ವಾಮಿ ತಿಳಿಸಿದರು. ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಶನಿವಾರ ನಡೆದ ತ್ರೈಮಾಸಿಕ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಳೆಯ ಜೂನಿಯರ್ ಕಾಲೇಜು ಕಟ್ಟಡವನ್ನು ತೆರವುಗೊಳಿಸಲು ನಿರ್ಧರಿಸಲಾಗಿದೆ. ಪಕ್ಕದಲ್ಲಿ ಪ್ರಥಮ ದರ್ಜೆ ಕಾಲೇಜು ಕಟ್ಟಡ ತಲೆ ಎತ್ತಲಿದೆ. ಎಲ್ಲಾ ಗ್ರಾಮಗಳಿಗೂ ಸರ್ಕಾರಿ ಬಸ್ ಸೌಲಭ್ಯ ಕಲ್ಪಿಸಬೇಕು. ಇನ್ನೂ 25 ಹೊಸ ಬಸ್‌ಗಳನ್ನು ನೀಡಲಾಗುತ್ತಿದೆ. ಹಲಗೂರು- ಮಳವಳ್ಳಿ ಸಂಚಾರಕ್ಕೆ ಹೆಚ್ಚಿನ ಒತ್ತು



ಉದಯವಾಹಿನಿ ಚಿತ್ರ

ನೀಡಬೇಕು. ತಾಲ್ಲೂಕಿನಲ್ಲಿ ಕಬ್ಬಿಣ ವಿದ್ಯುತ್ ಕಂಬ ಇಲ್ಲದಂತೆ ಕ್ರಮ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಜೂನ್ ಒಳಗೆ ಇಲಾಖೆಗಳಿಗೆ ಅಗತ್ಯವಿರುವ ಅನುದಾನದ ಪಟ್ಟಿ ನೀಡುವುದರ ಜೊತೆಗೆ ಕೊರತೆ ಇರುವ ಹುದ್ದೆಗಳ ಭರ್ತಿಗೆ ಪಟ್ಟಿ ಸಿದ್ದಪಡಿಸಿ ಸಲ್ಲಿಸಬೇಕು. ಅಧಿಕಾರಿಗಳು ಕಡ್ಡಾಯವಾಗಿ ವಸತಿ ಶಾಲೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ನೈತಿಕ ಬಲ ತುಂಬಿ ಅಲ್ಲಿನ ಸ್ಥಿತಿಗತಿಗಳನ್ನು ತಿಳಿಯಬೇಕು. ಬಾಲಕಿಯರ ಹಾಸ್ಟೆಲ್‌ಗಳಲ್ಲಿ ಕಡ್ಡಾಯವಾಗಿ ಮಹಿಳಾ ವಾರ್ಡನ್‌ಗಳು ಇರಬೇಕು ಎಂದು ತಾಕೀತು ಮಾಡಿದರು.

2023-24ನೇ ಸಾಲಿನ 33 ಕೋಟಿ, 2024-25ರಲ್ಲಿ 55 ಕೋಟಿ, ಸಿಎಂ ವಿಶೇಷ ಅನುದಾನದಡಿ 20 ಕೋಟಿ ಅನುದಾನ ಲೋಕೋಪಯೋಗಿ ಇಲಾಖೆಗೆ ಬಂದಿದೆ.

ಹಲವು ಗ್ರಾಮಗಳ ರಸ್ತೆ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಉಳಿದೆಡೆ ಶೀಘ್ರ ಚಾಲನೆ ನೀಡಲಾಗುವುದು. ಬೆಳಕವಾಡಿ ರಸ್ತೆ ವಿಸ್ತರಣೆ ಸಂಬಂಧ ಮನೆಗಳ ಸ್ಥಳಾಂತರ ಮಾಡಲಾಗುತ್ತಿದೆ ಎಂದು ಇಲಾಖೆಯ ಎಂಜಿನಿಯರ್ ಸೋಮಶೇಖರ್ ತಿಳಿಸಿದರು. ಕಾವೇರಿ ನೀರಾವರಿ ನಿಗಮದ ಕಾರ್ಯ ಪಾಲಕ ಎಂಜಿನಿಯರ್ ಬಾಬು ಕೃಷ್ಣದೇವ್ ಮಾತನಾಡಿ, ನಮ್ಮ ಇಲಾಖೆಗೆ 2023- 24ನೇ ಸಾಲಿನಲ್ಲಿ 130 ಕೋಟಿ, ಪ್ರಸ್ತುತ 10 ಕೋಟಿ ಅನುದಾನ ಬಂದಿದೆ. ಈಗಾಗಲೇ ಹಲವು ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದರು. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತಿಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಾದ ಜುಬೀಯಾ ಖಾನಂ, ಕೆ.ಭುವನ, ಕೆ.ಸಿ.ನಿಸರ್ಗ, ಎಂ.ಎನ್.ದೀಪಿಕಾ ಅವರನ್ನು ಪಿ.ಎಂ.ನರೇಂದ್ರಸ್ವಾಮಿ ಅಭಿನಂದಿಸಿದರು. ತಹಶೀಲ್ದಾರ್ ಎಸ್.ವಿ.ಲೋಕೇಶ್, ಡಿವೈಎಸ್ಪಿ ವಿ.ಕೃಷ್ಣಪ್ಪ, ಇಒ ಎಚ್.ಜಿ.ಶ್ರೀನಿವಾಸ್, ಪಿ.ಮಾದೇಶ್ ಇದ್ದರು.

**ಖಾಸಗಿ ಶಾಲೆಗಳಿಗೆ ಸರಿಸಮಾನವಾಗಿ ಸರ್ಕಾರಿಗಳನ್ನು ರೂಪುಗೊಳಿಸುವ ನಿಟ್ಟಿನಲ್ಲಿ ಸರ್ಕಾರಿ ಶಾಲೆಗಳಲ್ಲಿ ನುರಿತ ಶಿಕ್ಷಕರೊಂದಿಗೆ ಗುಣಮಟ್ಟದ ಶಿಕ್ಷಣ, ಎಲ್ಲಾ ಸವಲತ್ತುಗಳನ್ನು ನೀಡಲಾಗುತ್ತಿದೆ. ಅದರ ಭಾಗವಾಗಿ ಶಿಕ್ಷಕರಿಗೆ ತರಬೇತಿ ಸೇರಿದಂತೆ ಹಲವು ಕಾರ್ಯತಂತ್ರಗಳನ್ನು ಜಾರಿ ಮಾಡಲಾಗಿದೆ. ಇನ್ನೂ ಕೆಲವೇ ತಿಂಗಳಲ್ಲಿ ಸರ್ಕಾರಿ ಶಾಲೆಗಳು ಸಂಪೂರ್ಣ ಡಿಜಿಟಲೀಕರಣಗೊಳ್ಳಲಿವೆ ಎಂದರು**

# ಸೋಲಾರ್ ಪ್ಲಾಂಟ್‌ಗೆ ಇ-ಸ್ವತ್ತು ನೀಡಿಕೆಯಲ್ಲಿ ಅಕ್ರಮ

• **ಉದಯವಾಹಿನಿ, ಚಾಮರಾಜನಗರ**


ಉದಯವಾಹಿನಿ ಚಿತ್ರ

**ಪಿಡಿಒ ವಿರುದ್ಧ ಕ್ರಮಕ್ಕೆ ಒತ್ತಾಯ**

ಗೋವಿಂದವಾಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸೋಲಾರ್ ಪ್ಲಾಂಟ್ ನಿರ್ಮಾಣಕ್ಕೆ ಅಕ್ರಮವಾಗಿ ಇ-ಸ್ವತ್ತು ನೀಡಿದ್ದು,

ಈ ಘಟಕದಿಂದ ಪಂಚಾಯಿತಿಗೆ ಬರಬೇಕಾದ ತೆರಿಗೆಯನ್ನು ವಂಚನೆ ಮಾಡಿರುವ ಪಿಡಿಒ ಪಿ. ಗಿರೀಶ್ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ಗ್ರಾ.ಪಂ. ಅಧ್ಯಕ್ಷ ನಾಗಲಾಂಬಿಕೆ ಒತ್ತಾಯಿಸಿದ್ದಾರೆ. ನಗರದ ಜಿಲ್ಲಾ ಕಾರ್ಯನಿರತಪತ್ರಕರ್ತರ ಭವನದಲ್ಲಿ ಪತ್ರಿ ಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ಪಿ. ಗಿರೀಶ್ ಪಂಚಾಯಿತಿ ಅಧ್ಯಕ್ಷರು, ಸದಸ್ಯರಿಗೆ ಗೌರವ ನೀಡುತ್ತಿಲ್ಲ. ಅಲ್ಲದೇ ಗ್ರಾ.ಪಂ. ಅಭಿವೃದ್ದಿಯಲ್ಲಿ ದಿವ್ಯ ನಿರ್ಲಕ್ಷ್ಯ ವಹಿಸಿದ್ದು, ಸ್ವಹಿತಾಸಕ್ತಿಗಾಗಿ ಅಧಿಕಾರವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಅಲ್ಲದ ಮಹಿಳೆ ಅಧ್ಯಕ್ಷೆ ಎಂಬ ಕಾರಣಕ್ಕೆ ಕಿಂಚಿತ್ತು ಗೌರವ ನೀಡುತ್ತಿಲ್ಲ. ಇಂಥ ಅಧಿಕಾರಿ ನಮಗೆ ಬೇಡ. ಕೂಡಲೇ ವರ್ಗಾವಣೆ ಮಾಡಿ, ಮತ್ತೊಬ್ಬರನ್ನು ನೇಮಕ ಮಾಡಿಕೊಡಬೇಕೆಂದು ಜಿ.ಪಂ. ಸಿಇಒ ಅವರಲ್ಲಿ ಮನವಿ ಮಾಡಿಕೊಂಡಿದ್ದಾರೆ. ಸೋಲಾರ್ ಪ್ಲಾಟ್‌ನಲ್ಲಿ ಅಕ್ರಮ : ಸಾರ್ವಜನಿಕರು ತಮ್ಮ ಆಸ್ತಿಯನ್ನು ಇ- ಸ್ವತ್ತು ಮಾಡಿಕೊಡಲು ಹಿಂದೇಟು ಹಾಕು ಪಿಡಿಒ ಹಾಗೂ ಅವರು ಹೆಚ್ಚಿನ ಹಣ ಕೊಟ್ಟರೆ ಇ ಸ್ವತ್ತು ನೀಡುವ ಪಿಡಿಒ ಅಧ್ಯಕ್ಷರು ಹಾಗೂ ಸದಸ್ಯರ ಗಮನಕ್ಕೆ ತರುವುದಿಲ್ಲ. ಆದರೆ, ಪಂಚಾಯಿತಿ ವ್ಯಾಪ್ತಿಯಲ್ಲಿ ಸೋಲಾರ್ ಘಟಕ ನಿರ್ಮಾಣಕ್ಕೆ ಇ-ಸ್ವತ್ತು ನೀಡುವ ಬಗ್ಗೆ ಸಭೆಯಲ್ಲಿ ಯಾವುದೇ ಚರ್ಚೆ ಮಾಡದೇ, ನಿರ್ಣಯ ಇಲ್ಲದೇ ಏಕಪಕ್ಷೀಯವಾಗಿ ಇ- ಸ್ವತ್ತನ್ನು ಪಿಡಿಒ ಗೀರಿಶ್ ನೀಡಿದ್ದಾರೆ. ಅಲ್ಲದೇ ಪಂಚಾಯಿತಿಗೆ ಕೇವಲ 1.52 ಲಕ್ಷ ರು. ಪಡೆದುಕೊಂಡಿದ್ದಾರೆ.

ಪ್ರತಿ ಮಾಹೆ ಪಂಚಾಯಿತಿಗೆ ಯಾವುದೇ ರೀತಿಯ ತೆರಿಗೆ ಯನ್ನು ಪಾವತಿ ಮಾಡಿಲ್ಲ. ಈ ಬಗ್ಗೆ ಸದಸ್ಯರು ಸಭೆಯಲ್ಲಿ ಪ್ರಶ್ನೆ ಮಾಡಿ, ದಾಖಲಾತಿಗಳನ್ನು ಕೇಳಿದರೆ, ಸಭೆಯ ಮಧ್ಯದಲ್ಲಿಯೇ ಪಲಾಯನ ಮಾಡಿ, ಸಾಮಾನ್ಯ ಸಭೆಗೆ ಅಗೌರವ ತಂದಿದ್ದಾರೆ. ಅಲ್ಲದೇ ಈ ಪ್ರಕರಣದಲ್ಲಿ ಪಿಡಿಒ ಲಕ್ಷಾಂತರ ರೂ. ಪಡೆದುಕೊಂಡಿದ್ದಾರೆ ಎಂಬ ಗುಮಾನಿಯು ಇದೆ. ಪಂಚಾಯಿತಿಗೆ ಬರಬೇಕಾಗಿದ್ದ ತೆರಿಗೆಯು ಖೋತಾ ಆಗಿದೆ. ಇದರ ವಿರುದ್ಧ ತನಿಖೆ ನಡೆಸಿ, ತಪ್ಪಿಸ್ತ ಅಧಿಕಾರಿಯನ್ನು ಶಿಕ್ಷೆಗೆ ಗುರಿಪಡಿಸಬೇಕು. ತನಿಖೆಗೆ ಮಾಡುವ ಮುನ್ನಾ ಇವರನ್ನು ಬೇರೆಡೆ ವರ್ಗಾವಣೆ ಮಾಡಬೇಕು ಎಂದು ಅಧ್ಯಕ್ಷೆ ನಾಗಲಾಂಬಿಕೆ ಒತ್ತಯಿಸಿದರು. ಸರ್ಕಾರದಿಂದ ಮಂಜೂರಾಗಿರುವ ಮನೆಗಳಿಗೆ ಜಿಪಿಎಸ್ ನೀಡುತ್ತಿಲ್ಲ. ನರೇಗಾ ಯೋಜನೆ ಕಾಮಗಾರಿಗಳಿಗೆ ಬಿಲ್ ಮಾಡದೇ ಸತಾಯಿಸುತ್ತಿದ್ದಾರೆ. ಗ್ರಾಮಗಳ ಸ್ವಚ್ಚತೆ, ನೈರ್ಮಲ್ಯ, ಕುಡಿಯುವ ನೀರು ಪೂರೈಕೆ ಮಾಡುವಲ್ಲಿ ವಿಫಲರಾಗಿದ್ದಾರೆ. ಪೈಪ್ ಲೈನ್ ಹೊಡೆದು ಹೋಗಿದ್ದು, ಇದನ್ನು ರಿಪೇರಿ ಮಾಡಿಸಲು ಸಹ ಮುಂದಾಗುತ್ತಿಲ್ಲ. ಕಚೇರಿಗೆ ಸರಿಯಾಗಿ ಬರುತ್ತಿಲ್ಲ. ಇಷ್ಟ ಬಂದಂತೆ ಬಂದು ಹೋಗುತ್ತಿರುತ್ತಾರೆ. ಕೇಳಿದರೆ ಚಾ.ನಗರದಲ್ಲಿ ಮೀಂಟಿಂಗ್ ಇತ್ತು ಎಂದು ಸುಳ್ಳು ಹೇಳುತ್ತಾ. ಪಂಚಾಯಿತಿ ಅಭಿವೃದ್ದಿಗೆ ಅಡ್ಡಿಯಾಗಿದ್ದಾರೆ. ಇವರ ವಿರುದ್ಧ ಕ್ರಮ ವಹಿಸಬೇಕು. ಕಳೆದ ಎರಡು ವರ್ಷಗಳಿಂದ ಜಿಲ್ಲಾ ಹಾಗೂ ರಾಜ್ಯ ಮಟ್ಟದ ಅಧಿಕಾರಿಗಳಿಗ ಮನವಿ ಸಲ್ಲಿಸಿದ್ದರು ಯಾವುದೇ ಪ್ರಯೋಜನವಾಗಿಲ್ಲ ಎಂದು ಸದಸ್ಯ ಮಂಜುನಾಥ್ ಅಸಮಾಧಾನ ವ್ಯಕ್ತಪಡಿಸಿದರು.

# ಕೂದಲೆಳೆ ಅಂತರದಲ್ಲಿ 5ನೇ ಸ್ಥಾನಕ್ಕೆ ಇಳಿದ ಕೊಡಗು

• **ಉದಯವಾಹಿನಿ, ಮಡಿಕೇರಿ**

ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕೊಡಗು ಜಿಲ್ಲೆ 5ನೇ ಸ್ಥಾನಕ್ಕೆ ಇಳಿದಿದೆ. ಕಳೆದ ವರ್ಷ ಜಿಲ್ಲೆ 4ನೇ ಸ್ಥಾನದಲ್ಲಿತ್ತು. ಅದಕ್ಕೂ ಹಿಂದಿನ ವರ್ಷದಲ್ಲಿ 8ನೇ ಸ್ಥಾನದಲ್ಲಿತ್ತು. ರಾಜ್ಯದಲ್ಲಿ ಕ್ರಮವಾಗಿ ದಕ್ಷಿಣ ಕನ್ನಡ, ಉಡುಪಿ, ಉತ್ತರಕನ್ನಡ ಹಾಗೂ ಶಿವಮೊಗ್ಗ ಜಿಲ್ಲೆಗಳು ಮೊದಲ 4 ಸ್ಥಾನಗಳನ್ನು ಪಡೆದಿವೆ. ಅದರಲ್ಲಿ 4ನೇ ಸ್ಥಾನದಲ್ಲಿರುವ ಶಿವಮೊಗ್ಗ ಜಿಲ್ಲೆ ಶೇ 82.29ರಷ್ಟು ಫಲಿತಾಂಶ ಪಡೆದಿದ್ದರೆ, ಕೊಡಗು ಶೇ 82.21ರಷ್ಟು ಫಲಿತಾಂಶ ಪಡೆದಿದೆ. ಈ ಮೂಲಕ ಕೂದಲೆಳೆ ಅಂತರದಲ್ಲಿ ತನ್ನ ಹಿಂದಿನ ಸ್ಥಾನವನ್ನು ಜಿಲ್ಲೆ ಕಳೆದುಕೊಂಡಿದೆ. ಆದರೆ, ಶೇಕಡಾವಾರು ಫಲಿತಾಂಶದಲ್ಲೂ ಜಿಲ್ಲೆಯಲ್ಲಿ ಇಳಿಕೆಯಾಗಿದೆ. ಕಳೆದ ವರ್ಷ ಶೇ 91.24 ಫಲಿತಾಂಶ ಪಡೆದಿದ್ದ ಜಿಲ್ಲೆ ಈ ಬಾರಿ ಶೇ 82.21ರಷ್ಟು ಫಲಿತಾಂಶಕ್ಕೆ ತೃಪ್ತಿ ಪಟ್ಟುಕೊಂಡಿದೆ.

ಜಿಲ್ಲೆಯಲ್ಲಿರುವ ಒಟ್ಟು 171 ಪ್ರೌಢಶಾಲೆಗಳಿಂದ 6,673 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು. ಅವರಲ್ಲಿ 5,486 ವಿದ್ಯಾರ್ಥಿಗಳು ಪಾಸಾಗಿದ್ದಾರೆ. ಜಿಲ್ಲೆಯಲ್ಲಿ 621 ಅಂಕವೇ ಅತ್ಯಧಿಕ ಅಂಕ ಎನಿಸಿದ್ದು, ವಿರಾಜಪೇಟೆಯ ಕಾವೇರಿ ಪ್ರೌಢಶಾಲೆಯ ಟಿ.ಎಂ.ಆಶ್ರಯ್ ಅಕ್ಕಮ್ಮ, ಸೋಮವಾರಪೇಟೆಯ ವಿಶ್ವಮಾನವ ಕುವೆಂಪು ಪ್ರೌಢಶಾಲೆಯ ಪಂಚಮಿ ತಲಾ 621 ಅಂಕ ಗಳಿಸಿ ಜಿಲ್ಲೆಯಲ್ಲೇ ಅತ್ಯಧಿಕ ಅಂಕ ಗಳಿಸಿದವರು ಎಂಬ ಶ್ರೇಯಕ್ಕೆ ಪಾತ್ರರಾಗಿದ್ದಾರೆ.

ಇನ್ನು 620 ಅಂಕಗಳನ್ನು ಪಡೆದ ವಿರಾಜಪೇಟೆ ತಾಲ್ಲೂಕಿನ


ಉದಯವಾಹಿನಿ ಚಿತ್ರ

ಕಲ್ಲುಮಾಡುವಿನ ಲಯನ್ಸ್ ಪ್ರೌಢಶಾಲೆಯ ತೇಜಸ್ ಬಿಮಯ್ಯ, ಮೂರ್ನಾಡುವಿನ ಜ್ಞಾನಜ್ಯೋತಿ ಪ್ರೌಢಶಾಲೆಯ ಸಿ.ಎಂ. ಮೊಹಮ್ಮದ್ ಸಾಹಿಲ್ ಹಾಗೂ ಕೂಡುಮಂಗಳೂರಿನ ಯೂನಿಕ್ ಅಕಾಡೆಮಿಯ ಕೆ.ಎಂ.ಸಮೃದ್ಧಿ ಆಚಾರ್ 2ನೇ ಸ್ಥಾನದಲ್ಲಿದ್ದಾರೆ. 619 ಅಂಕಗಳನ್ನು ಪಡೆದ ಮಡಿಕೇರಿಯ ಸಂತ ಮೈಕಲರ ಪ್ರೌಢಶಾಲೆಯ ನಿಸರ್ಗಾ ರೈ, ಚೇರಂಬಾಣೆಯ ರಾಜರಾಜೇಶ್ವರಿ ಪ್ರೌಢಶಾಲೆಯ ಕೆ.ಕೆ. ಇಂಚರಾ, ಸೋಮವಾರಪೇಟೆಯ ವಿಶ್ವಮಾನವ ಕುವೆಂಪು ಪ್ರೌಢಶಾಲೆಯ ಸಿ.ಎಸ್.ತೇಜಸ್ವಿನಿ ಹಾಗೂ ಸಿ.ಎಸ್.ಆದ್ವಿ 3ನೇ ಸ್ಥಾನದಲ್ಲಿದ್ದಾರೆ.


ಗ್ರೇಡ್‌ವಾರು ಫಲಿತಾಂಶವನ್ನು ಗಮನಿಸಿದರೂ, ಅದರಲ್ಲೂ ಜಿಲ್ಲೆ ತೀರಾ ಆಶಾದಾಯಕ ಸಾಧನೆಯನ್ನೇನೂ ಮಾಡಿಲ್ಲ. ಪಾಸಾಗಿರುವ 5,486 ವಿದ್ಯಾರ್ಥಿಗಳ ಪೈಕಿ ಕೇವಲ 468 ವಿದ್ಯಾರ್ಥಿಗಳು ಮಾತ್ರ 'ಎ+' ಗ್ರೇಡ್ ಪಡೆದಿದ್ದಾರೆ. 944 ವಿದ್ಯಾರ್ಥಿಗಳು 'ಎ', 1,166 ವಿದ್ಯಾರ್ಥಿಗಳು 'ಬಿ+', 1,342 ವಿದ್ಯಾರ್ಥಿಗಳು 'ಬಿ', 1,030 ವಿದ್ಯಾರ್ಥಿಗಳು 'ಸಿ+', 192 ವಿದ್ಯಾರ್ಥಿಗಳು 'ಸಿ' ಗ್ರೇಡ್ ಪಡೆದಿದ್ದಾರೆ.

## ಬಿಪಿಎಲ್ ಕಾರ್ಡೂ ಇಲ್ಲ, ಎಪಿಎಲ್ ಕಾರ್ಡ್ ವಿತರಣೆಯೂ ಇಲ್ಲ, ಅರ್ಜಿ ಸಲ್ಲಿಸಿರುವವರಿಗೆ ನಿರಾಸೆ

# ಎಪಿಎಲ್ ಕಾರ್ಡ್ ವಿತರಣೆ ಸ್ಥಗಿತಗೊಳಿಸಿರುವುದು ಏಕೆ?

• **ಉದಯವಾಹಿನಿ, ಚಾಮರಾಜನಗರ:**

ಎಪಿಎಲ್ ಪಡಿತರ ಚೀಟಿ ಪಡೆಯುವ ಸಲುವಾಗಿ ಅರ್ಜಿ ಸಲ್ಲಿಸಿರುವವರಿಗೆ ಕಾರ್ಡ್ ವಿತರಣೆಗೆ ಸರಕಾರ ಕ್ರಮ ವಹಿಸಬೇಕೆಂಬ ಒತ್ತಾಯ ವ್ಯಾಪಕವಾಗಿ ಕೇಳಿ ಬರುತ್ತಿದೆ. ಬಿಪಿಎಲ್ ಕಾರ್ಡ್‌ದಾರರ ಸಂಖ್ಯೆಯು ಕುಟುಂಬಗಳಿಗಿಂತ ಹೆಚ್ಚಿದ್ದು, ದುರ್ಬಳಕೆಯೇ ಹೆಚ್ಚಾಗಿದೆ ಎಂಬ ಕಾರಣಕ್ಕೆ ಕೆಲ ವರ್ಷಗಳಿಂದ ಹೊಸ ಪಡಿತರ ಚೀಟಿಗಳನ್ನು ವಿತರಿಸಲಾಗುತ್ತಿಲ್ಲ. ಬಿಪಿಎಲ್ ಕಾರ್ಡ್‌ಗೆ ಸಾಕಷ್ಟು ಸೌಲಭ್ಯಗಳಿರುವುದರಿಂದ ಅದಕ್ಕೆ ಬೇಡಿಕೆ ಸಹ ಇದೆ. ಆದರೆ, ಎಪಿಎಲ್ ಕಾರ್ಡ್‌ಗೆ ಹೇಳಿಕೊಳ್ಳುವಂತಹ ಸೌಲಭ್ಯಗಳೇನು ಇಲ್ಲ. ಹೀಗಿದ್ದರೂ ಏತಕ್ಕಾಗಿ ಎಪಿಎಲ್ ಪಡಿತರ ಕಾರ್ಡ್‌ಗಳ ವಿತರಣೆಯನ್ನು ಸ್ಥಗಿತ ಮಾಡಲಾಗಿದೆ ಎಂಬುದು ಸಾರ್ವಜನಿಕರ ಪ್ರಶ್ನೆ. ಆಧಾರ್ ಕಾರ್ಡ್ ಬಂದ ಬಳಿಕ ದಾಖಲೆಗಾಗಿ ಪಡಿತರ ಚೀಟಿ ಕೇಳುವುದು ತಗ್ಗಿದೆ. ಹೀಗಿದ್ದರೂ ಕೆಲ ಮಧ್ಯಮ ವರ್ಗದ ಕುಟುಂಬಗಳಿಗೆ ಎಪಿಎಲ್ ಪಡಿತರ ಕಾರ್ಡ್‌ನ ಅಗತ್ಯವಿದೆ. ಆದ್ದರಿಂದ ಸದ್ಯ ಅರ್ಜಿ ಸಲ್ಲಿಸಿರುವವರಿಗೆ ಆದ್ಯತೆ ಮೇರೆಗೆ ಎಪಿಎಲ್ ಕಾರ್ಡ್ ನೀಡಬೇಕು. ಅಲ್ಲದೆ ಹೊಸದಾಗಿ ಅರ್ಜಿ ಸಲ್ಲಿಸಲೂ ಅವಕಾಶ ನೀಡಬೇಕು ಎಂದು ಒತ್ತಾಯಿಸಲಾಗಿದೆ.




**ಕ್ರಮ ಕೈಗೊಳ್ಳದ ಸರಕಾರ**

**ಕೆಲ ಅನುಕೂಲಗಳಿವೆ:** ನ್ಯಾಯಬೆಲೆ ಅಂಗಡಿಯಲ್ಲಿ ದೊರೆಯುವ ಪದಾರ್ಥಗಳನ್ನು ಕಡಿಮೆ ರಿಯಾಯಿತಿ ದರದಲ್ಲಿ ಖರೀದಿಸಲು ಎಪಿಎಲ್ ಚೀಟಿದಾರರಿಗೆ ಅನುಕೂಲವಾಗಲಿದೆ. ಅಲ್ಲದೇ ವೈದ್ಯಕೀಯ ಶಸ್ತ್ರ ಚಿಕಿತ್ಸೆ ಸಂದರ್ಭದಲ್ಲೂ ಎಪಿಎಲ್ ಕಾರ್ಡ್‌ಗೂ ಶೇಕಡಾವಾರು ರಿಯಾಯಿತಿಗೆ ಅವಕಾಶವಿದೆ. ಆದ್ದರಿಂದ ರಾಜ್ಯ ಸರಕಾರ ಕನಿಷ್ಠ ಎಪಿಎಲ್ ಕಾರ್ಡ್ ಗಳನ್ನು ವಿತರಿಸಲು ಕ್ರಮ ವಹಿಸಬೇಕು ಎಂದು ಆಗ್ರಹಿಸಿದ್ದಾರೆ.

**1154 ಮಂದಿಯಿಂದ ನಿರೀಕ್ಷೆ:** ಚಾಮರಾಜನಗರ ಜಿಲ್ಲೆಯಲ್ಲಿ ಒಟ್ಟು 2.89 ಲಕ್ಷ ಬಿಪಿಎಲ್ ಪಡಿತರ ಕುಟುಂಬಗಳಿವೆ. ಅಲ್ಲದೇ ಸದ್ಯ 15,161 ಎಪಿಎಲ್ ಪಡಿತರ ಕುಟುಂಬಗಳಿವೆ . ಈ ಪೈಕಿ ಹೊಸ ಎಪಿಎಲ್ ಕಾರ್ಡ್ ಬಯಸಿ ಒಟ್ಟು 1154 ಮಂದಿ ಅರ್ಜಿ ಸಲ್ಲಿಸಿ, ವಿತರಣೆಗಾಗಿ ಕಾಯುತ್ತಿದ್ದಾರೆ. ಬಿಪಿಎಲ್ ಕಾರ್ಡ್ ಹೊಂದಿರುವ ಕುಟುಂಬಗಳಿಗೆ ರಾಜ್ಯ ಸರಕಾರ ಉಚಿತ ಅಕ್ಕಿಯನ್ನು ನೀಡುತ್ತಿದೆ. ಆದರೆ, ಎಪಿಎಲ್ ಕಾರ್ಡ್ ಉಳ್ಳುವರು ಬಯಸಿದರೆ ರಿಯಾಯಿತಿ ದರದಲ್ಲಿ ಪಡಿತರ ಪಡೆಯಲು ಅವಕಾಶವಿದೆ. ಆದರೆ, ಹೆಚ್ಚಿನ ಮಂದಿ ಈ ಸೌಲಭ್ಯವನ್ನು ಪಡೆದುಕೊಳ್ಳುತ್ತಿಲ್ಲ. ಇನ್ನು ಕೆಲವರು ಬಯಸಿ, ಯೋಜನೆ ಪ್ರಯೋಜನ ಪಡೆಯುತ್ತಿದ್ದಾರೆ. ಅಲ್ಲದೇ ಹೊಸದಾಗಿ ಕಾರ್ಡ್ ಬಯಸಿರುವ ಕುಟುಂಬಗಳು ಸಹ ಇವೆ. ಆದ್ದರಿಂದ ಕನಿಷ್ಠ ಎಪಿಎಲ್ ಕಾರ್ಡ್ ವಿತರಣೆ ಗಾದರೂ ಸರಕಾರ ಕ್ರಮ ವಹಿಸಬೇಕು ಎಂಬುದು ಅರ್ಜಿ ಸಲ್ಲಿಸಿರುವವರ ಆಗ್ರಹ. ಸರಕಾರಿ, ಕೆಲವು ಖಾಸಗಿ ಆಸ್ಪತ್ರೆಗಳಲ್ಲಿ ಪ್ರಮುಖ ಶಸ್ತ್ರ ಚಿಕಿತ್ಸೆ ಸಂದರ್ಭದಲ್ಲಿ ಎಪಿಎಲ್ ಕಾರ್ಡ್ ಹೊಂದಿರುವವರಿಗೆ ಶಸ್ತ್ರ ಚಿಕಿತ್ಸೆಗೆ ತಗಲುವ ವೆಚ್ಚದಲ್ಲಿಯೂ ಇಂತಿಷ್ಟು ರಿಯಾಯಿತಿಯನ್ನು ನೀಡಲಾಗುತ್ತದೆ. ಹೀಗಾಗಿ ಎಪಿಎಲ್ ಕಾರ್ಡ್ ಪಡೆಯಲು ನೂರಾರು ಕುಟುಂಬಗಳು ಅರ್ಜಿ ಸಲ್ಲಿಸಿವೆ. ಆದರೆ, ಇತ್ತೀಚಿನ ವರ್ಷಗಳಲ್ಲಿ ಎಪಿಎಲ್ ಕಾರ್ಡ್‌ಅನ್ನು ಸಹ ಸರಕಾರ ನೀಡುತ್ತಿಲ್ಲ.

**ವೈದ್ಯಕೀಯ ತುರ್ತುವಿಗೆ ಅವಕಾಶ ಇತ್ತು:** ಪಡಿತರ ಪದಾರ್ಥ ಹೊರತುಪಡಿಸಿ, ವೈದ್ಯಕೀಯ ಶಸ್ತ್ರ ಚಿಕಿತ್ಸೆಗಾಗಿಯೇ ಪಡಿತರ ಚೀಟಿಯ ಅಗತ್ಯ ಇರುವವರಿಗೆ ಈ ನಡುವೆ ಸರಕಾರ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿತ್ತು. ಆದರೆ, ಅದು ಒಂದು ನಿರ್ದಿಷ್ಟ ಸಮಯದವರೆಗೆ ಇದ್ದು, ಬಳಿಕ ಸ್ಥಗಿತಗೊಂಡಿತು. ಆ ಸಂದರ್ಭದಲ್ಲಿನಅರ್ಜಿ ಸಲ್ಲಿಸಿದ್ದ ಸಾಕಷ್ಟು ಮಂದಿಗೆ ಕಾರ್ಡ್ ಇನ್ನು ದೊರೆತಿಲ್ಲ. ಅಂತೆಯೇ ಇನ್ನು ಸ್ವಲ್ಪ ದಿನಗಳ ಕಾಲ ಎಪಿಎಲ್ ಕಾರ್ಡ್‌ಗೆ ಅರ್ಜಿ ಸಲ್ಲಿಸಲು, ಈಗಾಗಲೇ ಅರ್ಜಿ ಸಲ್ಲಿಸಿರುವವರಿಗೆ ಕಾರ್ಡ್ ವಿತರಣೆ ಮಾಡಬೇಕೆಂಬುದು ಸಾರ್ವಜನಿಕರ ಒತ್ತಾಯ.


**ನಮ್ಮದು ಮಧ್ಯಮ ವರ್ಗದ ಕುಟುಂಬ. ಎಪಿಎಲ್ ಕಾರ್ಡ್ ಇದ್ದರೆ ಪಡಿತರವನ್ನು ರಿಯಾಯಿತಿ ದರದಲ್ಲಿ ಪಡೆಯಲು ಅವಕಾಶವಿದೆ. ಅದರೆ ಅರ್ಜಿ ಸಲ್ಲಿಸಿದರೂ ಇನ್ನು ಪಡಿತರ ಚೀಟಿ ವಿತರಣೆ ಮಾಡಿಲ್ಲ. ಸರಕಾರ ಆದ್ಯತೆ ಮೇರೆಗೆ ಈ ಸೌಲಭ್ಯವನ್ನು ಕಲ್ಪಿಸಬೇಕು.**
**-ಶಂಕರ್, ಸ್ವಾಮಿ , ಅರ್ಜಿ ಸಲ್ಲಿಸಿರುವವರು**

**ಸದ್ಯ ಪಡಿತರ ಚೀಟಿಗಾಗಿ ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿಲ್ಲ. ಇನ್ನು ಈಗಾಗಲೇ ಅರ್ಜಿ ಸಲ್ಲಿಸಿರುವವರಿಗೆ ಕಾರ್ಡ್ ನೀಡುವ ವಿಚಾರ ಸರಕಾರದ ಮಟ್ಟದಲ್ಲಿ ತೀರ್ಮಾನವಾಗುವಂಥದ್ದು**
**-ಯೋಗಾನಂದ, ಉಪ ನಿರ್ದೇಶಕರು**

ಅಂತರಾಳದಿಂದ...
EDITORIAL

# ಜಾತಿ ಜನಗಣತಿಗೆ ನಿರ್ಧಾರ: ಕೇಂದ್ರದ ನಿಲುವಿನಲ್ಲಿ ಬಹುದೊಡ್ಡ ಪಲ್ಲಟ

ವಿರೋಧ ಪಕ್ಷಗಳ ಭಾರಿ ಒತ್ತಡದ ನಡುವೆ ಜಾತಿ ಜನಗಣತಿ ನಡೆಸುವ ನಿರ್ಧಾರವನ್ನು ಕೇಂದ್ರ ಸರ್ಕಾರವು ತೆಗೆದುಕೊಂಡಿದೆ. ದಶಕಕ್ಕೆ ಒಮ್ಮೆ ನಡೆಸಲಾಗುವ ಜನಗಣತಿಯ ಜೊತೆಗೆ ಜಾತಿ ಜನಗಣತಿಯೂ ನಡೆಯಲಿದೆ ಮತ್ತು ಇದು ದೇಶದ ಸಾಮಾಜಿಕ ಮತ್ತು ರಾಜಕೀಯ ಸ್ಥಿತಿಯ ಮೇಲೆ ವ್ಯಾಪಕವಾದ ಪರಿಣಾಮಗಳನ್ನು ಬೀರಲಿದೆ. ರಾಜಕೀಯ ವ್ಯವಹಾರಗಳ ಸಂಪುಟ ಸಮಿತಿಯು ಜಾತಿ ಜನಗಣತಿ ನಡೆಸುವುದಕ್ಕೆ ಅನುಮೋದನೆ ನೀಡಿದೆ. ಇದು ನೀತಿಗೆ ಸಂಬಂಧಿಸಿದ ವಿಚಾರ' ಎಂದು ಬಹುದೀರ್ಘ ಕಾಲದಿಂದ ಜಾತಿ ಜನಗಣತಿಯ ಚಿಂತನೆಯನ್ನೇ ವಿರೋಧಿಸಿ ಕೊಂಡು ಬಂದಿದ್ದ ಬಿಜೆಪಿ, ಈಗ ಗಣತಿ ನಡೆಸಲು ಮುಂದಾಗಿದೆ. ಬಿಜೆಪಿ ಮಾತ್ರವಲ್ಲದೆ ಆರ್‌ಎಸ್‌ಎಸ್ ಕೂಡ ಜಾತಿ ಜನಗಣತಿಯನ್ನು ನಿರಂತರವಾಗಿ ವಿರೋಧಿಸಿಕೊಂಡೇ ಬಂದಿದೆ. ಜಾತಿ ಗುಂಪುಗಳು ದೃಢಗೊಂಡು ಹಿಂದೂ ಅಸ್ಮಿತೆಗೆ ಹೊಡೆತ ಕೊಟ್ಟರೆ, ರಾಜಕೀಯವಾಗಿ ಅದು ಬಿಜೆಪಿಗೆ ನಷ್ಟ ಉಂಟುಮಾಡಬಹುದು ಎಂಬುದು ಈ ವಿರೋಧಕ್ಕೆ ಕಾರಣ. ಮತ ಬ್ಯಾಂಕ್‌ಗಳನ್ನು ಗಟ್ಟಿಗೊಳಿಸುವ ಪ್ರತಿಗಾಮಿ ಪ್ರಯತ್ನ ಇದು ಎಂದು ಜಾತಿ ಜನಗಣತಿಯನ್ನು ಬಿಜೆಪಿ ಈ ಹಿಂದೆ ಬಣ್ಣಿಸಿತ್ತು. ಲೋಕಸಭೆಗೆ 2024ರಲ್ಲಿ ನಡೆದ ಚುನಾವಣೆಯ ಪ್ರಣಾಳಿಕೆಯಲ್ಲಿ ಜಾತಿ ಜನಗಣತಿಯ ಪ್ರಸ್ತಾವವನ್ನು ಕಾಂಗ್ರೆಸ್ ಸೇರಿಸಿತ್ತು. ಪ್ರಧಾನಿ ನರೇಂದ್ರ ಮೋದಿ ಅದನ್ನು ಬಲವಾಗಿ ವಿರೋಧಿಸಿದ್ದರು. ಈಗ, ಮೋದಿ ನೇತೃತ್ವದ ಸಂಪುಟ ಸಮಿತಿಯು ಜಾತಿ ಜನಗಣತಿಗೆ ಅನುಮೋದನೆ ಕೊಡುವುದರೊಂದಿಗೆ ಸರ್ಕಾರದ ನೀತಿಯಲ್ಲಿ ಭಾರಿ ಪಲ್ಲಟ ಕಂಡುಬಂದಿದೆ. ಸಾಮಾಜಿಕ ನ್ಯಾಯ ಒದಗಿಸುವ ದಿಸೆಯಲ್ಲಿ ಇದೊಂದು ಮಹತ್ವದ ಹೆಜ್ಜೆ ಎಂದು ಬಿಂಬಿಸಲು ಸರ್ಕಾರ ಯತ್ನಿಸುತ್ತಿದೆ. ಆದರೆ, ರಾಜಕೀಯ ಒತ್ತಡಗಳೇ ಇದರ ಹಿಂದೆ ಇರುವುದು ಎಂಬುದು ಬಹಳ ಸ್ಪಷ್ಟ, ಜಾತಿ ಜನಗಣತಿ ನಡೆಸಲೇಬೇಕು ಎಂಬ ಸೈದ್ಧಾಂತಿಕ ನಿಲುವನ್ನು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ದೃಢವಾಗಿ ಪ್ರತಿಪಾದಿಸಿಕೊಂಡು ಬಂದಿದ್ದಾರೆ. ಹಾಗಾಗಿ, ಇದು ತನ್ನದೇ ನಿರ್ಧಾರ ಎಂದು ಬಿಜೆಪಿ ಹೇಳದೇ ಇದ್ದರೆ ರಾಹುಲ್ ಅವರ ಸಂಕಥನದ ಜೊತೆಗೆ ಅನಿವಾರ್ಯವಾಗಿ ರಾಜಿ ಮಾಡಿಕೊಂಡಿದೆ ಎಂದು ಬಿಂಬಿತವಾಗುತ್ತದೆ.



**ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕನೂ ಆಗಿರುವ ರಾಹುಲ್ ಅವರು ಜಾತಿ ಜನಗಣತಿಯನ್ನು ಪರಿಣಾಮಕಾರಿಯಾದ ಚುನಾವಣಾ ವಿಷಯ ಆಗಿಸುವಲ್ಲಿ ಯಶಸ್ವಿಯಾಗಿದ್ದಾರೆ. ಜಾತಿ ಜನಗಣತಿಯ ಸಂಕಥನವನ್ನು ಬೇರೆಯವರು ಕಸಿದುಕೊಳ್ಳುವುದನ್ನು ತಡೆಯಲು ಕಾಂಗ್ರೆಸ್ ಮತ್ತು ಇಂಡಿಯಾ ಕೂಟದಲ್ಲಿರುವ ಮಿತ್ರಪಕ್ಷಗಳು ಎಲ್ಲಾ ಪ್ರಯತ್ನಗಳನ್ನೂ ನಡೆಸಲಿವೆ. ಜಾತಿ ಜನಗಣತಿಯಿಂದಾಗಿ ಒಬಿಸಿಯ ಪ್ರಭಾವಿ ಗುಂಪುಗಳು ಸಂಘಟಿತಗೊಳ್ಳಬಹುದು.**

ಹಿಂದೂ ರಾಷ್ಟ್ರೀಯವಾದಿ ಸಂಕಥನವನ್ನೇ ಆರಂಭದಿಂದಲೂ ನೆಚ್ಚಿಕೊಂಡಿರುವ ಬಿಜೆಪಿಗೆ ಇದು ಪಥ್ಯವಾಗುವುದು ಕಷ್ಟ. ಆ ಕಾರಣ ಕ್ಕಾಗಿಯೇ ಜಾತಿ ಜನಗಣತಿ ಚಿಂತನೆಯನ್ನು ಬಿಜೆಪಿ ತಿರಸ್ಕರಿಸುತ್ತಲೇ ಬಂದಿತ್ತು. ಒಬಿಸಿ–ಪರಿಶಿಷ್ಟ ಜಾತಿ–ಪರಿಶಿಷ್ಟ ಪಂಗಡಗಳ ಒಗ್ಗೂಡುವಿಕೆಯನ್ನು ತಡೆಯಲು ಈಗಿನ ಜಾತಿ ಜನಗಣತಿಯನ್ನು ಬಿಜೆಪಿ ಬಳಸಿಕೊಳ್ಳಬಹುದು. ಏಕೆಂದರೆ, ಲೋಕಸಭೆಗೆ 2024ರಲ್ಲಿ ನಡೆದ ಚುನಾವಣೆಯಲ್ಲಿ ಈ ಸಮೀಕರಣವು ಬಿಜೆಪಿಯ ಸ್ಥಾನ ಗಳಿಕೆಯ ಮೇಲೆ ಪ್ರಭಾವ ಬೀರಿರುವ ಸಾಧ್ಯತೆ ಇದೆ. ಬಿಹಾರ ವಿಧಾನಸಭೆಗೆ ಈ ವರ್ಷ ನಡೆಯಲಿರುವ ಚುನಾವಣೆಯು ಜಾತಿ ಅಸ್ಮಿತೆಯ ಸುತ್ತ ನಿರ್ಮಾಣವಾಗಿರುವ ಅಭಿಯಾನವನ್ನು ಪರೀಕ್ಷೆಗೆ ಒಡ್ಡಲಿದೆ. ಕಾಂಗ್ರೆಸ್ ಆಳ್ವಿಕೆ ಇರುವ ಕರ್ನಾಟಕ, ತೆಲಂಗಾಣದಲ್ಲಿ ಜಾತಿ ಜನಗಣತಿ ಈಗಾಗಲೇ ನಡೆದಿದೆ. ಹಾಗಾಗಿ, ಜಾತಿ ಜನಗಣತಿ ಆರಂಭಿಸಿದ ಹಿರಿಮೆ ತನ್ನದು ಎಂಬ ಭಾವನೆ ಕಾಂಗ್ರೆಸ್‌ಗೆ ಇದೆ. ರಾಷ್ಟ್ರ ಮಟ್ಟದಲ್ಲಿ ಗಣತಿ ಆರಂಭಿಸುವ ಮೂಲಕ ಈ ಹಿರಿಮೆಯನ್ನು ಕಸಿದುಕೊಳ್ಳುವ ಉದ್ದೇಶವನ್ನೂ ಕೇಂದ್ರ ಸರ್ಕಾರ ಹೊಂದಿರಬಹುದು. ಜಾತಿ ಜನಗಣತಿ ನಡೆಸುವುದಾಗಿ ಸರ್ಕಾರ ಘೋಷಣೆ ಮಾಡಿದ್ದರೂ ಅದಕ್ಕೆ ಕಾಲಮಿತಿಯನ್ನು ಹಾಕಿಕೊಂಡಿಲ್ಲ. ಒಬಿಸಿ ಸಮುದಾಯಗಳಿಗೆ ಸಂಬಂಧಿಸಿದ ನೀತಿ ನಿರೂಪಣೆ ಮತ್ತು ಸಂಪನ್ಮೂಲ ಹಂಚಿಕೆಗೆ ಜಾತಿ ಜನಗಣತಿಯು ನಿರ್ಣಾಯಕ. ಆದರೆ ಹಲವು ಪ್ರಶ್ನೆಗಳು ಇವೆ: ಶೇ 50ಕ್ಕಿಂತ ಹೆಚ್ಚು ಮೀಸಲಾತಿ ನೀಡಲು ಅವಕಾಶ ಇದೆಯೇ? ಗಣತಿಗೆ ಬಳಸುವ ವಿಧಾನ ಯಾವುದು? ಪರಿಣಾಮಕಾರಿ ಅನುಷ್ಠಾನ ಸಾಧ್ಯವೇ? 2021ರಲ್ಲಿ ನಡೆಸಬೇಕಿದ್ದ ಜನಗಣತಿ ಪ್ರಕ್ರಿಯೆ ಇನ್ನೂ ಆರಂಭ ಆಗಿಲ್ಲ. ಹಾಗಿರುವಾಗ, ಜಾತಿ ಜನಗಣತಿ ಯಾವಾಗ ನಡೆಯಬಹುದು? 2011ರ ಜನಗಣತಿಯ ಸಮೀಕ್ಷೆಯಲ್ಲಿ ಸಾಮಾಜಿಕ–ಆರ್ಥಿಕ ಮತ್ತು ಜಾತಿಯ ಮಾಹಿತಿ ಸಂಗ್ರಹಿಸಲಾಗಿತ್ತು. ಆದರೆ, ಸಮೀಕ್ಷೆಯ ವರದಿ ಇನ್ನೂ ಬಹಿರಂಗ ಆಗಿಲ್ಲ. ಹಾಗಿರುವಾಗ, ಹೊಸ ಜಾತಿ ಜನಗಣತಿಯನ್ನು ದಕ್ಷವಾಗಿ, ಪ್ರಾಮಾಣಿಕವಾಗಿ ನಡೆಸಿ, ವರದಿಯನ್ನು ಬಿಡುಗಡೆ ಮಾಡುವ ಗುರುತರ ಹೊಣೆಗಾರಿಕೆ ಸರ್ಕಾರದ ಮೇಲೆ ಇದೆ.

# ರಾಮಾಯಣ



## ಗುಹನೊಡನೆ ಲಕ್ಷ್ಮಣನ ಸಂಭಾಷಣೆ

• ಹಿಂದಿನ ಸಂಚಿಕೆಯಿಂದ 78ನೆಯ ಅಧ್ಯಾಯ

ನನ್ನ ತಂದೆಯ ರಾಜಧಾನಿಯಲ್ಲಿ ಸಮಸ್ತ ಜನರೂ ಸುಕೃತಿಗಳಾಗಿ ಸುಖವಾಗಿ ಸಂಚರಿಸುವರು. ದಶರಥನು ಬದುಕುವನೆ ! ವನವಾಸವನ್ನು ಮುಗಿಸಿಕೊಂಡು ಹಿಂದಿರುಗಿ ಮತ್ತೆ ಅವನನ್ನು ನಾವು ನೋಡುವೆವೊ! ಸತ್ಯಪ್ರತಿಜ್ಞನಾದ ರಾಮನೊಡನೆ ಕುಶಲಿಗಳಾದ ನಾವು ಮತ್ತೆ ಅಯೋಧ್ಯೆಯನ್ನು ಪ್ರವೇಶಿಸುವೆವೊ! ಎಂದು ಹೇಳಿದನು. ಈ ಪ್ರಕಾರದಲ್ಲಿ ಲಕ್ಷ್ಮಣನು ಹೇಳುತ್ತಿರಲು ಗುಹನು ಕಣ್ಣೀರುತುಂಬಿಕೊಂಡು ಅರಣ್ಯದಲ್ಲಿ ಜ್ವರದಿಂದ ಧಾತುಗೆಟ್ಟ ಆನೆಯ ಹಾಗೆ ವ್ಯಥೆ ಪಡುತ್ತಲಿದ್ದನು. ಹೀಗೆ ಆ ರಾತ್ರಿಯು ಕಳೆಯಿತು.

### ಶ್ರೀರಾಮನು ಗುಹಸುಮಂತ್ರರನ್ನು ಕಳುಹಿಸಿ ಗಂಗಾನದಿಯನ್ನು ದಾಟಿದ್ದು

ಆಮೇಲೆ ಪ್ರಾತಃಕಾಲವಾಗಲ ಮಹಾಕೀರ್ತಿವಂತನಾದ ಶ್ರೀರಾಮನು ಎದ್ದು ಲಕ್ಷ್ಮಣನನ್ನು ಕುರಿತು ''ಎಲೈ ಲಕ್ಷ್ಮಣ್ಣ ರಾತ್ರಿಯು ಕಳೆದು ಪ್ರಾತಃಕಾಲವಾಯಿತು. ಅತಿ ಮನೋಹರವಾಗಿ ಕೋಗಿಲೆಗಳು ಸ್ವರಗೈಯುತ್ತಿವೆ. ನವಿಲುಗಳ ಕೇಕಾಧ್ವನಿಯು ಕೇಳಿಸುತ್ತಿದೆ. ನಾವು ಅತ್ಯಂತ ವೇಗವಾಗಿ ಹರಿಯುತ್ತಿರುವ ಸಮುದ್ರಗಾಮಿಯಾದ ಗಂಗೆಯನ್ನು ಈಗಲೇ ದಾಟಬೇಕು ?★ ಎಂದು ನುಡಿದನು. ಲಕ್ಷ್ಮಣನು ಗುಹನನ್ನೂ ಸುಮಂತ್ರನನ್ನೂ ಕರೆದುಕೊಂಡು ಅಣ್ಣನ ಮುಂದೆ ಬಂದು ನಿಂತನು. ಗುಹನು ರಾಮನ ಮಾತನ್ನು ಕೇಳಿ ತನ್ನ ಮಂತ್ರಿಗಳನ್ನು ಕರೆದು ಒಳ್ಳೆಯ ಹಲಗೆಗಳಿಂದ ಕೂಡಿದ ದೃಢವಾದ ದೋಣಿಯನ್ನು ತರಿಸಲು ಅಪ್ಪಣೆಮಾಡಿದನು. ಆ ಪ್ರಧಾನಿಗಳು ಮನೋಹರವಾದ ದೋಣಿಯನ್ನು ತರಿಸಲು ಗುಹನು ಕೈಮುಗಿದುಕೊಂಡು ಶ್ರೀರಾಮ, ದೋಣಿಯನ್ನು ತರಿಸಿದ್ದೇನೆ. ಇನ್ನು ನಾನು ಮಾಡಬೇಕಾದ ಸೇವೆಯು ಯಾವುದು ನೀನು ಸೀತಾಲಕ್ಷ್ಮಣಸಮೇತನಾಗಿ ಇದನ್ನು ಹತ್ತಬಹುದು ಎಂದು ಹೇಳಿದನು.
ಶ್ರೀರಾಮನು ಎಲೈ ಗುಹನೆ?: ನಿನ್ನಿಂದ ನಾವು ಸಮಸ್ತ ಸತ್ಕಾರಗಳನ್ನೂ ಪಡೆದೆವು. ನಮ್ಮನ್ನು ದೋಣಿಯನ್ನೇರಿಸು ★ ಎಂದು ಬಿಲ್ಲು ಬಾಣ ಖಡ್ಗಗಳನ್ನು ತೆಗೆದುಕೊಂಡು ಸೀತಾಲಕ್ಷ್ಮಣರೊಡನೆ ಗಂಗಾತೀರಕ್ಕೆ ಬಂದನು. ಆಗ ಸಾರಥಿಯಾದ ಸುಮಂತ್ರನು ಕೈಮುಗಿದುಕೊಂಡು '' ಶ್ರೀರಾಮ, ಇನ್ನು ನಾನು ಮಾಡುವ ನೇವೆಯೇನು? ★ ಎಂದು ಕೇಳಿದನು. ಶ್ರೀರಾಮನು ಸುಮಂತ್ರನನ್ನು ಮೈದಡವಿ ಸುಮಂತ್ರ, ನೀನು ಶೀಘ್ರದಲ್ಲಿ ರಥವನ್ನು ಮೇಳೈಸಿಕೊಂಡು ಅಯೋಧ್ಯಾಪಟ್ಟಣಕ್ಕೆ ತಿರುಗಿ ಹೋಗಿ ದಶರಥರಾಯನ ಸೇವೆಯನ್ನು ಮಾಡಿಕೊಂಡು ಸಾವಧಾನದಲ್ಲಿರು'' ಎಂದು ನಿರೂಪಿಸಿದನು. ಹೀಗೆ ಶ್ರೀರಾಮನು ಕಳುಹಿಸಿಕೊಡಲು ಸುಮಂತ್ರನು ಆತನನ್ನು ಬಿಟು ಹೋಗುವುದಕ್ಕೆ ಮನಸ್ಸಿಲ್ಲದೆ ವ್ಯಥೆಪಡುತ್ತ ಹೀಗೆಂದನು: ಶ್ರೀರಾಮ, ಸೀತಾಲಕ್ಷ್ಮಣಸಮೇತನಾದ ನಿನಗೆ ವನವಾಸಪ್ರಾಪ್ತಿಯಾದದ್ದು ದೈವಾಧೀನವಲ್ಲದೆ ಮತ್ತೊಂದಲ್ಲ. ದೈವವನ್ನು ಮೀರಿದವರಿಲ್ಲ. ಅತ್ಯಂತ ಸಾವಧಾನದಲ್ಲಿ ತಾಯಿತಂದೆಗಳ ಸೇವೆಯನ್ನು ಮಾಡಿಕೊಂಡು ಸತ್ಯಸಂಧನಾಗಿದ್ದ ನಿನಗೆ ಇಂಥ ದುಃಖವು ಬಂದಮೇಲೆ ಬಹ್ಮಚರ್ಕಾಶ್ರಮದಲ್ಲಿ ಅತ್ಯಂತ ನಿಯಮದಲ್ಲಿರುವವರಿಗೂ ಯಜುಮಾರ್ಗದಲ್ಲಿರುವವರಿಗೂ ಫಲಪ್ರಾಪ್ತಿ ಇಲ್ಲವೆಂದು ತಿಳಿಯಬೇಕಾಗುತ್ತದೆ. ವನದಲ್ಲಿ ಸೀತಾಲಕ್ಷ್ಮಣಸಮೇತನಾಗಿ ಆಹಾರನಿಯಮವನ್ನು ಮಾಡಿಕೊಂಡಿರುವ ನಿನಗೆ ಸದ್ಗತಿಯುಂಟು. ಆದರೆ ನಿನ್ನಿಂದ ವಂಚಿತರಾಗಿ ನಾವು ಕೆಟ್ಟೆವು.

ಮುಂದುವರಿಯುವುದು...

# ಅಂಜಲಿ ಗಾಡಗೀಳ ಇವರಿಗೆ 'ಓಂ ಶಿವಶಕ್ತಿ ಓಂ' ಪ್ರಶಸ್ತಿ ಪ್ರದಾನ

## ಕೇರಳದಲ್ಲಿನ 'ಶಿವೋಹಂ ಟೆಂಪಲ್ ಆಫ್ ಕಾನ್ಶಿಯಸ್ನೆಸ್ ' ವತಿಯಿಂದ ಪುರಸ್ಕಾರ

• ಶ್ರೀ. ಚೇತನ ರಾಜಹಂಸ
• ಉದಯವಾಹಿನಿ, ಕಣ್ಣೂರು

ಸನಾತನ ಸಂಸ್ಥೆಯ ಸಂಸ್ಥಾಪಕ ಸಚ್ಚಿದಾನಂದ ಪರಬ್ರಹ್ಮ ಡಾ. ಆಠವಲೆ ಇವರ ಓರ್ವ ಆಧ್ಯಾತ್ಮಿಕ ಉತ್ತರಾಧಿಕಾರಿ ಹಾಗೂ ಮಹರ್ಷಿಗಳ ಆಜ್ಞೆಯಂತೆ ದೇಶವಿದೇಶದ ಲಕ್ಷಾಂತರ ಕಿಲೋ ಮೀಟರ್ ಪ್ರವಾಸ ಮಾಡುವ, ಹಸಿವೆ ಬಾಯಾರಿಕೆ, ಮಳೆ ಬಿಸಿಲು ಇವುಗಳನ್ನು ಲೆಕ್ಕಿಸದೆ ಧರ್ಮಪ್ರಸಾರ ಮಾಡುವ ಶ್ರೀಚಿತ್ ಶಕ್ತಿ ( ಸೌ.) ಅಂಜಲಿ ಗಾಡಗೀಳ ಇವರಿಗೆ 'ಓಂ ಶಿವಶಕ್ತಿ ಓಂ' ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕೇರಳದಲ್ಲಿನ 'ಶಿವೋಹಂ ಟೆಂಪಲ್ ಆಫ್ ಕಾನ್ಶಿಯಸ್ನೆಸ್ ಟ್ರಸ್ಟ್' ವತಿಯಿಂದ ಈ ಪ್ರಶಸ್ತಿ ನೀಡಲಾಯಿತು. ಆಂತರಿಕ ಶಕ್ತಿ, ದೃಢ ನಿಶ್ಚಯ ಮತ್ತು ಕೃಪಾಶೀರ್ವಾದದ ಮೂಲಕ ನೇತೃತ್ವ ವಹಿಸಿ ಮಾರ್ಗದರ್ಶನ ಮಾಡುವ ಮಹಿಳೆಯರಿಗೆ ಈ ಪ್ರಶಸ್ತಿ ನೀಡಲಾಗುತ್ತದೆ.

ಸನಾತನ ಏಕಲ ವಾಸ್ತುರತ್ನದ ಕುಲಪತಿ ಬ್ರಹ್ಮರ್ಷಿ ಡಾ. ಸೋಮನಾಥ ರಾಘವನ್ ಆಚಾರ್ಯ ಇವರು ಶ್ರೀಚಿತ್ ಶಕ್ತಿ (ಸೌ.) ಅಂಜಲಿ ಗಾಡಗೀಳ ಇವರಿಗೆ ಪ್ರಶಸ್ತಿ ನೀಡಿದರು. 'ಶಿವೋಹಂ ಸ್ಪಿರಿಚುವಲ್ ವೆಲನೆಸ್ ಸೆಂಟರ್'ನ ಮುಖ್ಯ ಚಿಕಿತ್ಸಾ ತಜ್ಞ ಡಾ. ಜ್ಯೋತಿ ಶಮಿತ ಇವರು ಪ್ರಮಾಣ ಪತ್ರ ನೀಡಿದರು, ಹಾಗೂ ಸುಧಾ ರವೀಂದ್ರನಾಥ ಇವರು ಶಾಲು ನೀಡಿ ಶ್ರೀ ಚಿತ್ ಶಕ್ತಿ (ಸೌ.) ಅಂಜಲಿ ಗಾಡಗೀಳ ಇವರನ್ನು ಗೌರವಿಸಿದರು. 'ಶಿವೋಹಂ ಟೆಂಪಲ್ ಆಫ್ ಕಾನ್ಶಿಯಸ್ನೆಸ್ ಟ್ರಸ್ಟ್' ಅಧ್ಯಾತ್ಮ, ಸಂಸ್ಕೃತಿ, ಧ್ಯಾನ, ಯೋಗ ಮುಂತಾದ ವಿಷಯಗಳ ಕುರಿತು ಜಾಗೃತಿ ಮೂಡಿಸುವ ಸಂಸ್ಥೆಯಾಗಿದ್ದು ಅದು ವಿಶ್ವಸಂಸ್ಥೆಯ 'ಯುಎನ್ ಗ್ಲೋಬಲ್ ಕಾಂಪ್ಯಾಕ್ಟ್' ಜೊತೆಗೆ ಸಂಬಂಧ ಹೊಂದಿದೆ. ಪ್ರಶಸ್ತಿ



ಉದಯವಾಹಿನಿ ಚಿತ್ರ

ಸ್ವೀಕರಿಸುವಾಗ ಶ್ರೀಚಿತ್ ಶಕ್ತಿ (ಸೌ.) ಅಂಜಲಿ ಗಾಡಗೀಳ ಇವರು, ಈ ಪ್ರಶಸ್ತಿ ನನಗೆ ದೊರೆತಿಲ್ಲ, ಇದು ನಮ್ಮ ಗುರುಗಳು ಸಚ್ಚಿದಾನಂದ ಪರಬ್ರಹ್ಮ ಡಾ. ಆಠವಲೆ ಇವರಿಗೆ ದೊರೆತಿದೆ. ನಾನು ಕೇವಲ ಮಾಧ್ಯಮವಾಗಿದ್ದೇನೆ. ಗುರುಗಳ ಕೃಪೆಯಿಂದಲೇ ಜೀವನದಲ್ಲಿ ಯಶಸ್ಸು ಪ್ರಾಪ್ತಿಯಾಗುತ್ತದೆ. ಗುರುದೇವರ ಕೃಪೆಯಿಂದ ನಮ್ಮ ಜೀವನ ಸಾತ್ತ್ವಿಕವಾಗುತ್ತದೆ ಮತ್ತು ನಮ್ಮ ಜೀವನಕ್ಕೆ ಒಂದು ಅರ್ಥ ದೊರೆಯುತ್ತದೆ. ಸಚ್ಚಿದಾನಂದ ಪರಬ್ರಹ್ಮ ಡಾ. ಆಠವಲೆ ಇವರು 'ಮನುಷ್ಯ ಜನ್ಮದ ಮುಖ್ಯ ಉದ್ದೇಶ ಈಶ್ವರಪ್ರಾಪ್ತಿ ಮಾಡಿಕೊಳ್ಳುವುದಾಗಿದೆ, ಇದನ್ನು ಮನಸ್ಸಿನ ಮೇಲೆ ಬಿಂಬಿಸಿ ಸಮಾಜವನ್ನು ಅಧ್ಯಾತ್ಮ, ಸಾಧನೆಯ ಕಡೆಗೆ ಹೊರಳಿಸಿದ್ದಾರೆ. ಸಾಧನೆಯಿಂದ ವ್ಯಕ್ತಿಯ ಜೀವನದಲ್ಲಿ ಪ್ರತಿಯೊಂದು ಕರ್ಮ ಸಾತ್ವಿಕವಾಗುತ್ತದೆ, ಆಗ ಈಶ್ವರಪ್ರಾಪ್ತಿ ದೂರ ಇರುವುದಿಲ್ಲ. ಸಮಾಜದಲ್ಲಿ ಸಾಧನೆಯ ಪ್ರಚಾರ ಮಾಡುವುದು ಮತ್ತು ಸಮಾಜಕ್ಕೆ ಸಮಷ್ಟಿ ಸಾಧನೆಯ ಬಗ್ಗೆ ತಿಳಿಸುವುದು ನಮ್ಮ ಧರ್ಮವಾಗಿದೆ. ಆದ್ದರಿಂದ ಸಮಾಜದಲ್ಲಿ ಜಾಗೃತಿ ಮೂಡಿಸುವುದರಿಂದ ನಮ್ಮ ರಾಷ್ಟ್ರ ಸಾತ್ವಿಕವಾಗುವುದು, ಎಂದೂ ಅವರು ಹೇಳಿದರು.

ಈ ಸಮಯದಲ್ಲಿ ಬ್ರಹ್ಮಶ್ರೀ ಡಾ. ಸೋಮನಾಥ ರಾಘವನ್ ಆಚಾರ್ಯ ಇವರು, ನಮ್ಮ ಗುರುಗಳ ಕೃಪಾಶೀರ್ವಾದ ಲಭಿಸಿರುವುದರಿಂದ ನಾವು ಅಧ್ಯಾತ್ಮದ ಮಾರ್ಗದಲ್ಲಿ ಮಾರ್ಗಕ್ರಮಣ ಮಾಡಲು ಸಾಧ್ಯವಾಗುತ್ತದೆ ಹಾಗೂ, ಜಾಗತಿಕ ಶಾಂತಿ ಸಂಘಟನೆಯ ಅಂತರಾಷ್ಟ್ರೀಯ ಮಹಾಸಚಿವ ಪ್ರಾ. ಡಾ. ಸುರೇಶ ಕೆ ಗುಪ್ತನ್ ಇವರು, ಜಗತ್ತಿನಲ್ಲಿ ಶೇಕಡ 65 ರಷ್ಟು ಜನರಲ್ಲಿ ಖಿನ್ನತೆ ಕಂಡು ಬರುತ್ತದೆ. ಈ ಎಲ್ಲಾ ಖಾಯಿಲೆಗಳಿಗೆ ಮಾನಸಿಕ ಭಾವನೆಯೇ ಕಾರಣವಾಗಿದೆ. ಈ ಭಾವನೆಗಳನ್ನು ಹಿಡಿತದಲ್ಲಿ ಇಟ್ಟುಕೊಳ್ಳುವುದು ಆವಶ್ಯಕವಾಗಿದೆ. ಶಿವೋಹಂ ಟೆಂಪಲ್ ಆಫ್ ಕಾನ್ಶಿಯಸ್ನೆಸ್ ಟ್ರಸ್ಟಿನ ಆಡಳಿತ ಸಂಚಾಲಕ ಡಾ. ಸಿ. ವಿ. ರವೀಂದ್ರನಾಥ್ ಇವರ ಸುಪುತ್ರಿ ಶುಭ ರವಿಂದ್ರನಾಥ ಇವರು ಕಾರ್ಯಕ್ರಮದ ಆರಂಭದಲ್ಲಿ ಎಲ್ಲರಿಗೂ ಸ್ವಾಗತ ಕೋರಿದರು. ಅದರ ನಂತರ 'ನಿರ್ವಾಣ ಶಟ್ಕಂ' ಹೇಳಲಾಯಿತು. ಕೃಷ್ಣ ಬೀಚ್ ರೆಸಾರ್ಟ್ ನ ಶ್ರೀ. ಸುಮಲ ಇವರು ಆಭಾರ ಮನ್ನಿಸಿದರು.

# ಬಜರಂಗದಳದ ಕಾರ್ಯಕರ್ತ ಸುಹಾಸ್ ಶೆಟ್ಟಿ ಅವರ ಹತ್ಯೆ ಖಂಡನೀಯ



ಶ್ರೀ. ಮೋಹನ್ ಗೌಡ

**ಅಪರಾಧಿಗಳಿಗೆ ಕಠಿಣ ಶಿಕ್ಷೆ ವಿಧಿಸಿ**


ಮಂಗಳೂರಿನ ಬಜರಂಗದಳದ ಕಾರ್ಯಕರ್ತ ಸುಹಾಸ್ ಶೆಟ್ಟಿಯವರನ್ನು ಇಸ್ಲಾಮಿಕ್ ಜಿಹಾದಿಗಳು ಸಾರ್ವಜನಿಕವಾಗಿ ಬರ್ಬರವಾಗಿ ಹತ್ಯೆ ಮಾಡಿರುವ ಹೇಯ ಕೃತ್ಯವನ್ನು ಹಿಂದೂ ಜನಜಾಗೃತಿ ಸಮಿತಿ ತೀವ್ರವಾಗಿ ಖಂಡಿಸುತ್ತದೆ. ಪ್ರವೀಣ್ ನೆಟ್ಟಾರುರವರ ಹತ್ಯೆಯ ನಂತರ ಪುನಃ ಹಿಂದೂ ಕಾರ್ಯಕರ್ತರ ಹತ್ಯೆ ನಡೆಯುತ್ತಿರುವುದು ಕಾಂಗ್ರೆಸ್ ಕಾಲಾವಧಿಯಲ್ಲಿ ಮುಸಲ್ಮಾನರ ಓಲೈಕೆಯ ರಾಜಕಾರಣದಿಂದಾಗಿ ಹಿಂದುಗಳು ಅಸುರಕ್ಷಿತರಾಗಿರುವುದು ಗಮನಕ್ಕೆ ಬರುತ್ತಿದೆ. ಕಾಂಗ್ರೆಸ್ ಸರ್ಕಾರವು ಈ ಹಿಂದೆ ದಂಗೆ, ಬರ್ಬರ ಹತ್ಯೆಯಂತಹ ಪ್ರಮುಖವಾದ ಗಂಭೀರ ಅಪರಾಧದ ಪ್ರಕರಣಗಳಲ್ಲಿ ಭಾಗಿಯಾದಂತಹ ಇಸ್ಲಾಮಿಕ್ ಜಿಹಾದಿಗಳ ಮೇಲಿನ ಪ್ರಕರಣಗಳನ್ನು ವಾಪಸ್ ಪಡೆದುಕೊಂಡಿರುವುದು, ಇಂದು ರಾಜ್ಯದಲ್ಲಿ ಜಿಹಾದಿಗಳಿಗೆ ಇಂತಹ ಕುಕೃತ್ಯವನ್ನು ಮುಂದುವರಿಸಲು ನೀಡಿದ ಕುಮುಕ್ಕಾಗಿದೆ. ಸುಹಾಸ್ ಶೆಟ್ಟಿ ಅವರಿಗೆ ಜಿಹಾದಿಗಳು ಏಪ್ರಿಲ್ 30 ರಂದು ಜೀವ ಬೆದರಿಕೆಯನ್ನು ಹಾಕಿ ನಿಮ್ಮನ್ನು ಹತ್ಯೆ ಮಾಡುತ್ತೇವೆ ಎಂದು ಹೇಳಿದ ನಂತರ ಅವರ ಹತ್ಯೆಯನ್ನು ಇಸ್ಲಾಮಿಕ್ ಜಿಹಾದ್ ಗಳು ಮಾಡಿರುವುದು ಇದೊಂದು ಪೂರ್ವಯೋಜಿತ ಷಡ್ಯಂತ್ರವೆಂಬುದು ಗಮನಕ್ಕೆ ಗಮನಕ್ಕೆ ಬರುತ್ತಿದೆ. ಇಸ್ಲಾಮಿಕ್ ಜಿಹಾದ್ ಗಳು ರಾಜ್ಯ ಸರ್ಕಾರದಲ್ಲಿ ರಾಜಾರೋಷವಾಗಿ ಹಿಂದು ನಾಯಕರನ್ನು ಬರ್ಬರವಾಗಿ ಹತ್ಯೆ ಮಾಡುತ್ತಿರುವುದು ಮತಾಂಧರಿಗೆ ಕಾನೂನಿನ ಭಯ ಇಲ್ಲದಿರುವುದು ಗಮನಕ್ಕೆ ಬರುತ್ತದೆ. ಈ ಎಲ್ಲಾ ಘಟನೆಗಳು ಅತ್ಯಂತ ಗಂಭೀರವಾಗಿದ್ದು. ಈ ಪ್ರಕರಣದ ತನಿಕೆಯನ್ನು ರಾಷ್ಟ್ರೀಯ ತನಿಖಾ ದಳದಿಂದ ಮಾಡಿಸಬೇಕು ಈ ಪ್ರಕರಣದಲ್ಲಿ ಭಾಗಿಯಾದ ಅಪರಾಧಿಗಳಿಗೆ, ಮತ್ತು ಅವರಿಗೆ ಸಹಾಯ ಮಾಡಿದವರಿಗೆ, ಕುಮ್ಮಕ್ಕು ನೀಡಿದವರ ಬಂಧನ ಮಾಡಿ ಅವರಿಗೆ ಕಠಿಣ ಶಿಕ್ಷೆ ನೀಡಬೇಕೆಂದು ಹಿಂದೂ ಜನಜಾಗೃತಿ ಸಮಿತಿ ಆಗ್ರಹಿಸುತ್ತದೆ.

# ಶ್ರೀ ವಜ್ರಕ್ಷೇತ್ರದಲ್ಲಿ ಶ್ರೀ ನರಸಿಂಹ ಜಯಂತಿ ಸಪ್ತಾಹ

• ಉದಯವಾಹಿನಿ, ಬೆಂಗಳೂರು

ತ್ಯಾಗರಾಜನಗರದ ಶ್ರೀ ವಜ್ರಕ್ಷೇತ್ರ, ಅಭಯ ಲಕ್ಷ್ಮೀ ನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಮೇ 4 ರಿಂದ 10ರ ವರೆಗೆ ಶ್ರೀ ನರಸಿಂಹ ಜಯಂತಿ ಸಪ್ತಾಹವನ್ನು ಆಯೋಜಿಸಿದ್ದು, ಈ ಎಲ್ಲಾ ದಿನಗಳಲ್ಲೂ ಬೆಳಗ್ಗೆ ವಿಶೇಷ ಪೂಜಾ ಕೈಂಕರ್ಯಗಳು ನಡೆಯಲಿದೆ.

**ಸಾಂಸ್ಕೃತಿಕ ಕಾರ್ಯಕ್ರಮಗಳು:** ಪ್ರತಿಸಂಜೆ 6-30ಕ್ಕೆ. ಮೇ 4ರಂದು–ವಿದುಷಿಯರಾದ ಶ್ರೀಮತಿ ಗಾಯತ್ರಿ ಮಯ್ಯ, ಶ್ರೀಮತಿ ಪವಿತ್ರಾ, ಪ್ರಶಾಂತ್ ನಿರ್ದೇಶನದಲ್ಲಿ ಪ್ರಣವಾಂಜಲಿ ಪರ್ಫಾಮಿಂಗ್ ಆಫ್ ಆರ್ಟ್ಸ್ ನ ವಿದ್ಯಾರ್ಥಿಗಳಿಂದ ಭರತನಾಟ್ಯ ಮೇ 5ರಂದು–ಶ್ರೀ ಮಂಜುನಾಥೇಶ್ವರ ಸಂಗೀತ ಕಲಾ ಶಾಲೆಯ ವಿದ್ಯಾರ್ಥಿಗಳಿಂದ ಗಾಯನ ಮತ್ತು ಪಿಟೀಲು ವಾದನ. ಮೇ 6ರಂದು–ಶ್ರೀ ಎಂ.ಜಿ. ಜಯಸಿಂಹ ಮತ್ತು ತಂಡದವರಿಂದ ಭಕ್ತಿ ವಾಣಿ. ಮೇ 7ರಂದು–ನೂಪುರ ನೃತ್ಯ ಶಾಲೆಯ ಡಾ. ಲಲಿತಾ ಶ್ರೀನಿವಾಸನ್ ಅವರ ಶಿಷ್ಯೆ ವಿದುಷಿ ಸುಮಾ ಅನುರಾಗ್ ರವರಿಂದ ಭರತನಾಟ್ಯ. ಮೇ 8 ರಂದು–ವಿದುಷಿ ಕು. ದಿವ್ಯಶ್ರೀ ರಂಗನಾಥನ್ ರವರಿಂದ ಸ್ಯಾಕ್ಸೋಫೋನ್ ವಾದನ. **ಪಿಟೀಲು:** ವಿದ್ವಾನ್ ಶ್ರೀ ಎಸ್. ಶಶಿಧರ್, **ಮೃದಂಗ:** ಶ್ರೀ ಕಾರ್ತೀಕ್ ಪ್ರಣವ್. ಮೇ 9ರಂದು–ಗೋಕುಲಾ ಸ್ಕೂಲ್ ಆಫ್ ಮ್ಯೂಸಿಕ್‌ನ ಕರ್ನಾಟಕ ಕಲಾಶ್ರೀ ವಿದ್ವಾನ್ ಎಚ್.ಎಸ್. ವೇಣುಗೋಪಾಲ್ ಅವರ ಶಿಷ್ಯರಿಂದ ಸಂಗೀ ತ ಕಾರ್ಯಕ್ರಮ. ಮೇ 10ರಂದು–ಬೆಳಗ್ಗೆ 8–00ಕ್ಕೆ ಕು. ಅಹಿಕಾ ನಾಗದೀಪ್ ಮತ್ತು ಸಂಗಡಿಗರಿಂದ ವೀಣಾ ವಾದನ. ಕಾರ್ಯಕ್ರಮ ನಡೆಯುವ ಸ್ಥಳ : ಶ್ರೀ ಅಭಯ ಲಕ್ಷ್ಮೀ ನರಸಿಂಹ ಸ್ವಾಮಿ ದೇವಸ್ಥಾನ, ಶ್ರೀವಜ್ರಕ್ಷೇತ್ರ,' 152/1, 7ನೇ ಅಡ್ಡರಸ್ತೆ, 3ನೇ ಬ್ಲಾಕ್, ತ್ಯಾಗರಾಜನಗರ, ಬೆಂಗಳೂರು–560028



ಉದಯವಾಹಿನಿ ಚಿತ್ರ

**ವಿಶೇಷ ಪೂಜಾ ಕೈಂಕರ್ಯ**

# ಡೆಂಗ್ಯೂ, ಮಲೇರಿಯಾದಿಂದ ಪಾರಾಗಬೇಕಾದ್ರೆ ಈ ಟಿಪ್ಸ್ ಪಾಲಿಸಿ

ಈಗಾಗಲೇ ದೇಶದ ಹಲವಾರು ಪ್ರದೇಶಗಳಲ್ಲಿ ಸಿಕ್ಕಾಪಟ್ಟೆ ಮಳೆಯಾಗುತ್ತಿದೆ. ಮಳೆಗಾಲದಲ್ಲಿ ಕಾಯಿಲೆ ಬೀಳುವುದು ಹೆಚ್ಚು, ಅದರಲ್ಲೂ ಡೆಂಗ್ಯೂ, ಮಲೇರಿಯಾಕ್ಕೆ ತುತ್ತಾಗುವುದು ಹೆಚ್ಚು. ಇವುಗಳನ್ನು ಹರಡುವ ಸೊಳ್ಳೆಗಳು ಓಡಾಡುವುದು ಹೆಚ್ಚು. ಮಳೆಗಾಲದಲ್ಲಿ ಸೊಳ್ಳೆಗಳ ಕಾಟ ಹೆಚ್ಚಾಗುತ್ತದೆ. ಈ ಸೊಳ್ಳೆಗಳಿಂದ ನಮ್ಮನ್ನು ನಾವು ರಕ್ಷಿಸಿಕೊಳ್ಳುವುದು ಬಹಳ ಮುಖ್ಯ. ಅದಕ್ಕೆ ಯಾವೆಲ್ಲಾ ಕ್ರಮಗಳನ್ನು ಕೈಗೊಳ್ಳಬೇಕು ಎನ್ನುವುದನ್ನು ನಾವಿಲ್ಲಿ ತಿಳಿ ಯೋಣ. ಮನೆಯಲ್ಲಿ ಸೊಳ್ಳೆ ರಕ್ಷಣೆಯ ಬಗ್ಗೆ ಸಂಪೂರ್ಣ ಕಾಳಜಿ ವಹಿಸಿ ಸೊಳ್ಳೆಗಳನ್ನು ದೂರವಿಡಲು, ಕಿಟಕಿಗಳಿಗೆ ಸೂಕ್ಷ್ಮ ಜಾಲರಿ ಅಳವಡಿಸಿ, ರಾತ್ರಿ ಮಲಗುವಾಗ ಸೊಳ್ಳೆ ಪರದೆಗಳನ್ನು ಬಳಸಿ ಮತ್ತು ಸುರಕ್ಷಿತ ವೇಪರೈಸರ್‌ಗಳು ಅಥವಾ ಸೊಳ್ಳೆ ನಿವಾರಕಗಳನ್ನು ಬಳಸಿ. ಸಂಜೆ ವೇಳೆಯಲ್ಲಿ ಸೊಳ್ಳೆಗಳು ಮನೆಯೊಳಗೆ ಬಾರದಂತೆ ಕಿಟಕಿ ಬಾಗಿಲುಗಳನ್ನು ಮುಚ್ಚಿಡಿ.





**ಮಕ್ಕಳಿಗೆ ಸುರಕ್ಷಿತವಾದ ಸೊಳ್ಳೆ ನಿವಾರಕಗಳನ್ನು ಬಳಸಿ:** ಇತ್ತೀಚಿನ ದಿನಗಳಲ್ಲಿ ಮಕ್ಕಳಿಗೆ ಸುರಕ್ಷಿತವಾದ ಕೀಟ ನಿವಾರಕ ಉತ್ಪನ್ನಗಳು ಮಾರುಕಟ್ಟೆಯಲ್ಲಿ ಲಭ್ಯವಿದೆ. ಎರಡು ತಿಂಗಳಿಗಿಂತ ಮೇಲ್ಪಟ್ಟ ಶಿಶುಗಳಿಗೆ, ವಯಸ್ಸಿಗೆ ಸುರಕ್ಷಿತವಾದಂತಹ ಸೊಳ್ಳೆ ನಿವಾರಕಗಳನ್ನು ಆರಿಸಿ. ಅವುಗಳನ್ನು ಸೀಮಿತ ಪ್ರಮಾಣದಲ್ಲಿ ಬಳಸಿ ಮತ್ತು ಕಣ್ಣು, ಬಾಯಿ ಅಥವಾ ಗಾಯಗಳ ಮೇಲೆ ಹಚ್ಚಬೇಡಿ. ಬಟ್ಟೆಗಳ ಮೇಲೆ ಧರಿಸಲು ನಿವಾರಕ ಪ್ಯಾಚ್‌ಗಳು ಸಹ ಉತ್ತಮ ಆಯ್ಕೆಯಾಗಿದೆ.

**ಸಂಪೂರ್ಣ ಉಡುಗೆ ತೊಡಿ, ಸುರಕ್ಷಿತವಾಗಿರಿ:** ಮಕ್ಕಳ ಚರ್ಮದ ಹೆಚ್ಚಿನ ಭಾಗವು ಮುಚ್ಚಲ್ಪಟ್ಟಿರುವಂತೆ ಉದ್ದ ತೋಳಿನ ಶರ್ಟ್‌ಗಳು, ಪೂರ್ಣ ಉದ್ದದ ಪ್ಯಾಂಟ್‌ಗಳು ಮತ್ತು ಸಾಕ್ಸ್‌ಗಳನ್ನು ಧರಿಸಿ. ಗಾಢ ಬಣ್ಣದ ಬಟ್ಟೆಗಳು ಸೊಳ್ಳೆಗಳನ್ನು ಆಕರ್ಷಿಸುತ್ತವೆ, ಆದ್ದರಿಂದ ತಿಳಿ ಬಣ್ಣದ ಬಟ್ಟೆಗಳನ್ನು ಧರಿಸುವುದು ಉತ್ತಮ. ಬೆಳಿಗ್ಗೆ ಮತ್ತು ಸಂಜೆ ಸೊಳ್ಳೆಗಳು ಹೆಚ್ಚು ಸಮಯಗಳಾಗಿರುವುದರಿಂದ, ಈ ಸಮಯದಲ್ಲಿ ವಿಶೇಷ ಕಾಳಜಿ ವಹಿಸಬೇಕು.

**ನಿಂತ ನೀರನ್ನು ತೆಗೆದುಹಾಕಿ:** ನಿಂತ ನೀರು ಕೂಡ ಸೊಳ್ಳೆಗಳ ಸಂತಾನೋತ್ಪತ್ತಿಯ ತಾಣವಾಗಬಹುದು. ಹೂವಿನ ಕುಂಡಗಳು, ನೀರಿನ ಪಾತ್ರೆಗಳಂತಹ ಸ್ಥಳಗಳನ್ನು ಖಾಲಿಯಾಗಿ ಅಥವಾ ಮುಚ್ಚಿಡಿ ಮತ್ತು ಮನೆಯ ಸುತ್ತಲೂ ನೀರು ಸಂಗ್ರಹವಾಗಲು ಬಿಡಬೇಡಿ. ನಿಮ್ಮ ಮಗುವಿನ ಶಾಲೆ ಮತ್ತು ಡೇ ಕೇರ್‌ನಲ್ಲಿ ಇದೇ ರೀತಿಯ ಮುನ್ನೆಚ್ಚರಿಕೆಗಳನ್ನು ಶಿಫಾರಸು ಮಾಡಿ.

**ಮಲೇರಿಯಾದ ಆರಂಭಿಕ ಲಕ್ಷಣಗಳನ್ನು ಗುರುತಿಸಿ:** ತೀವ್ರ ಜ್ವರ, ಶೀತ, ಬೆವರುವುದು, ದೇಹದ ನೋವು ಮತ್ತು ವಾಂತಿಯೊಂದಿಗೆ ಮಲೇರಿಯಾದ ಆರಂಭಿಕ ಲಕ್ಷಣಗಳಾಗಿರಬಹುದು. ಅಂತಹ ಲಕ್ಷಣಗಳು ಕಂಡುಬಂದರೆ, ತಕ್ಷಣ ವೈದ್ಯಕೀಯ ಸಲಹೆ ಪಡೆಯಿರಿ. ಸಮಯೋಚಿತ ಚಿಕಿತ್ಸೆಯಿಂದ, ರೋಗವನ್ನು ನಿಯಂತ್ರಿಸಬಹುದು ಮತ್ತು ಗಂಭೀರ ತೊಡಕುಗಳನ್ನು ತಪ್ಪಿಸಬಹುದು.

**ಮನೆ ಮತ್ತು ಶಾಲೆಯಲ್ಲಿ ಜಾಗೃತಿ ಮೂಡಿಸಿ:** ಮಗುವಿನ ವಯಸ್ಸಿಗೆ ಅನುಗುಣವಾಗಿ ಸೊಳ್ಳೆಗಳಿಂದ ರಕ್ಷಿಸಿಕೊಳ್ಳುವ ವಿಧಾನಗಳ ಬಗ್ಗೆ ಕಲಿಸಿ. ಈ ಅಭ್ಯಾಸಗಳು ಅವರ ಜೀವನದುದ್ದಕ್ಕೂ ಉಳಿಯುವಂತೆ ರಕ್ಷಣಾತ್ಮಕ ಅಭ್ಯಾಸಗಳನ್ನು ಅಳವಡಿಸಿಕೊಳ್ಳಲು ಅವರನ್ನು ಪ್ರೋತ್ಸಾಹಿಸಿ. ಮಲೇರಿಯಾ ತಡೆಗಟ್ಟುವ ತಂತ್ರವನ್ನು ಅಭಿವೃದ್ಧಿಪಡಿಸಲು ಶಿಕ್ಷಕರು ಮತ್ತು ಆರೈಕೆದಾರರೊಂದಿಗೆ ಕೈ ಜೋಡಿಸಿ.

# ಮಸಾಜ್ ಮಾಡಿದ್ರೆ ಹೆಚ್ಚು ಕಾಲ ಬಾಳುತ್ತೀರಿ

ಆರೋಗ್ಯದಿಂದಿರಬೇಕು, ದೀರ್ಘಾಯುಷ್ಯ ಹೊಂದಿರಬೇಕೆನ್ನುವುದು ಪ್ರತಿಯೊಬ್ಬ ವ್ಯಕ್ತಿಯ ಆಸೆಯಾಗಿರುತ್ತದೆ. ಜೀವಿತಾವಧಿಯನ್ನು ಹೆಚ್ಚಿಸಲು ಯಾವುದೇ ಮ್ಯಾಜಿಕ್ ಮಾತ್ರೆ ಇಲ್ಲದಿದ್ದರೂ, ಪ್ರತಿದಿನ ಸಣ್ಣಪುಟ್ಟ ಕೆಲಸಗಳನ್ನು ಮಾಡುವ ಮೂಲಕ ನೀವು ಆರೋಗ್ಯಕರ, ದೀರ್ಘಾಯುಷ್ಯವನ್ನು ಹೊಂದಬಹುದು, ನಿಮ್ಮ ಜೀವಿತಾವಧಿಯನ್ನು ಹೆಚ್ಚಿಸಬಹುದು. ಆಯುರ್ವೇದದಲ್ಲಿ ಕೆಲವು ವಿಧಾನಗಳನ್ನು ತಿಳಿಸಲಾಗಿದೆ. ಈ ವಿಧಾನಗಳ ಮೂಲಕ ಜೀವಿತಾವಧಿಯನ್ನು ಹೆಚ್ಚಿಸಬಹುದು ಎನ್ನುತ್ತಾರೆ ಆಯುರ್ವೇದ ವೈದ್ಯೆ ವರಲಕ್ಷ್ಮೀ ಯನಮಂದ್ರ.

**ತಲೆಯ ಮಧ್ಯ ಭಾಗದ ಮಸಾಜ್:** ಸಂಸ್ಕೃತದಲ್ಲಿ ತಲೆಯನ್ನು ಉತ್ತಮಾಂಗ ಎಂದು ಕರೆಯಲಾಗುತ್ತದೆ ಏಕೆಂದರೆ ಅದು ಐದು ಇಂದ್ರಿಯಗಳನ್ನು ಹೊಂದಿದೆ. ಐದು ವಾತಗಳ (ಶಕ್ತಿಗಳು) ನಿಯಂತ್ರಣ ಕೇಂದ್ರವಾಗಿದೆ, ಪ್ರಜ್ಞೆಯ ವಾಸಸ್ಥಾನವಾಗಿದೆ. ತಲೆಗೆ ಎಣ್ಣೆ ಹಚ್ಚುವುದರಿಂದ ಮನಸ್ಸಿನ ಇಂದ್ರಿಯಗಳು ಮತ್ತು ಭಾವನಾತ್ಮಕ ಕಾರ್ಯಗಳು ಸಕ್ರಿಯಗೊಳ್ಳುತ್ತವೆ ಮತ್ತು ವಾತ ಮತ್ತು ಪಿತ್ತ ದೋಷಗಳನ್ನು ಸಮತೋಲನದಲ್ಲಿಡುತ್ತವೆ. ಇಷ್ಟೇ ಅಲ್ಲ, ಇದು ಕೂದಲಿನ ಉತ್ತಮ ಬೆಳವಣಿಗೆಗೆ ಸಹಾಯ ಮಾಡುತ್ತದೆ.

**ಹೊಕ್ಕುಳಿನ ಮಸಾಜ್:** ದೇಹದ ಈ ಭಾಗಗಳ ಜೊತೆಗೆ, ಹೊಕ್ಕುಳನ್ನೂ ಮಸಾಜ್ ಮಾಡಬೇಕು ಎಂದು ವೈದ್ಯರು ಹೇಳುತ್ತಾರೆ. ವೇಗಸ್ ನರಕ್ಕೆ ಸಂಪರ್ಕ ಹೊಂದಿರುವ ಹೊಕ್ಕುಳು. ಇಲ್ಲಿ ಎಣ್ಣೆ ಹಚ್ಚುವುದರಿಂದ ನಿಮ್ಮ ಆರೋಗ್ಯ ಮತ್ತು ಚೈತನ್ಯ ಸುಧಾರಿಸುತ್ತದೆ.

**ಪಾದ ಮಸಾಜ್:** ಪಾದಗಳಲ್ಲಿ 2 ಮಿಲಿಯನ್‌ಗಿಂತಲೂ ಹೆಚ್ಚು ನರ ತುದಿಗಳಿವೆ. ಅಲ್ಲದೆ, ಜೀರ್ಣಕ್ರಿಯೆ, ದೃಷ್ಟಿ, ರೋಗನಿರೋಧಕ ಶಕ್ತಿ, ಸ್ನಾಯುಗಳ ಶಕ್ತಿ, ರಕ್ತ ಪರಿಚಲನೆ ಮುಂತಾದ ಜೈವಿಕ ಕಾರ್ಯಗಳನ್ನು ನಿಯಂತ್ರಿಸುವ ಆರು ಪ್ರಮುಖ ಮರ್ಮ ಅಂಶಗಳಿವೆ. ಇದು ನಿದ್ರೆಯನ್ನು ಸುಧಾರಿಸುತ್ತದೆ ಮತ್ತು ದೃಷ್ಟಿಯನ್ನು ಸಹ ಸುಧಾರಿಸುತ್ತದೆ.

**ಕಿವಿಯ ಹಿಂದೆ ಮಸಾಜ್ ಮಾಡಿ:** ಕಿವಿಗಳು ಶಬ್ದದ ಮೂಲ, ವಾತ ದೋಷದ ವಾಸಸ್ಥಾನ ಎಂದು ವೈದ್ಯರು ಹೇಳುತ್ತಾರೆ. ಕಿವಿಗಳಿಗೆ ಎಣ್ಣೆಯಿಂದ ಮಸಾಜ್ ಮಾಡುವುದರಿಂದ ಏಕಾಗ್ರತೆ ಹೆಚ್ಚಾಗುತ್ತದೆ ಮತ್ತು ಮನಸ್ಸು ಶಾಂತವಾಗಿರುತ್ತದೆ. ಇಷ್ಟೇ ಅಲ್ಲ, ಇದು ವಾತ ದೋಷವನ್ನು ಶಾಂತಗೊಳಿಸುತ್ತದೆ ಮತ್ತು ನಿದ್ರೆಯನ್ನು ಸುಧಾರಿಸುತ್ತದೆ.

# ತಿನ್ನಬೇಡಿ ಅಂತ ಹೇಳ್ತಿಲ್ಲ ಆದ್ರೆ ಅತಿಯಾಗಿ ತಿನ್ನಬೇಡಿ

ಆಹಾರ ಸೇವನೆ ಹಿತ ಮಿತವಾಗಿದ್ದರೆ ಆರೋಗ್ಯಕ್ಕೂ ಕೂಡ ಉತ್ತಮ. ಒಂದು ವೇಳೆ ಈ ಅಭ್ಯಾಸ ವ್ಯಸನವಾಗಿ ಬಿಟ್ಟರೆ, ಆರೋಗ್ಯ ಕೆಡಿಸುತ್ತದೆ. ಪ್ರಮುಖವಾಗಿ ದೀರ್ಘಕಾಲಿನ ಆರೋಗ್ಯ ಸಮಸ್ಯೆಗಳು ಬಹಳ ಬೇಗನೇ ಕಾಣಿಸಿಕೊಳ್ಳುತ್ತದೆ. ಆಹಾರ ನಮ್ಮ ಆರೋಗ್ಯಕ್ಕೆ ಅಗತ್ಯ, ಹಾಗಂತ ಅತಿಯಾಗಿ ಸೇವನೆ ಮಾಡಿದರೆ, ದೇಹದ ಮೇಲೆ ವ್ಯತಿರಿಕ್ತ ಪರಿಣಾಮ ಕಂಡುಬರಬಹುದು! ಹೌದು ಕೆಲವರು ಬಕಾಸುರನಂತೆ ಎಷ್ಟು ಕೊಟ್ಟರೂ ಕೂಡ ಬೇಡ ಅನ್ನಲ್ಲ, ತಿನ್ನುತ್ತಾ ಇರುತ್ತಾರೆ, ಅವರ ಹೊಟ್ಟೆಯಲ್ಲಿ ಅಷ್ಟು ಆಹಾರ ಹೇಗೆ ಸೇರಿಕೊಳ್ಳುವುದು ಎನ್ನುವುದೇ ನಮಗೆ ಅಚ್ಚರಿ ಮೂಡಿಸುವುದು. ಆದರೆ ಕೆಲವೊಂದು ಆರೋಗ್ಯ ಸಮಸ್ಯೆಗಳಿಂದಲೂ ಕೂಡ ಈ ರೀತಿ ಸಮಸ್ಯೆ ಕಾಣಿಸಿಕೊಳ್ಳುತ್ತದೆ ಎಂದು ಹೇಳಲಾಗುತ್ತದೆ. ಆದರೆ ನಿಮಗೆ ಗೊತ್ತಿರಲಿ, ಯಾವುದೇ ಆಹಾರಪದಾರ್ಥ ಆಗಿರಲಿ, ಬಾಯಿಗೆ ರುಚಿಯಾಗಿದೆ ಎಂದು ನಾವು ಅತಿಯಾಗಿ ಸೇವನೆ ಮಾಡಿದರೆ, ಖಂಡಿತವಾಗಿಯೂ ಆರೋಗ್ಯದಲ್ಲಿ ಸಮಸ್ಯೆಗಳು ಕಾಣಿಸಿಕೊಳ್ಳಬಹುದು ಇದ್ದಕ್ಕಿದಂತೆ ದೇಹದ ತೂಕ ಹೆಚ್ಚಾಗುವುದರ ಜೊತೆಗೆ ಅನಾರೋಗ್ಯಕ್ಕೂ ಕಾರಣವಾಗಬಹುದು. ಪ್ರಮುಖವಾಗಿ ಮಧುಮೇಹ, ಹೃದಯಕ್ಕೆ ಸಂಬಂಧಪಟ್ಟ ಸಮಸ್ಯೆಗಳು, ಕೆಲವೊಮ್ಮೆ ಕ್ಯಾನ್ಸರ್ ಕೂಡ ಇದರಿಂದ ಬರಬಹುದು. ಹೀಗಾಗಿ ಅತಿಯಾಗಿ ತಿನ್ನುವಂತಹ ಅಭ್ಯಾಸವಿದ್ದರೆ ಆಗ ಖಂಡಿತವಾಗಿಯೂ ನೀವು ಇದನ್ನು ಇಂದೇ ನಿಲ್ಲಿಸಿಬಿಡಿ! ಇಂದಿನ ಲೇಖನದಲ್ಲ ಅತಿಯಾಗಿ ತಿನ್ನುವುದರಿಂದ ಉಂಟಾಗುವ 5 ಅಪಾಯಕಾರಿ ಕಾಯಿಲೆಗಳು ಮತ್ತು ಇವುಗಳಿಂದ ಹೊರಬರುವುದು ಹೇಗೆ ಎನ್ನುವುದರ ಬಗ್ಗೆ ನೋಡೋಣ...

**ಬಿಪಿ ಶುಗರ್ ಪಕ್ಕಾ ಬರಬಹುದು**

**ಬೊಜ್ಜು ಹೆಚ್ಚಾಗಿ ಬಿಪಿ ಶುಗರ್ ಬರಬಹುದು:** ಅತಿಯಾಗಿ ತಿನ್ನುವುದರಿಂದ ದೇಹದಲ್ಲಿ ಬೊಜ್ಜಿನಾಂಶ ಹೆಚ್ಚಾಗಿ, ದೇಹದ ತೂಕ ಹೆಚ್ಚಾಗುತ್ತದೆ. ನಿಮಗೆ ಗೊತ್ತಿರಲಿ ನಾವು ಅಗತ್ಯಕ್ಕಿಂತ ಹೆಚ್ಚಿನ ಕ್ಯಾಲೊರಿಗಳನ್ನು ಸೇವಿಸಿದಾಗ, ದೇಹವು ಅವುಗಳನ್ನು ಕೊಬ್ಬಿನ ರೂಪದಲ್ಲಿ ಸಂಗ್ರಹಿಸಲು ಪ್ರಾರಂಭಿಸುತ್ತದೆ.

ಕೊನೆಗೆ ಇದೇ ಕಾರಣದಿಂದಾಗಿ ಹೊಟ್ಟೆ, ತೊಡೆ ಮತ್ತು ಸೊಂಟದ ಭಾಗದಲ್ಲಿ ಕೊಬ್ಬು ಹೆಚ್ಚಾಗಲು ಪ್ರಾರಂಭಿಸುತ್ತದೆ. ಇದರಿಂದಾಗಿ ಮುಂದಿನ ದಿನಗಳಲ್ಲಿ ಬಹಳ ಬೇಗನೇ ಬೊಜ್ಜು ಸಮಸ್ಯೆ ಕಾಣಿಸಿ ಕೊಳ್ಳುವುದರ ಜೊತೆಗೆ ಅಧಿಕ ರಕ್ತದೊತ್ತಡ, ಮಧುಮೇಹ ಮತ್ತು ಹೃದ್ರೋಗದ ಅಪಾಯ ಕೂಡ ಹೆಚ್ಚಾಗುವ ಸಾಧ್ಯತೆ ಹೆಚ್ಚಿರುತ್ತದೆ.




**ಮಧುಮೇಹ ಕಾಣಿಸಿಕೊಳ್ಳಬಹುದು:** ಅತಿಯಾಗಿ ತಿನ್ನುವುದರಿಂದ ಅದರಲ್ಲೂ ವಿಶೇಷವಾಗಿ ಸಿಹಿತಿಂಡಿಗಳು ಮತ್ತು ಎಣ್ಣೆಯಲ್ಲಿ ಕರಿದ ಆಹಾರಗಳನ್ನು ಹೆಚ್ಚಾಗಿ ಸೇವನೆ ಮಾಡಿದರೆ ದೇಹದಲ್ಲಿ ಇನ್ಸುಲಿನ್ ಸಮತೋಲನವನ್ನು ಹಾಳುಮಾಡುತ್ತದೆ. ಇದರಿಂದ ರಕ್ತದಲ್ಲಿನ ಸಕ್ಕರೆ ಮಟ್ಟ ಹೆಚ್ಚಾಗುವ ಕಾರಣ ಭವಿಷ್ಯದಲ್ಲಿ ಟೈಪ್ 2 ಮಧುಮೇಹ ಕಾಣಿಸಿಕೊಳ್ಳುವ ಸಾಧ್ಯತೆ ಕೂಡ ಹೆಚ್ಚಿರುತ್ತದೆ. ಹಾಗಾದ್ರೆ ಇದಕ್ಕೆ ಪರಿಹಾರಗಳೇನು: ದೈನಂದಿನ ಆಹಾರ ಪದ್ಧತಿ ಯಲ್ಲಿ ನಾರಿನಾಂಶ ಮತ್ತು ಪ್ರೋಟೀನ್ ಅಂಶ ಹೆಚ್ಚಿರುವ ಆಹಾರ ಪದಾರ್ಥಗಳು ಇರುವ ಹಾಗೆ ನೋಡಿಕೊಳ್ಳಿ. ಸಿಹಿತಿಂಡಿಗಳು ಮತ್ತು ಜಂಕ್ ಫುಡ್‌ಗಳನ್ನು ಕಡಿಮೆ ಸೇವಿಸಿ. ನಿಯಮಿತವಾಗಿ ಲಘು ವ್ಯಾಯಾಮ ಮಾಡಿ.

**ಹೃದಯಕ್ಕೆ ಸಮಸ್ಯೆ ಬರಬಹುದು:** ಅತಿಯಾಗಿ ತಿನ್ನುವುದರಿಂದ ದೇಹದಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಹೆಚ್ಚಾಗುತ್ತದೆ ಮತ್ತು ಒಳ್ಳೆಯ ಕೊಲೆಸ್ಟ್ರಾಲ್ ಕಡಿಮೆಯಾ ಗುತ್ತದೆ. ಇದು ಅಪಧಮನಿಗಳಲ್ಲಿ ಅಡಚಣೆಯನ್ನು ಉಂಟುಮಾ ಡುತ್ತದೆ ಮತ್ತು ಹೃದಯಾಘಾತದ ಅಪಾಯವನ್ನು ಹೆಚ್ಚಿಸುತ್ತದೆ. ಆದಷ್ಟು ಸಮತೋಲಿತ, ಕಡಿಮೆ ಕೊಬ್ಬಿನ ಅಂಶ ಇರುವ ಆಹಾರವನ್ನು ಸೇವನೆ ಮಾಡಿ. ಫಾಸ್ಟ್ ಫುಡ್, ಎಣ್ಣೆಯಲ್ಲಿ ಕರಿದ ಆಹಾರಗಳು ಮತ್ತು ಉಪ್ಪಿನಾಂಶ ಹೆಚ್ಚಿರುವ ಆಹಾರಗಳನ್ನು ಸೇವನೆ ಮಾಡಬೇಡಿ. ದಿನಾ ಅರ್ಧ ಗಂಟೆ ನಡೆಯುವ ಅಭ್ಯಾಸ ಮಾಡಿಕೊಳ್ಳಿ.

**ಲಿವರ್ ಗೆ ಸಂಬಂಧಪಟ್ಟ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ:** ಅತಿಯಾಗಿ ಮತ್ತು ಆಗಾಗ್ಗೆ ತಿನ್ನುವುದರಿಂದ ದೇಹದಲ್ಲಿ ಅನಗತ್ಯ ಕೊಬ್ಬು ಹೆಚ್ಚಾಗುತ್ತದೆ ಹಾಗೂ ಕ್ರಮೇಣವಾಗಿ ಯಕೃತ್ತಿನಲ್ಲಿ ಸಂಗ್ರಹವಾಗಲು ಶುರುವಾಗುತ್ತದೆ. ಇದರಿಂದ ಯಕೃತ್ತಿನ ಕಾರ್ಯನಿರ್ವಹಣೆಯ ಮೇಲೆ ಅಡ್ಡಪರಿಣಾಮಗಳು ಕಂಡು ಬರುವುದರ ಜೊತೆಗೆ ಗಂಭೀರ ಆರೋಗ್ಯ ಸಮಸ್ಯೆಗಳು ಕೂಡ ಕಾಣಿಸಿಕೊಳ್ಳುವ ಸಾಧ್ಯತೆ ಇರುತ್ತದೆ.

**ತಡೆಗಟ್ಟುವಿಕೆ ವಿಧಾನ:** ಒಣ ಹಣ್ಣುಗಳು ಅಥವಾ ಒಮೆಗಾ–3 ನಂತಹ ಆರೋಗ್ಯಕರ ಕೊಬ್ಬಿನಾಂಶ ಇರುವ ಆಹಾರಗಳನ್ನು ಸೇವನೆ ಮಾಡಿ ಹಾಗೂ ಆಲ್ಕೋಹಾಲ್ ಮತ್ತು ಎಣ್ಣೆಯುಕ್ತ ಆಹಾರಗಳಿಂದ ದೂರವಿರಿ.



**ಖಿನ್ನತೆಯಂತಹ ಸಮಸ್ಯೆಗಳು ಕಂಡುಬರಬಹುದು:** ಅತಿಯಾಗಿ ತಿನ್ನುವುದರಿಂದ ದೇಹವು ಭಾರವಾಗಿರುತ್ತದೆ ಮತ್ತು ಶಕ್ತಿಯ ಕೊರತೆ ಕೂಡ ಕಾಡುತ್ತದೆ. ಇದಲ್ಲದೆ, ರಕ್ತದಲ್ಲಿನ ಸಕ್ಕರೆಯ ಏರಿಳಿತಗಳಿಂದಾಗಿ ಮನಸ್ಥಿತಿ ಬದಲಾವಣೆಗಳು ಮತ್ತು ಖಿನ್ನತೆಯಂತಹ ಸಮಸ್ಯೆಗಳು ಸಹ ಉಂಟಾಗಬಹುದು. ಪ್ರತಿದಿನ 7–8 ಗಂಟೆಗಳ ಕಾಲ ನಿದ್ರೆ ಮಾಡಿ. ಧ್ಯಾನ ಮತ್ತು ಯೋಗಾಸನಗಳನ್ನು ಮಾಡುವ ಅಭ್ಯಾಸ ಇಟ್ಟುಕೊಳ್ಳಿ. ನಿಮ್ಮ ಬಿಡುವಿನ ವೇಳೆಯಲ್ಲಿ ಊಟ ಮಾಡುವ ಬದಲು, ಒಂದು ಹವ್ಯಾಸವನ್ನು ಅಳವಡಿಸಿಕೊಳ್ಳಿ.

ಉದಯ ವಾಹಿನಿ
ಪ್ರಾದೇಶಿಕ
ಭಾನುವಾರ
04 ಮೇ 2025


ಜಿಲ್ಲೆಯಲ್ಲಿ ನಕಲಿ ವೈದ್ಯರ ಹಾವಳಿ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಇದಕ್ಕೆ ಕಡಿವಾಣ ಹಾಕಲು ದಿಟ್ಟ ಹೆಜ್ಜೆ

# ನಕಲಿ ವೈದ್ಯಕೀಯ ಹಾವಳಿ ತಡೆಗೆ ಕಲರ್ ಕೋಡ್: ಆರೋಗ್ಯ ಇಲಾಖೆ ಎಚ್ಚರಿಕೆ

• ಉದಯವಾಹಿನಿ, ಕಲಬುರಗಿ

ನಕಲಿ ವೈದ್ಯಕೀಯ ಹಾವಳಿ ತಡೆಗೆ ಆರೋಗ್ಯ ಇಲಾಖೆ ಆದೇಶ ಹೊರಡಿಸಿದ್ದು, ಆಲೋಪತಿ ಆಸ್ಪತ್ರೆಗಳು ನೀಲಿ ಬಣ್ಣ ಮತ್ತು ಆಯುರ್ವೇದಿಕ್ ಆಸ್ಪತ್ರೆಗಳು ಹಸಿರು ಬಣ್ಣದ ಬೋರ್ಡ್ ಬಳಸುವ ಮೂಲಕ ಬಣ್ಣ ಸಂಹಿತೆಯನ್ನು ಕಡ್ಡಾಯವಾಗಿ ಅನುಸರಿಸಬೇಕು. ಖಾಸಗಿ ವೈದ್ಯಕೀಯ ಆಸ್ಪತ್ರೆಗಳು ಈ ನಿಯಮಗಳನ್ನು ಅನುಸರಿಸುವಲ್ಲಿ ವಿಫಲವಾದಲ್ಲಿ ಕೆ.ಪಿ.ಎಮ್.ಈ ತಿದ್ದುಪಡಿ ಕಾಯ್ದೆ 2017ರ ಸೆಕ್ಷನ್ 19(5)ರ ಅನ್ವಯ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಆರೋಗ್ಯ ಇಲಾಖೆ ಎಚ್ಚರಿಕೆ ನೀಡಿದೆ.

**ಜಿಲ್ಲೆಯಲ್ಲಿ ನಕಲಿ ವೈದ್ಯರ ಹಾವಳಿ**

ಎಂ.ಬಿ.ಬಿ.ಎಸ್. ಪದವಿ ಮುಗಿಸದೇ ಕ್ಲಿನಿಕ್ ನಡೆಸುತ್ತಿರುವ ಹಲವು ನಕಲಿ ವೈದ್ಯರ ಬಗ್ಗೆ ಇತ್ತೀಚೆಗೆ ದೂರುಗಳು ದಾಖಲಾಗುತ್ತಿದ್ದು, ಜಿಲ್ಲೆಯಲ್ಲಿ ನಕಲಿ ವೈದ್ಯರ ಹಾವಳಿ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಇದಕ್ಕೆ ಕಡಿವಾಣ ಹಾಕಲು ರಾಜ್ಯ ಸರ್ಕಾರವು ದಿಟ್ಟ ಹೆಜ್ಜೆ ಇಟ್ಟಿದೆ. ಈ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆಯು 1,434 ಹೆಚ್ಚು ನಕಲಿ ವೈದ್ಯರ ಮೇಲೆ ಪ್ರಕರಣ ದಾಖಲು ಮಾಡಿತ್ತು. ವ್ಯಕ್ತಿಯೊಬ್ಬರ ಜೀವ ಉಳಿಸುವಲ್ಲಿ ವೈದ್ಯರ ಪಾತ್ರ ಅತ್ಯಂತ ಪ್ರಮುಖವಾಗಿದೆ. ಆದರೆ, ಕೆಲವು ಹಣದ ಆಸೆ ಸೇರಿದಂತೆ ನಾನಾ ಕಾರಣಗಳಿಂದ ನಕಲಿ ವೈದ್ಯರ ವೇಷಧರಿಸಿ ಜನರ ಜೀವದ ಜೊತೆ ಆಟವಾಡುತ್ತಿದ್ದಾರೆ. ವಿದ್ಯೆ ಕಲಿಯದೇ ಸರ್ಜರಿ ಮಾಡಲು ಪ್ರಯತ್ನಿಸುವ ಈ ನಕಲಿ ವೈದ್ಯರು ಹಲವರ ಸಾವಿಗೆ ಕಾರಣವಾಗಿದ್ದಾರೆ. ಇಂತಹ ನಕಲಿ ವೈದ್ಯರ ಪ್ರಕರಣಗಳು ಈ ಹಿಂದೆಯೂ ರಾಜ್ಯದಲ್ಲಿ ಸಪತ್ತೆಯಾಗಿದ್ದವು. ರಾಜ್ಯದಲ್ಲಿ ದಾಪುಗಾಲಿಟ್ಟಿರುವ ಈ ನಕಲಿ ವೈದ್ಯರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತಿದೆ. ನಕಲಿ ವೈದ್ಯರ ಸಮಸ್ಯೆ ಕೇವಲ ಭಾರತಕ್ಕೆ ಸೀಮಿತವಾಗಿಲ್ಲ, ಹಿಂದುಳಿದ ದೇಶದಲ್ಲಿ ಇಂತಹ ಸಮಸ್ಯೆ ಇದ್ದೆ ಇದೆ. ದೇಶದಲ್ಲಿ ಅನಾದಿ ಕಾಲದಿಂದಲೂ ನಕಲಿ ವೈದ್ಯರ ಹಾವಳಿ ಇದ್ದರೂ, ಅದನ್ನು ತಡೆಯಲು ಸಾಧ್ಯವಾಗಿಲ್ಲ. ನಕಲಿ ವೈದ್ಯರನ್ನು ತಡೆಯಲು ಆಯುಷ್ ಇಲಾಖೆಗೆ ವಹಿಸಿಕೊಟ್ಟರೂ, ದಾಳಿಯ ಮೂಲಕ ನಕಲಿ ವೈದ್ಯರ ಸಮಸ್ಯೆಗೆ ಬ್ರೇಕ್ ಹಾಕಲು ಸಾಧ್ಯವಿಲ್ಲ. ಗ್ರಾಮೀಣ ಮಟ್ಟದಲ್ಲಿ ವ್ಯಾಪಕವಾಗಿರುವ ಇಂತಹ ದಂಧೆಗೆ ಪ್ರಬಲ ಕಾನೂನಿನ ಅಸ್ತ್ರ ಬೇಕಾಗಿರುವುದರಿಂದ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ದೊಡ್ಡ ಸಂಖ್ಯೆಯ ನಕಲಿ ವೈದ್ಯರು ಹುಟ್ಟಿಕೊಳ್ಳಲು ಕೆಲವು ಹಿರಿಯ ಅಧಿಕಾರಿಗಳು ಸಹಕರಿಸಿದ್ದಾರೆ. ಎಂಬ ಆರೋಪವಿದೆ. ಆಲೋಪಥಿ, ನ್ಯಾಚುರೋಪಥಿ, ಆಯುರ್ವೇದ ಹಾಗೂ ಹೋಮಿಯೋಪಥಿ ಹೆಸರಿನಲ್ಲಿ ದಂಧೆ ನಡೆಸುತ್ತಿರುವ ನಕಲಿ ವೈದ್ಯರ ಪಟ್ಟಿಯನ್ನು ಆರೋಗ್ಯ ಇಲಾಖೆ ಬಿಡುಗಡೆ ಮಾಡಿದೆ. ಇತ್ತೀಚಿಗೆ ಭ್ರೂಣ ಹತ್ಯೆ ಪ್ರಕರಣಗಳು ಹಾಗೂ ನಕಲಿ ವೈದ್ಯರ ವಿರುದ್ಧ ಆರೋಗ್ಯ ಇಲಾಖೆ ದಾಳಿ ನಡೆಸಿ ಕ್ರಮಕ್ಕೆಗೊಂಡಿದೆ. ಅದರನ್ವಯ ಆಲೋಪತಿ ಆಸ್ಪತ್ರೆಗಳಿಗೆ ನೀಲಿ ಬಣ್ಣ ಮತ್ತು ಆಯುರ್ವೇದಿಕ್ ಆಸ್ಪತ್ರೆಗಳು ಹಸಿರು ಬಣ್ಣದ ಬೋರ್ಡ್ ಬಳಸುವ ಮೂಲಕ ಬಣ್ಣ ಸಂಹಿತೆಯನ್ನು ಕಡ್ಡಾಯವಾಗಿ ಅನುಸರಿಸಬೇಕು. ಜೊತೆಗೆ ಇನ್ನಿತರ ಕ್ರಮಗಳನ್ನು ಸೂಚಿಸಲಾಗಿದೆ. ಇದನ್ನು ತಪ್ಪಿದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಆದೇಶಿಸಿದೆ.ಎಸ್ಸೆಸ್ಸೆಲ್ಸಿ ಪಾಸಾಗಿರುವ ಕೆ.ಆರ್.ಪೇಟೆಯ ಡಾ.ಎ.ಎ.ಮುರಳೀಧರ ಸ್ವಾಮಿ, ತಾನು ನಡೆಸುತ್ತಿರುವ ಲಕ್ಷ್ಮಿ ಕ್ಲಿನಿಕ್ ಅನ್ನು ಕರ್ನಾಟಕ ವೈದ್ಯಕೀಯ ಖಾಸಗಿ 2007 ನೋಂದಣಿ ಮಾಡಿಕೊಳ್ಳಲು ಆರೋಗ್ಯ ಇಲಾಖೆಗೆ ನಿರ್ದೇಶನ ನೀಡುವಂತೆ ಕೋರಿ ಸಲ್ಲಿಸಿದ್ದ ಅರ್ಜಿ ಕುರಿತು ವಿಚಾರಣೆ ನಡೆಸಿದ ನ್ಯಾ.ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ಈ ಆದೇಶ ನೀಡಿದೆ.

> **ನಕಲಿ ಮತ್ತು ಅರ್ಹತೆ ಹೊಂದಿಲ್ಲದ ವೈದ್ಯರು ಸಮಾಜಕ್ಕೆ ಕಂಟಕರಾಗಿದ್ದು, ರೋಗಿಗಳ ಆರೋಗ್ಯದ ವಿಚಾರದಲ್ಲಿ ಚೆಲ್ಲಾಟವಾಡುತ್ತಿದ್ದಾರೆ. ಸರಕಾರವು ರೋಗಿಗಳ ಸುರಕ್ಷತೆಗೆ ಮತ್ತು ಉತ್ತಮ ಆರೋಗ್ಯ ಸೇವೆ ಒದಗಿಸಲು ಬದ್ಧವಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡುರಾವ್ ಅವರು ತಿಳಿಸಿದ್ದಾರೆ.**

> **ಇಲಾಖೆಯು ಸಂಪೂರ್ಣವಾಗಿ ನಕಲಿ ವೈದ್ಯರ ಹಾವಳಿಗೆ ಬ್ರೇಕ್ ಹಾಕಲು ಮುಂದಾಗಿದೆ. ಅಮಾಯಕರನ್ನು ವಂಚಿಸುತ್ತಿರುವ ಹಾಗೂ ಜೀವಕ್ಕೆ ಅಪಾಯಕಾರಿಯಾಗಿರುವ ನಕಲಿ ವೈದ್ಯರು ನಡೆಸುತ್ತಿರುವ ಕ್ಲಿನಿಕ್‌ಗಳನ್ನು ಗುರುತಿಸಿ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಹೈಕೋರ್ಟ್ ರಾಜ್ಯ ಸರಕಾರಕ್ಕೆ ನಿರ್ದೇಶನ ನೀಡಿದೆ ಎಂದು ಕಲಬುರಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ತಿಳಿಸಿದ್ದಾರೆ.**

## ಮಿನಿ ನ್ಯೂಸ್

### ಹಳೆಯ ನೇತ್ರಾವತಿ ಸೇತುವೆ ಸಂಚಾರಕ್ಕೆ ಮುಕ್ತ

• ಉದಯವಾಹಿನಿ ಮಂಗಳೂರು

ನೇತ್ರಾವತಿ ನದಿಯ ಹಳೆ ಸೇತುವೆ ದುರಸ್ತಿ ಸಲುವಾಗಿ ನಗರದಿಂದ ತಲಪಾಡಿ, ತೊಕ್ಕೊಟ್ಟನ್ನು ಸಂಪರ್ಕಿಸುವ ರಾಷ್ಟ್ರೀಯ ಹದ್ದಾರಿ 66ರಲ್ಲಿ ವಾಹನ ಸಂಚಾರಕ್ಕೆ ವಿಧಿಸಲಾಗಿರುವ ನಿರ್ಬಂಧಕ್ಕೆ ಇಂದು ತೆರವು ನೀಡಲಾಗಿದೆ. ಈ ಸೇತುವೆಯ ಪಿಲ್ಲರ್‌ಗಳ ಬೇರಿಂಗ್‌ಗಳ ದುರಸ್ತಿ ಕಾರ್ಯ ಸೋಮವಾರ ಪೂರ್ಣಗೊಂಡಿದೆ. ಅವುಗಳ ಕ್ಯೂರಿಂಗ್‌ಗೆ ಇನ್ನು ಮೂರು ದಿನಗಳ ಕಾಲಾವಕಾಶ ಬೇಕು ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಎನ್‌ಎಚ್‌ಎಐ) ಅಧಿಕಾರಿಗಳು ಮಾಹಿತಿ ನೀಡಿದ್ದಾರೆ' ಎಂದು ನಗರ ಪೊಲೀಸ್ ಕಮಿಷನರ್ ಅನುಪಮ್ ಅಗ್ರವಾಲ್ ಏ.30 ರಂದು ತಿಳಿಸಿದ್ದರು.

ನಿರ್ವಹಣೆ ಮತ್ತು ದುರಸ್ತಿ ಸಲುವಾಗಿ ನೇತ್ರಾವತಿ ನದಿಯ ಹಳೆ ಸೇತುವೆಯಲ್ಲಿ ವಾಹನ ಸಂಚಾರಕ್ಕೆ ಏ1ರಿಂದ ನಿರ್ಬಂಧ ಹೇರಿದ ಬಳಿಕ ಹೊಸ ಸೇತುವೆಯಲ್ಲಿ ವಾಹನ ಸಂಚಾರ ದಟ್ಟಣೆ ಹೆಚ್ಚಾಗಿತ್ತು. ಈ ಸೇತುವೆಯನ್ನು ಹಾದು ಹೋಗಲು ವಾಹನಗಳಿಗೆ ತಾಸುಗಟ್ಟಲೆ ಸಮಯ ತಗಲುತ್ತಿದೆ. ಉಳ್ಳಾಲದ ಸಯ್ಯದ್ ಮುಹಮ್ಮದ್ ಶರೀಫುಲ್ ಮದನಿ ದರ್ಗಾದಲ್ಲು 5 ವರ್ಷಗಳಿಗೊಮ್ಮೆ ನಡೆಯುವ ಉರುಸ್ ಏ. 22ರಿಂದ ಆರಂಭವಾಗಿದ್ದು, ಆ ಬಳಿಕ ಈ ಸೇತುವೆಯಲ್ಲಿ ವಾಹನ ದಟ್ಟಣೆ ಮತ್ತಷ್ಟು ಹೆಚ್ಚಾಗಿದೆ.

# ಧಾರಾಕಾರ ಗಾಳಿಗೆ ಉರುಳಿದ ಒಳ ಕ್ರೀಡಾಂಗಣ ಮೇಲ್ಛಾವಣಿ ತಜ್ಞರ ತಂಡ ಭೇಟಿ, ಇಲಾಖೆಗೆ ಅಂದಾಜು 60 ಲಕ್ಷ ನಷ್ಟ

• ಉದಯವಾಹಿನಿ, ಚಿಂಚೋಳಿ





ಕಳೆದ ವಾರದಲ್ಲಿ ಪಟ್ಟಣದ ಒಳ ಕ್ರೀಡಾಂಗಣದ ಮೇಲ್ಛಾವಣಿ ಧಾರಾಕಾರ ಗಾಳಿಗೆ ತಗಡುಗಳು ಕುಸಿದು ಗಾಳಿಗೆ ಹೋಗಿರುವುದು ಇಲಾಖೆಗೆ ಸುಮಾರು 60 ಲಕ್ಷದಷ್ಟು ನಷ್ಟವುಂಟಾಗಿದೆ ಎಂದು ಕೆ.ಆರ್.ಐ.ಡಿ.ಎಲ್ ಇಲಾಖೆ ವತಿಯಿಂದ ಪರಿಶೀಲನೆ ನೇಮಕವಾದ ತಜ್ಞರ ತಂಡದ ಮುಖ್ಯಸ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಸಿದ್ರಾಮಪ್ಪಾ ಅವಧಿ ತಿಳಿಸಿದ್ದಾರೆ.

ಪಟ್ಟಣದ ಚಂದಾಪೂರದಲ್ಲಿ ಕಳೆದ ವಾರದಲ್ಲಿ ಒಳ ಕ್ರೀಡಾಂಗಣವು ಧಾರಾಕಾರ ಮಳೆ ಗಾಳಿಗೆ ಮೇಲ್ಛಾವಣಿ ಕುಸಿದು ಗಾಳಿಗೆ ಹೋಗಿದ್ದ ಕಾರಣ ಕೆ.ಆರ್.ಐ.ಡಿ.ಎಲ್ ವತಿಯಿಂದ ಪರಿಶೀಲನೆಗೆ ನೇಮಿಸಿದ ತಜ್ಞರ ತಂಡ ಆಗಮಿಸಿ ಪರೀಶೀಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಮಗಾರಿ ಕಳಪೆ ಆಗಿರುವುದಿಲ್ಲ,ಕಬ್ಬಿಣ ಜೋಡಣೆಗಳು ಚನ್ನಾಗಿ ಆಗದೆ ಇರುವುದರಿಂದ ಅನಾಹುತವಾಗಿದೆ. ಕಟ್ಟಡ ನಿರ್ಮಾಣ ಹಂತದಲ್ಲಿ ಡಿಸೈನ್ ಮ್ಯಾಪ್ ಕೊಡುತ್ತಾರೆ ಅದರಂತೆ ಕೆಲಸ ಮಾಡಲಾಗುತ್ತದೆ,ಕಟ್ಟಡ ಸಮಯದಲ್ಲಿ ಕಾಲಂ ಹಾಗೂ ಭೀಮ್ ಹಾಕುವಾಗ ಕಬ್ಬಿಣ ಜೋಡಣೆ ಸಮರ್ಪಕವಾಗಿ ಮಾಡಿಲ್ಲ ಅದಕ್ಕೆ ಅನಾಹುತ ಆಗಿರುತ್ತದೆ. ಕಟ್ಟಡ ಮುಗಿದ ನಂತರ ಈಗ ಪರಿಶೀಲನೆ ನಡೆಸಿದರೂ ಎಮ್ 20ಪ್ರಮಾಣ ಗೇಜ್ ಬರಬೇಕು ಆದರೆ 30ಪ್ರಮಾಣ ಬರುತ್ತಿದೆ ಕಳಪೆ ಕಾಮಗಾರಿ ಆಗಿರುವುದಿಲ್ಲ,ಆದರೆ ಸಣ್ಣಪುಟ್ಟ ತಪ್ಪುಗಳು ಕಬ್ಬಿಣದ ಜೋಡಣೆ ಸಮರ್ಪಕವಾಗಿ ಮಾಡಿಲ್ಲ ಅನ್ನುವುದು ಮೇಲ್ನೋಟಕ್ಕೆ ಕಂಡುಬರುತ್ತಿದೆ ಇದನ್ನು ಆಧಾರಿಸಿ ವರದಿ ಇಲಾಖೆಗೆ ನೀಡುತ್ತೇವೆ ಮತ್ತೆ ವಾರದಲ್ಲಿ ಮತ್ತೊಂದು ತಂಡ ಪರಿಶೀಲನೆ ನಡೆಸುತ್ತಾರೆ ಎಂದರು.

**ಶೀಘ್ರದಲ್ಲೇ ದುರಸ್ತಿ ಕಾರ್ಯ**

ಕಲಬುರ್ಗಿ ಕೆ.ಆರ್.ಐ.ಡಿ.ಎಲ್ ಕಾರ್ಯಪಾಲಕ ಇಂಜಿನಿಯರ್ ರಾಹುಲ್ ಕಾಂಬ್ಳೆ ಮಾತನಾಡಿ ಒಳ ಕ್ರೀಡಾಂಗಣ ಕಾಮಗಾರಿ ಮುಕ್ತಾಯದನಂತರ ಕಾಮಗಾರಿ ಹಸ್ತಾಂತರ ಮಾಡಲು 2022ರಲ್ಲಿಯೇ ಕ್ರೀಡಾ ಇಲಾಖೆಗೆ ಪತ್ರ ಬರೆಯಲಾಗಿದೆ ಆದರೆ ಇಲಾಖೆಯವರು ಹಸ್ತಾಂತರ ಮಾಡಿಕೊಂಡಿಲ್ಲಾ,ಧಾರಾಕಾರ ಮಳೆ ಗಾಳಿಗೆ ಉರುಳಿದ ಮೇಲ್ಛಾವಣಿ ಕುರಿತು ಸಮಗ್ರ ತನಿಖೆ ಮಾಡುತ್ತಿದ್ದೇವೆ ತಪ್ಪಿಸ್ಥರ ಮೇಲೆ ಸೂಕ್ತ ಕ್ರಮ ಜರುಗಿಸಿ ಒಳಕ್ರೀಡಾಂಗಣ ಶೀಘ್ರದಲ್ಲೇ ದುರಸ್ತಿ ಕಾರ್ಯ ಕೈಗೊಳ್ಳಲಾಗುವುದು ಎಂದರು.

ಈ ಸಂದರ್ಭದಲ್ಲಿ ಲ್ಯಾಂಡ್ ಆರ್ಮಿ ಇಲಾಖೆ ಅಧಿಕಾರಿ ರಾಜಣ್ಣ,ವಿಶ್ವವಿದ್ಯಾಲಯ ಪ್ರಾಧ್ಯಾಪಕ ಗಜೇಂದ್ರ, ಲ್ಯಾಂಡ್ ಆರ್ಮಿ ಸೂಪರಿಡೆಂಟ್ ಇಂಜಿನಿಯರ್ ತಿಮ್ಮಾರಾಜಪ್ಪ,ಲ್ಯಾಂಡ್ ಆರ್ಮಿ ಎಇಇ ಅರುಣಕುಮಾರ,ಜೆಇ ನಾಗನಾಥ, ಮಲ್ಲಿಕಾರ್ಜುನ ನೆಲ್ಲಿ ಇದ್ದರು.

# ಡಾ.ಬಿಆರ್ ಅಂಬೇಡ್ಕರ್ ರವರ 134 ನೇ ಜಯಂತಿ ಹಾಗೂ ಬಾಬು ಜಗಜೀವನ್ ರಾಮ್‌ರವರ ಜಯಂತಿ

• ಉದಯವಾಹಿನಿ ಅರಸೀಕೆರೆ



ಅರಸೀಕೆರೆ ತಾಲೂಕಿನ ಬಾಣಾವರ ಪಟ್ಟಣದಲ್ಲಿ ದಿನಾಂಕ 4 ಭಾನುವಾರ ಬೆಳಗ್ಗೆ 11:00ಗೆ ಪ್ರವಾಸಿ ಮಂದಿರದ ಮುಂಭಾಗ ಅಂಬೇಡ್ಕರ್ ವೃತ್ತದಲ್ಲಿ ಪ್ರೊಫೆಸರ್ ಬಿ ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿ ರಿ, ಹಾಸನ ಜಿಲ್ಲೆ ಅರಸೀಕೆರೆ ತಾಲ್ಲೂಕು ಬಾಣಾವರ ಹೋಬಳಿ ಘಟಕದ ವತಿಯಿಂದ ಡಾಕ್ಟರ್ ಬಿಆರ್ ಅಂಬೇಡ್ಕರ್ ಅವರ 134 ನೇ ಜಯಂತಿ ಹಾಗೂ ಬಾಬು ಜಗಜೀವನ್ ರಾಮ್ ರವರ ಜಯಂತಿಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಅರಸೀಕೆರೆ ತಾಲ್ಲೂಕು, ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಅಧ್ಯಕ್ಷರಾದ ಎಲ್ ಮಹೇಶ್ ತಿಳಿಸಿದ್ದಾರೆ.

ಈ ಸಮಾರಂಭದಲ್ಲಿ ಅರಸೀಕೆರೆ ಕ್ಷೇತ್ರದ ಶಾಸಕ ಹಾಗೂ ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷರಾದ ಕೆಎಂ ಶಿವಲಿಂಗೇಗೌಡ . ಹಾಗೂ ಹಾಸನ ಲೋಕಸಭಾ ಸದಸ್ಯರಾದ ಶ್ರೇಯಸ್ ಪಟೇಲ್. ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಲಿದ್ದಾರೆ.



> **ಈ ಸಮಾರಂಭದ ಪ್ರಯುಕ್ತ ಶ್ರಮಜೀವಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಘದ ವತಿಯಿಂದ 24 25 ನೇ ಸಾಲಿನಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಇದರ ಹೆಚ್ಚಿನ ಮಾಹಿತಿಯನ್ನು ಕಾರ್ಮಿಕ ಬಂಧು ನಾಗರಾಜ್ ಸಿ ಜಿರವರಲ್ಲಿ ನೊಂದಾಯಿಸಿ ಕೊಳ್ಳಬೇಕು**
> 
> **-ಎಲ್. ಮಹೇಶ್**

### ಒಳ ಮೀಸಲಾತಿ ವರ್ಗೀಕರಣ ಸಮಗ್ರ ಸಮೀಕ್ಷೆ: ಗಣತಿದಾರರಿಗೆ ತರಬೇತಿ

• ಉದಯವಾಹಿನಿ ದಾಂಡೇಲಿ

ತಾಲ್ಲೂಕು ಆಡಳಿತ, ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ನ್ಯಾಯಮೂರ್ತಿ ಎಚ್.ಎನ್.ನಾಗಮೋಹನದಾಸ್ ಏಕ ಸದಸ್ಯ ವಿಚಾರಣಾ ಆಯೋಗ ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಸಮಗ್ರ ಸಮೀಕ್ಷೆಗಾಗಿ ತಾಲ್ಲೂಕುಮಟ್ಟದ ಗಣತಿದಾರರಿಗೆ ತಹಶೀಲ್ದಾರ್ ಕಾರ್ಯಾಲಯದಲ್ಲಿ ಶನಿವಾರ ತರಬೇತಿ ಕಾರ್ಯಕ್ರಮ ನಡೆಯಿತು. ತಹಶೀಲ್ದಾರ್ ಪ್ರಾಸ್ತಾವಿಕ ಮಾತನಾಡಿ, 'ಸಮಗ್ರ ಜಾತಿ ಸಮೀಕ್ಷೆಗಾಗಿ ಗಣತಿದಾರರು ಪ್ರತಿ ಕುಟುಂಬಕ್ಕೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಲಿದ್ದಾರೆ. ಇದಕ್ಕೆ ಸಂಬಂಧಿಸಿದ ವಿಧಾನ, ದಾಖಲಾತಿ ನಿರ್ವಹಣೆ, ವರ್ಗೀಕರಣ ತಿಳಿಸಲು ಈ ತರಬೇತಿ ಹಮ್ಮಿಕೊಳ್ಳಲಾಗಿದೆ. ಮೇ 5 ರಿಂದ 17 ವರೆಗೆ ಮನೆ ಮನೆಗೆ ಭೇಟಿ ನೀಡಿ ಪರಿಶಿಷ್ಟ ಜಾತಿ ಕುಟುಂಬದ ಸಮಗ್ರ ಸಮೀಕ್ಷೆ ನಡೆಸುವಂತೆ ಗಣತಿದಾರರಿಗೆ ಜವಾಬ್ದಾರಿ ನೀಡಲಾಗಿದೆ' ಎಂದರು.

ಜಿಲ್ಲಾ ತರಬೇತಿದಾರ ಶಿವಯೋಗಿ ಹಿರೇಮಠ ಹಾಗೂ ತಾಲ್ಲೂಕುಮಟ್ಟದ ತರಬೇತಿದಾರರಾದ ಉಪೇಂದ್ರ ಘೋರ್ಪಡೆ, ಅಭಯ ಎಸ್.ವಾಡ್ಕರ ಜಾತಿ ಗಣತಿ ಕುರಿತು ಸಮಗ್ರ ಮಾಹಿತಿ ನೀಡಿ, ಸಮೀಕ್ಷೆ ಕೈಪಿಡಿ ವಿತರಿಸಿ ಮಾಹಿತಿ ಸಂಗ್ರಹಿಸುವ ಬಗ್ಗೆ ತರಬೇತಿ ನೀಡಿದರು. ಹಳಿಯಾಳ ದಾಂಡೇಲಿ ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಮೋದ ಮಹಾಲೆ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸತೀಶ್ ನಾಯ್ ಭಾವಿಕೇರಿ ಮಾತನಾಡಿ, ಸಮೀಕ್ಷೆಯಲ್ಲಿ ಭಾಗವಹಿಸುವ ಶಿಕ್ಷಣ ಇಲಾಖೆ ಸಿಬ್ಬಂದಿ ಹಾಗೂ ಇತರೆ ಇಲಾಖೆ ಸಿಬ್ಬಂದಿ ಸಮೀಕ್ಷೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಬೇಕು' ಎಂದು ತಿಳಿಸಿದರು.

59 ಗಣತಿದಾರರು 6 ಮೇಲ್ವಿಚಾರಕರು ಭಾಗವಹಿಸಿದ್ದರು. ತಹಶೀಲ್ದಾರ್ ಕಚೇರಿಯ ಸಿಬ್ಬಂದಿ ಇದ್ದರು.



# ಒಳಮೀಸಲಾತಿ ಜಾರಿಗಾಗಿ ರಾಜ್ಯಾದ್ಯಂತ ಕ್ರಾಂತಿಕಾರಿ ರಥಯಾತ್ರೆ, ಸರ್ಕಾರಕ್ಕೆ ಜೂ. 9 ಗಡುವು



• ಉದಯವಾಹಿನಿ, ಚಿತ್ತಾಪುರ

ಒಳಮೀಸಲಾತಿ ಜಾರಿಗಾಗಿ ಸರ್ಕಾರಕ್ಕೆ ಜೂನ್ 9 ಗಡುವು ನೀಡಲಾಗಿದೆ ಎಂದು ಕ್ರಾಂತಿಕಾರಿ ಒಳಮೀಸಲಾತಿ ಹೋರಾಟ ಸಮಿತಿ ಅಧ್ಯಕ್ಷ ಬಿ.ಆರ್.ಭಾಸ್ಕರ್ ಪ್ರಸಾದ್ ಹೇಳಿದರು.

ಕ್ರಾಂತಿಕಾರಿ ರಥಯಾತ್ರೆಗೆ ಚಿತ್ತಾಪುರ ಪಟ್ಟಣಕ್ಕೆ ಮಾದಿಗ ಸಮಾಜದ ಮುಖಂಡರು ಸ್ವಾಗತಿಸಿದರು. ನಂತರ ಅಂಬಿಗರ ಚೌಡಯ್ಯ ಸಮುದಾಯ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಒಳಮೀಸಲಾತಿ ಜಾರಿಗಾಗಿ ಮಲೈ ಮಹದೇಶ್ವರ ಬೆಟ್ಟದಿಂದ ಪ್ರಾರಂಭವಾದ ಕ್ರಾಂತಿಕಾರಿ ರಥಯಾತ್ರೆ 16 ಜಿಲ್ಲೆಗಳಲ್ಲಿ ಸಂಚರಿಸಿದ್ದು, ಇದೀಗ ಕಲಬುರಗಿ ಜಿಲ್ಲೆಗೆ ಆಗಮಿಸಿದ್ದು, ಇಂದಿಗೆ 60 ದಿನಗಳಾಗಿದೆ. ಜೂನ್ 9 ರಂದು ಬೆಂಗಳೂರು ಬೃಹತ್ ಸಮಾವೇಶ ಮಾಡುವ ಮೂಲಕ ಸರ್ಕಾರಕ್ಕೆ ಎಚ್ಚರಿಕೆ ನೀಡಲಾಗುವುದು ಎಂದು ತಿಳಿಸಿದರು.

ಆಯೋಗದವರಿಗೆ ಕೇಳಿದರೆ ಇದು ನಮ್ಮ ಕೆಲಸವಲ್ಲ ಸರ್ಕಾರದ ಕೆಲಸ, ಸರ್ಕಾರದ ಸಿಎಂ ಅವರಿಗೆ ಕೇಳಿದರೆ ಇದು ಆಯೋಗದ ಕೆಲಸ ನಮ್ಮದು ಏನು ಇಲ್ಲ ಎಂದು ಹಾರಿಕೆ ಹಾಗೂ ದ್ವಂದ್ವ ಹೇಳಿಕೆಗಳು ನೀಡಿದ್ದಾರೆ ಎಂದು ಹೇಳಿದರು.

> **ಏಪ್ರಿಲ್ 5 ರಂದು ಬಾಬು ಜಗಜೀವನರಾಮ್ ಜಯಂತಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾತನಾಡಿ, ಒಳಮೀಸಲಾತಿ ಜಾರಿ ಮಾಡದೇ ಬಡ್ತಿ ಹಾಗೂ ನೇಮಕಾತಿ ಮಾಡುವುದಿಲ್ಲ ಎಂದು ಹೇಳಿದ್ದರು ಆದರೆ ಇವತ್ತಿಗೆ 25 ದಿನಗಳಲ್ಲಿ ಬಡ್ತಿ ನೇಮಕಾತಿಗಳು ನಡೆಯುತ್ತಿವೆ ಸಿಎಂ ತಮ್ಮ ಮಾತು ತಪ್ಪಿದ್ದಾರೆ ಈ ಮೂಲಕ ಮಾದಿಗ ಸಮಾಜಕ್ಕೆ ಅಪಮಾನ ಮತ್ತು ವಂಚನೆ ಮಾಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.**

# ರಾಜ್ಯ ಮಟ್ಟದ ಮಕ್ಕಳ ಸಾಹಿತ್ಯ -ಸಂಸ್ಕೃತಿ ಕಮ್ಮಟಕ್ಕೆ ಅದ್ದೂರಿ ಚಾಲನೆ

• ಉದಯವಾಹಿನಿ, ಚಿತ್ರದುರ್ಗ

ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್, ಸಾಣೇಹಳ್ಳಿಯ ತರಳಬಾಳು ಜಗದ್ಗುರು ಶಾಖಾ ಮಠ ಮತ್ತು ಚಿತ್ರದುರ್ಗ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ವತಿಯಿಂದ ನಾಳೆಯಿಂದ ಮೂರು ದಿನಗಳ ಕಾಲ ನಡೆಯಲಿರುವ ರಾಜ್ಯ ಮಟ್ಟದ ಮಕ್ಕಳ ಸಾಹಿತ್ಯ -ಸಂಸ್ಕೃತಿ ಕಮ್ಮಟವನ್ನು ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದ ಶಾಸಕ ಸಿ.ಎನ್. ಬಾಲಕೃಷ್ಣ ಉದ್ಘಾಟಿಸಲಿದ್ದು, ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿಯವರು ದಿವ್ಯ ಸಾನಿಧ್ಯ ಹಾಗೂ ರಾಜ್ಯಾಧ್ಯಕ್ಷರಾದ ಸಿ.ಎನ್. ಅಶೋಕ್ ಅಧ್ಯಕ್ಷತೆ ವಹಿಸುವ ಮೂಲಕ ಕಾರ್ಯಕ್ರಮಕ್ಕೆ ಅದ್ದೂರಿ ಚಾಲನೆ ದೊರೆಯಲಿದೆ ಎಂದು ಚಿತ್ರದುರ್ಗ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಯೋಗೀಶ್ ಸಹ್ಯಾದ್ರಿ, ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಜ್ಯ ಮಸಾಪ ಘಟಕವು 10 ವರ್ಷಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ ಕಳೆದ ವರ್ಷ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ರಾಷ್ಟ್ರೀಯ ಮಕ್ಕಳ ಸಾಹಿತ್ಯ ಸಾಹಿತ್ಯ ಸಮ್ಮೇಳನವನ್ನು ಯಶಸ್ವಿಯಾಗಿ ಆಯೋಜನೆ ಮಾಡಲಾಗಿತ್ತು. ಸಾಣೇಹಳ್ಳಿಯಲ್ಲಿ ಜರುಗುವ ಶಿಬಿರವು ಭಾನುವಾರ ಬೆಳಿಗ್ಗೆ 8.30 ಕ್ಕೆ ಮೆರವಣಿಗೆಯ ಮೂಲಕ




ಪ್ರಾರಂಭವಾಗುವ ಮಕ್ಕಳ ಸಾಹಿತ್ಯ ಸಂಸ್ಕೃತಿ ಕಮ್ಮಟದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಸುಮಾರು 350 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸುತ್ತಿದ್ದು, ಮೂರು ದಿನಗಳು ಸೇರಿ ವಿವಿಧ ವಿಷಯಗಳ ಪರಿಣಿತರು, ಹಿರಿಯ ಸಾಹಿತಿಗಳು ಒಟ್ಟು 30 ಜನ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಲಿದ್ದಾರೆ ಎಂದು ಯೋಗೀಶ್ ಸಹ್ಯಾದ್ರಿ ತಿಳಿಸಿದ್ದಾರೆ.

ವಿಶೇಷವಾಗಿ ಆಯೋಜನೆ ಮಾಡಲಾಗಿರುವ ಕಮ್ಮಟದಲ್ಲಿ ಮಕ್ಕಳಿಗೆ ನಾಟಕ ರಚನೆ, ಕಥೆ ಕವನ ರಚನೆ, ನೃತ್ಯ, ಹಸೆ ಚಿತ್ತಾರ ಸೇರಿದಂತೆ ಜಾನಪದ ಹಾಗೂ ಸುಗಮ ಸಂಗೀತ ತರಬೇತಿ, ಮೂಲ ಜಾನಪದ ನೃತ್ಯ, ಯಕ್ಷಗಾನ, ಹಗ್ಗದ ಮಲ್ಲಕಂಬ ಮುಂತಾದ ನಮ್ಮ ನಾಡಿನ ಅನೇಕ ಕಲೆ ಸಾಹಿತ್ಯ ಸಂಸ್ಕೃತಿಗೆ ಸಂಬಂಧಿಸಿದ ವಿಷಯಗಳ ಕುರಿತು ತಿಳಿಸಲಾಗುವುದು.

ಚಿತ್ರದುರ್ಗ ಜಿಲ್ಲೆಯಿಂದ ಒಟ್ಟು 30 ವಿದ್ಯಾರ್ಥಿಗಳು ಆಯ್ಕೆಯಾಗಿದ್ದು, ಅಪರಾಧ ಶಾಸ್ತ್ರದ ವಿಶ್ರಾಂತ ಪ್ರಾಧ್ಯಾಪಕ ಡಾ. ನಟರಾಜ್ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಲಿದ್ದಾರೆ.

ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ತಿನ ಮಹಾ ಪೋಷಕರಾದ ಆದಿಚುಂಚನಗಿರಿ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿಯವರು ಸಹ ಉಪಸ್ಥಿತರಿದ್ದು, ಚಿತ್ರದುರ್ಗ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಯೋಗೀಶ್ ಸಹ್ಯಾದ್ರಿ ಅವರು ಸಮಾರೋಪ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧ್ಯಕ್ಷರು, ರಾಜ್ಯ ಘಟಕದ ಪದಾಧಿಕಾರಿಗಳು, ಮಕ್ಕಳ ಸಾಹಿತಿಗಳು, ವಿದ್ಯಾರ್ಥಿಗಳು, ಸಾಹಿತ್ಯಾಸಕ್ತರು, ಶ್ರೀಮಠದ ಸಿಬ್ಬಂದಿ ವರ್ಗದವರು ಭಾಗವಹಿಸಲಿದ್ದಾರೆ ಎಂದು ಲೇಖಕ ಹಾಗೂ ಮಸಾಪ ಜಿಲ್ಲಾ ಅಧ್ಯಕ್ಷ ಯೋಗೀಶ್ ಸಹ್ಯಾದ್ರಿ ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

# ಅಸಮರ್ಪಕ ಗುಂಡಿಯಿಂದ ರಸ್ತೆ ಬದಿ ಕುಸಿದು ಡಾಮರು ರಸ್ತೆ ಬಿರುಕು

• ಉದಯವಾಹಿನಿ, ಸುಳ್ಯ

ತಾಲ್ಲೂಕಿನಲ್ಲಿ ನಡೆಯುತ್ತಿರುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಪೈಪು ಲೈನ್ ಕಾಮಗಾರಿಗೆ ತೆಗೆದ ಅಸಮರ್ಪಕ ಗುಂಡಿಯಿಂದ ರಸ್ತೆ ಬದಿ ಕುಸಿದು ಡಾಮರು ರಸ್ತೆ ಬಿರುಕು ಬಿಟ್ಟ ಘಟನೆ ನಡೆದಿದೆ. ಬೆಳ್ಳಾರೆಯ ಪೆರುವಾಜೆ ಸವಣೂರು ರಸ್ತೆಯ ಮಾಪ್ಲಮಜಲು ಬಳಿ ಎ. 27 ರಂದು ಸುರಿದ ಭಾರಿ ಮಳೆಗೆ ಗೌರಿಹೊಳೆಗೆ ತಾಗಿಕೊಂಡಿರುವ ರಸ್ತೆಯ ಬದಿ ಕುಸಿದು ಹೋಗಿತ್ತು. ಅಲ್ಲದೇ ಡಾಮರು ರಸ್ತೆಯು ಬಿರುಕು ಬಿಟ್ಟಿದ್ದು ಅಪಾಯದ ಸ್ಥಿತಿಯಲ್ಲಿದೆ. ಹಾನಿಯಾದ ಸ್ಥಳವನ್ನು ಸುಳ್ಯ ಕ್ಷೇತ್ರದ ಶಾಸಕಿ ಭಾಗೀರಥಿ ಮುರುಳ್ಯ ಮಂಗಳವಾರ ಭೇಟಿ ನೀಡಿದರು. ನೀರಿನ ಪೈಪ್ ಲೈನ್ ಅಳವಡಿಸಿದ ಗುತ್ತಿಗೆದಾರರ ವಿರುದ್ಧ ಗರಂ ಆದ ಶಾಸಕರು ತಕ್ಷಣ ತಾತ್ಕಾಲಿಕ ತಡೆಗೋಡೆ ನಿರ್ಮಿಸಿಕೊಡುವಂತೆ ಸೂಚಿಸಿದರು. ಅಲ್ಲದೇ ಮಳೆಗಾಲದಲ್ಲಿ ಹೊಳೆಯನೀರು ಹರಿದು ರಸ್ತೆಯು ಮುಳುಗಡೆಗೊಳ್ಳುವುದರಿಂದ ರಸ್ತೆಯ ಎತ್ತರವನ್ನು ಹೆಚ್ಚಿಸಿ ಕಾಂಕ್ರಿಟ್ ರಸ್ತೆ ನಿರ್ಮಿಸಲು ಹಾಗೂ ಶಾಶ್ವತ ತಡೆಗೋಡೆ ನಿರ್ಮಿಸಲು ಯೋಜನೆ ತಯಾರಿಸುವಂತೆ ಪಿಡಬ್ಲ್ಯುಡಿ ಇಂಜಿನಿಯರ್‌ಗೆ ಆದೇಶಿಸಿದರು.

# ಇಲ್ಲಿ 10 ದಿನಗಳಿಗೊಮ್ಮೆ ನೀರು: ಜನರನ್ನು ದೇವರೇ ಕಾಪಾಡಬೇಕು

• ಉದಯವಾಹಿನಿ, ಮುಳಗುಂದ

ಪಟ್ಟಣ ವ್ಯಾಪ್ತಿಯಲ್ಲಿ ನೀರಿನ ಬರ ಎದುರಾಗಿದೆ. ಎರಡೂರು ತಿಂಗಳಿಂದ 10 ದಿನಗಳಿಗೊಮ್ಮೆ ನೀರು ಬರುತ್ತಿದೆ. ಮನೆಯಲ್ಲಿ ಎರಡೂರು ದಿನಗಳಿಗೆ ಬಳಕೆ ಆಗುವಷ್ಟು ನೀರು ಸಂಗ್ರಹ ಇರುತ್ತದೆ. ಆದರೆ, 8-10 ದಿನಗಳಾದರೂ ನೀರು ಬರದಿದ್ದಾಗ ದೇವರೇ ನಮ್ಮನ್ನು ಕಾಪಾಡಬೇಕಿದೆ.

– ಹೀಗೆ ಆಕ್ರೋಶಭರಿತ ಅಸಹಾಯಕ ಧ್ವನಿಯಲ್ಲಿ ಹೇಳಿದರು ಸ್ಥಳೀಯರಾದ ಮಹಾಂತೇಶ. ಹತ್ತಿರದಲ್ಲಿ ಬಾವಿ, ಕೆರೆ ಇಲ್ಲ. ನಿಯಮಿತವಾಗಿ ನೀರು ಪೂರೈಸದಿದ್ದರೆ ನಾವು ಎಲ್ಲಿಗೆ ಹೋಗೋದು. ಸ್ಥಳಿಯ ಪಟ್ಟಣ ಪಂಚಾಯಿತಿ ನೀರು ಪೂರೈಕೆಯಲ್ಲಿ ಪದಪದೇ ನಿರ್ಲಕ್ಷ್ಯ ವಹಿಸುತ್ತಿದೆ. ತುಂಗಭದ್ರ ನೀರು ಸಹ ಇಲ್ಲದಾಗಿದೆ' ಎಂದು ಕಿಡಿಕಾರಿದರು.

ಕೆಲವು ದಿನಗಳಿಂದ ಪಟ್ಟಣ ವ್ಯಾಪ್ತಿಯಲ್ಲಿ ವಿದ್ಯುತ್ ಕೈ ಕೊಡುತ್ತಿರುವ ಕಾರಣದಿಂದ ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತಿದ್ದು, ಸಾರ್ವಜನಿಕರು ನಿತ್ಯ ನೀರಿಗಾಗಿ ಪರಿತಪಿಸುವ



ಸ್ಥಿತಿ ಎದುರಾಗಿದೆ. ಪಟ್ಟಣದ 19 ವಾರ್ಡ್‌ಗಳಿಗೆ ಕೊಳವೆಬಾವಿಗಳ ನೀರು ಮಾತ್ರ ಆಧಾರವಾಗಿದೆ. ಮೂರು ದಿನಕ್ಕೊಮ್ಮೆ ಸರದಿಯಲ್ಲಿ ನೀರು ಸರಬರಾಜು ಆಗುತ್ತಿತ್ತು. ಆದರೆ, ಈಗ ವಾರ-ಹತ್ತು ದಿನಗಳಾದರೂ ನೀರು ಸರಬರಾಜು ಬರುತ್ತಿಲ್ಲ ಎಂದು ಸ್ಥಳೀಯರು ದೂರಿದ್ದಾರೆ.

ಕೆಲವೊಮ್ಮೆ ನೀರು ಎತ್ತುವ ಯಂತ್ರಗಳು ಕೈಕೊಟ್ಟಾಗ, ಗಾಳಿ ಮಳೆಗೆ ರಾತ್ರಿ ವೇಳೆ ವಿದ್ಯುತ್ ಕಡಿತ ಮೇಲಿಂದ ಮೇಲೆ ಆಗುತ್ತಿದೆ. ಈ ಕಾರಣದಿಂದ ನೀರು ಸಂಗ್ರಹ ಸಾಧ್ಯವಾಗುತ್ತಿಲ್ಲ. ಪರಿಣಾಮ ನೀರೆತ್ತುವ ಯಂತ್ರಗಳು ಬಂದ್ ಆಗುತ್ತಿವೆ' ಎಂದು ನೀರು ಪೂರೈಕೆ ಸಿಬ್ಬಂದಿ ತಿಳಿಸಿದ್ದಾರೆ.

> **ಕುಡಿಯುವ ನೀರು ಮರೀಚಿಕೆ**
> 
> **ಇದಕ್ಕೆ ಪೂರೈಕೆ ಆಗುತ್ತಿದ್ದ ಕೊಳವೆಬಾವಿ ನೀರು ಕಬ್ಬಿಣಾಂಶ ಹೆಚ್ಚು ಇದೆ ಎನ್ನುವ ಕಾರಣಕ್ಕೆ ಘಟಕವನ್ನು ಸ್ಥಗಿತ ಮಾಡಲಾಗಿದೆ. ಆದರೆ ಪರ್ಯಾಯವಾಗಿ ನೀರಿನ ವ್ಯವಸ್ಥೆ ಕಲ್ಪಿಸಿಲ್ಲ. ಹೀಗಾಗಿ ಇಲ್ಲಿನ ನಿವಾಸಿಗಳಿಗೆ ಶುದ್ಧ ಕುಡಿಯುವ ನೀರು ಮರೀಚಿಕೆಯಾಗಿದೆ ಎಂದು ಸ್ಥಳೀಯರು ದೂರಿದ್ದಾರೆ.**

**ಆರಂಭಗೊಳ್ಳದ ಶುದ್ಧ ನೀರಿನ ಘಟಕ:**

ಇಲ್ಲಿನ ಡಾ.ಬಿ.ಆರ್.ಅಂಬೇಡ್ಕರ್ ನಗರದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಆರಂಭಿಸಿ ಒಂದು ವರ್ಷ ಕಳೆದಿದೆ. ಆದರೆ, ಈವರೆಗೂ ನೀರು ಪೂರೈಕೆ ಆಗದ ಹಿನ್ನೆಲೆ ಯಂತ್ರಗಳು ಹಾಳಾಗಿ, ಘಟಕ ಬಂದ್ ಆಗಿದೆ. ನೀರು ಪೂರೈಕೆಯಲ್ಲಿ ವ್ಯತ್ಯಯ ಆಗದಂತೆ ಮುಂಜಾಗ್ರತೆ ವಹಿಸಲಾಗಿದೆ.

# ಒಳಮೀಸಲು ಸಮೀಕ್ಷೆ: ಗಣತಿದಾರರಿಗೆ ತರಬೇತಿ

• ಉದಯವಾಹಿನಿ ಔರಾದ್

ಪ್ರಸಕ್ತ ಸಾಲಿನ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಕುರಿತಾದ ಸಮೀಕ್ಷೆಗೆ ಸಂಬಂಧಿಸಿದಂತೆ ನ್ಯಾಯಮೂರ್ತಿ ಎಚ್.ಎನ್.ನಾಗಮೋಹನದಾಸ ಅವರ ವಿಚಾರಣಾ ಆಯೋಗದ ನಿರ್ದೇಶನದಂತೆ ತಾಲ್ಲೂಕಿನ ಗಣತಿ ಕಾರ್ಯದ ಸಿಬ್ಬಂದಿಗೆ ತರಬೇತಿ ನೀಡಲಾಯಿತು.

ಪಟ್ಟಣದ ಪತ್ರಿಸ್ವಾಮಿ ಕಾಲೇಜಿನಲ್ಲಿ ಶುಕ್ರವಾರ 232 ಹಾಗೂ ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಶನಿವಾರ 23 ಸೇರಿದಂತೆ 255 ಗಣತಿದಾರರಿಗೆ ತರಬೇತಿ ನೀಡಲಾಯಿತು. ಪರಿಶಿಷ್ಟ ಜಾತಿಯಲ್ಲಿರುವ 101 ಉಪ ಜಾತಿಗಳ ಸಾಮಾಜಿಕ ಶೈಕ್ಷಣಿಕ ಹಾಗೂ ಆರ್ಥಿಕ ಸ್ಥಿತಿಗತಿ ದಾಖಲಿಸುವ ಸಮೀಕ್ಷೆ ಇದಾಗಿದೆ. ಔರಾದ್ ವಿಧಾನಸಭಾ ಕ್ಷೇತ್ರದ ಒಟ್ಟು 255 ಬೂತ್‌ಗಳ ಮನೆಮನೆಗೆ ಹೋಗಿ ಸಮೀಕ್ಷೆ ನಡೆಸಲಾಗುತ್ತದೆ. ಸಮೀಕ್ಷೆ ವೇಳೆ ಪರಿಶಿಷ್ಟ ಜಾತಿ ವ್ಯಕ್ತಿಯ ಒಟ್ಟು 42 ಪ್ರಶ್ನಾವಳಿ ದಾಖಲಿಸಬೇಕಾಗುತ್ತದೆ. ಈ ಕುರಿತು ಗಣತಿ ಸಿಬ್ಬಂದಿಗೆ ಪೂರ್ಣ ಮಾಹಿತಿ ನೀಡಲಾಗಿದೆ.

ಒಟ್ಟು ಮೂರು ಹಂತದಲ್ಲಿ ಸಮೀಕ್ಷೆ ನಡೆಯಲಿದೆ. ಮೇ 5 ರಿಂದ 17ರವರೆಗೆ ಮನೆ ಮನೆಗೆ ಸಮೀಕ್ಷೆ. ಮೇ 18ರಿಂದ 21ವರೆಗೆ ಆಯಾ ಬೂತ್‌ನಲ್ಲಿ ಸಮೀಕ್ಷೆ, ಮೇ 22ರಿಂದ 25ರವರೆಗೆ ಆನ್‌ಲೈನ್‌ಲ್ಲೂ ಸಮೀಕ್ಷೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ತಾಲ್ಲೂಕು ಮಟ್ಟದ ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಸಮನ್ವಯ ಸಮಿತಿ ಕಾರ್ಯದರ್ಶಿ ಅನಿಲಕುಮಾರ ಮೇಳ್ಕೊಡ್ಡಿ ತಿಳಿಸಿದರು. ಮಾಸ್ಟರ್ ಟ್ರೈನರ್ ಸೂರ್ಯಕಾಂತ ನಾಗೂರೆ, ಜಗನ್ನಾಥ ದೇಶಮುಖ, ಮಲ್ಲಿಕಾರ್ಜುನ ಟಂಕಸಾಲೆ, ಮಹಾದೇವಪ್ಪ, ಸತೀಶ ಬಿರಾದಾರ, ಸತೀಶ ಮಜಗೆ ಗಣತಿದಾರರಿಗೆ ತರಬೇತಿ ನೀಡಿದರು. ಶಿರಸ್ತೇದಾರ ವೆಂಕಟೇಶ ಹಾಜರಿದ್ದರು.



### ಮೇ 5ಕ್ಕೆ ನೂತನ ಕಛೇರಿಯ ಉದ್ಘಾಟನೆ

• ಉದಯವಾಹಿನಿ, ದಾವಣಗೆರೆ

ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ದಾವಣಗೆರೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ನೂತನ ಕಛೇರಿಯ ಉದ್ಘಾಟನಾ ಕಾರ್ಯಕ್ರಮ ಮೇ 5ರಂದು ಮಧ್ಯಾಹ್ನ 1.30ಕ್ಕೆ ಜಿಲ್ಲಾ ಪಂಚಾಯತ್ ಕಛೇರಿ ಆವರಣದಲ್ಲಿ ನಡೆಯಲಿದೆ ಎಂದು ದಾವಣಗೆರೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಶಾಮನೂರು ಟಿ. ಬಸವರಾಜ್ ತಿಳಿಸಿದರು.




ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಾದ ಶಕ್ತಿ ಯೋಜನೆ,ಗೃಹಜ್ಯೋತಿ ಯೋಜನೆ, ಅನ್ನಭಾಗ್ಯ ಯೋಜನೆ, ಗೃಹಲಕ್ಷ್ಮಿ ಯೋಜನೆ, ಮತ್ತು ಯುವನಿಧಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡುವ ಬಗ್ಗೆ ಮೇಲ್ವಿಚಾರಣೆಗಾಗಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ರಚನೆಯಾಗಿದ್ದು, ಈ ಯೋಜನೆಗಳ ಅನುಷ್ಠಾನಕ್ಕಾಗಿ ದಾವಣಗೆರೆ ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯತ್ ಕಛೇರಿ ಆವರಣದಲ್ಲಿ ನೂತನ ಜಿಲ್ಲಾ ಕಛೇರಿ ಕಾರ್ಯಾರಂಭ ಮಾಡುತ್ತಿದೆ ಎಂದು ಹೇಳಿದರು.

• ಪರಿಶಿಷ್ಟ ಜಾತಿಗೆ ಸೇರಿದ ಕುಟುಂಬಗಳು ಸಮೀಕ್ಷೆಯಿಂದ ತಪ್ಪಿ ಹೋಗದಂತೆ ನಿಗಾ ವಹಿಸಬೇಕು

# ಗಣತಿದಾರರಿಗೆ ನಿಖರ ಮಾಹಿತಿ ನೀಡಲು ಜಿಲ್ಲಾಧಿಕಾರಿ ಸತ್ಯಭಾಮ ಸಲಹೆ

• ಉದಯವಾಹಿನಿ, ಹಾಸನ



ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆಯು ಮೇ 5 ರಿಂದ 17ವರೆಗೆ ಜಿಲ್ಲೆಯಲ್ಲಿ ನಡೆಯಲಿದೆ. ಯಾವುದೇ ಗೊಂದಲವಿಲ್ಲದಂತೆ ಗಣತಿದಾರರಿಗೆ ನಿಖರ ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿ ಸತ್ಯಭಾಮ ಸಲಹೆ ನೀಡಿದರು. ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಸಮೀಕ್ಷೆ ಕುರಿತು ಶನಿವಾರ ನಡೆದ ಸಭೆಯಲ್ಲಿ ಮಾತನಾಡಿದ ಅವರು. ಗಣತಿದಾರರು ಬೆಳಿಗ್ಗೆ 6.30ರಿಂದ ಸಂಜೆ 6ರವರೆಗೆ ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ನಡೆಸಲಿದ್ದಾರೆ ಎಂದರು. ಈ ಗಣತಿ ಕಾರ್ಯ ಸುಗಮವಾಗಿ ನಡೆಯುವ ನಿಟ್ಟಿನಲ್ಲಿ, ಯಾರ ಒತ್ತಡಕ್ಕೂ ಒಳಗಾಗದೇ ನಿಸ್ಸಂಕೋಚವಾಗಿ ಜಾತಿ ಯಾವುದು ಎಂಬ ನಿಖರ ಮಾಹಿತಿ ನೀಡಬೇಕು. ಪರಿಶಿಷ್ಟ ಜಾತಿಯ ಪಟ್ಟಿಯಲ್ಲಿರುವ ಜಾತಿಗಳನ್ನು ಉಪ ವರ್ಗೀಕರಣ ಮಾಡಿ, ಒಳಮೀಸಲಾತಿ ಜಾರಿ ಮಾಡಲು ಸರ್ಕಾರ ನ್ಯಾ.ಎಚ್. ಎನ್. ನಾಗಮೋಹನ್ ದಾಸ್ ಅಧ್ಯಕ್ಷತೆಯಲ್ಲಿ ಏಕ ವ್ಯಕ್ತಿ ವಿಚಾರಣಾ ಆಯೋಗ ನೇಮಿಸಿದೆ. ಅವಶ್ಯವಿರುವ ದತ್ತಾಂಶ ಸಂಗ್ರಹಿಸಲು ಈ ಸಮೀಕ್ಷೆಯನ್ನು ಕೈಗೊಳ್ಳಲಾಗಿದೆ ಎಂದು ವಿವರಿಸಿದರು. ಪರಿಶಿಷ್ಟ ಜಾತಿಗೆ ಸೇರಿದ ಕುಟುಂಬಗಳು ಸಮೀಕ್ಷೆಯಿಂದ ತಪ್ಪಿ ಹೋಗದಂತೆ ನಿಗಾ ವಹಿಸಬೇಕು. ಪ್ರತಿ ತಾಲ್ಲೂಕಿಗೂ ನೇಮಿಸಿರುವ ನೋಡಲ್ ಅಧಿಕಾರಿಗಳು ಸಮೀಕ್ಷೆ ಕಾರ್ಯವನ್ನು ಜವಾಬ್ದಾರಿ ವಹಿಸಿ ಯಶಸ್ವಿಗೊಳಿಸುವಂತೆ ಹೇಳಿದರು.

**ಮನೆ ಮನೆಗೆ ಭೇಟಿ**

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್. ಪೂರ್ಣಿಮಾ ಮಾತನಾಡಿ, ಸಮೀಕ್ಷೆಗೆ ಸಹಕಾರ ನೀಡುವಂತೆ ಪಿಡಿಒಗಳಿಗೆ ಈಗಾಗಲೇ ನಿರ್ದೇಶನ ನೀಡಲಾಗಿದೆ ಎಂದರು.

ಹೆಚ್ಚುವರಿ ಜಿಲ್ಲಾಧಿಕಾರಿ ಕೆ.ಟಿ.ಶಾಂತಲಾ, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಚಂದ್ರಶೇಖರ್, ಸಮುದಾಯದ ಮುಖಂಡರಾದ ಕಲಿವೀರ್, ಈರಪ್ಪ, ಶಂಕರ್ ರಾಜ್, ಕೃಷ್ಣದಾಸ್ ಹಾಗೂ ಸಮುದಾಯದ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಹೆಚ್ಚುವರಿ ಜಿಲ್ಲಾಧಿಕಾರಿ ಕೆ.ಟಿ.ಶಾಂತಲಾ, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಚಂದ್ರಶೇಖರ್, ಸಮುದಾಯದ ಮುಖಂಡರಾದ ಕಲಿವೀರ್, ಈರಪ್ಪ, ಶಂಕರ್ ರಾಜ್, ಕೃಷ್ಣ ದಾಸ್ ಹಾಗೂ ಸಮುದಾಯದ ಪ್ರತಿನಿಧಿಗಳು ಉಪಸ್ಥಿತರಿದ್ದರು.

> **ಜಾತಿ ಮೂಲಜಾತಿ ನಮೂದಿಸಿ**
> 
> **ಆದಿ ಅಂಧ್ರ, ಆದಿ ದ್ರಾವಿಡ ಆದಿ ಕರ್ನಾಟಕ ಎಂದು ನಮೂದಿಸಿರುವ ಜಾತಿಗಳು ಮೂಲಜಾತಿಗಳಲ್ಲ. ಇವು ಜಾತಿಗಳ ಗುಂಪುಗಳು. ಈ ಜಾತಿಗಳನ್ನು ನಮೂದಿಸುವವರು ಕಡ್ಡಾಯವಾಗಿ ತಮ್ಮ ಜಾತಿ ಮೂಲ ಜಾತಿಯನ್ನು ನಮೂದಿಸಬೇಕು. ಅವುಗಳು ಪರಿಶಿಷ್ಟ ಜಾತಿಯ ಪಟ್ಟಿಯಲ್ಲಿರುವ 98 ಜಾತಿಗಳಲ್ಲಿ ಯಾವುದಾದರೂ ಆಗಿರಬಹುದು ಎಂದು ಸಂಪನ್ಮೂಲ ವ್ಯಕ್ತಿ ವೆಂಕಟೇಶ್ ತಿಳಿಸಿದರು. ಪರಿಶಿಷ್ಟ ಜಾತಿಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಸಮಾಜ ಕಲ್ಯಾಣ ಇಲಾಖೆಯ ಮೂಲಕ ಕೈಗೊಳ್ಳಲಾಗುತ್ತಿದೆ. ರಾಜ್ಯದ ಎಲ್ಲ ಪರಿಶಿಷ್ಟ ಜಾತಿಗಳ ಸಾಮಾಜಿಕ ಶೈಕ್ಷಣಿಕ ಮತ್ತು ಔದ್ಯೋಗಿಕ ಸ್ಥಿತಿಗತಿಗಳ ಕುರಿತು ಸಮೀಕ್ಷೆ ಮೂಲಕ ಸಮಗ್ರ ಅಂಕಿ-ಅಂಶ ಸಂಗ್ರಹಿಸಲಾಗುತ್ತಿದೆ ಎಂದು ತಿಳಿಸಿದರು. ಸಂಗ್ರಹಿಸಿದ ಅಂಕಿ-ಅಂಶಗಳ ಆಧಾರದ ಮೇಲೆ ಒಳ ಮೀಸಲಾತಿಯ ವರ್ಗೀಕರಣ ಮಾಡಲಾಗುತ್ತಿದ್ದು ಸಮೀಕ್ಷೆದಾರರು ಸರಿಯಾದ ಕೋಡ್ ಸಂಖ್ಯೆಗಳನ್ನು ಬಳಸಿ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ದೃಢಪಡಿಸಿಕೊಳ್ಳಬೇಕು ಎಂದು ತಿಳಿಸಿದರು.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಸಾಯಂಕಾಲ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ** – ನಿಮ್ಮ ಅಧಿಕ ಚೈತನ್ಯವನ್ನು ಇಂದು ಚೆನ್ನಾಗಿ ಬಳಸಿಕೊಳ್ಳಲು ಪ್ರಯತ್ನಿಸಿ. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು.

**ವೃಷಭ** – ನಿಮ್ಮ ಅಸೂಯೆ ವರ್ತನೆ ನಿಮ್ಮನ್ನು ದುಃಖಿಗಳಾಗಿಯೂ ಮತ್ತು ಖಿನ್ನರಾಗಿಯೂ ಮಾಡಬಹುದು. ಆದರೆ ಇದು ಒಂದು ಸ್ವಯಂಕೃತ ಗಾಯವಾಗಿರುವುದರಿಂದ ಇದರ ಬಗ್ಗೆ ಪ್ರಲಾಪಿಸುವ ಅಗತ್ಯವಿಲ್ಲ.

**ಮಿಥುನ** – ಆರೋಗ್ಯದ ಬಗ್ಗೆ ಸ್ವಲ್ಪ ಕಾಳಜಿ ವಹಿಸಬೇಕು. ನೀವು ನಿಮ್ಮ ಕೋಪವನ್ನು ನಿಯಂತ್ರಿಸಿ ಮತ್ತು ಕಚೇರಿಯಲ್ಲಿ ಎಲ್ಲರೊಂದಿಗೆ ಉತ್ತಮವಾಗಿ ವರ್ತಿಸಿ., ಆಗೇ ನೀವು ಮಾಡದಿದ್ದರೆ ನಿಮ್ಮ ಕೆಲಸ ಹೋಗಬಹುದು.

**ಕರ್ಕಾಟಕ** – ಯೋಗ ಮತ್ತು ಧ್ಯಾನ ನೀವು ಒಳ್ಳೆಯ ದೇಹರಚನೆ ಕಾಯ್ದುಕೊಳ್ಳಲು ಮತ್ತು ಮಾನಸಿಕವಾಗಿ ಸಧೃಢವಾಗಿರಲು ಸಹಾಯ ಮಾಡುತ್ತದೆ. ದಿನದಲ್ಲಿ ನಂತರ ಹಣಕಾಸು ಪರಿಸ್ಥಿತಿಗಳು ಸುಧಾರಿಸುತ್ತವೆ.

**ಸಿಂಹ** – ಸಮುದ್ರದಾಚೆಯ ಸಂಬಂಧಿಯಿಂದ ಒಂದು ಉಡುಗೊರೆ ನಿಮ್ಮನ್ನು ಸಂತೋಷಪಡಿಸುತ್ತದೆ. ಪ್ರಣಯ ನಿಮ್ಮ ಪ್ರೀತಿಪಾತ್ರರು ಅತಿಯಾದ ಬೇಡಿಕೆಗಳನ್ನಿಡುವುದರಿಂದ ಪ್ರಣಯದಲ್ಲಿ ಹಿನ್ನಡೆಯಿರುತ್ತದೆ.

**ಕನ್ಯಾ** – ಕುಟುಂಬದ ಸದಸ್ಯರೊಂದಿಗೆ ಕಾಲ ಕಳೆಯುವುದು ಆನಂದಮಯವಾಗಿರುತ್ತದೆ. ಒಬ್ಬ ಸುಂದರ ನಗುವಿನಿಂದ ಪ್ರೇಮಿಯ ದಿನವನ್ನು ಪ್ರಕಾಶಮಾನವಾಗಿಸಿ. ನಿಮ್ಮ ಅಭಿಪ್ರಾಯ ಕೇಳಿದಾಗ ಅದನ್ನು ವ್ಯಕ್ತಪಡಿಸಲು ನಾಚಬೇಡಿ.

**ತುಲಾ** – ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ನೀವು ಜನರು ನಿಮ್ಮಿಂದ ಏನು ಬಯಸುತ್ತಾರೆಂದು ನಿಖರವಾಗಿ ತಿಳಿದಿರುವಂತೆ ತೋರುತ್ತದೆ.

**ವೃಶ್ಚಿಕ** – ದಿನದಲ್ಲಿ ಬಿಸಿಯೇರಿದ ವಾದದ ನಂತರ, ನೀವು ನಿಮ್ಮ ಸಂಗಾತಿಯ ಜೊತೆ ಒಂದು ಅದ್ಭುತವಾದ ಸಂಜೆಯನ್ನು ಕಳೆಯುತ್ತೀರಿ. ನೀವು ನಿಮ್ಮ ದೇಶಕ್ಕೆ ಸಂಬಂಧಿಸಿದ ಕೆಲವು ಮಾಹಿತಿಗಳನ್ನು ತಿಳಿದು ಆಶ್ಚರ್ಯಪಡಬಹುದು.

**ಧನಸ್ಸು** – ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ನೀವು ನಿಮ್ಮ ಸ್ನೇಹಿತರೊಂದಿಗೆ ಎಲ್ಲಿಗಾದರೂ ಸುತ್ತಾಡಲು ಹೋಗುತ್ತಿದ್ದರೆ, ಹಣವನ್ನು ಚೆನ್ನಾಗಿ ಯೋಚಿಸಿ ಖರ್ಚು ಮಾಡಿ.

**ಮಕರ** – ಒಂದು ಲಾಭಕರ ದಿನ ಮತ್ತು ನೀವು ಧೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ನೀವು ಸ್ನೇಹಿತರೊಂದಿಗೆ ಪಾರ್ಟಿಯಲ್ಲಿ ಸಾಕಷ್ಟು ಹಣವನ್ನು ಖರ್ಚು ಮಾಡಬಹುದು.

**ಕುಂಭ** – ಒಂದು ಲಾಭಕರ ದಿನ ಮತ್ತು ನೀವು ಧೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ಹೊಸ ಒಪ್ಪಂದಗಳು ಲಾಭದಾಯಕವೆಂದು ಕಂಡರೂ ಬಯಸಿದ ಲಾಭ ತರುವುದಿಲ್ಲ.

**ಮೀನ** – ಯಾರಾದರೂ ನಿಮಗೆ ಅಸಮಾಧಾನವುಂಟುಮಾಡಬಹುದಾದರೂ ಈ ಕಿರಿಕಿರಿಗಳು ನಿಮ್ಮನ್ನು ಆವರಿಸಲು ಬಿಡಬೇಡಿ. ಈ ಅನಾವಶ್ಯಕವಾದ ಉದ್ವೇಗಗಳು ದೇಹದ ಮೇಲೆ ಖಿನ್ನತೆಯ ಪರಿಣಾಮ ಬೀರಬಹುದು.

## ಬಸವಾದಿ ಶರಣರ ತತ್ವ ಆದರ್ಶ ಪಾಲಿಸಿದರೆ ಜಯಂತಿ ಆಚರಣೆ ಸಾರ್ಥಕ



ಉದಯವಾಹಿನಿ ಚಿತ್ರ

• ಉದಯವಾಹಿನಿ ಹುಮನಾಬಾದ್

ಬಸವಣ್ಣನವರನ್ನು ಒಂದು ಜಾತಿಗೆ ಸೀಮಿತಗೊಳಿಸಬೇಡಿ. ಎಲ್ಲಾ ಜಾತಿಯವರು ಗೌರವಿಸುವಂತಹ ಸಂದೇಶವನ್ನು ಬಸವಣ್ಣ ನೀಡಿದ್ದಾರೆ' ಎಂದು ರೇಣುಕಾ ವೀರ ಗಂಗಾಧರ್ ಶಿವಾಚಾರ್ಯರು ತಿಳಿಸಿದರು. ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಬಸವ ಉತ್ಸವ ಸಮಿತಿ ವತಿಯಿಂದ ನಡೆದ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ 892ನೇ ಜಯಂತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಜಗತ್ತಿನ ಮೊದಲ ಪಾರ್ಲಿಮೆಂಟ್ ಎಂದು ಕರೆಸಿಕೊಳ್ಳುತ್ತಿದ್ದ ಅನುಭವ ಮಂಟಪದ ಮೂಲಕ ತುಳಿತಕ್ಕೆ ಒಳಗಾದ ಸಮುದಾಯಗಳಿಗೆ ಅಣ್ಣ ಬಸವಣ್ಣ ನ್ಯಾಯ ನೀಡುತ್ತಿದ್ದರು. ಜಾತಿ ಪದ್ಧತಿ ವಿರುದ್ಧ ಸಮ ಸಮಾಜ ನಿರ್ಮಾಣ ಮಾಡಲು ಮುಂದಾಗಿದ್ದರು. ಹೀಗಾಗಿ ಬಸವಣ್ಣನವರು ಸಮಾಜಕ್ಕೆ ಪ್ರೇರಣೆಯಾಗಿದ್ದಾರೆ' ಎಂದರು.

ಬಸವ ಜಯಂತಿ ನಿಮಿತ್ತ ಪಟ್ಟಣದ ಪ್ರಮುಖ ಬೀದಿಗಳಲ್ಲಿ ವಿಶ್ವಗುರು ಬಸವಣ್ಣನವರ ಮೆರವಣಿಗೆ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿತು.

ಐತಿಹಾಸಿಕ ವೀರಭದ್ರೇಶ್ವರ ರಥ ಮೈದಾನದಿಂದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತ, ಸರ್ದಾರ್ ವಲ್ಲಭಭಾಯ್ ಪಟೇಲ್ ವೃತ್ತ, ಬಾಲಾಜಿ ಮಂದಿರದ ಮಾರ್ಗವಾಗಿ ಬಸವೇಶ್ವರ ವೃತ್ತದ ವರೆಗೆ ಭವ್ಯ ಮೆರವಣಿಗೆ ಜರುಗಿತು. ಮೆವಣಿಗೆ ದಾರಿಯುದ್ದಕ್ಕೂ ಬಸವಣ್ಣನ ಹಾಡುಗಳು, ಬ್ರಾಸ್ ಬ್ಯಾಂಡಗೆ ಯುವಕರು ಹೆಜ್ಜೆ ಹಾಕಿ ಸಂಭ್ರಮಿಸಿದರು.

ದಾರಿಯುದ್ದಕ್ಕೂ ನಡೆದ ಡೊಳ್ಳು ಕುಣಿತ ಹಾಗೂ ವಿವಿಧ ಸಾಂಸ್ಕೃತಿಕಗಳು ನೋಡುಗರರ ಗಮನ ಸೆಳೆದವು. ಸಾಂಸ್ಕೃತಿಕ ನಾಯಕ ಬಸವಣ್ಣನ ನಾಡಿನಲ್ಲಿ ಜನ್ಮ ತಾಳಿದ ನಾವೇ ಪುಣ್ಯವಂತರು. ಹೀಗಾಗಿ ಬಸವಣ್ಣನವರ ಕಾಯಕ ಸಿದ್ಧಾಂತ ಹಾಗೂ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಶಿಕ್ಷಣ, ಸಂಘಟನೆ, ಹೋರಾಟ ಪರಿಕಲ್ಪನೆ ಕುರಿತು ಎಲ್ಲರೂ ಅರಿತುಕೊಂಡು ಸಮಾನತೆ ಹಾಗೂ ಸ್ವಾಭಿಮಾನದ ಬದಕು ಕಟ್ಟಿಕೊಳ್ಳಬೇಕು.

> ಐತಿಹಾಸಿಕ ವೀರಭದ್ರೇಶ್ವರ ಜಾತ್ರಾ ಮಹೋತ್ಸವದಂತೆ ಹುಮನಾಬಾದ್ ಪಟ್ಟಣದಲ್ಲಿ ಸಾಂಸ್ಕೃತಿಕ ನಾಯಕ ಬಸವಣ್ಣನವರ ಅದ್ದೂರಿಯಾಗಿ ಜಯಂತಿ ಆಯೋಜನೆ ಮಾಡಿರುವುದು ಸಂತಸ ತಂದಿದೆ. ಹುಮನಾಬಾದ್ ಬಸವೇಶ್ವರ ವೃತ್ತದಲ್ಲಿ ಬಸವಣ್ಣನವರ ಮೂರ್ತಿ ನಿರ್ಮಾಣಕ್ಕೆ ಮಾಜಿ ಸಚಿವ ರಾಜಶೇಖರ ಪಾಟೀಲ್ ತನು, ಮನ, ಧನದಿಂದ ಸಹಕಾರ ನೀಡಿದ್ದಾರೆ
> -ಡಾ. ಸಿದ್ದು ಪಾಟೀಲ್, ಶಾಸಕ, ಹುಮನಾಬಾದ್

### ಬೆಳೆ ನಷ್ಟ ಕುರಿತು ಸರ್ಕಾರದ ಮಾರ್ಗಸೂಚಿ ಅನ್ವಯ ತುರ್ತಾಗಿ ಪರಿಹಾರ ವಿತರಿಸಲು ಕ್ರಮಕ್ಕೈಗೊಳ್ಳಬೇಕು

## ಪರಿಹಾರ ವಿತರಿಸಲು ಜಿಲ್ಲಾಧಿಕಾರಿಗಳಿಂದ ಸೂಚನೆ

• ಉದಯವಾಹಿನಿ ಕಲಬುರಗಿ




ಉದಯವಾಹಿನಿ ಚಿತ್ರ

ಜಿಲ್ಲೆಯಲ್ಲಿ ಪೂರ್ವ ಮುಂಗಾರಿನಲ್ಲಿ ಹಾನಿಯಾದ ಸಿಡಿಲು ಬಡಿದು, ಮೃತಪಟ್ಟ, ಪ್ರಾಣಿಹಾನಿ ಬೆಳೆ ನಷ್ಟ ಕುರಿತು ಸರ್ಕಾರದ ಮಾರ್ಗಸೂಚಿ ಅನ್ವಯ ತುರ್ತಾಗಿ ಪರಿಹಾರ ವಿತರಿಸಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ವಿಡಿಯೋ ಕಾನ್ಪರೆನ್ಸ್ ಹಾಲಿನಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳು ತಾಲ್ಲೂಕಮಟ್ಟದ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಪರೆನ್ಸ್ ಮೂಲಕ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಕಳೆದ 15 ದಿನಗಳಿಂದ ಬಾರಿ ಗಾಳಿಯಿಂದ ಹಾನಿಯಾದ ಮನೆಗಳು ಪಂಚಾಯತ್ ರಾಜ್ ಮತ್ತು ಕಂದಾಯ ಇಲಾಖೆ ಜಂಟಿ ಸಮೀಕ್ಷೆ ಕೈಗೊಂಡ ಹಾನಿಯಾದ ಮನೆಗಳಿಗೆ ತುರ್ತು ಪರಿಹಾರ ವಿತರಿಸಬೇಕೆಂದರು ಯಾವುದೇ ಅನುದಾನ ಕೊರತೆ ಇಲ್ಲ ಎಂದರು.

ಪ್ರತಿಯೊಂದು ಹಳ್ಳಿಗಳಿಗೆ ನೀರಿನ ತೊಂದರೆಯಾಗದಂತೆ ಮುಂಜಾಗ್ರತೆಯನ್ನು ಅಧಿಕಾರಿಗಳು ಕ್ರಮವಹಿಸಬೇಕು ಎಂದರು.

> ಜಿಲ್ಲೆಯ ಮೇವಿನ ಕೊರತೆ ಬಗ್ಗೆ ಮಾಹಿತಿ ನೀಡಿದರು. ಜಿಲ್ಲೆಯ ಎಲ್ಲಾ ಜಾನುವಾರುಗಳಿಗೆ 29 ವಾರಕ್ಕೆ ಸಕಾಗುವಷ್ಟು ಮೇವು ಲಭ್ಯವಿದೆ ಏಳನೆ ಸುತ್ತಿನ ಕಾಲು ಮತ್ತು ಬಾಯಿ ಬೇನೆ ಲಸಿಕೆಯನ್ನು ಹಾಕಲಾಗಿರುತ್ತದೆ
> -ಡಾ.ಎಸ್.ಎಂ.ಬಿರಾದಾರ
> ಪಶುಸಂಗೋಪಾನ ಇಲಾಖೆ ಉಪನಿರ್ದೇಶಕರಿಗೆ

ಗುಡುಗು ಮತ್ತು ಸಿಡಿಲಿನ ಅಪಾಯಗಳನ್ನು ತಗ್ಗಿಸಲು ಸಾರ್ವಜನಿಕರ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲು ಸಭೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದ್ದರು. ಸಿಡಿಲಿನ ಕುರಿತು ಸ್ಥಳೀಯ ಜನರಲ್ಲಿ ಎಚ್ಚರಿಸಲು ಹಾಗೂ ಅಪಾಯಗಳನ್ನು ತಗ್ಗಿಸಲು ಸಲಹೆ ಸೂಚನೆಗಳನ್ನು ನೀಡ ಲು ಶಾಲಾ-ಕಾಲೇಜು ರೈತ ಸಂಪರ್ಕ ಕೇಂದ್ರಗಳು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹೆಚ್ಚಿನ ಪ್ರಚಾರಕ್ಕೈಗೊಳ್ಳಬೇಕೆಂದರು.

ಬಿಸಿಗಾಳಿ ಕುರಿತು ವಿಶೇಷವಾಗಿ ಮಧ್ಯಾಹ್ನ ಮಧ್ಯಾಹ್ನ 12 ಗಂಟೆಯಿಂದ 4 ಗಂಟೆಯವರೆಗೆ ಬಿಸಿಲಿನ ಹೋಗದನ್ನು ತಪ್ಪಿಸುವುದು ಹೆಚ್ಚಾಗಿ ಬಾಯಾರಿಕೆ ಇಲ್ಲದಿದ್ದರೂ ಸಹ ನೀರು ಕುಡಿಯಲು ಸಾಧ್ಯವಾದಲ್ಲಿ ಹಗುರವಾದ ತಿಳಿಬಣ್ಣದ ಸಡಿಲವಾದ ರಂಧ್ರವಿರುವ ಹತ್ತಿಬಟ್ಟೆ ಧರಿಸಬೇಕು.

ಮಧ್ಯಾಹ್ನ 12 ಗಂಟೆಗೆ 3 ಗಂಟೆಗೆ ಕೆಲಸ ಮಾಡುವುದು ತಪ್ಪಿಸುವುದು ಸಾರ್ವಜನಿಕರ ಗಮನಕ್ಕೆ ಅಧಿಕಾರಿಗಳು ತರಬೇಕೆಂದರು.

ರೈತ ಮತ್ತು ಕೃಷಿ ಕಾರ್ಮಿಕರು ನೀವು ಹೊಲದಲ್ಲಿ ಕೆಲಸ ಮಾಡುತ್ತಿದ್ದಾರೆ ಟೋಪಿ ಬಳಸಬೇಕೆಂದರು. ಜಾನುವಾರು ರಕ್ಷಣೆ ಗಮನ ಹರಿಸುವುದು ಸಾರ್ವಜನಿಕ ಅರಿವು ಮೂಡಿಸುವ ಕೆಲಸ ಅಧಿಕಾರಿಗಳು ಮಾಡಬೇಕೆಂದರು.

ಜಾನುವಾರ ರಕ್ಷಣೆ ಗಮನ ಹರಿಸುವ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಎಸ್. ಡಿಆರ್ಎಫ್ ಮತ್ತು ಅಗ್ನಿ ಶಾಮಕ ಇಲಾಖೆ ಸತತವಾಗಿ ಅಣುಕು ಪ್ರದರ್ಶನ ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

> ತೋಟಗಾರಿಕೆ ಇಲಾಖೆ ಬೆಳೆಯ 68 ಎಕ್ಟರ್ ಪ್ರದೇಶದ' ತೋಟಗಳು ಬೆಳೆಗಳ ಹಾನಿಯಾದ ಕುರಿತು ಪ್ರಾಥಮಿಕ ಮಾಹಿತಿ ಸಭೆಯಲ್ಲಿ ತಿಳಿಸಲಾಯಿತು. ಬೇಸಿಗೆ ಸಮಯದಲ್ಲಿ ಕುಡಿಯುವ ನೀರಿನ ಕುರಿತು ಎಲ್ಲಾ ತಹಶೀಲ್ದಾರ ಜೊತೆ ಚರ್ಚಿಸಲಾಯಿತು. ಸಧ್ಯದ ಪರಿಸ್ಥಿತಿಯ ಜಿಲ್ಲೆಯ 34 ಪಂಚಾಯತಿಗಳ ಒಟ್ಟು 40 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿದ್ದಲ್ಲಿ ಎಲ್ಲಾ ಗ್ರಾಮಗಳಲ್ಲಿ ಈಗಾಗಲೇ ನೀರು ಸರಬರಾಜು ಮಾಡಲಾಗಿದೆ -ಜಿಲ್ಲಾಧಿಕಾರಿ

**ಜಿಲ್ಲೆಯ ಮೇವಿನ ಕೊರತೆ**

## ಹಳೆಯ ಶಾಸನ ಪತ್ತೆ



ಉದಯವಾಹಿನಿ ಚಿತ್ರ

• ಉದಯವಾಹಿನಿ ದಾವಣಗೆರೆ

ಬಾದಾಮಿ ಚಾಲುಕ್ಯ ರಾಜ ಒಂದನೇ ವಿಕ್ರಮಾದಿತ್ಯನ ಕಾಲದ ಶಾಸನವೊಂದು ಜಿಲ್ಲೆಯ ನ್ಯಾಮತಿ ತಾಲ್ಲೂಕಿನ ಮಾದಾಪುರ ಕೆರೆಯಿಂದ ಸ್ಥಳೀಯರು ಜೆಸಿಬಿ ಮೂಲಕ ಮಣ್ಣನ್ನು ತೆಗೆಯುತ್ತಿದ್ದಾಗ ಪತ್ತೆಯಾಗಿದೆ.ಈ ಶಾಸನವು 1,344 ವರ್ಷಗಳಷ್ಟು ಹಳೆಯದು ಎಂದು ನಂಬಲಾಗಿದೆ. ಪುರಾತತ್ವ ಇಲಾಖೆಯ ನಿರ್ದೇಶಕರು ಈ ಸ್ಥಳವನ್ನು ಪರಿಶೀಲಿಸಿದಾಗ, ಇದು ಬಾದಾಮಿ ಚಾಲುಕ್ಯರ ಶಾಸನ ಎಂದು ತಿಳಿದುಬಂದಿದೆ.

ಸರೋವರದಲ್ಲಿ ದೊರೆತ ಶಾಸನವು 5 ಅಡಿ ಉದ್ದವಿದ್ದು, ಹಳೆಯ ಕನ್ನಡದ 17 ಸಾಲುಗಳನ್ನು ಒಳಗೊಂಡಿದೆ. ಈ ಶಾಸನವು 7 ನೇ ಶತಮಾನದಲ್ಲಿ (ಕ್ರಿ.ಶ. 654-681) ಬಾದಾಮಿ ಚಾಲುಕ್ಯರ ಮೊದಲನೇ ವಿಕ್ರಮಾದಿತ್ಯನ ಕಾಲಕ್ಕೆ ಸೇರಿದೆ ಎಂದು ಕಮಲಾಪುರದ ಪುರಾತತ್ವ, ವಸ್ತು ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆಯ ನಿರ್ದೇಶಕ ಡಾ.ಆರ್.ಶೇಜೇಶ್ವರ ಮಾಹಿತಿ ನೀಡಿದ್ದಾರೆ.

## ಜಾತಿ ಗಣತಿ: 'ಮಾದಿಗ' ಎಂದು ನಮೂದಿಸಿ: ತಿಪ್ಪಣ್ಣ ದೂಡಮನಿ

• ಉದಯವಾಹಿನಿ ಮುದ್ದೇಬಿಹಾಳ




ಉದಯವಾಹಿನಿ ಚಿತ್ರ

ಜಾತಿ ಗಣತಿಯ ನಮೂನೆಯ ಕಲಂ 61ರಲ್ಲಿ 'ಮಾದಿಗ ಸಮುದಾಯ' ಎಂದು ನಮೂದಿಸಬೇಕು ಎಂದು ಮಾದಿಗ ದಂಡೋರ ಸಮಿತಿಯ ತಾಲ್ಲೂಕ ಅಧ್ಯಕ್ಷ ತಿಪ್ಪಣ್ಣ ದೂಡಮನಿ ಹಾಗೂ ಭೀಮರಾವ ಹುಲ್ಲೂರ ಹೇಳಿದರು.

ಪಟ್ಟಣದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪರಿಶಿಷ್ಟ ಜಾತಿಯಲ್ಲಿ 101 ಜಾತಿಗಳ ಪೈಕಿ ಒಳಮೀಸಲಾತಿ ವರ್ಗೀಕರಣದ ಸಮೀಕ್ಷೆಗೆ ಬರುವ ಅಧಿಕಾರಿಗಳ ಬಳಿ ಮಾದಿಗ ಎಂದು ನಮೂದಿಸಬೇಕು. ಸರ್ಕಾರದ ಪ್ರತಿನಿಧಿಗಳು ಜಾತಿ ಸಮೀಕ್ಷೆಗೆ ಬರುತ್ತಿದ್ದು ತಪ್ಪದೆ ಆಯಾ ಗ್ರಾಮದಲ್ಲಿರುವ ವಿದ್ಯಾರ್ಥಿಗಳು, ಯುವಕರು, ಸಂಘಟನೆ ಮುಖಂಡರು ಗ್ರಾಮದ ಯಾವುದೇ ಕುಟುಂಬ ಈ ಜಾತಿ ಸಮೀಕ್ಷೆಯಿಂದ ಹೊರಗುಳಿಯದಂತೆ ಎಚ್ಚರ ವಹಿಸಬೇಕು ಎಂದರು. ಸುದ್ದಿಗೋಷ್ಟಿಯಲ್ಲಿ ಭಗವಂತ ಕಬಾಡೆ, ನೀಲಪ್ಪ ನಾಲತವಾಡ, ಸಾಬಣ್ಣ ಬಸರಕೋಡ, ರವಿ ಬಸರಕೋಡ, ಮರೆಪ್ಪ ಕುಂಟೋಜಿ, ಪರಶುರಾಮ ಬಸರಕೋಡ, ಗುರು ಚಲಮಿ, ಬಸವರಾಜ ಕೋಳೂರ, ಮಂಜುನಾಥ ತಂಗಡಗಿ, ಕಾಶಿನಾಥ ಬಸರಕೋಡ ಭಾಗವಹಿಸಿದ್ದರು

## ಗ್ರಾಮೀಣ ಭಾಗದ ಹೆಣ್ಣು ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ

• ಉದಯವಾಹಿನಿ, ಭಾಲ್ಕಿ



ಕಲ್ಯಾಣ ಕರ್ನಾಟಕ ಗ್ರಾಮೀಣ ಭಾಗದ ಹೆಣ್ಣು ಮಕ್ಕಳಿಗೆ ಆಂಗ್ಲ ಮಾಧ್ಯಮದಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶದಿಂದ ಶಾಂತಿ ವರ್ಧಕ ಶಿಕ್ಷಣ ಸಂಸ್ಥೆಯ ಅಡಿಯಲ್ಲಿ ನೂತನವಾಗಿ ಲಕ್ಷ್ಮೀಬಾಯಿ ಖಂಡ್ರೆ ಪಬ್ಲಿಕ ಸ್ಕೂಲ್ ಮುಖಾಂತರ ನೀಡಲಾಗುವುದು ಎಂದು ಸಂಸದ ಹಾಗೂ ಶಾಂತಿ ವರ್ಧಕ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಸಾಗರ ಖಂಡ್ರೆ ಹೇಳಿದರು.

ಪಟ್ಟಣದ ಅಕ್ಕಮಹಾದೇವಿ ಮಹಿಳಾ ಪದವಿ ಪೂರ್ವ ಕಾಲೇಜಿನಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಬೀದರ ಜಿಲ್ಲೆಯಲ್ಲಿ ಮೊಟ್ಟ ಮೊದಲು ಮಹಿಳೆಯರಿಗಾಗಿ ಶಿಕ್ಷಣ ಕೊಡಬೇಕೆಂದು ಡಾ. ಚನ್ನಬಸವ ಪಟ್ಟದ್ದೇವರು ಹಾಗೂ ಡಾ. ಭೀಮಣ್ಣಾ ಖಂಡ್ರೆಯವರು ಮಹಿಳೆಯರಿಗಾಗಿ ಪ್ರತ್ಯೇಕ ಮಹಿಳಾ ವಿದ್ಯಾಲಯವನ್ನು ಸ್ಥಾಪನೆ ಮಾಡಿದರು.

ಮತ್ತೆ ಇವಾಗ ನಾನು ಹೆಣ್ಣು ಮಕ್ಕಳಿಗಾಗಿ ಕಡಿಮೆ ವೆಚ್ಚದಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶದಿಂದ ಇಂಗ್ಲೀಷ ಮಾಧ್ಯಮದಲ್ಲಿ ನರ್ಸರಿಯಿಂದ ಏಳನೇ ತರಗತಿಯ ವರೆಗೆ ನುರಿತ ಅನುಭವಿ ಶಿಕ್ಷಕರನ್ನು ಕರೆತರಿಸಿ ಹೊಸ ಮಾದರಿಯಲ್ಲಿ ನೂತನ ಕಟ್ಟಡ ನಿರ್ಮಾಣ ಮಾಡಿ ಈ ಭಾಗದ ಮಹಿಳೆಯರಿಗೆ ಲಕ್ಷ್ಮೀಬಾಯಿ ಖಂಡ್ರೆ ಪಬ್ಲಿಕ ಶಾಲೆಯ ಮುಖಾಂತರ ಶಿಕ್ಷಣ ನೀಡಲಾಗುತ್ತದೆ ಎಂದು ಹೇಳಿದರು.

## ಹತ್ತು ಕುರಿ ಟ್ರ್ಯಾಕ್ಟರ್ ಭಸ್ಮ



ಉದಯವಾಹಿನಿ ಚಿತ್ರ

• ಉದಯವಾಹಿನಿ ಇಂಡಿ

ತಾಲ್ಲೂಕಿನ ಸಾಲೋಟಗಿ ಗ್ರಾಮದ ಅಪ್ಪಣ್ಣ ಸೋಮಣ್ಣ ದೊಡ್ಡಿ ಮನೆಗೆ ಆಕಸ್ಮಿಕ ಬೆಂಕಿ ಶನಿವಾರ ಬೆಳಗ್ಗೆ 7.30 ಕ್ಕೆ ತಗುಲಿದೆ. ಗುಡಿಸಲಿನಲ್ಲಿದ್ದ ಹತ್ತು ಕುರಿ ಮತ್ತು ಒಂದು ಟ್ರ್ಯಾಕ್ಟರ್, ದ್ರಾಕ್ಷಿ ಬೆಳೆಯ ಔಷಧಿಗಳು, ಹಾಗೂ ದವಸ ಧಾನ್ಯಗಳು ಸುಟ್ಟು ಭಸ್ಮಗೊಂಡಿದೆ. ಸ್ಥಳಕ್ಕೆ ಹಿರಿಯ ಪಶು ವೈದ್ಯಾಧಿಕಾರಿ ಡಾ. ರಾಜಕುಮಾರ ಅಡಕಿ ಮತ್ತು ಸಾಲೋಟಗಿ ಪಶು ವೈದ್ಯಾಧಿಕಾರಿ ಲಕ್ಷ್ಮೀಕಾಂತ ಕಟ್ಟಿಮನಿ ಭೇಟಿ ನೀಡಿದ್ದಾರೆ. ಕುರಿಗಳು ಅಂದಾಜು ಒಂದು ಲಕ್ಷ ಇಪ್ಪತ್ತು ಸಾವಿರ ಮತ್ತು ಟ್ರ್ಯಾಕ್ಟರ್ 5 ಲಕ್ಷ ರೂ ನಷ್ಟವಾಗಿದೆ. ಗ್ರಾಮ ಲೆಕ್ಕಾಧಿಕಾರಿ ಎಂ.ಆರ್.ರಾಠೋಡ ಸ್ಥಳಕ್ಕೆ ಭೇಟಿ ನೀಡಿದ್ದಾರೆ.

## ವಡಗೇರಾ ತಹಶೀಲ್ದಾರರಾಗಿ ಮಂಗಳಾ ಅಧಿಕಾರ ಸ್ವೀಕಾರ

• ಉದಯವಾಹಿನಿ ವಡಗೇರಾ



ತಾಲ್ಲೂಕಿನ ತಹಶೀಲ್ದಾರ್ ಕಾರ್ಯಾಲಯದಲ್ಲಿ ಮೊನ್ನೆಯಷ್ಟೇ ವಯೋ ನಿವೃತ್ತಿಯಿಂದ ತೆರವಾಗಿದ್ದ ತಹಶೀಲ್ದಾರ್ ಖಾಲಿ ಹುದ್ದೆಗೆ ಸರಕಾರದ ಆದೇಶದ ಮೇರೆಗೆ ಶ್ರೀಮತಿ ಮಂಗಳಾ ಮಾದರ ಅಧಿಕಾರ ವಹಿಸಿಕೊಂಡು ಅವರು ಮಾತನಾಡಿದರು. ನೂತನ ತಾಲ್ಲೂಕಿನಲ್ಲಿರುವ ಜ್ವಲಂತ ಸಮಸ್ಯೆಗಳು ಹಾಗೂ ಶಾಲಾ ಕಾಲೇಜು ಮಂಜೂರು ತಾಲ್ಲೂಕು ಕಚೇರಿಗಳ ಮಂಜೂರು ಕುರಿತಂತೆ ಇನ್ನಿತರ ಅಭಿವೃದ್ಧಿ ಕಾರ್ಯಗಳ ಕುರಿತು ಸರ್ಕಾರದ ಗಮನಕ್ಕೆ ತಂದು ತಾಲ್ಲೂಕು ಅಭಿವೃದ್ಧಿಗಾಗಿ ನಾನು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ತಹಶೀಲ್ದಾರ್ ಶ್ರೀಮತಿ ಮಂಗಳಾ ಮಾದರ್ ತಿಳಿಸಿದ್ದಾರೆ.

## ದುರಸ್ತಿಗೆ ಕೆಲಸ ಆರಂಭ


• ಉದಯವಾಹಿನಿ ಸುಳ್ಯ

ಸುಳ್ಯದಿಂದ ಆಲೆಟ್ಟಿ ಕೋಲ್ಚಾರ್ ಮೂಲಕ ಕೇರಳ ಸಂಪರ್ಕಿಸುವ ಅಂತರ್ ರಾಜ್ಯ ರಸ್ತೆಯ ನಾಗಪಟ್ಟಣ ಸೇತುವೆ ಶಿಥಿಲಗೊಂಡಿದ್ದು. ಇದನ್ನು ಮೈಕ್ರೋ ಕಾಂಕ್ರೀಟಿಕರಣ ಮೂಲಕ ದುರಸ್ತಿ ನಡೆಸಲು ಕೆಲಸ ಆರಂಭಗೊಂಡಿದೆ. ಸುಮಾರು 1966ರಲ್ಲಿ ನಿರ್ಮಿಸಿದ ಸೇತುವೆ ಇದಾಗಿದ್ದು ಹಲವು ವರ್ಷಗಳಿಂದ ಶಿಥಿಲಗೊಂಡಿದ್ದರ ಬಗ್ಗೆ ದುರಸ್ಥಿಗೆ ಕೂಗು ಕೇಳಿ ಬಂದಿತ್ತು. ಸೇತುವೆಯ ಮೇಲ್ಭಾಗದಲ್ಲಿ ಹೊಂಡಗಳು ಬಿದ್ದು ಕಬ್ಬಿಣದ ಕಂಬಿಗಳು ಕಾಣುತ್ತಿದೆ. ಅಲ್ಲಲ್ಲಿ ದೊಡ್ಡ ಗಾತ್ರದ ಹೊಂಡಗಳು ನಿರ್ಮಾಣವಾಗಿದ್ದು ಮಳೆ ಬಂದ ಸಮಯದಲ್ಲಿ ಹೊಂಡದಲ್ಲಿ ನೀರು ತುಂಬಿದ್ದರಿಂದ ದ್ವಿಚಕ್ರ ಸವಾರರು ಹೊಂಡಕ್ಕೆ ಬಿದ್ದು ಗಾಯಗೊಂಡು ಆಸ್ಪತ್ರೆಗೆ ದಾಖಲಾದ ಘಟನೆಗಳು ನಡೆದಿತ್ತು. ಸೇತುವೆ ದುರಸ್ಥಿಗೆ ಹಲವು ಬಾರಿ ಜನಪ್ರತಿನಿಧಿಗಳಿಗೆ ಮನವಿ ನೀಡಲಾಗಿತ್ತು. ಅದರಂತೆ ವಿಶೇಷ ಅನುದಾನ ಬಿಡುಗಡೆಗೊಂಡಿದ್ದು ಶಾಸಕರ ನೇತೃತ್ವದಲ್ಲಿ ಕಳೆದ ಎರಡು ತಿಂಗಳ ಹಿಂದೆ ಗುದ್ದಲಿ ಪೂಜೆಯು ನಡೆದಿತ್ತು. ಇದೀಗ ಟೆಂಡರ್ ಪ್ರಕ್ರಿಯೆ ನಡೆದು ಕಾಮಗಾರಿ ಕೆಲಸ ಪ್ರಾರಂಭಗೊಂಡಿದೆ. ಉತ್ತಮ ಗುಣಮಟ್ಟದ ಮೈಕ್ರೋ ಕಾಂಕ್ರೀಟಿಕರಣ ಮಾಡುವುದಾಗಿ ಗುತ್ತಿಗೆದಾರ ಸಂತೋಷ್ ತಿಳಿಸಿದ್ದಾರೆ.

## ನಗರದ ರಾಜಭೀದಿಗಳಲ್ಲಿ ಮೇಳಯಿಸಿದ ಶ್ರೀ ರುಕ್ಮಿಣಿ ಪಾಂಡುರಂಗ ಸ್ವಾಮಿಯವರ ಕೀರ್ತನೆ ಭಜನೆ

• ಉದಯವಾಹಿನಿ ಅರಸೀಕೆರೆ





ಉದಯವಾಹಿನಿ ಚಿತ್ರ

ಶ್ರೀ ರುಕ್ಮಿಣಿ ಪಾಂಡುರಂಗ ಸ್ವಾಮಿ ಯವರ ದಿಂಡಿ ಉತ್ಸವ ಸಮಾರಂಭವು ಬೆಳಗ್ಗೆ ಯಿಂದಲೇ ಕೀರ್ತನೆ ಭಜನೆಗಳೊಂದಿಗೆ ಪ್ರಾರಂಭವಾಗಿ ಹಾವೇರಿ ಜಿಲ್ಲೆ ಬಂಕಾಪುರದ ಭಾನುಪ್ರಕಾಶ್ ಸರ್ವದೇ ಇವರ ನೇತೃತ್ವದಲ್ಲಿ ಹಲವಾರು ಜಿಲ್ಲೆಗಳಿಂದ ಆಗಮಿಸಿದ್ದ ಕೀರ್ತನೆಕಾರರು ಮತ್ತು ವಾರ್ಕರಿಗಳ ಹರಿನಾಮ ಸ್ಮರಣೆಯಲ್ಲಿ ನೂರಾರು ಭಕ್ತರು ಸಾಕ್ಷಿಯಾದರು.

ನಂತರ ಸಂಜೆ 6 ಗಂಟೆಗೆ ಪ್ರಾರಂಭವಾದ ಶ್ರೀ ರುಕ್ಮಿಣಿ ಪಾಂಡುರಂಗ ಸ್ವಾಮಿಯವರ ಅರಸೀಕೆರೆ ನಗರದ ರಾಜಭೀದಿಗಳಲ್ಲಿ ಉತ್ಸವ ಸಾಗಿತು ನೂರಾರು ಮಂದಿ ಭಾವಸಾರ ಕ್ಷತ್ರಿಯ ಸಮಾಜದ ಸಮಾಜ ಬಾಂಧವರು ಮತ್ತು ಶ್ರೀ ರುಕ್ಮಿಣಿ ಪಾಂಡುರಂಗಸ್ವಾಮಿಯವರ ಭಕ್ತಾದಿಗಳು ಪಾಲ್ಗೊಂಡು ಕೀರ್ತನೆ ಭಜನೆಗಳೊಂದಿಗೆ ಅದ್ದೂರಿಯಾಗಿ ಸಾಗಿತು ರಾತ್ರಿ 8:00ಗೆ ಶ್ರೀ ಪಾಂಡುರಂಗ ಸ್ವಾಮಿಯವರ ಶಯನೋತ್ಸವ ಸಮಾರಂಭವು ನಡೆಯಿತು ಭಾವಸಾರ ಕ್ಷತ್ರಿಯ ಮಹಿಳಾ ಮಂಡಳಿ ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡರು

**ದಿಂಡಿ ಉತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿದ ಶಮಿವುಲ್ಲಾ:** ಅರಸೀಕೆರೆ ನಗರಸಭೆಯ ಅಧ್ಯಕ್ಷರಾದ ಎಮ್ ಶಮಿವುಲ್ಲಾ ಮತ್ತು ನಗರಸಭೆ ಉಪಾಧ್ಯಕ್ಷರಾದ ಮನೋಹರ ಮೇಸ್ತ್ರಿ ಅದ್ದೂರಿಯಾಗಿ ನಡೆದ ದಿಂಡಿ ಉತ್ಸವ ಸಮಾರಂಭದಲ್ಲಿ ಭಾಗವಹಿಸಿ ಶ್ರೀ ರುಕ್ಮಿಣಿ ಪಾಂಡುರಂಗಸ್ವಾಮಿಯವರ ಭಕ್ತಿಗೆ ಪಾತ್ರರಾದರು ಭಾವಸಾರ ಕ್ಷತ್ರಿಯ ಸಮಾಜದ ಅಧ್ಯಕ್ಷರಾದ ನರೇಶ್ ನಾಜರೆ ಕಾರ್ಯದರ್ಶಿ ಹೇಮಂತ್ ಕುಮಾರ್ ಟೈಲರ್ ಅಸೋಸಿಯೇಷನ್ ಅಧ್ಯಕ್ಷರಾದ ಲಕ್ಷ್ಮಣ್ ರಾವ್. ನಗರಸಭೆ ಅಧ್ಯಕ್ಷರಾದ ಶಮಿವುಲ್ಲಾರವರಿಗೆ ಮತ್ತು ಉಪಾಧ್ಯಕ್ಷರಾದ ಮನೋಹರ್ ಮೇಸ್ತ್ರಿ ಅವರಿಗೆ ಭಾವಸಾರ ಕ್ಷತ್ರಿಯ ದೈವ ಮಂಡಳಿ ವತಿಯಿಂದ ಸನ್ಮಾನಿಸಲಾಯಿತು.

> ಪ್ರತಿಕ್ರಿಯಿಸಿ ಮಾತನಾಡಿದ ಎಂ ಶಮಿವುಲ್ಲಾ ಈ ಹಿಂದೆ ಕ್ಷೇತ್ರದ ಶಾಸಕರು ಹಾಗೂ ಗೃಹ ಮಂಡಳಿ ಅಧ್ಯಕ್ಷರಾದ ಕೆ ಎಂ ಶಿವಲಿಂಗೇಗೌಡ ದೇವಾಲಯ ಮತ್ತು ಸಮುದಾಯ ಭವನಕ್ಕಾಗಿ ಸರ್ಕಾರದಿಂದ ಹಣ ಬಿಡುಗಡೆ ಮಾಡಿಸಿದ್ದು ಅತ್ಯಂತ ಹೆಮ್ಮೆಪಡುವ ವಿಷಯವಾಗಿದೆ ರುಕ್ಮಿಣಿ ಪಾಂಡುರಂಗ ಸ್ವಾಮಿ ದೇವಾಲಯದ ಅಭಿವೃದ್ಧಿಗೆ ಶಾಸಕ ಶಿವಲಿಂಗೇಗೌಡರನ್ನು ಹೊರತುಪಡಿಸಿದರೆ ಬೇರೆ ಯಾರು ಸಹಾಯ ಮಾಡಿರುವುದಿಲ್ಲ ಇದು ಅತ್ಯಂತ ಹೆಮ್ಮೆಯ ವಿಷಯವಾಗಿದೆ ಬಾಕಿ ಇರುವ ಕೆಲಸ ಕಾರ್ಯಗಳಿಗೆ ಶಾಸಕ ಶಿವಲಿಂಗೇಗೌಡರ ಮನವೊಲಿಸಿ ಸರ್ಕಾರದಿಂದ ಆರ್ಥಿಕ ಸಹಾಯ ಮಾಡಲು ಪ್ರಯತ್ನಿಸಲಾಗುವುದು -ಎಮ್ ಶಮಿವುಲ್ಲಾ, ನಗರಸಭೆ ಅಧ್ಯಕ್ಷ

### ಅಧಿವೇಶನದಲ್ಲಿ ಜಿಲ್ಲೆಯ ಏತ ನೀರಾವರಿ ಯೋಜನೆ

## ಅನುಮೋದನೆಗೊಂಡ ಸಮಗ್ರ ಮಾಹಿತಿ ನೀಡಲು ಒತ್ತಾಯ: ಪಾಟೀಲ

• ಉದಯವಾಹಿನಿ, ಚಿಂಚೋಳಿ




ಉದಯವಾಹಿನಿ ಚಿತ್ರ

ಕಲಬುರ್ಗಿ ಜಿಲ್ಲೆಯಲ್ಲಿ ಕಳೆದ ಅಧಿವೇಶನದಲ್ಲಿ ಏತ ನೀರಾವರಿ ಯೋಜನೆಗಳು ಅನುಮೋದನೆಗೊಂಡ ಯೋಜನೆಗಳ ಅನುದಾನವನ್ನು ಬಿಡುಗಡೆಗೊಂಡ ಸಮಗ್ರ ಮಾಹಿತಿ ನೀಡುವಂತೆ ಮುಲ್ಲಾಮಾರಿ ಏತ ನೀರಾವರಿ ಅಭಿವೃದ್ಧಿ ಸಮಿತಿ ಅಧ್ಯಕ್ಷ ಶಿವಾನಂದ ಮಾಲಿ ಪಾಟೀಲ್ ಒತ್ತಾಯಿಸಿದರು.

ತಾಲ್ಲೂಕಿನ ಮುಲ್ಲಾಮಾರಿ ಯೋಜನೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಮೂಲಕ ಐನಾಪೂರ ಏತ ನೀರಾವರಿ ಯೋಜನೆಯು ಅಧಿವೇಶನದಲ್ಲಿ ಅನುಮೋದನೆಗೊಂಡಿದ್ದು ಅದರ ಸಮಗ್ರ ಮಾಹಿತಿ ಹಾಗೂ ಜಿಲ್ಲೆಯ ನೀರಾವರಿ ಯೋಜನೆಗಳಿಗೆ ಅನುದಾನ ಬಿಡುಗಡೆ ಕುರಿತು ಸಮಗ್ರ ಮಾಹಿತಿ ನೀಡುವಂತೆ ಮುಖ್ಯ ಅಭಿಯಂತರರು ಕರ್ನಾಟಕ ನೀರಾವರಿ ನಿಯಮಿತ ನಿಗಮಕ್ಕೆ ಮತ್ತು ಉಸ್ತುವಾರಿ ಸಚಿವರಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ. ಕಳೆದ ಅಧಿವೇಶನದಲ್ಲಿ ಸೇಡಂ ಕ್ಷೇತ್ರದ ಯಡ್ಡಳ್ಳಿ ತರ್ನಳ್ಳಿ,ಚಿಂಚೋಳಿ ಐನಾಪೂರ ಏತ ನೀರಾವರಿ, ಬೀದರನ ಮೆಹಕರ ಏತ ನೀರಾವರಿ ಯೋಜನೆಗಳು ಸುಧಿರ್ಘ ಚರ್ಚೆ ನಡೆಸಿ ಅಧಿವೇಶನದಲ್ಲಿ ಅನುಮೋಧಿಸಿ ಅನುದಾನ ಘೋಷಿಸಿ ಮೀಸಲಿಟ್ಟು ಅನುಷ್ಠಾನಕ್ಕಾಗಿ ಆದೇಶ ಹೊರಡಿಸಲಾಗಿತ್ತು.

**ಎಚ್ಚರಿಕೆ ಮೂಲಕ ಮನವಿ**

ಆದೇಶದಂತೆ ನೀರಾವರಿ ಯೋಜನೆಗಳ ಅನುದಾನ ಬಿಡುಗಡೆಗೊಂಡಿರುವ ಕ್ರೀಯಾಯೋಜನೆಯಂತೆ ಒಂದೆರಡು ದಿನಗಳಲ್ಲಿ ಸಮಗ್ರ ಮಾಹಿತಿ ನೀಡುವಂತೆ ಕೋರಲಾಗಿದೆ ಒಂದು ವೇಳೆ ಮಾಹಿತಿ ನೀಡದೆ ಇದ್ದಲ್ಲಿ ಈ ಭಾಗದ ರೈತಾಪಿ ವರ್ಗದವರು ಸೇರಿಕೊಂಡು ಉಗ್ರ ಹೋರಾಟಕ್ಕೆ ಸಿದ್ಧರಾಗಬೇಕಾಗುತ್ತದೆ ಎಂದು ಎಚ್ಚರಿಕೆ ಮೂಲಕ ಮನವಿ ಸಲ್ಲಿಸಲಾಯಿತು.

## ಮೂಡಿಗೆರೆ: ಚೆಕ್‌ಪೋಸ್ಟ್‌ಗಳಲ್ಲಿ ವಾಹನ ತಪಾಸಣೆ ತೀವ್ರ

• ಉದಯವಾಹಿನಿ ಮೂಡಿಗೆರೆ



ಉದಯವಾಹಿನಿ ಚಿತ್ರ

ಮಂಗಳೂರು ಬಜಪೆ ಸಮೀಪ ಹಿಂದುತ್ವವಾದಿ ಕಾರ್ಯಕರ್ತ ಸುಹಾಸ್ ಶೆಟ್ಟಿ ಹತ್ಯೆಯಾದ ಹಿನ್ನೆಲೆಯಲ್ಲಿ ತಾಲ್ಲೂಕಿನಲ್ಲೂ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿದ್ದು, ವಿವಿಧ ಚೆಕ್‌ಪೋಸ್ಟ್‌ಗಳಲ್ಲಿ ಪೊಲೀಸರು ವಾಹನ ತಪಾಸಣೆಯನ್ನು ತೀವ್ರಗೊಳಿಸಿದ್ದಾರೆ.

ತಾಲ್ಲೂಕಿನಿಂದ ಕರಾವಳಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ಹೆದ್ದಾರಿಯಾದ ವಿಲ್ಲುಪುರಂ - ಮಂಗಳೂರು ಹೆದ್ದಾರಿಯಲ್ಲಿ ಕೊಟ್ಟಿಗೆಹಾರ ಚೆಕ್‌ಪೋಸ್ಟ್‌ನಲ್ಲಿ ತಪಾಸಣೆ ಚುರುಕುಗೊಳಿಸಲಾಗಿದ್ದು, ಕರಾವಳಿ ಭಾಗದಿಂದ ಜಿಲ್ಲೆಯನ್ನು ಪ್ರವೇಶಿಸುವ ವಾಹನಗಳ ತಪಾಸಣೆ ಹಾಗೂ ಮಾಹಿತಿ ಸಂಗ್ರಹ ಮಾಡಲಾಗುತ್ತಿದೆ. ಇದೇ ಹೆದ್ದಾರಿಯ ಮುತ್ತಿಗೆಪುರದ ಬಳಿಯೂ ವಾಹನ ತಪಾಸಣೆ ಮಾಡಲಾಗುತ್ತಿದೆ. ಹೆದ್ದಾರಿಯಲ್ಲಿ ಪೊಲೀಸ್ ಗಸ್ತು ವಾಹನಗಳು ತಿರುಗುತ್ತಿದ್ದು, ಘಾಟಿ ಪ್ರದೇಶದಲ್ಲೂ ವಾಹನಗಳ ಮೇಲೆ ನಿಗಾ ಇರಿಸಲಾಗಿದೆ. ತಾಲ್ಲೂಕಿನ ಕನ್ನಾಪುರ ಗ್ರಾಮದ ಬಳಿಯೂ ವಾಹನ ತಪಾಸಣೆ ಮಾಡಲಾಗುತ್ತಿದ್ದು, ಅಹಿತಕರ ಘಟನೆಗಳು ನಡೆಯದಂತೆ ಪೊಲೀಸ್ ಇಲಾಖೆ ನಿಗಾವಹಿಸಿದೆ.

ನಮ್ಮ ಗಡಿಭಾಗವು ಶಾಂತಿ ಹಾಗೂ ಕಾನೂನು ಸುವ್ಯವಸ್ಥೆಗೆ ಮಾದರಿ ಆಗಬೇಕು. ಯಾವುದೇ ಕಾನೂನು ಬಾಹಿರ ಚಟುವಟಿಕೆಗಳು ಜಿಲ್ಲೆಗೆ ಪ್ರವೇಶಿಸದಂತೆ ನೋಡಿಕೊಳ್ಳುವುದು ನಮ್ಮ ಜವಾಬ್ದಾರಿಯಾಗಿದ್ದು, ಮೇಲಧಿಕಾರಿಗಳ ನಿರ್ದೇಶನದಂತೆ ವಾಹನಗಳ ತಪಾಸಣೆ ಮಾಡಲಾಗುತ್ತಿದೆ' ಎಂದು ಬಣಕಲ್ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ರೇಣುಕಾ ಹೇಳಿದರು.

### 9 ಗ್ರಾಮಗಳ 78 ಕೆರೆಗಳನ್ನು ತುಂಬಿಸುವ 116.55 ಕೋಟಿ ವೆಚ್ಚದ ಹಿರೇಕಾಂಶಿ ಏತ ನೀರಾವರಿ ಯೋಜನೆ ಲೋಕಾರ್ಪಣೆ

## ಏತ ನೀರಾವರಿ, ವಿದ್ಯುತ್ ಗ್ರಿಡ್: ಮುಖ್ಯಮಂತ್ರಿ ಸಿದರಾಮಯ್ಯ ಉದ್ಘಾಟನೆ ಇಂದು

• ಉದಯವಾಹಿನಿ ಹಾನಗಲ್

ಮುಖ್ಯಮಂತ್ರಿ ಸಿದ್ದರಾಮಯ್ಯ ಮೇ 4ರಂದು ವಿವಿಧ ಯೋಜನೆಗಳನ್ನು ಉದ್ಘಾಟಿಸಲಿದ್ದು, ಈ ಪೈಕಿ ಬಾಳಂಬೀಡ ಏತ ನೀರಾವರಿ ಮತ್ತು ಹಿರೇಕಾಂಶಿ ಏತ ನೀರಾವರಿ ಯೋಜನೆಗಳು ಪ್ರಮುಖವಾಗಿವೆ.

ತಾಲ್ಲೂಕಿನ ಜೀವನದಿ ವರದಾದಿಂದ 72 ಗ್ರಾಮಗಳ ಒಟ್ಟು 162 ಕೆರೆಗಳನ್ನು ತುಂಬಿಸುವ 418.69 ಕೋಟಿ ವೆಚ್ಚದ ಮಹತ್ವಾಕಾಂಕ್ಷಿ ಬಾಳಂಬೀಡ ಏತ ನೀರಾವರಿ ಯೋಜನೆ ಹಾಗೂ 9 ಗ್ರಾಮಗಳ 78 ಕೆರೆಗಳನ್ನು ತುಂಬಿಸುವ 116.55 ಕೋಟಿ ವೆಚ್ಚದ ಹಿರೇಕಾಂಶಿ ಏತ ನೀರಾವರಿ ಯೋಜನೆ ಲೋಕಾರ್ಪಣೆ ಮಾಡಲಿದ್ದಾರೆ.

ಈ ಯೋಜನೆಗಳಿಂದ ಜನ, ಜಾನುವಾರುಗಳಿಗೆ ಕುಡಿಯುವ ನೀರು ಪೂರೈಕೆ ಹಾಗೂ ಕೃಷಿ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಪೂರೈಸುವ ಜೊತೆಗೆ ಕೆರೆಗಳನ್ನು ತುಂಬಿಸಿ ಅಂತರ್ಜಲ ಮಟ್ಟ ಹೆಚ್ಚಿಸಲು ಅನುಕೂಲವಾಗಿದೆ.

29 ಕೋಟಿ ವೆಚ್ಚದಲ್ಲಿ ತಾಲ್ಲೂಕಿನ 14 ಗ್ರಾಮಗಳಿಗೆ ಸಮರ್ಪಕ ವಿದ್ಯುತ್ ಪೂರೈಸುವ ಬಾಳಂಬೀಡದ 110 ಕೆವಿ ಸಾಮರ್ಥ್ಯದ ವಿದ್ಯುತ್ ಗ್ರಿಡ್ ಉದ್ಘಾಟನೆಗೊಳ್ಳುತ್ತಿದ್ದು, ಒಟ್ಟು 535 ಟಿ.ಸಿಗಳಿಂದ 1500ಕ್ಕಿಂತ ಹೆಚ್ಚು ಕೃಷಿ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆಯಾಗಲಿದೆ. ಇದರಿಂದ ಬಹಳ ವರ್ಷಗಳ ಬೇಡಿಕೆ ಈಡೇರಿದಂತಾಗಿದೆ.

ಪಿಡಬ್ಲುಡಿ ವತಿಯಿಂದ 5 ಕೋಟಿ ವೆಚ್ಚದಲ್ಲಿ ಹಾನಗಲ್ ಪಟ್ಟಣದಲ್ಲಿ ನಿರ್ಮಿಸಲಾಗಿರುವ ಸರ್ಕಾರಿ ಕಚೇರಿಗಳ ಸಂಕೀರ್ಣ, ಪುರಸಭೆಯ ಮೇಲ್ವಿಚಾರಣೆಯಲ್ಲಿ 87 ಲಕ್ಷ ವೆಚ್ಚದಲ್ಲಿ ನಿರ್ಮಾಣಗೊಂಡ ಇಂದಿರಾ ಕ್ಯಾಂಟೀನ್, 2.5 ಕೋಟಿ ವೆಚ್ಚದಲ್ಲಿ ಅಕ್ಕಿಆಲೂರಿನಲ್ಲಿ ನಿರ್ಮಾಣಗೊಂಡ ಪ್ರವಾಸಿ ಮಂದಿರ, ಕೃಷಿ ಮಾರಾಟ ಇಲಾಖೆಯಿಂದ 2 ಕೋಟಿ ವೆಚ್ಚದಲ್ಲಿ ಅಕ್ಕಿಆಲೂರು ಹಾಗೂ ಹಾನಗಲ್ ಎಪಿಎಂಸಿ ಪ್ರಾಂಗಣದಲ್ಲಿ ನಿರ್ಮಾಣಗೊಂಡ ಉಗ್ರಾಣ, ವಾಣಿಜ್ಯ ಮಳಿಗೆಗಳು ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಉದ್ಘಾಟಿಸಲಿದ್ದಾರೆ.



ಉದಯವಾಹಿನಿ ಚಿತ್ರ

**ಬಹಳ ವರ್ಷಗಳ ಬೇಡಿಕೆ ಈಡೇರಿಕೆ**

ಕುಡಿಯುವ ನೀರಿನ ಬವಣೆ ತಪ್ಪಿಸಲು ಗಡಿ ಗ್ರಾಮ ಕೂಡಲ, ಕೇಂದ್ರಿತ ಬಹುಗ್ರಾಮ ನದಿ ನೀರು ಸರಬರಾಜು ಪುನಶ್ಚೇತನ ಯೋಜನೆಗೆ 25 ಕೋಟಿ ವೆಚ್ಚದಲ್ಲಿ ಅಡಿಗಲ್ಲು ಹಾಕಲಾಗುತ್ತಿದೆ. ಕೂಡಲ, ಹರವಿ, ಹರನಗಿರಿ, ಅಲ್ಲಾಪುರ, ನರೇಗಲ್, ವರ್ದಿ ಸೇರಿದಂತೆ ಆ ಬಾಗದ ಗ್ರಾಮಗಳಿಗೆ 16.500ಕ್ಕೂ ಹೆಚ್ಚು ಜನರಿಗೆ ಅನುಕೂಲ ಆಗಲಿದೆ. ಮಳೆಗಾಲದಲ್ಲಿ ಹಾನಗಲ್ ನಗರದ ಅನಿಕೆರೆ ಭರ್ತಿಯಾಗಿ ಹರಿಯುವ ನೀರು ನೂರಾನಿ ಗಲ್ಲಿ, ಸುಣಗಾರ ಓಣಿ, ಸುರಳೇಶ್ವರ ರಸ್ತೆ, ಕಮಾಟಗೇರಿ, ಕಲ್ಲಹಕ್ಕಲ ಮಾರ್ಗವಾಗಿ ಆಚಗೇರಿ ಕೆರೆವರೆಗೆ ಹರಿದು ಆ ಭಾಗದ ಮನೆಗಳಿಗೆ ನುಗ್ಗಿ ಅವಾಂತರ ಸೃಷ್ಟಿಸುತ್ತದೆ. ಇದನ್ನು ತಪ್ಪಿಸಲು ಅನಿಕೆರೆಯಿಂದ ಅಚಗೇರಿ ಕೆರೆಯವರೆಗೆ 2.14 ಕಿ.ಮೀ. ಉದ್ದದ ಸಿಸಿ ರಾಜಕಾಲುವೆ ನಿರ್ಮಾಣಕ್ಕೆ 5 ಕೋಟಿ ವೆಚ್ಚದಲ್ಲಿ ಶಂಕುಸ್ಥಾಪನೆ ನೆರವೇರಿಸಲಾಗುತ್ತಿದೆ.

ಹಾನಗಲ್‌ನ ಕುಮಾರೇಶ್ವರ ನಗರದಲ್ಲಿ ಮಳೆ ನೀರು ನುಗ್ಗುತ್ತಿದ್ದು, ಇದನ್ನು ತಪ್ಪಿಸಲು 52 ಲಕ್ಷ ವೆಚ್ಚದ ಸಿ.ಸಿ ದೊಡ್ಡ ಚರಂಡಿ ನಿರ್ಮಾಣ ಕಾಮಗಾರಿ, ಬಾಳಂಬೀಡ ಗ್ರಾಮದಲ್ಲಿ 89 ಲಕ್ಷ ವೆಚ್ಚದಲ್ಲಿ ಮಲ ತ್ಯಾಜ್ಯ ನಿರ್ವಹಣಾ ಘಟಕ ನಿರ್ಮಾಣ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

> ಶಿಲಾನ್ಯಾಸ ಇಂದು ಹಾನಗಲ್, ಜಿಲ್ಲಾಡಳಿತ ಕೆಪಿಟಿಸಿಎಲ್ ಕೆಎನ್‌ಎನ್‌ಎಲ್ ವತಿಯಿಂದ ಮೇ 4ರಂದು ಬೆಳಗ್ಗೆ 11 ಗಂಟೆಗೆ ತಾಲ್ಲೂಕಿನ ಅಕ್ಕಿ ಆಲೂರಿನ ಎಪಿಎಂಸಿ ಆವರಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನಾ ಸಮಾರಂಭ ನಡೆಯಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಲಿದ್ದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ ಸೇರಿದಂತೆ ಸಚಿವರು ಶಾಸಕರು ಅಧಿಕಾರಿಗಳು ಭಾಗವಹಿಸಲಿದ್ದಾರೆ.

## • ಟ್ರಂಪ್ ಬೆನ್ನಲ್ಲೇ ಮುಸ್ಲಿಂ ರಾಷ್ಟ್ರಗಳ ಹಿಂದೆ ಬಿದ್ದ ಪಾಕ್ • ಯುದ್ಧ ನಿಲ್ಲಿಸಿ ಅಂತಾ ಗೋಳಾಟ

# ಭಾರತದ ಪ್ರತೀಕಾರದ ಶಪಥಕ್ಕೆ ಬೆಚ್ಚಿದ ಪಾಕಿಸ್ತಾನ: ಮುಸ್ಲಿಂ ರಾಷ್ಟ್ರಗಳಿಗೆ ದುಂಬಾಲು

**ಹೊಸದಿಲ್ಲಿ:** ಪಹಲ್ಗಾಮ್ ದಾಳಿಯ ಪ್ರತೀಕಾರಕ್ಕೆ ಭಾರತ ಶಪಥ ಮಾಡಿರುವುದನ್ನು ಕಂಡು ಪಾಕಿಸ್ತಾನ ಕಂಗಾಲಾಗಿದೆ. ಹೇಗಾದ್ರೂ ಮಾಡಿ ತನ್ನ ಮೇಲೆ ಭಾರತದ ಸಂಭಾವ್ಯ ದಾಳಿಯನ್ನು ತಪ್ಪಿಸಬೇಕು ಅಂತಾ ಪಾಕಿಸ್ತಾನ ಜಗತ್ತಿನ ಮುಂದೆ ಅಂಗಲಾಚುತ್ತಿದೆ.

ಮೊನ್ನೆ ಮೊನ್ನೆಯಷ್ಟೇ ಟ್ರಂಪ್ ಮುಂದೆ ನಮಗೆ ಭಾರತದಂತಹ ದೊಡ್ಡ ದೇಶದ ಮುಂದೆ ಯುದ್ಧ ಮಾಡಲು ಆಗಲ್ಲ, ನೀವು ಶಾಂತಿ ಸ್ಥಾಪನೆಗೆ ಪ್ರಯತ್ನಿಸಿ ಎಂದು ಗೋಗರೆದಿತ್ತು. ಇದರ ಬೆನ್ನಲ್ಲೇ ಈಗ ಮುಸ್ಲಿಂ ರಾಷ್ಟ್ರಗಳಿಗೆ ದುಂಬಾಲು ಬಿದ್ದಿದ್ದು, ನಿಮ್ಮ ಪ್ರಭಾವ ಬಳಸಿ ಭಾರತ ಯುದ್ಧ ಮಾಡದಂತೆ ತಡೆಯಿರಿ ಎಂದು ಕೇಳಿಕೊಳ್ಳುತ್ತಿದೆ. ಇತ್ತ ಭಾರತ ಪಾಕ್‌ನ ಯಾವುದೇ ಮನವಿಗೆ ಮಣಿಯದೇ ಪ್ರತೀಕಾರದಿಂದ ಹಿಂದೆ ಸರಿಯಲ್ಲ ಎಂದಿದ್ದು, ಅದರ ಮೇಲೆ ಒಂದೊಂದೆ ಅಸ್ತ್ರವನ್ನು ಪ್ರಯೋಗಿಸುತ್ತಿದೆ. ರಾಜತಾಂತ್ರಿಕ ಅಸ್ತ್ರ, ಜಲ ಅಸ್ತ್ರ ಪ್ರಯೋಗಿಸಿದ್ದ ಭಾರತ ಈಗ ಆರ್ಥಿಕ ಅಸ್ತ್ರವನ್ನು ಬಳಸಲು ಮುಂದಾಗಿರುವುದು ಪಾಕ್ ಭವಿಷ್ಯ ಮಸುಕಾಗಿರುವುದು ಸ್ಪಷ್ಟ.

ಹೌದು, ಪಹಲ್ಗಾಮ್ ದಾಳಿಯಲ್ಲಿ ಪಾಕಿಸ್ತಾನದ ಕೈವಾಡ ಇರುವುದು ಸ್ಪಷ್ಟವಾದ ಬೆನ್ನಲ್ಲೇ ಭಾರತ ತನ್ನ ಪ್ರತೀಕಾರದ ಹೆಜ್ಜೆಗಳನ್ನು ತೀವ್ರಗೊಳಿಸಿದೆ. ಈಗಾಗಲೇ ಭಾರತ ಈ ಸಲ ನಮ್ಮನ್ನು ಬಿಡಲ್ಲ ಎಂದು ಅರಿತಿರುವ ಪಾಕಿಸ್ತಾನ ಹೇಗಾದರೂ ಮಾಡಿ ಯುದ್ಧವನ್ನು ನಿಲ್ಲಿಸಬೇಕು ಎಂದು ತನ್ನೆಲ್ಲಾ ಶಕ್ತಿಯನ್ನು ಬಳಸುತ್ತಿದೆ. ಭಾರತದ ಮೇಲೆ ಜಾಗತಿಕ ಒತ್ತಡ ಸೃಷ್ಟಿಸಲು ಪ್ರಯತ್ನಿಸುತ್ತಿದೆ. ಮೊನ್ನೆ ಟ್ರಂಪ್ ಮುಂದೆ ಅಂಗಲಾಚಿದ್ದ ಪಾಕ್, ನಿನ್ನೆ ಮುಸ್ಲಿಂ ದೇಶಗಳ ಮುಂದೆ ಹೇಗಾದರೂ ಮಾಡಿ ಯುದ್ಧ ನಿಲ್ಲಿಸಿ ಅಂತಾ ಗೋಗರೆಯುತ್ತಿದೆ. ವಿಶ್ವಸಂಸ್ಥೆಯಲ್ಲಿ ಪಾಕಿಸ್ತಾನದ ಖಾಯಂ ಪ್ರತಿನಿಧಿ ಅಸಿಮ್ ಇಫ್ತಿಕರ್ ಅಹ್ಮದ್, ಭಾರತದ ಚಟುವಟಿಕೆಗಳನ್ನು ಗಮನಿಸಿದರೆ ಶೀಘ್ರವೇ ದಾಳಿ ನಡೆಯಬಹುದು. ಆದ್ದರಿಂದ ಅಂತಾರಾಷ್ಟ್ರೀಯ ಸಮುದಾಯ ಭಾರತ ಹಾಗೂ ಪಾಕಿಸ್ತಾನದ ನಡುವೆ ಹಸ್ತಕ್ಷೇಪ ಮಾಡಿ ಅಂತಾ ಕೇಳಿದ್ದಾರೆ.



ವಿದೇಶಿ ನೆರವು ಬಂದ್

**ಐಎಂಎಫ್ ನಿಧಿಯನ್ನು ತಡೆಯಲು ಭಾರತ ಪ್ಲಾನ್:** ಇನ್ನು, ಎರಡನೆಯದಾಗಿ, ಅಂತಾರಾಷ್ಟ್ರೀದಯ ಹಣಕಾಸು ನಿಧಿ ಅಂದ್ರೇ ಐಎಂಎಫ್‌ನಿಂದ ಪಾಕಿಸ್ತಾನ ನಿರೀಕ್ಷಿಸುತ್ತಿರುವ 7 ಶತಕೋಟಿ ಡಾಲರ್ ನೆರವಿಗೆ ತಡೆಯೊಡ್ಡಲು ತಂತ್ರ ಹೂಡಿದೆ. ಕಳೆದ ವರ್ಷದ ಜುಲೈನಲ್ಲಿ ಅಂತಿಮಗೊಂಡಿರುವ 3 ವರ್ಷಗಳ ಈ ನೆರವಿನ ಪ್ಯಾಕೇಜ್ ಪಾಕ್ ಕೈಸೇರಿದರೆ ಅದನ್ನು ಉಗ್ರರ ಚಟುವಟಿಕೆ ಗಳಿಗೆ ಬಳಸುವ ಮೂಲಕ ದುರ್ಬಳಕೆ ಮಾಡಲಿದೆ ಎಂದು ಭಾರತ ಆರೋಪಿಸಿದೆ. ವಿದೇಶಿ ನೆರವು ಬಂದ್ ಆದ್ರೆ ಪಾಕಿಸ್ತಾನದ ಹೃದಯವನ್ನೇ ಕತ್ತರಿಸಿ. ವಿದೇಶಗಳ ಸಹಾಯ ಇಲ್ಲದೇ ಬದುಕುವ ಸ್ಥಿತಿಯಲ್ಲಿ ಪಾಕಿಸ್ತಾನ ಸದ್ಯಕ್ಕಂತೂ ಇಲ್ಲ. ಇದರಿಂದ ಪಾಕಿಸ್ತಾನದ ಮೇಲೆ ಭಾರತ ಆರ್ಥಿಕ ಪ್ರಹಾರಕ್ಕೆ ಸಿದ್ಧವಾಗಿದೆ.

ಈಗಾಗಲೇ ತನ್ನದೇ ತಯಾರಿಯನ್ನು ಭಾರತದ ಪಡೆಗಳು ನಡೆಸಿದ್ದು, ಉತ್ತರ ಪ್ರದೇಶದ ಗಂಗಾ ಎಕ್ಸ್‌ಪ್ರೆಸ್ ವೇನಲ್ಲಿ ಯುದ್ಧ ವಿಮಾನಗಳ ಲ್ಯಾಂಡಿಂಗ್, ಟೇಕಾಫ್ ತಾಲೀಮು ನಡೆಸುವ ಮೂಲಕ ಪಾಕಿಸ್ತಾನಕ್ಕೆ ವಾಯುಪಡೆ ಶಾಕ್ ನೀಡಿದೆ.

### ಪಾಕ್‌ಗೆ ಆರ್ಥಿಕ ಪ್ರಹಾರ ಕೊಡಲು ಭಾರತ ಸಜ್ಜು

**ಇದರ ನಡುವೆ ಪಹಲ್ಗಾಮ್ ನರಮೇಧ ನಡೆಸಿದ ಉಗ್ರರನ್ನು ಸಂಹರಿಸುವ ಶಪಥ ಕೈಗೊಂಡಿರುವ ಭಾರತವು, ಉಗ್ರ ಪೋಷಕ ಪಾಕಿಸ್ತಾನಕ್ಕೆ ದೊಡ್ಡ ಆರ್ಥಿಕ ಹೊಡೆತ ನೀಡಲು ಮುಂದಾಗಿದೆ. ಈಗಾಗಲೇ ಕೆಲವು ರಾಜತಾಂತ್ರಿಕ ಕ್ರಮಗಳ ಮೂಲಕ ಪಾಕ್‌ಗೆ ಬಿಸಿ ಮುಟ್ಟಿಸಿರುವ ಭಾರತವು ಎರಡು ರೀತಿಯಲ್ಲಿ ಆರ್ಥಿಕ ಪ್ರಹಾರಕ್ಕೆ ಸಿದ್ಧತೆ ನಡೆಸಿದೆ. ಹಣಕಾಸು ಕಾರ್ಯಪಡೆ ಅಂದ್ರೆ ಎಫ್‌ಎಟಿಎಫ್‌ನ ಗ್ರೇ ಲಿಸ್ಟ್‌ಗೆ ಪಾಕಿಸ್ತಾನವನ್ನು ಪುನಃ ಸೇರಿಸುವಂತೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಒತ್ತಡ ತರುವ ಕೆಲಸವನ್ನು ಮಾಡಲಿದೆ. ಮುಂದಿನ ಕೆಲವು ವಾರಗಳಲ್ಲಿ ಸದಸ್ಯರ ಸಭೆ ನಡೆಯಲಿದ್ದು, ಅಲ್ಲಿ ಭಾರತ 40 ಸದಸ್ಯ ರಾಷ್ಟ್ರಗಳ ಬೆಂಬಲ ಪಡೆಯಲು ಪ್ರಯತ್ನಿಸಲಿದೆ. ಇದು ಕಾರ್ಯರೂಪಕ್ಕೆ ಬಂದಲ್ಲಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪಾಕ್‌ಗೆ ಹಣಕಾಸಿನ ನೆರವು ಸಿಗುವುದು ಕಷ್ಟವಾಗಲಿದೆ. 2018ರಲ್ಲಿ ಪಾಕಿಸ್ತಾನವನ್ನು ಈ ಪಟ್ಟಿಗೆ ಸೇರಿಸಲಾಗಿತ್ತಾದರೂ 2022ರಲ್ಲಿ ಹೊರಗಿಡಲಾಗಿತ್ತು.**

### ಭದ್ರತಾ ಮಂಡಳಿಯ ಸಭೆ ಕರೀತಿವಿ ಎಂದ ಪಾಕ್

**ಅದಲ್ಲದೇ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಸಭೆಗೂ ಕೂಡ ಕರೆ ನೀಡುವುದಾಗಿ ಪಾಕ್ ಹೇಳುತ್ತಿದೆ. ಭಾರತಕ್ಕೂ ಮಿತ್ರ ದೇಶಗಳಾಗಿರುವ ಸೌದಿ ಅರೇಬಿಯಾ, ಯುಎಇ, ಕುವೈತ್‌ನ ಪಾಕಿಸ್ತಾನ ರಾಯಭಾರಿಗಳನ್ನು ಭೇಟಿಯಾಗಿರುವ ಪಾಕ್ ಪ್ರಧಾನಿ ಶೆಹಬಾಜ್ ಷರೀಫ್ ಯುದ್ಧ ನಿಲ್ಲಿಸಿ ಎಂದು ಮನವಿ ಮಾಡಿದ್ದಾರೆ. ಅವು ಕೂಡ ಸಕಾರಾತ್ಮಕವಾಗಿ ಸ್ಪಂದಿಸಿದ್ದು, ನಮ್ಮ ದೇಶಗಳು ಪ್ರಾದೇಶಿಕ ಶಾಂತಿ ಮತ್ತು ಭದ್ರತೆ ಕಾಪಾಡಲು ಪಾಕಿಸ್ತಾನದೊಂದಿಗೆ ಕೆಲಸ ಮಾಡಲಿವೆ ಎಂದು ಭರವಸೆ ನೀಡಿವೆ. ಅತ್ತ ಅಮೆರಿಕ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಭಾರತದ ಪರ ನಿಂತಿದ್ದು, ಪಹಲ್ಗಾಮ್ ದಾಳಿಗೆ ಪಾಕಿಸ್ತಾನ ಜವಾಬ್ದಾರಿ ಹೊರಬೇಕು ಎಂದು ಆಗ್ರಹಿಸಿದ್ದಾರೆ. ಈಗಾಗಲೇ ಅಮೆರಿಕ ತನ್ನ ನಿಲುವನ್ನು ಸ್ಪಷ್ಟಪಡಿಸಿದ್ದು, ಭಾರತಕ್ಕೆ ತನ್ನನ್ನು ತಾನು ರಕ್ಷಿಸುವ ಹಕ್ಕಿದೆ ಎಂದು ಸ್ಪಷ್ಟವಾಗಿ ಹೇಳಿದೆ. ಈ ಹಿನ್ನೆಲೆ ಭಾರತ ಪಾಕ್ ವಿರುದ್ಧ ತನ್ನ ಪ್ರತೀಕಾರದ ಹೆಜ್ಜೆಗಳನ್ನು ತೀವ್ರಗೊಳಿಸಿದೆ.**

## 450 ಕಿ.ಮೀ. ಕ್ರಮಿಸಬಲ್ಲ ಖಂಡಾಂತರ ಕ್ಷಿಪಣಿ ಪರೀಕ್ಷೆ

**ಇಸ್ಲಾಮಾಬಾದ್:** ಭಾರತ ಮತ್ತು ಪಾಕಿಸ್ತಾನ ನಡುವೆ ಯುದ್ಧದ ಕಾರ್ಮೋಡ ಆವರಿಸಿರುವ ಹಿನ್ನೆಲೆಯಲ್ಲಿ ಭೀತಿಗೊಳಗಾಗಿರುವ ಪಾಕಿಸ್ತಾನ, ಭಾರತದ ಮುಂದೆ ತನ್ನ ಶಕ್ತಿ ಪ್ರದರ್ಶಿಸಲಾರಂಭಿಸಿದೆ. ಮೇ 3ರಂದು ಹೊಸದಾಗಿ ಪ್ರಕಟಣೆಯೊಂದನ್ನು ಹೊರಡಿಸಿರುವ ಪಾಕಿಸ್ತಾನ, ತನ್ನಲ್ಲಿರುವ ಅತ್ಯಾಧುನಿಕ ತಂತ್ರಜ್ಞಾನ ಖಂಡಾಂತರ ಕ್ಷಿಪಣಿಯೊಂದನ್ನು ಪರೀಕ್ಷೆಗೊಳಪಡಿಸಿರುವುದಾಗಿ ತಿಳಿಸಿದೆ. ಖಂಡಾಂತರ ಕ್ಷಿಪಣಿಯನ್ನು ಪರೀಕ್ಷೆಗೊಳಪಡಿಸಿರುವುದು ನಮ್ಮ ಸೇನೆಯು ಯಾವುದೇ ತುರ್ತು ಸಂದರ್ಭಗಳನ್ನು ಸಮರ್ಥವಾಗಿ ಎದುರಿಸಲು ಸನ್ನದ್ಧವಾಗಿದೆ ಎಂಬುದು ನೆರೆಹೊರೆಯವರಿಗೆ ಮನವರಿಕೆ ಮಾಡುವ ಉದ್ದೇಶವನ್ನು ಹೊಂದಿದೆ. ಅಷ್ಟೇ ಅಲ್ಲ, ಈ ಖಂಡಾಂತರ ಕ್ಷಿಪಣಿಯು ಅತ್ಯಾಧುನಿಕ ನೇವಿಗೇಷನ್ ವ್ಯವಸ್ಥೆಯನ್ನು ಒಳಗೊಂಡಿದ್ದು, ಮಾನವನ ಮೂಲಕವೂ ಇದರ ದಿಕ್ಕು ಬದಲಾಯಿಸುವಂಥ ವ್ಯವಸ್ಥೆಯನ್ನು ಹೊಂದಿದೆ'' ಎಂದು ಹೇಳಿದೆ.

ಅಲ್ಲಿಗೆ, ಪಾಕಿಸ್ತಾನವೂ ತಾನು ಯುದ್ಧಕ್ಕೆ ಸಿದ್ಧ ಎಂಬ ಪರೋಕ್ಷ ಸಂದೇಶವನ್ನು ಭಾರತಕ್ಕೆ ರವಾನಿಸಿದಂತಾಗಿದೆ.



ಅದಕ್ಕೆ ಪ್ರತಿಕ್ರಿಯಿಸಿರುವ ಭಾರತ, ನೆರೆದೇಶಗಳಿಂದ ನಡೆಯುವ ಇಂಥ ಕ್ಷಿಪಣಿ ಪರೀಕ್ಷೆಗಳು ಭಾರತವನ್ನು ಪ್ರಚೋದಿಸುವಂಥ ಕೆಲಸಗಳಾಗಿರುತ್ತವೆ ಎಂದು ಎಚ್ಚರಿಸಿದೆ.

ಪಹಲ್ಗಾಮ್ ನಲ್ಲಿ ಉಗ್ರರ ದಾಳಿಯ ನಂತರ ಎರಡೂ ದೇಶಗಳ ಸಂಬಂಧ ಮತ್ತಷ್ಟು ಹದಗೆಟ್ಟಿದೆ. ಪಹಲ್ಗಾಮ್ ದಾಳಿಯ ಬೆನ್ನಲ್ಲೇ ಪಾಕಿಸ್ತಾನದ ಮೇಲೆ ಹಲವಾರು ನಿರ್ಬಂಧಗಳನ್ನು ಹೇರಲಾರಂಭಿಸಿದ್ದ ಭಾರತ, ಮೇ 3ರಂದು ಪಾಕಿಸ್ತಾನದಿಂದ ಆಮದಾಗುವ ಎಲ್ಲಾ ರೀತಿಯ ಸಾಮಗ್ರಿಗಳಿಗೆ ನಿರ್ಬಂಧ ಹೇರಿದೆ. ಇದರ ಬೆನ್ನಲ್ಲೇ ಪಾಕಿಸ್ತಾನವು ಖಂಡಾಂತರ ಕ್ಷಿಪಣಿಯನ್ನು ಪರೀಕ್ಷೆ ಮಾಡಿರುವುದು ಹೊಸ ಬೆಳವಣಿಗೆಯಾಗಿದೆ.

## ಗಂಗಾ ಎಕ್ಸ್‌ಪ್ರೆಸ್ ವೇನಲ್ಲಿ ಯಶಸ್ವಿ ಯುದ್ಧಾಭ್ಯಾಸ ನಡೆಸಿದ ವಾಯು ಪಡೆ

**ಶಹಜಹಾನ್ಪುರ:** ಜಿಲ್ಲೆಯ ಗಂಗಾ ಎಕ್ಸ್‌ಪ್ರೆಸ್‌ವೇಯಲ್ಲಿರುವ ದೇಶದ ಮೊದಲ ಏರ್‌ಸ್ಟ್ರಿಪ್‌ನಲ್ಲಿ ಭಾರತೀಯ ವಾಯುಪಡೆ (ಐಎಎಫ್) ಫೈಟರ್ ಜೆಟ್ ಗಳನ್ನು ಒಳಗೊಂಡ ರಾತ್ರಿಯ ಯುದ್ಧ ಅಭ್ಯಾಸವನ್ನು ಯಶಸ್ವಿಯಾಗಿ ನಡೆಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನಿನ್ನೆ ಸಂಜೆ 7 ರಿಂದ 10 ಗಂಟೆಯ ನಡುವೆ ನಡೆದ ಈ ಅಭ್ಯಾಸದಲ್ಲಿ ರಫೇಲ್, ಸುಖೋಯ್, ಜಾಗ್ವಾರ್ ಮತ್ತು ಮಿರಾಜ್ -2000 ಫೈಟರ್ ಜೆಟ್‌ಗಳು ಜಲಾಲಾಬಾದ್ ಪೊಲೀಸ್ ಠಾಣೆ ವ್ಯಾಪ್ತಿಯ ಪಿರು ಗ್ರಾಮದ ಬಳಿಯ 3.5 ಕಿಲೋಮೀಟರ್ ಏರ್ ಸ್ಟ್ರಿಪ್‌ನಲ್ಲಿ ಟಚ್ ಅಂಡ್ ಗೋ ಲ್ಯಾಂಡಿಂಗ್ ಮತ್ತು ಯುದ್ಧ ಕಾರ್ಯಾಚರಣೆಗಳನ್ನು ನಡೆಸಿದವು.

ಪೊಲೀಸ್ ವರಿಷ್ಠಾಧಿಕಾರಿ ರಾಜೇಶ್ ದ್ವಿವೇದಿ ಮಾತನಾಡಿ, ರಾತ್ರಿ ಕಾರ್ಯಾಚರಣೆಯ ಭಾಗವಾಗಿ ಅನೇಕ ಫೈಟರ್ ಜೆಟ್‌ಗಳು ಯಶಸ್ವಿ ಕಾರ್ಯಾಚರಣೆ ನಡೆಸಿದವು. ರಫೇಲ್, ಸುಖೋಯ್, ಜಾಗ್ವಾರ್, ಮಿರಾಜ್ -2000 ಮತ್ತು ಎಂ - 32



ನಂತಹ ಜೆಟ್ ಗಳ ನಿಖರ ಲ್ಯಾಂಡಿಂಗ್, ಸಂಘಟಿತ ಟೇಕ್ ಆಫ್ ಮತ್ತು ಯುದ್ಧತಂತ್ರದ ಕಾರ್ಯಾಚರಣೆಗಳನ್ನು ಈ ಡ್ರಿಲ್ ಒಳಗೊಂಡಿತ್ತು.

ಕಣ್ಗಾವಲು ಮತ್ತು ಭದ್ರತೆಗಾಗಿ ಏರ್ ಸ್ಟ್ರಿಪ್ ಮತ್ತು ಸುತ್ತಮುತ್ತ 250 ಕ್ಕೂ ಹೆಚ್ಚು ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಇದು ಸುರಕ್ಷಿತ ಕಾರ್ಯಾಚರಣೆ ಮತ್ತು ಯಾವುದೇ ಅಹಿತಕರ ಘಟನೆಗಳ ಸಂದರ್ಭದಲ್ಲಿ ತ್ವರಿತ ಪ್ರತಿಕ್ರಿಯೆಯನ್ನು ಖಚಿತಪಡಿಸುತ್ತದೆ ಎಂದು ಅವರು ಹೇಳಿದರು.

ಎಕ್ಸ್ ಪ್ರೆಸ್ ವೇಯನ್ನು ವಿಭಜಿಸುವ ಬರೇಲಿ -ಇಟಾವಾ ಮಾರ್ಗದಲ್ಲಿ ಸುಮಾರು ಮೂರು ಗಂಟೆಗಳ ಕಾಲ ಸಂಚಾರವನ್ನು ಸ್ಥಗಿತಗೊಳಿ ಸಲಾಯಿತು. ವ್ಯಾಯಾಮದ ಸಮಯದಲ್ಲಿ, ಕೆಲವು ಫೈಟರ್ ಜೆಟ್‌ಗಳು ಹೆಲಿಕಾಪ್ಟರ್‌ಗಳಿಂದ ಬಿದ್ದ ಹಗ್ಗಗಳ ಸಹಾಯದಿಂದ ಇಳಿಯುತ್ತಿರುವುದು ಕಂಡುಬಂದಿತು. ನಂತರ ನೆಲದ ಯುದ್ಧತಂತ್ರದ ನಿಯೋಜನೆ ಕಂಡು ಬಂದಿದೆ ಎಂದು ದ್ವಿವೇದಿ ಹೇಳಿದರು. ಹಗಲಿನಲ್ಲಿ ಬಲವಾದ ಗಾಳಿ ಮತ್ತು ಪ್ರತಿಕೂಲ ಹವಾಮಾನದ ಹೊರತಾಗಿಯೂ, ಡ್ರಿಲ್ ಯಶಸ್ವಿಯಾಗಿ ಪೂರ್ಣಗೊಂಡಿದೆ.

> **ಈ ಡ್ರಿಲ್ ಅನ್ನು ಮೂಲತಃ ಎರಡು ದಿನಗಳವರೆಗೆ ನಿಗದಿಪಡಿಸಲಾಗಿತ್ತು, ಆದರೆ ಐಎಎಫ್ ಅಧಿಕಾರಿಗಳು ಇಡೀ ವ್ಯಾಯಾಮವನ್ನು ಒಂದೇ ರಾತ್ರಿಯಲ್ಲಿ ಪೂರ್ಣಗೊಳಿಸಿದರು. ಉದ್ದೇಶವನ್ನು ಈಗಾಗಲೇ ಸಾಧಿಸಿದ್ದರಿಂದ ಮರುದಿನ ನಿಗದಿಯಾಗಿದ್ದ ಕಾರ್ಯಕ್ರಮವನ್ನು ರದ್ದುಪಡಿಸಲಾಗಿದೆ ಎಂದು ಎಸ್ಪಿ ಹೇಳಿದರು.**

## ಗಡಿಯುದ್ದಕ್ಕೂ ನಿಲ್ಲದ ಗುಂಡಿನ ಚಕಮಕಿ, ಪಾಕ್ ಅಪ್ರಚೋದಿತ ದಾಳಿ

**ಜಮ್ಮು:** ಜಮ್ಮು ಮತ್ತು ಕಾಶ್ಮೀರದ ಗಡಿ ನಿಯಂತ್ರಣ ರೇಖೆ (ಎಲ್‌ಸಿ) ಉದ್ದಕ್ಕೂ ವಿವಿಧ ವಲಯಗಳಲ್ಲಿ ಭಾರತ ಮತ್ತು ಪಾಕಿಸ್ತಾನ ಪಡೆಗಳ ನಡುವೆ ಸತತ ಒಂಬತ್ತನೇ ರಾತ್ರಿಯೂ ಸಣ್ಣ ಶಸ್ತ್ರಾಸ್ತ್ರಗಳ ಗುಂಡಿನ ಚಕಮಕಿ ಮುಂದುವರೆದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಆದಾಗ್ಯೂ, ಕದನ ವಿರಾಮ ಒಪ್ಪಂದವನ್ನು ಉಲ್ಲಂಘಿಸಿ ಪಾಕಿಸ್ತಾನ ಪಡೆಗಳು ಪ್ರಾರಂಭಿಸಿದ ಗಡಿ ಘರ್ಷಣೆಗಳಲ್ಲಿ ಯಾವುದೇ ಸಾವುನೋವು ಸಂಭವಿಸಿಲ್ಲ. ಗಡಿಯುದ್ದಕ್ಕೂ ಸತತ ಒಂಬತ್ತು ರಾತ್ರಿಗಳ ಅಪ್ರಚೋದಿತ ಗುಂಡಿನ ದಾಳಿ ಇದಾಗಿದ್ದು, ಇದು ಹೆಚ್ಚಾಗಿ ನಿಯಂತ್ರಣ ರೇಖೆಗೆ ಸೀಮಿತವಾಗಿತ್ತು.

ಅಂತರರಾಷ್ಟ್ರೀಯ ಗಡಿಯಲ್ಲಿ (ಐಬಿ) ಒಂದೇ ಒಂದು ಗುಂಡಿನ ದಾಳಿ ನಡೆದಿದೆ. ಏಪ್ರಿಲ್ 22 ರಂದು ಪಹಲ್ಲಾಮ್ ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 26 ಜನರು ಸಾವನ್ನಪ್ಪಿದ ನಂತರ ಉದ್ವಿಗ್ನತೆಯ ಮಧ್ಯೆ, ಉಭಯ ಕಡೆಗಳ ನಡುವೆ ಗುಂಡಿನ ದಾಳಿ ನಡೆದಿದೆ. ಮೇ 2 ಮತ್ತು 3 ರ ರಾತ್ರಿ, ಪಾಕಿಸ್ತಾನ ಸೇನೆಯು ಕೇಂದ್ರಾಡಳಿತ



ಸೇನೆಯಿಂದ ದಿಟ್ಟ ಉತ್ತರ

ಪ್ರದೇಶವಾದ ಜಮ್ಮು ಮತ್ತು ಕಾಶ್ಮೀರದ ಕುಪ್ವಾರಾ, ಉರಿ ಮತ್ತು ಅಖ್ನೂರ್ ಪ್ರದೇಶಗಳ ಎದುರಿನ ನಿಯಂತ್ರಣ ರೇಖೆಯ ಉದ್ದಕ್ಕೂ ಅಪ್ರಚೋದಿತ ಸಣ್ಣ ಶಸ್ತ್ರಾಸ್ತ್ರಗಳ ಗುಂಡಿನ ದಾಳಿ ನಡೆಸಿತು. ಭಾರತೀಯ ಸೇನೆಯು ತ್ವರಿತವಾಗಿ ಮತ್ತು ಪ್ರಮಾಣಾನುಗುಣವಾಗಿ ಪ್ರತಿಕ್ರಿಯಿಸಿದೆ ಎಂದು ರಕ್ಷಣಾ ವಕ್ತಾರರು ತಿಳಿಸಿದ್ದಾರೆ.

ಎಲ್‌ಒಸಿ ಮತ್ತು ಐಬಿ ಉದ್ದಕ್ಕೂ ವಾಸಿಸುವ ನಾಗರಿಕರು ತಮ್ಮ ಸಮುದಾಯ ಮತ್ತು ವೈಯಕ್ತಿಕ ಬಂಕರ್‌ಗಳನ್ನು ಸ್ವಚ್ಛಗೊಳಿಸಲು ಪ್ರಾರಂಭಿಸಿದ್ದಾರೆ. ಪಹಲ್ಲಾಮ್ ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ ಭಾರತವು ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸಿದ ಕೆಲವೇ ಗಂಟೆಗಳ ನಂತರ, ಏಪ್ರಿಲ್ 24 ರ ರಾತ್ರಿಯಿಂದ, ಪಾಕಿಸ್ತಾನ ಪಡೆಗಳು ಕಾಶ್ಮೀರ ಕಣಿವೆಯಿಂದ ಪ್ರಾರಂಭಿಸಿ ಜಮ್ಮು ಮತ್ತು ಕಾಶ್ಮೀರದ ನಿಯಂತ್ರಣ ರೇಖೆಯ ಉದ್ದಕ್ಕೂ ವಿವಿಧ ಸ್ಥಳಗಳಲ್ಲಿ ಅಪ್ರಚೋದಿತ ಗುಂಡಿನ ದಾಳಿ ನಡೆಸುತ್ತಿವೆ. ಆರಂಭದಲ್ಲಿ ಉತ್ತರ ಕಾಶ್ಮೀರದ ಕುಪ್ವಾರಾ ಮತ್ತು ಬಾರಾಮುಲ್ಲಾ ಜಿಲ್ಲೆಗಳ ನಿಯಂತ್ರಣ ರೇಖೆಯ ಉದ್ದಕ್ಕೂ ಹಲವಾರು ಸ್ಥಳಲ್ಲಿ ಅಪ್ರಚೋದಿತ ಸಣ್ಣ ಶಸ್ತ್ರಾಸ್ತ್ರ ಗುಂಡಿನ ದಾಳಿಯೊಂದಿಗೆ ಪ್ರಾರಂಭವಾದ ಪಾಕಿಸ್ತಾನವು ತನ್ನ ಕದನ ವಿರಾಮ ಉಲ್ಲಂಘನೆಯನ್ನು ಪೂಂಚ್ ವಲಯಕ್ಕೆ ಮತ್ತು ನಂತರ ಜಮ್ಮು ಪ್ರದೇಶದ ಅಖ್ನೂರ್ ವಲಯಕ್ಕೆ ವಿಸ್ತರಿಸಿತು. ಇದರ ನಂತರ ರಾಜೌರಿ ಜಿಲ್ಲೆಯ ಸುಂದರ್ಬಾನಿ ಮತ್ತು ನೌಶೇರಾ ಸೆಕ್ಟರ್‌ಗಳಲ್ಲಿ ನಿಯಂತ್ರಣ ರೇಖೆಯ ಉದ್ದಕ್ಕೂ ಹಲವಾರು ಪೋಸ್ಟ್‌ಗಳ ಮೇಲೆ ಸಣ್ಣ ಶಸ್ತ್ರಾಸ್ತ್ರ ಗುಂಡಿನ ದಾಳಿ ನಡೆಯಿತು. ತರುವಾಯ, ಗುಂಡಿನ ದಾಳಿಯು ಜಮ್ಮು ಜಿಲ್ಲೆಯ ಅಂತರರಾಷ್ಟ್ರೀಯ ಗಡಿಯ ಪರ್ಗ್ವಾಲ್ ವಲಯಕ್ಕೆ ವಿಸ್ತರಿಸಿತು.

## ಪಾಕ್ ವಾಯು ಪ್ರದೇಶ ನಿರ್ಬಂಧಿಸಿದ ಯೂರೋಪ್

**ಬೆಲ್ಜಿಯಂ:** ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನ ಪರಿಸ್ಥಿತಿಯ ಮಧ್ಯೆ ಇದೀಗ ಯುರೋಪಿಯನ್ ದೇಶಗಳು ಪಾಕಿಸ್ತಾನಕ್ಕೆ ಶಾಕ್ ನೀಡಿವೆ.

ಏ.22ರಂದು ಪಹಲ್ಗಾಮ್ ದಾಳಿಯ ಬಳಿಕ ಭಾರತ ಹಾಗೂ ಪಾಕಿಸ್ತಾನದ ನಡುವಿನ ಕಾದಾಟ ಜೋರಾಗಿದೆ. ಇದೀಗ ಯುರೋಪಿಯನ್ ದೇಶಗಳು ಪಾಕಿಸ್ತಾನಕ್ಕೆ ಶಾಕ್ ನೀಡಿದ್ದು, ಪಾಕ್ ವಾಯು ಪ್ರದೇಶವನ್ನು ವಿಮಾನ ಹಾರಾಟಕ್ಕೆ ಬಳಸದಿರಲು ನಿರ್ಧರಿಸಿವೆ.

ಯುರೋಪಿಯನ್ ಒಕ್ಕೂಟ ದೇಶಗಳ ಏರ್ ಫ್ರಾನ್ಸ್, ಬ್ರಿಟಿಷ್ ಏರ್ವೇಸ್ ಮತ್ತು ಸ್ವಿಸ್ ವಿಮಾನಗಳು ಸೇರಿ ದಂತೆ ಇನ್ನಿತರ ವಿಮಾನಯಾನ ಸಂಸ್ಥೆಗಳು ಪಾಕಿಸ್ತಾನದ ವಾಯು ಪ್ರದೇಶವನ್ನು ಬಳಸುವುದನ್ನು ನಿಲ್ಲಿಸಲು ನಿರ್ಧರಿಸಿವೆ. ಪ್ರತಿಯೊಂದು ದೇಶವು ಯಾವುದೇ ಪ್ರದೇಶದ ಮೇಲೆ ಹಾರಾಟ ನಡೆಸುವಾಗ ತಮ್ಮದೇ ಆದ ಅಪಾಯದ ಮೌಲ್ಯಮಾಪನಗಳನ್ನು ನಡೆಸುತ್ತದೆ. ಹೀಗಾಗಿ ಪಾಕಿಸ್ತಾನ ವಾಯು ಪ್ರದೇಶ ಹಾರಾಟಕ್ಕೆ ಅನುರಕ್ಷಿತ ಸ್ಥಳವೆಂದು ಪರಿಗಣಿಸಿದ್ದು, ನೋಟಮ್ (ವಾಯುಪಡೆಗೆ ಸೂಚನೆ) ನೀಡಿಲ್ಲ. ಆದರೆ ವಾಯುಪ್ರದೇಶವನ್ನು ಬಳಸುವುದನ್ನು ನಿಲ್ಲಿಸಲು ನಿರ್ಧರಿಸಲಾಗಿದೆ. ಇತ್ತೀಚಿಗಷ್ಟೇ ಭಾರತ ದೇಶವು




ಪಾಕ್ ವಾಯು ಪ್ರದೇಶವನ್ನು ಬಳಸುವುದನ್ನು ನಿಲ್ಲಿಸಿತ್ತು. ಇದರ ಬೆನ್ನಲ್ಲೇ ಯುರೋಪಿಯನ್ ದೇಶಗಳು ನಿರ್ಧಾರ ಕೈಗೊಂಡಿದೆ. ಇನ್ನೂ ಭಾರತ ಮತ್ತು ಪಾಕ್ ನಡುವಿನ ಉದ್ವಿಗ್ನ ಪರಿಸ್ಥಿತಿ ಕುರಿತು ಯುರೋಪಿಯನ್ ಒಕ್ಕೂಟದ ವಿದೇಶಾಂಗ ನೀತಿ ಮುಖ್ಯಸ್ಥೆ ಕಾಜಾ ಕಲ್ಲಾಸ್ ಅವರು ಭಾರತ ವಿದೇಶಾಂಗ ಸಚಿವ ಎಸ್.ಜೈಶಂಕರ್ ಮತ್ತು ಪಾಕ್ ವಿದೇಶಾಂಗ ಸಚಿವ ಇಶಾಕ್ ದಾರ್ ಜೊತೆಗೆ ದೂರವಾಣಿ ಮೂಲಕ ಮಾತುಕತೆ ನಡೆಸಿದ್ದಾರೆ.

ಎರಡು ದೇಶಗಳು ಸಂಯಮ ಕಾಪಾಡಿಕೊಳ್ಳುವಂತೆ ಸಲಹೆ ನೀಡಿದ್ದು, ಗಡಿಗಳಲ್ಲಿ ಉದ್ವಿಗ್ನತೆ ಏರಿಕೆಯಿಂದ ಯಾರಿಗೂ ಯಾವುದೇ ಪ್ರಯೋಜನವಿಲ್ಲ. ಇಬ್ಬರೂ ಸಂಯಮ ವಹಿಸುವಂತೆ ಒತ್ತಾಯಿಸಿದ್ದಾರೆ.

## 30,000ಕ್ಕೂ ಹೆಚ್ಚು ಜನರಿಂದ ಕೇದಾರನಾಥನ ದರ್ಶನ

**ಡೆಹ್ರಾಡೂನ್:** ಕೇದಾರನಾಥ ಧಾಮದ ಬಾಗಿಲು ತೆರೆದ ಮೊದಲ ದಿನವೇ ದೇವಸ್ಥಾನಕ್ಕೆ 30,000ಕ್ಕೂ ಹೆಚ್ಚು ಭಕ್ತರು ಆಗಮಿಸಿ ದರ್ಶನ ಪಡೆದಿದ್ದಾರೆ. ಮೇ 2ರಂದು ಸಂಜೆ 7 ಗಂಟೆಯ ವೇಳೆಗೆ 19,196 ಪುರುಷರು, 10,597 ಮಹಿಳೆಯರು ಮತ್ತು 361 ತೃತಿಯ ಲಿಂಗಿಗಳು ಕೇದಾರನಾಥಕ್ಕೆ ಭೇಟಿ ನೀಡಿ ದರ್ಶನ ಪಡೆದಿದ್ದಾರೆ.

ಕೇದಾರನಾಥ ದೇವಾಲಯದ ಬಾಗಿಲು ತೆರೆಯಲಾಯಿತು. ಭಾರತೀಯ ಸೇನೆಯ ಗರ್ವಾಲ್ ರೈಫಲ್ಸ್‌ನ ಬ್ಯಾಂಡ್ ಈ ಸಂದರ್ಭದಲ್ಲಿ ಭಕ್ತಿಗೀತೆಗಳನ್ನು ನುಡಿಸಿತು. ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರು ಧಾಮ್ ಪೋರ್ಟಲ್ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಕೇದಾರನಾಥ ಆವರಣದಲ್ಲಿ ನಡೆದ ಮುಖ್ಯ ಸೇವಕ ಭಂಡಾರದಲ್ಲಿ ಭಕ್ತರಿಗೆ ವೈಯಕ್ತಿಕವಾಗಿ ಪ್ರಸಾದ ವಿತರಿಸಿದರು. ಇದೇ ವೇಳೆ



ಮೇ 4ರಂದು ಬದರಿನಾಥ ಧಾಮದ ಬಾಗಿಲು ತೆರೆಯಲಿದೆ ಎಂದು ಘೋಷಿಸಿದರು.

ಕೇದಾರನಾಥದ ಪುನರ್‌ನಿರ್ಮಾಣಕ್ಕಾಗಿ 2,000 ಕೋಟಿ ರೂ.ಗಳನ್ನು ನಿಗದಿಪಡಿಸಲಾಗಿದೆ ಎಂದು ಸಿಎಂ ಧಾಮಿ ಬಹಿರಂಗಪಡಿಸಿದರು. ಹೆಚ್ಚುವರಿಯಾಗಿ ಪ್ರವೇಶವನ್ನು ಸುಧಾರಿಸಲು ಗೌರಿಕುಂಡ್‌ನಿಂದ ಕೇದಾರನಾಥಕ್ಕೆ ರೋಪ್‌ವೇ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ ಎಂದು ತಿಳಿಸಿದರು.

## ಜಾತಿ ಗಣತಿ ಕುರಿತ ಡಿಎಂಕೆ ಹೇಳಿಕೆಗೆ ನಿರ್ಮಲಾ ಸೀತಾರಾಮ ತಿರುಗೇಟು

**ಚೆನ್ನೈ:** ಮುಂಬರುವ ಜನಗಣತಿ ಪ್ರಕ್ರಿಯೆಯಲ್ಲಿ ಜಾತಿ ಗಣತಿಯನ್ನು ಸೇರಿಸುವ ಕೇಂದ್ರದ ನಿರ್ಧಾರವು ಕಷ್ಟಪಟ್ಟು ಗಳಿಸಿದ ಗೆಲುವು ಎಂಬ ಡಿಎಂಕೆ ಸರ್ಕಾರದ ಹೇಳಿಕೆಯನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಳ್ಳಿಹಾಕಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಸೀತಾರಾಮನ್, ಕೇಂದ್ರ ಸಚಿವ ಸಂಪುಟವು ಜಾತಿ ಜನಗಣತಿಗೆ ಅನುಮೋದನೆ ನೀಡಿದೆ ಮತ್ತು ಈ ಪ್ರಕ್ರಿಯೆಯ ಮೂಲಕ ಸಂಗ್ರಹಿಸಿದ ದತ್ತಾಂಶವು ಸಮಾಜದ ಬಡ ಮತ್ತು ಅಂಚಿನಲ್ಲಿರುವ ವರ್ಗಗಳನ್ನು ಉತ್ತಮವಾಗಿ ಬೆಂಬಲಿಸಲು ಸರ್ಕಾರಕ್ಕೆ ಅನುವು ಮಾಡಿಕೊಡುತ್ತದೆ ಎಂದು ಹೇಳಿದರು.

ರಾಜ್ಯದ ಗ್ರಾಮವೊಂದರಲ್ಲಿ ಮಾನವ ತ್ಯಾಜ್ಯವನ್ನು ಕುಡಿಯುವ ನೀರಿನಲ್ಲಿ ಬೆರೆಸಿದ ಘಟನೆಯನ್ನು ಅವರು ಉಲ್ಲೇಖಿಸಿದರು. ಉತ್ತರ ಭಾರತದಲ್ಲಿ



> **ಕೇಂದ್ರ ಸರ್ಕಾರವು ಕಾರ್ಪೊರೇಟ್‌ಗಳ ಪರವಾಗಿದೆ ಎಂಬ ಆರೋಪಗಳಿಗೆ ಪ್ರತಿಕ್ರಿಯಿಸಿದ ಅವರು, ಅದನ್ನು ಸ್ಪಷ್ಟವಾಗಿ ನಿರಾಕರಿಸಿದರು ಮತ್ತು ರಾಜ್ಯ ಸರ್ಕಾರವು ಹೂಡಿಕೆ ಪ್ರಸ್ತಾಪಗಳನ್ನು ಸ್ವೀಕರಿಸಿದ್ದರೆ, ಅದು ಸ್ವಯಂಚಾಲಿತವಾಗಿ ಪಕ್ಷಪಾತವನ್ನು ತೋರಿಸುತ್ತಿದೆ ಎಂದು ಸೂಚಿಸುತ್ತದೆಯೇ ಎಂದು ಪ್ರಶ್ನಿಸಿದರು.**

ಕೆಲವು ರಾಜ್ಯಗಳು ಹಿಂದುಳಿದಿವೆ ಎಂದು ಅವರು ಹೇಳುತ್ತಾರೆ. ಆದರೆ ಅಂತಹ ರಾಜ್ಯಗಳಲ್ಲಿಯೂ ಈ ರೀತಿಯ ಘಟನೆಗಳು ನಡೆದಿಲ್ಲ. ಆದ್ದರಿಂದ, ಮುಂಬರುವ ಜನಗಣತಿ ಪ್ರಕ್ರಿಯೆಯಲ್ಲಿ ಜಾತಿ ಗಣತಿಯನ್ನು ಸೇರಿಸುವ ಕೇಂದ್ರದ ನಿರ್ಧಾರಕ್ಕೆ ತಾವು ವಿಜಯದ ರುಚಿ ನೋಡಿದ್ದೇವೆ. ಎಂಬ ವಾದವನ್ನು ಡಿಎಂಕೆ ಕೈಬಿಡಬೇಕು ಎಂದು ಸೀತಾರಾಮನ್ ಹೇಳಿದರು. 2022 ರ ಡಿಸೆಂಬರ್‌ನಲ್ಲಿ ಪುದುಕೊಟ್ಟೆ ಜಿಲ್ಲೆಯ ವೆಂಗೈವಾಯಲ್ ಗ್ರಾಮದ ಪರಿಶಿಷ್ಟ ಜಾತಿ ವಸತಿ ಪ್ರದೇಶದ ಓವರ್‌ಹೆಡ್ ನೀರಿನ ಟ್ಯಾಂಕ್‌ನಲ್ಲಿ ಮಾನವ ಮಲವನ್ನು ಬೆರೆಸಲಾಗಿದೆ ಎಂದು ವರದಿಯಾಗಿದೆ. ಮುಂಬರುವ ಜನಗಣತಿ ಪ್ರಕ್ರಿಯೆಯಲ್ಲಿ ಜಾತಿ ಗಣತಿಯನ್ನು ಸೇರಿಸುವ ಕೇಂದ್ರದ ನಿರ್ಧಾರವು ತಮ್ಮ ಪಕ್ಷ ಮತ್ತು ತಮಿಳುನಾಡು ಸರ್ಕಾರಕ್ಕೆ ಬಿಕಷ್ಟಪಟ್ಟು ಗಳಿಸಿದ ಗೆಲುವು ಎಂದು ಸ್ಟಾಲಿನ್ ಇತ್ತೀಚೆಗೆ ಹೇಳಿದ್ದರು.

## • ಪಂಜಾಬ್‌ನ ಅಟ್ಟಾರಿಯಲ್ಲಿರುವ ವಾಘಾ ಗಡಿಯ ದ್ವಾರಗಳನ್ನು ತೆರೆಯಲು ಪಾಕಿಸ್ತಾನ ನಿರಾಕರಿಸಿದೆ

# ಭಾರತದಿಂದ ಗಡಿಪಾರಾದ ಪಾಕ್ ಪ್ರಜೆಗಳಿಗೆ ನೋ ಎಂಟ್ರಿ ಎಂದ ಪಾಕಿಸ್ತಾನ

**ದೆಹಲಿ:** ಪೆಹಲ್ಗಾಮ್ ಭಯೋತ್ಪಾದಕ ದಾಳಿ ಬಳಿಕ ಭಾರತ ಹಾಗೂ ಪಾಕಿಸ್ತಾನದ ನಡುವೆ ಪರಿಸ್ಥಿತಿ ಉದ್ವಿಗ್ನಗೊಂಡಿದೆ. ಇದರ ಭಾಗವಾಗಿ ಭಾರತದಲ್ಲಿರುವ ಎಲ್ಲಾ ಪಾಕ್ ಪ್ರಜೆಗಳನ್ನು ಗಡಿಪಾರು ಮಾಡುವಂತೆ ಕೇಂದ್ರ ಸರ್ಕಾರ ಸೂಚನೆ ನೀಡಿದೆ. ಅದರಂತೆ ಎಲ್ಲ ರಾಜ್ಯಗಳಲ್ಲಿರುವ ಪಾಕ್ ಪ್ರಜೆಗಳ ಗಂಟುಮೂಟೆ ಕಟ್ಟಿಸಲು ಕ್ರಮ ಕೈಗೊಳ್ಳಲಾಗಿದೆ.

ಆದರೆ, ಪಾಕಿಸ್ತಾನವು ತನ್ನದೇ ಪ್ರಜೆಗಳಿಗೆ ನೋ ಎಂಟ್ರಿ ಎನ್ನುವ ಮೂಲಕ ಶಾಕ್ ಕೊಟ್ಟಿದೆ. ಪಂಜಾಬ್‌ನ ಅಟ್ಟಾರಿಯಲ್ಲಿರುವ ವಾಘಾ ಗಡಿಯ ದ್ವಾರಗಳನ್ನು ತೆರೆಯಲು ಪಾಕಿಸ್ತಾನ ನಿರಾಕರಿಸಿದ್ದು, ಇದರಿಂದಾಗಿ ತನ್ನ ಭಾರತದಿಂದ ಗಡೀಪಾರಾದ ತನ್ನದೇ ಪ್ರಜೆಗಳು ಬಿಕ್ಕಟ್ಟಿನ ಸಿಲುಕಿಕೊಂಡಿದ್ದಾರೆ. ಪಾಕಿಸ್ತಾನಿ ಪ್ರಜೆಗಳಿಗೆ ಗಡಿ ದಾಟಲು ಅವಕಾಶವಿಲ್ಲ ಎಂದು ಭಾರತೀಯ ಅಧಿಕಾರಿಗಳು ತಿಳಿಸಿದ್ದಾರೆ. ಏಪ್ರಿಲ್ 20ರಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ ವೀಸಾ ಅಮಾನತುಗೊಳಿಸಿರುವುದು ಕೂಡ ಗಂಭೀರ ಪರಿಣಾಮ ಬೀರಿದೆ. ಗಡಿಯಲ್ಲಿ ಉಳಿದವರಲ್ಲಿ ಇಬ್ಬರು ವೃದ್ಧ ಸಹೋದರಿಯರೂ ಇದ್ದರು. ಆದರೆ ಅವರು ಎಲ್ಲಿಗೆ ಸೇರಿದವರು ಅಥವಾ ಅವರನ್ನು ಎಲ್ಲಿಗೆ ಹೋಗಲು ಅನುಮತಿಸಲಾಗುತ್ತದೆ ಎಂಬ ಖಚಿತ ಮಾಹಿತಿ ಇರಲಿಲ್ಲ.

ಲಾಹೋರ್‌ನಲ್ಲಿ ಜನಿಸಿ, ಆದರೆ ಶ್ರೀನಗರದಲ್ಲಿ ದೀರ್ಘಕಾಲ ನೆಲೆಸಿದ್ದ ಸಯೀದಾ ಸಗೀರ್ ಫಾತಿಮಾ ಮತ್ತು ಸಯೀದಾ ಜಮೀರ್ ಫಾತಿಮಾ ಅವರಿಗೆ ಬಲವಂತದ ಗಡಿಪಾರು ಎಂದು ದೂರಿದ್ದಾರೆ. ಈ ಪೈಕಿಸ ಅಂಗವಿಕಲರಾಗಿದ್ದ ಮತ್ತು ಕೈಯಲ್ಲಿ ಚೀಲಗಳನ್ನು ಹಿಡಿದುಕೊಂಡಿದ್ದ ಈ ಇಬ್ಬರು, ಪಾಸ್‌ಪೋರ್ಟ್‌ಗಳು, ವೀಸಾಗಳೊಂದಿಗೆ ಕಾನೂನುಬದ್ಧವಾಗಿ ಪ್ರವೇಶಿಸಿದ



ಬಲವಂತದ ಗಡಿಪಾರು ಎಂದು ದೂರು

ನಂತರ 40 ವರ್ಷಗಳಿಗೂ ಹೆಚ್ಚು ಕಾಲ ಭಾರತದಲ್ಲಿ ವಾಸಿಸುತ್ತಿದ್ದರು. ನ್ಯಾಯಾಲಯದ ಆದೇಶದ ಹೊರತಾಗಿಯೂ ಭಾರತೀಯ ಪೌರತ್ವಕ್ಕಾಗಿ ಅವರ ಅರ್ಜಿಗಳನ್ನು ತಿರಸ್ಕರಿಸಲಾಗಿತ್ತು. ನಮ್ಮನ್ನು ಪಾಕಿಸ್ತಾನಕ್ಕೆ ಯಾರು ಕರೆದೊಯ್ಯುತ್ತಾರೆ? ಎಂದು ದೈಹಿಕವಾಗಿ ಅಂಗವಿಕಲರಾಗಿರುವ ಸಯೀದಾ ಸಗೀರ್ ಕಣ್ಣೀರಿಟ್ಟರು. ನಮ್ಮ ಅಂತಿಮ ಉಸಿರು ಭಾರತದ ನೆಲದಲ್ಲಿ ಇರಲಿ, ಮತ್ತು ನಮ್ಮ ಅಂತ್ಯಕ್ರಿಯೆ ಇಲ್ಲೇ ನಡೆಸಲಿ. ಇನ್ನು ಕೆಲವೇ ಗಜಗಳ ದೂರದಲ್ಲಿ, ಅದೇ ಮುಚ್ಚಿದ ದ್ವಾರವು ಇಬ್ಬರು ಭಾರತೀಯ ಸಹೋದರಿಯರಿಗೆ ದುಃಖವನ್ನು ತಂದಿತು. ಒಂದು ದಶಕದ ಹಿಂದೆ ಪಾಕಿಸ್ತಾನಿ ಪುರುಷರನ್ನು ಮದುವೆಯಾದ ನಂತರ ಕರಾಚಿಯಲ್ಲಿ ವಾಸಿಸುವ ಶರ್ಮಿನ್ ಮತ್ತು ಶಕೀಲಾ ಮನೆಗೆ ಮರಳಲು ಸಾಧ್ಯವಾಗಲೇ ಇಲ್ಲ. ಅವರು ತಮ್ಮ ತೀವ್ರ ಅಸ್ವಸ್ಥ ತಾಯಿಯನ್ನು ನೋಡಲು ಮಾರ್ಚ್ 27ರಂದು ಭಾರತಕ್ಕೆ ಬಂದಿದ್ದರು ಹಾಗೂ ಮೇ 1ರಂದು ಪಾಕಿಸ್ತಾನಕ್ಕೆ ಮತ್ತೆ ಪ್ರವೇಶಿಸಬಹುದು ಎಂದು ತಿಳಿಸಲಾಯಿತು. ಗಡಿಯಲ್ಲಿ ಮುಂದುವರಿದ ಸೂಕ್ಷ್ಮ ಪರಿಸ್ಥಿತಿ, ಗಡಿ ಗ್ರಾಮದ ಜನರಲ್ಲಿ ಭಯ, ಆದರೆ ಗಡಿ ದ್ವಾರಗಳನ್ನು ಮುಚ್ಚಿರುವ ವಿಚಾರ ತಿಳಿದು ಆಘಾತಕಾರಿಯಾಗಿದೆ ಎಂದು ಶರ್ಮಿನ್ ಬೇಸರ ವ್ಯಕ್ತಪಡಿಸಿದರು.

> **ಆದರೆ ಅಫಘಾನ್ ಟ್ರಕ್‌ಗಳಿಗೆ ಭಾರತದೊಳಗೆ ಪ್ರವೇಶವನ್ನು ಅನುಮತಿಸಲಾಗಿದೆ. ಪಾಕಿಸ್ತಾನದ ವಿದೇಶಾಂಗ ಸಚಿವಾಲಯವು ಅಫ್ಘಾನಿಸ್ತಾನದೊಂದಿಗಿನ ಸಹೋದರ ಸಂಬಂಧಗಳನ್ನು ಅಪವಾದವಾಗಿ ಉಲ್ಲೇಖಿಸಿದ್ದು, ಗಡಿ ಚಳುವಳಿಯ ಆಯ್ದ ಸ್ವರೂಪವನ್ನು ಎತ್ತಿ ತೋರಿಸುತ್ತದೆ. ಪಾಕಿಸ್ತಾನವು ತನ್ನ ಪ್ರಜೆಗಳಿಗೆ ಏಪ್ರಿಲ್ 29ರೊಳಗೆ ತನ್ನ ದೇಶಕ್ಕೆ ಮರಳಲು ಅವಕಾಶ ನೀಡಿತ್ತು. ಆದರೆ ಗುರುವಾರದ ವೇಳೆಗೆ ಎಲ್ಲಾ ಪ್ರವೇಶ ದ್ವಾರಗಳು ಮುಚ್ಚಲ್ಪಟ್ಟವು. ಇದು ಎರಡು ದೇಶಗಳ ನಡುವೆ ಕುಟುಂಬಗಳಿಂದ ದೂರವಾಗುತ್ತಿರುವವರನ್ನು ಮತ್ತಷ್ಟು ಬಿಕ್ಕಟ್ಟಿಗೆ ಸಿಲುಕಿಸಿತು.**



## ಮಿನಿ ನ್ಯೂಸ್

### ಗುಜರಾತ್‌ನಲ್ಲಿ 3.4 ತೀವ್ರತೆಯ ಭೂಕಂಪನ

**ಅಹಮದಾಬಾದ್:** ಉತ್ತರ ಗುಜರಾತ್‌ನಲ್ಲಿ ಮುಂಜಾನೆ 3.4 ತೀವ್ರತೆಯ ಭೂಕಂಪನ ಸಂಭವಿಸಿದೆ ಎಂದು ಭೂಕಂಪಶಾಸ್ತ್ರ ಸಂಶೋಧನಾ ಸಂಸ್ಥೆ (ಐಎಸ್‌ಆರ್) ತಿಳಿಸಿದೆ. ಜಿಲ್ಲಾಡಳಿತದ ಪ್ರಕಾರ, ಯಾವುದೇ ಸಾವುನೋವು ಅಥವಾ ಆಸ್ತಿಪಾಸ್ತಿ ಹಾನಿಯ ಬಗ್ಗೆ ವರದಿಯಾಗಿಲ್ಲ. ಬನಸ್ಕಾಂತ ಜಿಲ್ಲೆಯ ವಾವ್ ಬಳಿ ಮುಂಜಾನೆ 3.35 ಕ್ಕೆ ಭೂಕಂಪದ ಕೇಂದ್ರಬಿಂದು ದಾಖಲಾಗಿದೆ ಎಂದು ಐಎಸ್‌ಆರ್ ತನ್ನ ಇತ್ತೀಚಿನ ವರದಿಯಲ್ಲಿ ತಿಳಿಸಿದೆ.

ವಾವ್‌ನಿಂದ ಪೂರ್ವ-ಈಶಾನ್ಯಕ್ಕೆ (ಇಎನ್‌ಇ) 27 ಕಿ.ಮೀ ದೂರದಲ್ಲಿ 4.9 ಕಿ.ಮೀ ಆಳದಲ್ಲಿ ಭೂಕಂಪನ ದಾಖಲಾಗಿದೆ ಎಂದು ಗಾಂಧಿನಗರ ಮೂಲದ ಸಂಸ್ಥೆ ತಿಳಿಸಿದೆ. ಗುಜರಾತ್ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ (ಜಿಎಸ್ಡಿಎಂಎ) ಪ್ರಕಾರ, ಗುಜರಾತ್ ಹೆಚ್ಚಿನ ಭೂಕಂಪ-ಅಪಾಯದ ಪ್ರದೇಶವಾಗಿದ್ದು, ಕಳೆದ 200 ವರ್ಷಗಳಲ್ಲಿ ಒಂಬತ್ತು ಪ್ರಮುಖ ಭೂಕಂಪಗಳಿಗೆ ತುತ್ತಾಗಿದೆ. ಜನವರಿ 26, 2001 ರಂದು ಕಚ್‌ನಲ್ಲಿ ಸಂಭವಿಸಿದ ಭೂಕಂಪವು ಕಳೆದ ಎರಡು ಶತಮಾನಗಳಲ್ಲಿ ಭಾರತದಲ್ಲಿ 3ನೇ ಅತಿದೊಡ್ಡ ಮತ್ತು ಎರಡನೇ ಅತ್ಯಂತ ವಿನಾಶಕಾರಿಯಾಗಿದೆ ಎಂದು ಜಿಎಸ್ಡಿಎಂಎ ತಿಳಿಸಿದೆ.

### ಛತ್ತೀಸ್ ಗಢದ ಗರಿಯಾಬಂದ್ ಜಿಲ್ಲೆಯಲ್ಲಿ ನಕ್ಸಲೀಯನ ಹತ್ಯೆ

**ಗರಿಯಾಬಂದ್:** ಛತ್ತೀಸ್ ಗಢದ ಗರಿಯಾಬಂದ್ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ನಡೆಸಿದ ಎನ್ ಕೌಂಟರ್ ನಲ್ಲಿ ಓರ್ವ ನಕ್ಸಲೀಯನನ್ನು ಹತ್ಯೆ ಮಾಡಲಾಗಿದೆ. ಜುಗಾಡ್ ಪೊಲೀಸ್ ಠಾಣೆ ವ್ಯಾಪ್ತಿಯ ಅರಣ್ಯದಲ್ಲಿ ತಡರಾತ್ರಿ ಗುಂಡಿನ ಚಕಮಕಿ ನಡೆದಿದ್ದು, ಭದ್ರತಾ ಸಿಬ್ಬಂದಿಯ ತಂಡವು ನಕ್ಸಲೀಯ ವಿರೋಧಿ ಕಾರ್ಯಾಚರಣೆಯಲ್ಲಿ ತೊಡಗಿತ್ತು ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಗುಂಡಿನ ಚಕಮಕಿ ನಿಂತ ನಂತರ, ಸ್ಥಳದಿಂದ ನಕ್ಸಲೀಯನ ಶವ ಮತ್ತು ಬಂದೂಕನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ಹೇಳಿದರು. ಈ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆ ನಡೆಯುತ್ತಿದೆ ಎಂದು ಅಧಿಕಾರಿ ತಿಳಿಸಿದ್ದಾರೆ. 2026ರೊಳಗೆ ದೇಶವನ್ನು ನಕ್ಸಲ್ ಮುಕ್ತಗೊಳಿಸುವ ಕೇಂದ್ರ ಗೃಹಸಚಿವ ಅಮಿತ್ ಷಾ ಅವರ ಕರೆಯ ಮೇರೆಗೆ ದೇಶದಾದ್ಯಂತ ನಕ್ಸಲ್ ವಿರುದ್ಧದ ಕಾರ್ಯಾಚರಣೆಯನ್ನು ತೀವ್ರಗೊಳಿಸಲಾಗಿದೆ.

### ಗೋವಾ ಕಾಲ್ತುಳಿತದ ಬಗ್ಗೆ ತನಿಖೆ

**ಪಣಜಿ:** ಉತ್ತರ ಗೋವಾದಲ್ಲಿ ಮುಂಜಾನೆ ಸಂಭವಿಸಿದ ಕಾಲ್ತುಳಿತದಲ್ಲಿ 7 ಮಂದಿ ಸಾವನ್ನಪ್ಪಿದ ಘಟನೆಯ ಬಗ್ಗೆ ತನಿಖೆ ನಡೆಸಲಾಗುವುದು ಎಂದು ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಘೋಷಿಸಿದ್ದಾರೆ.

ಘಟನೆ ನಡೆದ ಕೆಲವೇ ಗಂಟೆಗಳ ನಂತರ ಸಾವಂತ್ ಶಿರ್ಗಾವ್ ಗ್ರಾಮದ ಶ್ರೀ ಲೈಲ್ವೆ ದೇವಿ ದೇವಸ್ಥಾನದಲ್ಲಿ ಕಾಲ್ತುಳಿತದ ಸ್ಥಳಕ್ಕೆ ಭೇಟಿ ನೀಡಿದರು. ಮುಂಜಾನೆ 3 ಗಂಟೆ ಸುಮಾರಿಗೆ ದೇವಾಲಯದ ವಾರ್ಷಿಕ ಉತ್ಸವದ ಸಮಯದಲ್ಲಿ ಕಾಲ್ತುಳಿತ ಸಂಭವಿಸಿದ ನಂತರ ಏಳು ಜನರು ಸಾವನ್ನಪ್ಪಿದ್ದಾರೆ ಮತ್ತು ಹಲವಾರು ಜನರು ಗಾಯಗೊಂಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಸಾವಂತ್, ಘಟನೆಯ ಬಗ್ಗೆ ವಿವರವಾದ ತನಿಖೆ ನಡೆಸುವಂತೆ ನಾನು ಕೇಳಿದ್ದೇನೆ. ನಾವು ವರದಿಯನ್ನು ಸಾರ್ವಜನಿಕಗೊಳಿಸುತ್ತೇವೆ ಎಂದು ಹೇಳಿದರು. ಇಂತಹ ಘಟನೆಗಳನ್ನು ತಡೆಗಟ್ಟಲು ಭವಿಷ್ಯದಲ್ಲಿ ರಾಜ್ಯದ ಎಲ್ಲಾ ದೇವಾಲಯ ಉತ್ಸವಗಳಿಗೆ ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳಲಾಗುವುದು ಎಂದು ಅವರು ಹೇಳಿದರು. ಕಾಲ್ತುಳಿತದ ಬಗ್ಗೆ ತಿಳಿದ ನಂತರ ಮುಂಜಾನೆ ಮಾಪುಸಾ ಪಟ್ಟಣದ ಉತ್ತರ ಗೋವಾ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿದ್ದೇನೆ ಎಂದು ಸಾವಂತ್ ಹೇಳಿದರು. ಇದಕ್ಕೂ ಮುನ್ನ ಟ್ವಿಟ್ ಮಾಡಿದ್ದ ಸಾವಂತ್, ಪ್ರಧಾನಿ ನರೇಂದ್ರ ಮೋದಿ ಅವರಿಂದ ಕರೆ ಬಂದಿದ್ದು, ಅವರು ತಮ್ಮ ಸಂಪೂರ್ಣ ಬೆಂಬಲವನ್ನು ನೀಡಿದ್ದಾರೆ ಎಂದು ಹೇಳಿದ್ದಾರೆ.

### ಭಾರತ-ಭೂತಾನ್ ಗಡಿಯ ಸಮೀಪ ಮೂರು ಕಾಡಾನೆಗಳ ಸಾವು

**ಕೊಕ್ರಜಾರ್:** ಭಾರತ-ಭೂತಾನ್ ಗಡಿಯ ಸಮೀಪವಿರುವ ಅಸ್ಸಾಂನ ಮನಸ್ ರಾಷ್ಟ್ರೀಯ ಉದ್ಯಾನವನದಲ್ಲಿ ಮೂರು ಕಾಡು ಆನೆಗಳು ಮೃತಪಟ್ಟಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಉದ್ಯಾನದ ಪಶ್ಚಿಮ ಭಾಗದಲ್ಲಿರುವ ಪನ್ಬಾರಿ ಶ್ರೇಣಿಯ ಪಲೆಂಗ್ಲಿ ಬೀಟ್ ಪ್ರದೇಶದಲ್ಲಿ ಅರಣ್ಯ ರಕ್ಷಕರು ಆನೆ ಶವಗಳನ್ನು ಪತ್ತೆ ಮಾಡಿದ್ದಾರೆ ಎಂದು ಅವರು ಹೇಳಿದರು. ತನಿಖೆಯನ್ನು ಪ್ರಾರಂಭಿಸಲಾಗಿದೆ ಎಂದು ಅವರು ಹೇಳಿದರು. ಕಳ್ಳ ಬೇಟೆಗಾರರು ಆನೆಗಳನ್ನು ಕೊಂದಿರಬಹುದು ಎಂದು ಅವರು ಶಂಕೆ ವ್ಯಕ್ತಪಡಿಸಿದ್ದಾರೆ.

ಆದರೆ ಎಲ್ಲಾ ಆಯಾಮಗಳಲ್ಲಿ ತನಿಖೆ ನಡೆಸಲಾಗುತ್ತಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಆನೆಗಳ ಅಂತಿಮ ವಿಧಿಗಳನ್ನು ಮಾಡುವ ಮೊದಲು ಅವುಗಳ ಮರಣೋತ್ತರ ಪರೀಕ್ಷೆಗಳನ್ನು ಕಾಡಿನಲ್ಲಿ ನಡೆಸಲಾಗುವುದು ಎಂದು ಅವರು ಹೇಳಿದರು.

### ಸಿಂಗಾಪುರ ಪ್ರಧಾನಿ ಭವಿಷ್ಯ ಇಂದು ನಿರ್ಧಾರ

**ಸಿಂಗಾಪುರ:** ಸಿಂಗಾಪುರದ ಅತಿದೊಡ್ಡ ವ್ಯಾಪಾರ ಪಾಲುದಾರ ಚೀನಾದ ಮೇಲೆ ಅಮೆರಿಕ ವಿಧಿಸಿರುವ ವ್ಯಾಪಾರ ಸುಂಕದಿಂದ ಹೆಚ್ಚುತ್ತಿರುವ



ಜಾಗತಿಕ ಆರ್ಥಿಕ ಒತ್ತಡಗಳ ಮಧ್ಯೆ, ಆಡಳಿತಾರೂಢ ಪೀಪಲ್ಸ್ ಆಕ್ಷನ್ ಪಾರ್ಟಿ ನವೀಕರಿಸಿದ ಜನಾದೇಶವನ್ನು ಬಯಸುತ್ತಿರುವುದರಿಂದ ಸಿಂಗಾಪುರದಲ್ಲಿ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ 2.75 ದಶಲಕ್ಷಕ್ಕೂ ಹೆಚ್ಚು ನೋಂದಾಯಿತ ಮತದಾರರು ತಮ್ಮ ಮತಗಳನ್ನು ಚಲಾಯಿಸುತ್ತಿದ್ದಾರೆ.

ದ್ವೀಪದಾದ್ಯಂತ ಸ್ಥಾಪಿಸಲಾದ 1,240 ಕೇಂದ್ರಗಳಲ್ಲಿ ಸ್ಥಳೀಯ ಸಮಯ ಬೆಳಿಗ್ಗೆ 8 ಗಂಟೆಗೆ ಮತದಾನ ಪ್ರಾರಂಭವಾಯಿತು, ಮತದಾನ ಕೇಂದ್ರಗಳನ್ನು ರಾತ್ರಿ 8 ಗಂಟೆಗೆ ಮುಚ್ಚಲಾಗುವುದು ಮತ್ತು ತಡರಾತ್ರಿ ಫಲಿತಾಂಶಗಳನ್ನು ನಿರೀಕ್ಷಿಸಲಾಗಿದೆ. ಬೆಳಿಗ್ಗೆ 8 ಗಂಟೆಗೆ ಮತದಾನ ಕೇಂದ್ರಗಳು ತೆರೆಯುವ ಒಂದು ಗಂಟೆಗೂ ಮೊದಲು ಕೆಲವು ಮತದಾರರು ಭಾರಿ ಮಳೆಯನ್ನು ಲೆಕ್ಕಿಸದೆ ತಮ್ಮ ಮತ ಚಲಾಯಿಸಲು ಸರತಿ ಸಾಲಿನಲ್ಲಿ ನಿಂತರು.

ಪ್ರಧಾನಿ ಲಾರೆನ್ಸ್ ವಾಂಗ್ ಅವರು ಅಧಿಕಾರದಲ್ಲಿ ಸುಮಾರು ಒಂದು ವರ್ಷವನ್ನು ಪೂರ್ಣಗೊಳಿಸಿದ್ದು, ಸ್ವಾತಂತ್ರ್ಯದ ನಂತರ ನಗರ-ರಾಜ್ಯವನ್ನು ಆಳುತ್ತಿರುವ ಮತ್ತು ಅದರ ಅಭಿವೃದ್ಧಿಯನ್ನು ಜಾಗತಿಕ ಹಣಕಾಸು ಕೇಂದ್ರವಾಗಿ ಮುನ್ನಡೆಸಿದ ಪಿಎಪಿಗೆ ಹೊಸ ಜನಾದೇಶವನ್ನು ಬಯಸುತ್ತಿದ್ದಾರೆ. ಇದು 1948 ರಲ್ಲಿ ಮೊದಲ ಸಾರ್ವತ್ರಿಕ ಚುನಾವಣೆಯ ನಂತರ ಸಿಂಗಾಪುರದ 19 ನೇ ಚುನಾವಣೆಯಾಗಿದೆ ಮತ್ತು 1965 ರಲ್ಲಿ ಸ್ವಾತಂತ್ರ್ಯದ ನಂತರ 14 ನೇ ಚುನಾವಣೆಯಾಗಿದೆ. ಸಿಂಗಾಪುರದಲ್ಲಿ 2,758,846 ನೋಂದಾಯಿತ ಮತದಾರರಿದ್ದಾರೆ.

